ಸಂಪುಟ: 21, ಸಂಚಿಕೆ: 118, ಪುಟಗಳು: 8, ಬುಧವಾರ, 7 ಫೆಬ್ರವರಿ 2024 RNI NO. KARKAN/2002/08054
epaper: www.sanjemugilu.com



ನೇರ ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

**ಸುಭಾಷಿತ**

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

**ಪಂಚಾಂಗ**

(ಬುಧವಾರ 7, ಫೆಬ್ರವರಿ -2024)

- ಶೋಭಕೃತ್ ನಾಮ ಸಂವತ್ಸರ,
- ಉತ್ತರಾಯಣ, ಹಿಮಂತ ಋತು,
- ಪುಷ್ಯ ಮಾಸ, ಕೃಷ್ಣ ಪಕ್ಷ,
- ಬುಧವಾರ, ದ್ವಾದಶಿ ತಿಥಿ
- ಪೂರ್ವಾಷಾಡ ನಕ್ಷತ್ರ
- ರಾಹುಕಾಲ : 12:37 ರಿಂದ 02:05
- ಗುಳಿಕಕಾಲ : 11:10 ರಿಂದ 12:37
- ಯಮಗಂಡಕಾಲ : 8:15 ರಿಂದ 9:42

## ಗೊರಗುಂಟೆಪಾಳ್ಯ ಬಳಿ ಸ್ಕೈವಾಕರ್ ಅಥವಾ ಅಂಡರ್ ಗ್ರೌಂಡ್ ನಿರ್ಮಾಣಕ್ಕೆ ಆಗ್ರಹ

**ಬೆಂಗಳೂರು:** ರಾಜ್ಯದ ವಿವಿಧ ಜಿಲ್ಲೆಗಳಿಂದ ಸಿಲಿಕಾನ್ ಸಿಟಿಗೆ ಬರುವ ಪ್ರಮುಖ ಮಾರ್ಗ ಗೊರಗುಂಟೆಪಾಳ್ಯ. ಇಲ್ಲಿ ಪ್ರತಿನಿತ್ಯ ಲಕ್ಷಾಂತರ ವಾಹನಗಳು ಸಂಚರಿಸುವುದರಿಂದ ಸಾಕಷ್ಟು ಟ್ರಾಫಿಕ್ ಜಾಮ್ ಉಂಟಾಗಿ ಜನರು ದಿನನಿತ್ಯ ರಸ್ತೆ ದಾಟಲು ಪರದಾಡುವಂತಾಗಿದೆ. ಹೀಗಾಗಿ ಜನರು ಸ್ಕೈವಾಕರ್ ಇಲ್ಲವೇ ಅಂಡರ್ ಗ್ರೌಂಡ್ ನಿರ್ಮಾಣಕ್ಕೆ ಆಗ್ರಹಿಸಿದ್ದಾರೆ.

ಕರ್ನಾಟಕ ರಾಜ್ಯದ ಪ್ರತಿ ಜಿಲ್ಲೆಯ ವಾಹನಗಳು ಎಂಟ್ರಿ ಕೊಡೋದು ಗೊರಗುಂಟೆಪಾಳ್ಯ ಮೂಲಕ. ಪ್ರತಿದಿನ ಲಕ್ಷಾಂತರ ವಾಹನಗಳು ಓಡಾಡುವುದರಿಂದ ಇದೇ ಗೊರಗುಂಟೆಪಾಳ್ಯ ಸಿಗ್ನಲ್‌ನಲ್ಲಿ ವಾಹನ ದಟ್ಟಣೆ ಹೆಚ್ಚಾಗಿದೆ. ಇಲ್ಲಿ ರಸ್ತೆ ದಾಟಬೇಕು ಅಂದ್ರೆ ಪಾದಚಾರಿಗಳಿಗೆ ಟ್ರಾಫಿಕ್ ಬಿಸಿಯೊಂದೆಡೆಯಾದರೆ ಮತ್ತೊಂದೆಡೆ ಅಪಘಾತ ಆಗುವ ಭಯದಲ್ಲೇ ಜನರು ಪ್ರತಿ ದಿನ ರಸ್ತೆ ದಾಟಲು ಹರಸಾಹಸ ಪಡುವಂತಾಗಿದೆ. ಅಲ್ಲದೇ ವಯೋ ವೃದ್ಧರು ಓಡಾಡಬೇಕು ಅಂದರೆ



ಕಷ್ಟದಲ್ಲೆ ಓಡಾಡಬೇಕು. ಹೀಗಾಗಿ ಸ್ಕೈ ವಾಕರ್ ಇಲ್ಲವೇ ಅಂಡರ್ ಗ್ರೌಂಡ್ ಮೂಲಕ ಪಾದಚಾರಿಗಳು ಸುಗಮವಾಗಿ ಓಡಾಡಲು ಮಾರ್ಗ ಕಲ್ಪಿಸುವಂತೆ ಸಾರ್ವಜನಿಕರು ಮನವಿ ಮಾಡುತ್ತಿದ್ದಾರೆ. ನಮ್ಮ ಜೀವಕ್ಕೆ ಏನಾದರು ಹಾನಿಯಾದರೆ ಯಾರು ಹೊಣೆ ಅಂತ ಪ್ರಶ್ನೆ ಮಾಡುತ್ತಿದ್ದಾರೆ.

ಪುಟ 2

### ಬಜೆಟ್ ಬಳಿಕ ಶ್ವೇತಪತ್ರ ಹೊರಡಿಸುತ್ತೇವೆ

## ಸಿಎಂ ಘೋಷಣೆ

**ನವದೆಹಲಿ:** ಕರ್ನಾಟಕಕ್ಕೆ ಕೇಂದ್ರ ಸರ್ಕಾರದಿಂದ ಆಗಿರುವ ಅನ್ಯಾಯದ ವಿರುದ್ಧ ಹೋರಾಟ ಮಾಡುತ್ತಿದ್ದೇವೆ ಅಷ್ಟೆ. ಇದು ರಾಜಕೀಯ ಚಳವಳಿ ಅಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಗಳವಾರ ಹೇಳಿದರು. ರಾಜ್ಯ ಕಾಂಗ್ರೆಸ್ ಸರ್ಕಾರ ದೆಹಲಿಯ ಜಂತರ್ ಮಂತರ್ ನಲ್ಲಿ ಕೇಂದ್ರ ಸರ್ಕಾರದ ವಿರುದ್ಧ ಆಯೋಜಿಸಿರುವ 'ಛಲೋ ದೆಹಲಿ' ಪ್ರತಿಭಟನೆಗೂ ಮುನ್ನ ಮಾಧ್ಯಮಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ನಮ್ಮ ಎಲ್ಲ ಶಾಸಕರು, ಸಚಿವರು ಹೋರಾಟದಲ್ಲಿ ಭಾಗಿಯಾಗಿದ್ದಾರೆ. ಇದು ರಾಜಕೀಯ ಹೋರಾಟ ಅಲ್ಲ, ಇದು ಕನ್ನಡಿಗರ ಹಿತ ಕಾಪಾಡುವ ಚಳವಳಿ ಎಂದರು,

ಕೇಂದ್ರ ಸರ್ಕಾರ ತೆರಿಗೆ ಹಂಚಿಕೆಯಲ್ಲಿ ತಾರತಮ್ಯ ಎಸಗಿದೆ. ಈ ವಿಚಾರದಲ್ಲಿ ಕರ್ನಾಟಕಕ್ಕೆ ದೊಡ್ಡ ಅನ್ಯಾಯ ಆಗಿದೆ. ರಾಜ್ಯಕ್ಕಾದ ಅನ್ಯಾಯದ ವಿರುದ್ಧ ಹೋರಾಟ ಮಾಡ್ತಿದ್ದೇವೆ. ರಾಜ್ಯದ ಸಂಸದರಿಗೂ ಪತ್ರ ಬರೆದು ಮನವಿ



ಮಾಡಿದೆ. ಇದು ಐತಿಹಾಸಿಕವಾದ ಚಳವಳಿ. ಸುಮಾರು ಶೇ 40-45 ರಷ್ಟು ತೆರಿಗೆ ಪಾಲು ನಮಗೆ ಬರಬೇಕು. ನಾವು 4 ಲಕ್ಷ 30 ಸಾವಿರ ಕೋಟಿ ತೆರಿಗೆ ಕಟ್ಟುತ್ತಿದ್ದೇವೆ. 100 ರೂ. ತೆರಿಗೆ ಕಟ್ಟಿದ್ದರೆ ಕೇವಲ 12 ರೂಪಾಯಿ ಅಷ್ಟೇ ನಮಗೆ ಬರುತ್ತಿದೆ ಎಂದು ಸಿದ್ದರಾಮಯ್ಯ ಹೇಳಿದರು.

ರಾಜ್ಯಗಳಿಂದ ತೆರಿಗೆ ರೂಪದಲ್ಲಿ ಕೇಂದ್ರ ಸರ್ಕಾರಕ್ಕೆ ಹಣ ಹೋಗುತ್ತದೆ. ಹಣಕಾಸು ಆಯೋಗ ನಿರ್ಧರಿಸಿದಂತೆ ರಾಜ್ಯಗಳಿಗೆ ಅನುದಾನ ನೀಡಬೇಕು. 14ನೇ ಹಣಕಾಸು ಆಯೋಗದ ನಿಯಮಾನುಸಾರ ರಾಜ್ಯಕ್ಕೆ ಶೇ 42ರಷ್ಟು ಹಣ ನೀಡಬೇಕು.

ಪುಟ 2

## ಸಂಕ್ಷಿಪ್ತ ಸುದ್ದಿ

### ಮೂವರ ಮದುವೆಯಾಗಿದ್ದ ಸರದಾರನ ಹತ್ಯೆ

**ಬಾಗಲಕೋಟೆ:** ಆತ ಒಟ್ಟು ಮೂರು ಜನರ ಮದುವೆಯಾಗಿದ್ದ. ಮೊದಲ ಪತ್ನಿ ಮೃತಪಟ್ಟರೆ, ಎರಡನೇ ಪತ್ನಿ ಪೊಲೀಸ್ ಕಾನ್ಸ್ಟೇಬಲ್ ಆತನಿಂದ ದೂರ ಆಗಿದ್ದಳು. ಮೂರನೇ ಪತ್ನಿ ಹಾಗೂ ಮಗನ ಜೊತೆ ವಾಸವಿದ್ದ ಆತ ಕೊಲೆಯಾಗಿ ಪತ್ತೆಯಾಗಿದ್ದಾನೆ.



ದುಷ್ಕರ್ಮಿಗಳು ತಂತಿಯಿಂದ ಕತ್ತು ಬಿಗಿದು ಎಸ್ಕೇಪ್ ಆಗಿದ್ದಾರೆ. ಇದರಿಂದ ಕುಟುಂಬಸ್ಥರು ಕಣ್ಣೀರಲ್ಲಿ ಕೈ ತೊಳೆಯುತ್ತಿದ್ದಾರೆ. ಈ ವಿದ್ಯಮಾನಗಳು ಕಂಡುಬಂದಿದ್ದು ಬಾಗಲಕೋಟೆ ಜಿಲ್ಲೆ ಬೀಳಗಿ ಸರಕಾರಿ ಆಸ್ಪತ್ರೆ ಹಾಗೂ ಡವಳೇಶ್ವರ ಗ್ರಾಮದಲ್ಲಿ. ಇಲ್ಲಿ ಕೊಲೆಯಾಗಿರೋದು ಈರಪ್ಪ ಗರಸಂಗಿ (46) ಬೀಳಗಿ ತಾಲ್ಲೂಕಿನ ಡವಳೇಶ್ವರ ಗ್ರಾಮದ ನಿವಾಸಿ.

ಪುಟ 2

### ಕೋರ್ಟ್‌ನಲ್ಲಿ ಸಾಕ್ಷಿ ಹೇಳಲು ಮುಂದಾಗಿದ್ದ ವ್ಯಕ್ತಿಯ ಬರ್ಬರ ಕೊಲೆ

**ಹಾಸನ:** ನ್ಯಾಯಾಲಯದಲ್ಲಿ ಸಾಕ್ಷಿ ಹೇಳಲು ಮುಂದಾಗಿದ್ದ ವ್ಯಕ್ತಿಯನ್ನು ಬರ್ಬರವಾಗಿ ಕೊಲೆ ಮಾಡಿದ ಆರೋಪಿಯನ್ನು ಅರಸೀಕೆರೆ ಗ್ರಾಮಾಂತರ ಠಾಣೆಯ ಪೊಲೀಸರು ಬಂಧಿಸಿದ್ದಾರೆ. ಅರಸೀಕೆರೆ ತಾಲೂಕಿನ ತೂಬಿನಕೆರೆ ಬೋವಿ ಕಾಲೋನಿ ನಿವಾಸಿ ಜಯಪ್ಪ (34) ಕೊಲೆಯಾದ ವ್ಯಕ್ತಿ.



ಇದೆ ತಾಲೂಕಿನ ಕಾಳೆನಹಳ್ಳಿ ಹಟ್ಟಿಯ ಅಣ್ಣಯ್ಯ (24) ಕೊಲೆ ಮಾಡಿದ ಆರೋಪಿ. 2021ರಲ್ಲಿ ಅಪ್ರಾಪ್ತ ಬಾಲಕಿ ಅಪಹರಿಸಿದ ಪ್ರಕರಣದಲ್ಲಿ ಅಣ್ಣಯ್ಯ ಜೈಲು ಸೇರಿದ್ದನು. 2022ರ ಜುಲೈನಲ್ಲಿ ಅಣ್ಣಯ್ಯ ಬೇಲ್ ಮೇಲೆ ಹೊರಗಡೆ ಬಂದಿದ್ದಾನೆ.

ಪುಟ 2

# ದಿಲ್ಲಿಯಲ್ಲಿ ಕಾಂಗ್ರೆಸ್ ಪ್ರತಿಭಟನೆ

## ಪ್ರತಿಯಾಗಿ ರಾಜ್ಯದಲ್ಲಿ ಸರ್ಕಾರದ ವಿರುದ್ಧ ಬಿಜೆಪಿ ಪ್ರತಿಭಟನೆ

**ಬೆಂಗಳೂರು:** ತೆರಿಗೆ ಹಂಚಿಕೆಯಲ್ಲಿ ಕರ್ನಾಟಕಕ್ಕೆ ಅನ್ಯಾಯವಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಆರೋಪಿಸಿ ಇಂದು (ಫೆ.07) ಕೇಂದ್ರ ಸರ್ಕಾರದ ವಿರುದ್ಧ ದೆಹಲಿಯಲ್ಲಿ ಪ್ರತಿಭಟನೆ ಮಾಡಲು ನಿರ್ಧರಿಸಿದೆ. ಇದಕ್ಕೆ ಪ್ರತಿಯಾಗಿ ಸರ್ಕಾರದ ವಿರುದ್ಧ ವಿಪಕ್ಷ ಬಿಜೆಪಿ ನಾಯಕರು ವಿಧಾನಸೌಧದ ಎದುರು ರಾಜ್ಯ ಸರ್ಕಾರದ ವಿರುದ್ಧ ಪ್ರತಿಭಟನೆ ಮಾಡಲಿದ್ದಾರೆ. ''ರಾಜ್ಯದ ಕಾಂಗ್ರೆಸ್ ಸರ್ಕಾರ ಸ್ವತಃ 222ಕ್ಕೂ ಹೆಚ್ಚು ತಾಲೂಕುಗಳನ್ನು ಬರಗಾಲ ಪೀಡಿತ ತಾಲ್ಲೂಕುಗಳೆಂದು ಘೋಷಣೆ ಮಾಡಿದ್ದರೂ, ಈವರೆಗು ಕುಡಿಯುವ ನೀರಿನ ಸಮಸ್ಯೆ ಸೇರಿದಂತೆ ಬರ ಪರಿಹಾರದ ಯಾವುದೇ ಕ್ರಮ ಕೈಗೊಂಡಿಲ್ಲ. ಈ ಹಿನ್ನೆಲೆಯಲ್ಲಿ ಶಾಸಕರು ಹಾಗೂ ವಿಧಾನ ಪರಿಷತ್ ಸದಸ್ಯರುಗಳ ನೇತೃತ್ವದಲ್ಲಿ ಇಂದು ಫೆಬ್ರವರಿ7 (ಬುಧವಾರ) ಬೆಳಗ್ಗೆ 11 ಗಂಟೆಗೆ ವಿಧಾನಸೌಧದ ಗಾಂಧಿ ಪ್ರತಿಮೆ ಬಳಿ ಸರ್ಕಾರದ ರೈತ ವಿರೋಧಿ ನೀತಿಗಳ ವಿರುದ್ಧ ಪ್ರತಿಭಟನೆ ನಡೆಸಲಾಗುವುದು'' ಎಂದು ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಟ್ವೀಟ್ ಮಾಡಿದ್ದಾರೆ.

ಇನ್ನು ರಾಜ್ಯ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ಟ್ವೀಟ್ ಮೂಲಕ ವಾಗ್ದಾಳಿ ನಡೆಸಿದೆ. ''ಕರ್ನಾಟಕದ ಜನತೆ ಕಾಂಗ್ರೆಸ್‌ಗೆ ಮತ ನೀಡಿದ್ದು ಗ್ಯಾರಂಟಿಗಳನ್ನು ನಂಬಿ! ಆದರೆ, ಮಜಾವಾದಿ ಸಿದ್ದರಾಮಯ್ಯ ಅವರ ಸರ್ಕಾರ ಕನ್ನಡಿಗರ ತೆರಿಗೆ ದುಡ್ಡಿನಲ್ಲಿ ಮೋಜು ಮಸ್ತಿ ಮಾಡುತ್ತಿದೆ. ಕನ್ನಡಿಗರ ತೆರಿಗೆ ಹಣದಲ್ಲಿ ಬಿಟ್ಟಿ ಜಾಹೀರಾತು ಕೊಟ್ಟು ಪ್ರಚಾರ ಪಡೆದುಕೊಂಡು ದೆಹಲಿಯಲ್ಲಿ ಶೋಕಿ ಮಾಡಲು ಹೋಗಿದೆ. ಕನ್ನಡಿಗರ ಪ್ರಶ್ನೆಗಳಿಗೆ ಉತ್ತರ ಕೊಡಲು ಯೋಗ್ಯತೆ ಇಲ್ಲದ ಕಾಂಗ್ರೆಸ್ಸಿಗರು, ತಾವೇ ಮಾಡಿದ ಸುಳ್ಳುಗಳಿಗೆ ಸತ್ಯ ಹುಡುಕುತ್ತಿದ್ದಾರೆ. ಜಂತರ್ ಮಂತರ್‌ನಲ್ಲಿ ಬೃಹನ್ನಳೆ ನಾಟಕ ಮಾಡಲು ಮೇಕಪ್ ಹಾಕಿ ಕೂತಿದ್ದಾರೆ ಎಡಬಿಡಂಗಿ ಕಾಂಗ್ರೆಸ್ಸಿಗರು'' ಎಂದು ರಾಜ್ಯ ಬಿಜೆಪಿ ಘಟಕ ಟ್ವೀಟ್ ಮಾಡಿದೆ.

ಪುಟ 2




### ಬಿಜೆಪಿಗೆ ಮತ ಹಾಕಿದರೆ ರಾಮನಿಗೆ ನೀಡಿದಂತೆ



**ಕಾರವಾರ:** ಬಿಜೆಪಿ ನಾಯಕ, ವಿಧಾನಸಭೆಯ ಮಾಜಿ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಇದೀಗ ಲೋಕಸಭಾ ಚುನಾವಣೆಗೆ ಉತ್ತರ ಕನ್ನಡ ಕ್ಷೇತ್ರದಿಂದ ಬಿಜೆಪಿ ಟಿಕೆಟ್ ನಿರೀಕ್ಷೆಯಲ್ಲಿದ್ದಾರೆ. ಟಿಕೆಟ್ ಸಿಗುವ ವಿಶ್ವಾಸದಲ್ಲಿ ಚುನಾವಣೆ ಆರಂಭಕ್ಕೂ ಮುನ್ನ ರಾಮನ ಹೆಸರಿನಲ್ಲಿ ಪ್ರಚಾರ ಆರಂಭಿಸಿರುವ ಕಾಗೇರಿ, ಬಿಜೆಪಿಗೆ ನೀವು ಮತ ಹಾಕಿದರೆ ಅದು ರಾಮನಿಗೆ ಹಾಗೂ ಪ್ರಧಾನಿ ಮೋದಿಗೆ ಮತ ಹಾಕಿದಂತೆ. ಈ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಿ ಎಂದು ಕಾರ್ಯಕರ್ತರಿಗೆ ಕರೆ ನೀಡಿದ್ದಾರೆ.

ಪುಟ 2

### ಒಳ್ಳೆಯ ಕೆಲಸ ಮಾಡುವ ವ್ಯಕ್ತಿಗೆ ಎಂದೂ ಗೌರವ ಸಿಗುವುದಿಲ್ಲ

**ನವದೆಹಲಿ:** ಯಾವುದೇ ರಾಜಕೀಯ ಪಕ್ಷ ಅಧಿಕಾರದಲ್ಲಿದ್ದರೂ, ಉತ್ತಮವಾಗಿ ಕಾರ್ಯನಿರ್ವಹಿಸಿದವರಿಗೆ ಅವರು ಅರ್ಹವಾದ ಮನ್ನಣೆ ಸಿಗುವುದು ಅಪರೂಪ, ಆದರೆ ಎಡವುವವರು ಸಾಮಾನ್ಯವಾಗಿ ಶಿಕ್ಷೆಗೆ ಗುರಿಯಾಗುವುದಿಲ್ಲ ಎಂದು ಕೇಂದ್ರ ಸಚಿವ ನಿತಿನ್ ಗಡ್ಕರಿ ಹೇಳಿದ್ದಾರೆ. ಯಾವುದೇ ಪಕ್ಷದ ಸರ್ಕಾರವಾಗಲಿ, ಒಂದು ವಿಷಯ ಖಚಿತ ಎಂದು ನಾನು ಯಾವಾಗಲೂ ತಮಾಷೆಯಾಗಿ ಹೇಳುತ್ತಿರುತ್ತೇನೆ. ಒಳ್ಳೆಯ ಕೆಲಸ ಮಾಡುವವರಿಗೆ ಎಂದಿಗೂ ಗೌರವ ಸಿಗುವುದಿಲ್ಲ ಮತ್ತು ಕೆಟ್ಟ ಕೆಲಸ ಮಾಡುವವರಿಗೆ ಎಂದಿಗೂ ಶಿಕ್ಷೆಯಾಗುವುದಿಲ್ಲ ಎಂದಿದ್ದಾರೆ.



ಅಂದಿನ ಆಡಳಿತ ಪಕ್ಷದೊಂದಿಗೆ ಸಂಬಂಧ ಉಳಿಸಿಕೊಳ್ಳಲು ಉತ್ಸುಕರಾಗಿರುವ ಅವಕಾಶವಾದಿ ನಾಯಕರ ಬಗ್ಗೆ ಗಡ್ಕರಿ ಕಳವಳ ವ್ಯಕ್ತಪಡಿಸಿದರು.

ಪುಟ 2

### ಇನ್ಮುಂದೆ ದಿನದ 24 ಗಂಟೆಗಳ ಕಾಲ ತೆರೆಯಲಿವೆ ಹೋಟೆಲ್‌ಗಳು

## ಸಚಿವರಿಂದ ಭರವಸೆ

**ಬೆಂಗಳೂರು:** ರಾಜಧಾನಿ ಬೆಂಗಳೂರಿನಲ್ಲಿ ದಿನದಿಂದ ದಿನಕ್ಕೆ ಅಭಿವೃದ್ಧಿಯಾಗುತ್ತಿರುವ ವಲಯ ಅಂದ್ರೆ ಅದು ಹೋಟೆಲ್ ಉದ್ಯಮ. ವರ್ಷದಿಂದ ವರ್ಷಕ್ಕೆ ಹೊಸ ಹೊಸ ಹೋಟೆಲ್‌ಗಳು ಓಪನ್ ಆಗುತ್ತಿದ್ದಂತೆ ಉದ್ಯೋಗ ಸೃಷ್ಟಿಯು ಕೂಡ ಹೆಚ್ಚಳವಾಗುತ್ತಿದೆ. ಈ ಮಧ್ಯೆ ಹೋಟೆಲ್ ಗಳನ್ನ ದಿನದ 24 ಗಂಟೆಗಳ ಕಾಲ ತೆರೆಯಲು ಅನುಮತಿ ಕೊಡುವಂತೆ ಹೋಟೆಲ್ ಅಸೋಸಿಯೇಷನ್ ಸರ್ಕಾರದ ಮುಂದೆ ಬೇಡಿಕೆ ಇಡುತ್ತಲೇ ಬಂದಿತ್ತು. ಆದರೆ ಹಿಂದಿನ ಸರ್ಕಾರವು ಇವರ ಬೇಡಿಕೆಯನ್ನ ಈಡೇರಿಸಿರಲಿಲ್ಲ. ಈ ಬಾರಿ ಕಾಂಗ್ರೆಸ್ ಸರ್ಕಾರ ಇವರ ಬೇಡಿಕೆಯನ್ನ ಈಡೇರಿಸಲು ಮುಂದಾಗಿದೆ.



ಸಿಲಿಕಾನ್ ಸಿಟಿ ದಿನದಿಂದ ದಿನಕ್ಕೆ ಅಭಿವೃದ್ಧಿಯತ್ತ ಸಾಗುತ್ತಿರುವಂತೆ ಮಾರ್ನಿಂಗ್, ಇವ್ನಿಂಗ್, ಮಧ್ಯರಾತ್ರಿವರೆಗೂ ಕೆಲಸ ನಿರ್ವಹಿಸುವವರ ಸಂಖ್ಯೆ ಹೆಚ್ಚಳವಾಗುತ್ತಿದೆ. ಬೆಳಗ್ಗೆಯಿಂದ ರಾತ್ರಿ 10 ಗಂಟೆಯವರೆಗೂ ಕೆಲಸ ನಿರ್ವಹಿಸುವ ಜನರಿಗೆ ಸಧ್ಯ ಹೋಟೆಲ್ ಗಳಲ್ಲಿ ಊಟಗಳೇನೋ ಸಿಗುತ್ತಿವೆ. ಆದರೆ ಮಧ್ಯರಾತ್ರಿಯ ಸಂಧರ್ಭದಲ್ಲಿ ಊಟ- ತಿಂಡಿ ಸರಿಯಾಗಿ ಸಿಗದೇ ಪರದಾಡುತ್ತಿರುವವರು ಸಾಕಷ್ಟು ಮಂದಿ ಇದ್ದಾರೆ.

ಪುಟ 2

### ಮತ್ತೆ ಆಕ್ಟಿವ್ ಆದ ನಕ್ಸಲರು

## ಉಡುಪಿ, ಚಿಕ್ಕಮಗಳೂರಿನಲ್ಲಿ 5 ದಿನ ಹೈ ಅಲರ್ಟ್

**ಉಡುಪಿ/ಚಿಕ್ಕಮಗಳೂರು:** ಮಲೆನಾಡು ಮತ್ತು ಕರಾವಳಿಯಲ್ಲಿ ಭಾಗದಲ್ಲಿ ನಕ್ಸಲರ ಚುಟುವಟಿಕೆ ಮತ್ತೆ ಶುರುವಾಗಿದೆ. ಈ ಹಿನ್ನೆಲೆಯಲ್ಲಿ ಉಡುಪಿ ಮತ್ತು ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಮುಂದಿನ ಐದು ದಿನಗಳ ಕಾಲ ಹೈಅಲರ್ಟ್ ಘೋಷಣೆ ಮಾಡಲಾಗಿದೆ. ನಕ್ಸಲ್ ನಿಗ್ರಹ ಪಡೆ ಕೂಡ ಚುರುಕುಗೊಂಡಿದ್ದು, ತೀವ್ರ ಕಟ್ಟೆಚ್ಚರ ವಹಿಸುವಂತೆ ಸರ್ಕಾರ ಸೂಚನೆ ನೀಡಿದೆ. ನಕ್ಸಲರು ಕೇರಳದಿಂದ ಉಡುಪಿ ಜಿಲ್ಲೆಯ ಬೈಂದೂರುಗೆ ಆಗಮಿಸಿರುವ ಅನುಮಾನ ವ್ಯಕ್ತವಾಗಿದೆ.

ಉಡುಪಿಯ ಹೆಬ್ರಿ ಮೂಲದ ವಿಕ್ರಮ್ ಗೌಡ ನೇತೃತ್ವದ ನಕ್ಸಲರ ತಂಡ ಬೈಂದೂರು ತಾಲೂಕಿನ ಕೊಲ್ಲೂರು, ಮುದೂರು, ಜಡ್ಕಲ್, ಬೆಳ್ಕಲ್



ಗ್ರಾಮ ಸುತ್ತಮುತ್ತ ಓಡಾಡಿರುವ ಶಂಕೆ ಮೂಡಿದೆ. ವಿಕ್ರಮ್ ಗೌಡ ಸುಮಾರು 20 ವರ್ಷಗಳ ಹಿಂದೆ ನಕ್ಸಲೈಟ್ ಆಗಿದ್ದನು. ಕೇರಳದಲ್ಲಿ ಈತ ತನ್ನ ಚಟುವಟಿಕೆಗಳನ್ನು ನಡೆಸುತ್ತಿದ್ದನು. ಬಿ.ಜಿ ಕೃಷ್ಣಮೂರ್ತಿ ಬಳಿಕ

ಪುಟ 2

### ಭಾರತ್ ಜೋಡೋ ನ್ಯಾಯ ಯಾತ್ರೆಗೆ ಕಾಂಗ್ರೆಸ್‌ನಿಂದ ಆಹ್ವಾನ ಸ್ವೀಕರಿಸಿದ

## ಅಖಿಲೇಶ್

**ಉತ್ತರ ಪ್ರದೇಶ:** ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್‌ಗೆ ಕಾಂಗ್ರೆಸ್ ನ ಭಾರತ್ ಜೋಡೋ ನ್ಯಾಯ ಯಾತ್ರೆಯಲ್ಲಿ ಪಾಲ್ಗೊಳ್ಳಲು ಆಹ್ವಾನ ನೀಡಲಾಗಿದೆ ಎನ್ನುವ ಮಾಹಿತಿ ಲಭ್ಯವಾಗಿದೆ. ಇತ್ತೀಚೆಗಷ್ಟೇ ನ್ಯಾಯ ಯಾತ್ರೆಗೆ ಯಾವುದೇ ಆಹ್ವಾನ ಬಂದಿಲ್ಲ ಎಂದು ಅಖಿಲೇಶ್ ಹೇಳಿದ್ದರು, ಇದಾದ ಕೆಲವೇ ದಿನಗಳ ಬಳಿಕ ಆಹ್ವಾನ ನೀಡಿರುವುದಾಗಿ ತಿಳಿದುಬಂದಿದೆ. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಆಹ್ವಾನವನ್ನು ಸ್ವೀಕರಿಸಿದ ಯಾದವ್ ಅವರು ಅಮೇಥಿ ಅಥವಾ ರಾಯ್ ಬರೇಲಿಯಲ್ಲಿ ಯಾತ್ರೆಯಲ್ಲಿ ಪಾಲ್ಗೊಳ್ಳುವುದಾಗಿ ಹೇಳಿದರು.



ಪುಟ 2

## ಒಂದೇ ವರ್ಷದಲ್ಲಿ ಪ್ರವಾಸಿಗರ ಸಂಖ್ಯೆ 10 ಕೋಟಿ ಹೆಚ್ಚಳ

**ಬೆಂಗಳೂರು:** ಮಹಿಳೆಯರಿಗೆ ರಾಜ್ಯ ಸರ್ಕಾರದ ಉಚಿತ ಬಸ್ ಪ್ರಯಾಣ ಯೋಜನೆ ಸೇರಿದಂತೆ ಹಲವು ಕಾರಣಗಳಿಂದ ಕರ್ನಾಟಕದ ವಿವಿಧ ಪ್ರವಾಸಿ ತಾಣಗಳಿಗೆ ಪ್ರಯಾಣಿಕರ ಸಂಖ್ಯೆ ಕೇವಲ ಒಂದು ವರ್ಷದಲ್ಲಿ 10 ಕೋಟಿಯಷ್ಟು ಹೆಚ್ಚಾಗಿದೆ. 2023 ರಲ್ಲಿ, ರಾಜ್ಯದಾದ್ಯಂತ 28.45 ಕೋಟಿ ಪ್ರವಾಸಿಗರು ಭೇಟಿ ನೀಡಿದ್ದಾರೆ. 2022 ರಲ್ಲಿ ಈ ಸಂಖ್ಯೆ 18.27 ಕೋಟಿ ಆಗಿತ್ತು. ಇದು ಕಳೆದ ಏಳು ವರ್ಷಗಳಲ್ಲಿ ದಾಖಲಾದ ಅತಿ ಹೆಚ್ಚು ಪ್ರವಾಸಿಗರ ಸಂಖ್ಯೆಯಾಗಿದೆ ಎಂದು ರಾಜ್ಯ ಪ್ರವಾಸೋದ್ಯಮ ಇಲಾಖೆಯ ಅಂಕಿಅಂಶಗಳು ತಿಳಿಸಿವೆ. ಕೋವಿಡ್ ನಂತರದ ಪ್ರಯಾಣದ ಉತ್ಸಾಹ, ಪ್ರವಾಸೋದ್ಯಮಕ್ಕೆ ಉತ್ತೇಜನ ಮತ್ತು ಮಹಿಳೆಯರಿಗೆ ಉಚಿತ ಪ್ರಯಾಣ ಸೌಲಭ್ಯಗಳನ್ನು ಒದಗಿಸುವ ರಾಜ್ಯ ಸರ್ಕಾರದ ಉಪಕ್ರಮವು ಈ ಹೆಚ್ಚಳಕ್ಕೆ ಪ್ರಮುಖ ಕಾರಣವಾಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ಪ್ರವಾಸೋದ್ಯಮಕ್ಕೆ ಉತ್ತೇಜನ ಮತ್ತು ಸರ್ಕಾರದ ಉಪಕ್ರಮಗಳು ಹೆಚ್ಚಿನ ಪ್ರವಾಸಿಗರನ್ನು ಆಕರ್ಷಿಸಲು ಸಹಾಯ ಮಾಡಿದೆ. ರಾಜ್ಯದ ಪ್ರವಾಸಿ



ತಾಣಗಳನ್ನು ಜನಪ್ರಿಯಗೊಳಿಸಲು ಪ್ರವಾಸೋದ್ಯಮ ಇಲಾಖೆಯ ಮೂಲಕ ಕ್ರಮಗಳನ್ನು ಕೈಗೊಂಡಿದ್ದೇವೆ. ನಾವು ಅನೇಕ ಪ್ರದೇಶಗಳಲ್ಲಿ ಜಲಕ್ರೀಡೆ ಸೌಲಭ್ಯಗಳನ್ನು ಅಭಿವೃದ್ಧಿಪಡಿಸುತ್ತಿದ್ದೇವೆ. ರೋಪ್ ವೇಗಳು ಮತ್ತು ಸಾಹಸ ಚಟುವಟಿಕೆಗಳು ಸಹ ಆಕರ್ಷಣೆಯನ್ನು ಹೆಚ್ಚಿಸಿವೆ ಎಂದು ಪ್ರವಾಸೋದ್ಯಮ ಇಲಾಖೆಯ ನಿರ್ದೇಶಕ ಡಾ. ರಾಮ್ ಪ್ರಸಾದ್ ಮನೋಹರ್ ವಿ ಹೇಳಿರುವುದಾಗಿ ಮಾಧ್ಯಮವೊಂದು ವರದಿ ಮಾಡಿದೆ.

ಪುಟ 2

### ಪೇಟಿಎಂ ಸಿಇಒಗೆ ಉತ್ತರ ಕೊಟ್ಟ ಆರ್‌ಬಿಐ ಮತ್ತು ಸರ್ಕಾರ

## ನಾವೇನು ಮಾಡಲು ಸಾಧ್ಯವಿಲ್ಲ

**ನವದೆಹಲಿ:** ಆರ್ ಬಿಐ ನಿರ್ಬಂಧಕ್ಕೊಳಗಾಗಿ ಫೆಬ್ರುವರಿ ತಿಂಗಳ ಕೊನೆಯೊಳಗೆ ಪೇಮೆಂಟ್ಸ್ ಬ್ಯಾಂಕ್ ನಲ್ಲಿನ ಖಾತೆಗಳನ್ನು ಬೇರೆಡೆ ವರ್ಗಾಯಿಸಬೇಕಾದ ಒತ್ತಡದಲ್ಲಿರುವ ಪೇಟಿಎಂ ಪೇಮೆಂಟ್ಸ್ ಬ್ಯಾಂಕ್ ಸಂಸ್ಥೆ ಈಗ ಹತಾಶೆಯ ಸ್ಥಿತಿಯಲ್ಲಿದೆ. ಪೇಟಿಎಂನ ಸಿಇಒ ವಿಜಯ್ ಶೇಖರ್ ಶರ್ಮಾ ಸರ್ಕಾರ ಮತ್ತು ಆರ್ ಬಿಐನಿಂದ ಸಹಾಯ ಯಾಚಿಸಿದ್ದು ವ್ಯರ್ಥವಾಗಿದೆ. ಶರ್ಮಾ ನಿನ್ನೆ ಮಂಗಳವಾರ ಸಂಜೆ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹಾಗೂ ಆರ್ ಬಿಐ ಅಧಿಕಾರಿಗಳನ್ನು ಭೇಟಿ ಮಾಡಿ, ಪೇಮೆಂಟ್ಸ್ ಬ್ಯಾಂಕ್‌ನ ಖಾತೆಗಳನ್ನು ಬೇರೆ ಬ್ಯಾಂಕುಗಳಿಗೆ ವರ್ಗಾವಣೆ ಮಾಡಲು ನೆರವಾಗಬೇಕೆಂದು ಕೇಳಿಕೊಂಡರು. ಆದರೆ, ನೆರವು ನೀಡಲು ಸರ್ಕಾರವೂ ನಿರಾಕರಿಸಿದೆ, ಆರ್ ಬಿಐ ಕೂಡ ನಿರಾಸಕ್ತಿ ತೋರಿದೆ. ಈಗ ಪೇಟಿಎಂ ಪೇಮೆಂಟ್ಸ್ ಬ್ಯಾಂಕ್‌ಗೆ ಅಡಕತ್ತರಿಯಲ್ಲಿ ಸಿಕ್ಕಿದಂತಹ ಸ್ಥಿತಿ ಎದುರಾಗಿದೆ.



ಪುಟ 2

## 'ಕೈ' ಮುಖಂಡ, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷನ ಮೇಲೆ ಹಲ್ಲೆ

**ಕೊಪ್ಪಳ:** ಕಾಂಗ್ರೆಸ್ ಮುಖಂಡ ಹಾಗೂ ಪಿಎಲ್ ಡಿ ಬ್ಯಾಂಕ್ ಅಧ್ಯಕ್ಷ ದೊಡ್ಡಪ್ಪ ದೇಸಾಯಿ ಅವರ ಮೇಲೆ ಹಲ್ಲೆ ನಡೆದಿದೆ. ಕೊಪ್ಪಳ ಜಿಲ್ಲೆಯ ಗಂಗಾವತಿ ಪಿಎಲ್ ಡಿ ಬ್ಯಾಂಕ್ ಅಧ್ಯಕ್ಷನಾಗಿರೋ ದೊಡ್ಡಪ್ಪ ದೇಸಾಯಿ ಅವರು ನಿನ್ನೆ ಸಂಜೆ ಮನೆಗೆ ತೆರಳುವ ವೇಳೆ ಅಪರಿಚಿತ ವ್ಯಕ್ತಿಯೋರ್ವ ಹಲ್ಲೆ ನಡೆಸಿದ್ದಾನೆ. ಗಂಗಾವತಿ ಪಟ್ಟಣದ ಆನಗುಂದಿ ರಸ್ತೆಯಲ್ಲಿರುವ ಪಿಎಲ್ ಡಿ ಬ್ಯಾಂಕ್ ಮುಂದೆ ಘಟನೆ ನಡೆದಿದೆ.

ದುಷ್ಕರ್ಮಿ ಕಟ್ಟಿಗೆಯಿಂದ ತಲೆಗೆ ಹಲ್ಲೆ ಮಾಡಿ ಕಾರಿನಲ್ಲಿ ಪರಾರಿಯಾಗಿದ್ದಾನೆ. ಸ್ಥಳೀಯರ ಸಮಯ ಪ್ರಜ್ಞೆಯಿಂದ ಭಾರಿ ಅನಾಹುತ ತಪ್ಪಿದೆ. ಹಲ್ಲೆ ಮಾಡಿದ ವ್ಯಕ್ತಿಯ ಮೊಬೈಲ್ ಘಟನಾ ಸ್ಥಳದಲ್ಲಿ ಪತ್ತೆಯಾಗಿದೆ.



ಭೂಮಿ ಒತ್ತುವರಿದಾರರಿಂದ ಹಲ್ಲೆ ನಡೆದಿರುವ ಶಂಕೆ ವ್ಯಕ್ತವಾಗಿದೆ. ಈ ಹಿಂದೆ ಸರ್ಕಾರಿ ಶಾಲೆಯ ಭೂಮಿಯ ಒತ್ತುವರಿ ಬಗ್ಗೆ ದೊಡ್ಡಪ್ಪ ದೇಸಾಯಿ ಅವರು ಹೋರಾಟ ಮಾಡಿದ್ದರು. ಹೀಗಾಗಿ ಅವರ ಮೇಲೆ ಹಲ್ಲೆ ನಡೆದಿರಬಹುದು ಎನ್ನಲಾಗುತ್ತಿದೆ. ಘಟನಾ ಸ್ಥಳಕ್ಕೆ ಗಂಗಾವತಿ ನಗರ ಠಾಣೆ ಸಿಪಿಐ ಪ್ರಕಾಶ್ ಮಾಳೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ಕುಮಾರ ಪರ್ವತದಲ್ಲಿ ಚಾರಣಕ್ಕೆ ನಿರ್ಬಂಧ ಹೇರಿದ್ದೇಕೆ?

**ಮಂಗಳೂರು:** ದಕ್ಷಿಣ ಕನ್ನಡ ಜಿಲ್ಲೆಯ ಕುಕ್ಕೆ ಸುಬ್ರಹ್ಮಣ್ಯ ಮತ್ತು ಕೊಡಗು ಜಿಲ್ಲೆಯ ಸೋಮವಾರಪೇಟೆಯಿಂದ ಚಾರಣ ಮಾಡಬಹುದಾದ ಪ್ರಸಿದ್ಧ ಸ್ಥಳ ಕುಮಾರ ಪರ್ವತ ಚಾರಣಕ್ಕೆ ನಿರ್ಬಂಧ ಹೇರಿದ್ದೇಕೆ ಎಂಬ ಬಗ್ಗೆ ಅರಣ್ಯ ಸಚಿವ ಈಶ್ವರ್ ಖಂಡ್ರೆ ಸ್ಪಷ್ಟನೆ ನೀಡಿದ್ದಾರೆ. ಮಂಗಳೂರಿನಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕುಮಾರ ಪರ್ವತ ಚಾರಣಪಥದಲ್ಲಿ ಜನಜಂಗುಳಿಯಿಂದ ಪರಿಸರ ಹಾನಿ ಭೀತಿ ಎದುರಾಗಿದೆ. ಹೀಗಾಗಿ ಚಾರಣ ನಿಯಂತ್ರಣ ಸಂಬಂಧ ವರದಿ ಸಲ್ಲಿಸಲು ಸೂಚಿಸಿದ್ದೇನೆ. ಅದರ ಜೊತೆಗೆ ಚಾರಣಕ್ಕೆ ಆನ್‌ಲೈನ್ ದಾಖಲಾತಿ ಕ್ರಮ ಕೈಗೊಳ್ಳಲು ನಿರ್ಧರಿಸಲಾಗಿದೆ ಎಂದು ತಿಳಿಸಿದ್ದಾರೆ. ಏಕ ಬಳಕೆ ಪ್ಲಾಸ್ಟಿಕ್ ತ್ಯಾಜ್ಯದಿಂದ ಅಪಾರ ಹಾನಿಯಾಗುತ್ತಿದೆ. ಕರಾವಳಿ ಪ್ರದೇಶಗಳನ್ನು ಪ್ಲಾಸ್ಟಿಕ್ ಮುಕ್ತ ನಗರ ಮಾಡುವ ಗುರಿ ಇದೆ. ರಾಜ್ಯದ ಎಲ್ಲಾ ಚಾರಣ ಪಥಗಳನ್ನು ಆನ್‌ಲೈನ್ ದಾಖಲಾತಿ ವ್ಯಾಪ್ತಿಗೆ ತರುತ್ತೇವೆ. ಏಕಾಏಕಿ ಸಾವಿರಾರು ಜನ ಹೋದರೆ ಇಕ್ಕಟ್ಟಾಗಿ ಸಮಸ್ಯೆ ಆಗುತ್ತದೆ. ಕುಮಾರ ಪರ್ವತದಲ್ಲಿ ಅಂದಾಜು 20 ಕಿ.ಮೀ ಚಾರಣ ಇರಬಹುದು. ಇಂಥ ಜಾಗದಲ್ಲಿ ಎಷ್ಟು ಜನ ಹೋಗಬಹುದು ಅಂತ ನೋಡಿ ಆನ್‌ಲೈನ್ ಮೂಲಕ ನಿಗದಿ ಮಾಡುತ್ತೇವೆ. ಮಿತಿ ಹಾಕಿ ಚಾರಣಿಗರಿಗೆ ನಾವು ಪಾಸ್‌ಗಳನ್ನು ಕೊಡುತ್ತೇವೆ. ಅದನ್ನು ಮೀರಿ ಯಾರಿಗೂ ಬರಲು ಅವಕಾಶ ಇಲ್ಲ. ಚಾರಣ ನಿಯಂತ್ರಣವನ್ನು ಮಾಡಲೇ ಬೇಕಿದೆ, ಅದರ ಅಗತ್ಯ ಇದೆ. ಕರಾವಳಿ ನಿಯಂತ್ರಣ ವಲಯದಲ್ಲಿ ಹಲವೆಡೆ ಕಟ್ಟಡಗಳ ನಿರ್ಮಾಣ ಆಗಿದೆ. ಈ ಬಗ್ಗೆ ದೂರುಗಳು ಬಂದ ಹಿನ್ನೆಲೆಯಲ್ಲಿ ಅಧಿಕಾರಿಗಳಿಗೆ ವರದಿ ಸಲ್ಲಿಸಲು ಸೂಚಿಸಿದ್ದೇನೆ. ಈ ಭಾಗದಲ್ಲಿ ಮೂರು ಎಕರೆಗಿಂತ ಕಡಿಮೆ ಬೇಸಾಯ ಮಾಡುವ ರೈತರಿದ್ದಾರೆ. ಅವರಿಗೆ ತೊಂದರೆ ಆಗದ ರೀತಿಯಲ್ಲಿ ಅರಣ್ಯ ಒತ್ತುವರಿ ತೆರವಿಗೆ ಸೂಚಿಸಿದ್ದೇನೆ. ಜೊತೆಗೆ ಅರಣ್ಯ ಮತ್ತು ಕಂದಾಯ ಇಲಾಖೆಯ ಜಂಟಿ ಸರ್ವೇ ಆಗಬೇಕಿದೆ. ಅಂಥ ಕಡೆ ಸರ್ವೇ ನಡೆಸಿ ಅರಣ್ಯ ಇಲಾಖೆ ವಶಕ್ಕೆ ಪಡೆಯಲಾಗುತ್ತದೆ ಎಂದು ಹೇಳಿದ್ದಾರೆ.

# ಮೈಸೂರು-ಕೊಡಗು ಕ್ಷೇತ್ರದಿಂದ ಸ್ಪರ್ಧಿಸಲು ವಿಶ್ವನಾಥ್ ಸಿದ್ಧತೆ

**ಮಡಿಕೇರಿ:** ತಾನು ಕಾಂಗ್ರೆಸ್ ಪಕ್ಷದಿಂದ ಲೋಕಸಭಾ ಚುನಾವಣೆ ಸ್ಪರ್ಧೆಗೆ ಪ್ರಯತ್ನ ನಡೆಸುತ್ತೇನೆ. ನಾನು ಮೈಸೂರು-ಕೊಡಗು ಲೋಕಸಭಾ ಕ್ಷೇತ್ರದ ಚುನಾವಣೆ ಆಕಾಂಕ್ಷಿ ಎಂದು ಎಂಎಲ್‌ಸಿ ಹೆಚ್ ವಿಶ್ವನಾಥ್ ತಿಳಿಸಿದ್ದಾರೆ. ಈ ಕುರಿತು ಮಡಿಕೇರಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷದಿಂದ ಟಿಕೆಟ್‌ಗೆ ಪ್ರಯತ್ನ ಮಾಡುವುದರಲ್ಲಿ ತಪ್ಪು ಏನಿದೆ? ತಾನು ಕೊಡಗು ಮೈಸೂರು ಕ್ಷೇತ್ರದ ಟಿಕೆಟ್ ಆಕಾಂಕ್ಷಿಯಾಗಿದ್ದೇನೆ. ಕಾಂಗ್ರೆಸ್ ಪಕ್ಷದಲ್ಲಿ ಎಲ್ಲರಿಗೂ ಟಿಕೆಟ್ ಕೊಡುತ್ತಾರೆ ಎಂದು ಪ್ರಯತ್ನ ಮಾಡಲ್ಲ. ಪ್ರಯತ್ನ ಮಾಡುತ್ತಾ ಮಾಡುತ್ತಾ ಸಿಕ್ಕಬಹುದು, ಸಿಕ್ಕದೇ ಇರಬಹುದು. ಆದರೆ ಹೈಕಮಾಂಡ್‌ನಲ್ಲಿ ಈಗ ಮಲ್ಲಿಕಾರ್ಜುನ ಖರ್ಗೆ ಅವರು ಇದ್ದಾರೆ. ನಮ್ಮನ್ನು ರಾಜಕೀಯವಾಗಿ ಎಲ್ಲಾ ಪ್ರೋತ್ಸಾಹ ಮಾಡಿದವರು ಅವರು. ಅವರೊಂದಿಗೆ ಕೆಲಸ ಮಾಡಿದ್ದೇನೆ. ನಮ್ಮ ಕೆಲಸದ ಬಗ್ಗೆ ಅವರಿಗೆ ಗೊತ್ತಿದೆ. ಮತ್ತು ಕಾಂಗ್ರೆಸ್‌ನ ಸಮಸ್ತ ನಾಯಕರು ತನಗೆ ಚಿರಪರಿಚಿತರು ಎಂದರು. ನಾನು ಮಂತ್ರಿಯಾಗಿ ಇರುವಾಗ ನನ್ನ ಆಡಳಿತ ಮತ್ತು ಅಭಿವೃದ್ಧಿ ಕಾರ್ಯಗಳ ಬಗ್ಗೆ ಬಹಳ ಹತ್ತಿರದಿಂದ ಸಾಕಷ್ಟು ಜನರು ನೋಡಿದವರು ಇದ್ದಾರೆ. ಹಾಗಾಗಿ ನನ್ನ ಅನುಭವದ ಆಧಾರದ ಮೇಲೆ ನನಗೂ ಒಂದು ಅವಕಾಶ ಮಾಡಿಕೊಡಿ. ನಾನು ಎಂಪಿ ಆಗಿ ಕೆಲಸ ಮಾಡಿದ್ದೇನೆ. ಅನುಭವದ ಆಧಾರದ ಮೇಲೆ ಕೊಡಿ ಎಂದು ಕೇಳುತ್ತೇನೆ ಎಂದು ಹೇಳಿದರು.

# ಸಿದ್ದರಾಮಯ್ಯಗೆ 10 ಸಾವಿರ ರೂ. ದಂಡ



**ಬೆಂಗಳೂರು:** ಜನಪ್ರತಿನಿಧಿಯಾದ ಕಾರಣಕ್ಕೆ ರಸ್ತೆಯನ್ನು ಅಡ್ಡಗಟ್ಟುವುದನ್ನು ಒಪ್ಪಲು ಸಾಧ್ಯವಿಲ್ಲ. ಜನ ನಾಯಕರಾದವರು ಮೊದಲು ಕಾನೂನು ಪಾಲಿಸಬೇಕು ಎಂದು ಹೈಕೋರ್ಟ್ ಸಿದ್ದರಾಮಯ್ಯ ಮತ್ತು ಇತರ ಕಾಂಗ್ರೆಸ್ ನಾಯಕರಿಗೆ ಚಾಟಿ ಬೀಸಿ 10,000 ರೂ. ದಂಡ ವಿಧಿಸಿದೆ. ಪ್ರತಿಭಟನೆ ನಡೆಸಿ ರಸ್ತೆ ತಡೆ ನಡೆಸಿದ ಕಾಂಗ್ರೆಸ್ ನಾಯಕರ ವಿರುದ್ಧ ಕೇಸ್ ದಾಖಲಾಗಿತ್ತು. ವಿಶೇಷ ನ್ಯಾಯಾಲಯದಲ್ಲಿ ನಡೆಯುತ್ತಿದ್ದ ವಿಚಾರಣಾ ಪ್ರಕ್ರಿಯೆ ರದ್ದುಪಡಿಸುವಂತೆ ಕೋರಿ ಸಿದ್ದರಾಮಯ್ಯ ಅವರು ಅರ್ಜಿ ಸಲ್ಲಿಸಿದ್ದರು. ಈ ಅರ್ಜಿಯನ್ನು ವಜಾಗೊಳಿಸಿದ ನ್ಯಾ. ಕೃಷ್ಣ ಎಸ್ ದೀಕ್ಷಿತ್ ಅವರಿದ್ದ ಹೈಕೋರ್ಟ್ ಪೀಠ ಮಾರ್ಚ್ 6 ರಂದು ಖುದ್ದು ಸಿದ್ದರಾಮಯ್ಯ ಅವರು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ಹಾಜರಾಗುವಂತೆ ಆದೇಶ ಪ್ರಕಟಿಸಿದೆ.

ಎಲ್ಲಾ ಆರೋಪಿಗಳಿಗೆ 10 ಸಾವಿರ ರೂ. ದಂಡ ವಿಧಿಸಿದ ಕೋರ್ಟ್ ಮಾರ್ಚ್ 7 ರಂದು ರಾಮಲಿಂಗಾರೆಡ್ಡಿ, ಮಾರ್ಚ್ 11 ರಂದು ರಣದೀಪ್ ಸುರ್ಜೇವಾಲಾ, ಮಾರ್ಚ್ 15 ರಂದು ಎಂ.ಬಿ.ಪಾಟೀಲ್ ಅವರು ಜನಪ್ರತಿನಿಧಿಗಳ ವಿಶೇಷ ಕೋರ್ಟ್‌ಗೆ ಹಾಜರಾಗುವಂತೆ

ಪ್ರತಿಭಟನೆ ನಡೆಸಿದ ಸಂದರ್ಭದಲ್ಲಿ ಪಿಎಸ್ ಐ ಕು.ಜಹಿದಾ ಹೈಗ್ರೌಂಡ್ಸ್ ಠಾಣೆಯಲ್ಲಿ ಪಿಎಸ್‌ಐ ಆಗಿದ್ದರು. ಪ್ರಕರಣದಲ್ಲಿ ಅವರನ್ನು ಅನಗತ್ಯವಾಗಿ ಎಳೆದು ತಂದು ಪ್ರತಿವಾದಿಯನ್ನಾಗಿ ಕಾಂಗ್ರೆಸ್ ಮಾಡಿದ್ದಕ್ಕೆ ನ್ಯಾಯಾಲಯ 10 ಸಾವಿರ ರೂ. ದಂಡ ವಿಧಿಸಿದೆ.

ಈ ವೇಳೆ ಮೇಲ್ಮನವಿ ಸಲ್ಲಿಸುವವರೆಗೆ ಆದೇಶಕ್ಕೆ ತಡೆ ನೀಡಲು ಮನವಿ ಸಿದ್ದರಾಮಯ್ಯ ಪರ ವಕೀಲರು ಮನವಿ ಮಾಡಿದ್ದರು. ಆದರೆ ಈ ಮನವಿಯನ್ನು ತಿರಸ್ಕರಿಸಿದ ಕೋರ್ಟ್ ಜನಪ್ರತಿನಿಧಿಗಳಾದವರು ಕಾನೂನು ಪಾಲಿಸಿದರೆ ಜನರು ಪಾಲಿಸುತ್ತಾರೆ. ಸಾರ್ವಜನಿಕ ರಸ್ತೆಯಲ್ಲಿ ಪ್ರತಿಭಟನೆ ನಡೆಸಿದರೆ ಜನರಿಗೆ ಕಷ್ಟವಾಗುತ್ತದೆ. ಸಿಟಿ ಲೈಫ್ ಈಸ್ ಟಾರ್ಚರ್, ಪ್ರತಿಭಟನೆಗಳಿಂದ ಜನರಿಗೆ ಮತ್ತಷ್ಟು ತ್ರಾಸ. ಜನಪ್ರತಿನಿಧಿಯಾದ ಕಾರಣಕ್ಕೆ ರಸ್ತೆ ಅಡ್ಡಗಟ್ಟುವುದನ್ನು ಒಪ್ಪಲು ಸಾಧ್ಯವಿಲ್ಲ ಎಂದು ಕಟು ಪದಗಳನ್ನು ಬಳಸಿ ಕಾಂಗ್ರೆಸ್ ನಾಯಕರನ್ನು ತರಾಟೆಗೆ ತೆಗೆದುಕೊಂಡಿದೆ.

**ಏನಿದು ಪ್ರಕರಣ?:** ಗುತ್ತಿಗೆದಾರ ಸಂತೋಷ್ ಆತ್ಮಹತ್ಯೆ ಹಿನ್ನೆಲೆಯಲ್ಲಿ ಸಚಿವರಾಗಿದ್ದ ಕೆ.ಎಸ್.ಈಶ್ವರಪ್ಪ ಅವರ ರಾಜೀನಾಮೆಗೆ ಆಗ್ರಹಿಸಿ 2022ರ ಏಪ್ರಿಲ್ 14ರಂದು ರೇಸ್ ವ್ಯೂ ಹೋಟೆಲ್ ಬಳಿ ಕಾಂಗ್ರೆಸ್ ಪ್ರತಿಭಟನೆ ನಡೆಸಿತ್ತು . ಸಾರ್ವಜನಿಕ ಮುಕ್ತ ಸಂಚಾರಕ್ಕೆ ಅಡ್ಡಿ, ಕಾನೂನು ಸುವ್ಯವಸ್ಥೆಗೆ ಧಕ್ಕೆ ಉಂಟು ಮಾಡಿದ ಆರೋಪದ ಅಡಿ ಹೈಗೌಂಡ್ಸ್ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿತ್ತು. ಈ ಸಂಬಂಧ 42ನೇ ಎಸಿಎಂಎಂ ನ್ಯಾಯಾಲಯ (ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ) ಜಾರಿ ಮಾಡಿದ್ದ ಜಾಮೀನು ರಹಿತ ಬಂಧನ ವಾರೆಂಟ್ ಹಾಗೂ ವಿಶೇಷ ನ್ಯಾಯಾಲಯ ವಿಚಾರಣಾ ಪ್ರಕ್ರಿಯೆ ರದ್ದುಪಡಿಸಲು ಕೋರಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಸಚಿವರಾದ ರಾಮಲಿಂಗಾ ರೆಡ್ಡಿ, ಎಂ.ಬಿ.ಪಾಟೀಲ್ ಮತ್ತು ಎಐಸಿಸಿ ಮುಖಂಡ ರಣದೀಪ್ ಸಿಂಗ್ ಸುರ್ಜೇವಾಲಾ ಅವರು ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದ್ದರು.

# ಆಸ್ತಿ ತೆರಿಗೆ ಬಾಕಿ ಉಳಿಸಿಕೊಂಡವರಿಗೆ ಶೇಕಡ 50 ರಷ್ಟು ರಿಯಾಯಿತಿ

**ಬೆಂಗಳೂರು:** ಆಸ್ತಿ ತೆರಿಗೆ ಬಾಕಿ ಉಳಿಸಿಕೊಂಡವರಿಗೆ ಬೆಂಗಳೂರು ಮಹಾನಗರ ಪಾಲಿಕೆ ಗುಡ್ ನ್ಯೂಸ್ ಕೊಟ್ಟಿದೆ. ಆಸ್ತಿ ತೆರಿಗೆ ಬಾಕಿ ಉಳಿಸಿಕೊಂಡ ಕಟ್ಟಡ ಮಾಲೀಕರಿಗೆ ಶೇಕಡ 50 ರಷ್ಟು ತೆರಿಗೆ ಪಾವತಿಗೆ ಪಾಲಿಕೆ ಆಫರ್ ನೀಡಿದೆ. ಆರ್ಥಿಕ ವರ್ಷ ಮುಗಿಯುವುದರೊಳಗೆ ಆದಾಯ ಗುರಿ ತಲುಪಲು ಬಿಬಿಎಂಪಿ ಪ್ಲ್ಯಾನ್ ಮಾಡಿದ್ದು ರಿಯಾಯಿತಿ ನೀಡಿದೆ. ಬಾಕಿ ಇರೋ ತೆರಿಗೆಯಲ್ಲಿ ಅರ್ಧದಷ್ಟು ತೆರಿಗೆ ಪಾವತಿ ಮಾಡಿ ಅಪೀಲು ಸಲ್ಲಿಸಿದವರಿಗೆ ಮಾತ್ರ ತೆರಿಗೆ ರಿಯಾಯಿತಿ ನೀಡಲಾಗುತ್ತೆ ಎಂದು ಬಿಬಿಎಂಪಿ ಚೀಫ್ ಕಮಿಷನರ್ ತುಷಾರ್ ಗಿರಿನಾಥ್ ತಿಳಿಸಿದ್ದಾರೆ. ಸ್ಥಳೀಯ ಪಾಲಿಕೆ ಕಂದಾಯ ಕಚೇರಿಯಲ್ಲಿ ಅರ್ಧ ತೆರಿಗೆ ಕಟ್ಟಿ, ಉಳಿದರರ್ಧ ತೆರಿಗೆ ಮನ್ನಾಗೆ ಮನವಿ ಸಲ್ಲಿಸಬೇಕು. ನೋಟಿಸ್ ಪಡೆದ ತೆರಿಗೆದಾರರು ಅರ್ಧದಷ್ಟು ತೆರಿಗೆ ಪಾವತಿಸಿ ನಂತರ ಪಾಲಿಕೆಗೆ ಅಪೀಲ್ ಸಲ್ಲಿಸಬೇಕು. ಸರ್ಕಾರ ಆಸ್ತಿ ತೆರಿಗೆ ಸಂಗ್ರಹದಲ್ಲಿ ತಿದ್ದುಪಡಿ ಮಾಡಿದ್ರೆ, ಅರ್ಧದಷ್ಟು ತೆರಿಗೆ ವಿನಾಯಿತಿಯಾಗುವ ಸಾಧ್ಯತೆ ಇದೆ. ಸದ್ಯ ಬಾಕಿ ಇರೋ ತೆರಿಗೆಯಲ್ಲಿ ಅರ್ಧದಷ್ಟು ತೆರಿಗೆ ಪಾವತಿ ಮಾಡಿ ಅಪೀಲು ಸಲ್ಲಿಸಿದವರಿಗೆ ಮಾತ್ರ ತೆರಿಗೆ ರಿಯಾಯಿತಿ ನೀಡಲಾಗುತ್ತೆ ಎಂದು ಬಿಬಿಎಂಪಿ ಚೀಫ್ ಕಮಿಷನರ್ ತುಷಾರ್ ಗಿರಿನಾಥ್ ಮಾಹಿತಿ ನೀಡಿದರು. ಈ ಹಿಂದೆ ತೆರಿಗೆ ರಿಯಾಯಿತಿ ಬಗ್ಗೆ ಡಿಸಿಎಂ ಡಿಕೆ ಶಿವಕುಮಾರ್ ಅವರು ಸುಳಿವು ನೀಡಿದ್ದರು. ಸದ್ಯ ರಿಯಾಯಿತಿ ಚರ್ಚೆ ನಡೆಯುತ್ತಿರುವ ಹೊತ್ತಲ್ಲೇ ಮತ್ತೊಂದು ಮಾರ್ಗದಲ್ಲಿ ತೆರಿಗೆ ವಸೂಲಿಗೆ ಪಾಲಿಕೆ ಪ್ಲಾನ್ ಮಾಡಿದೆ. ರಿಯಾಯಿತಿ ಆಫರ್ ಕೊಟ್ಟು ಅರ್ಧದಷ್ಟಾದ್ರೂ ತೆರಿಗೆ ಸಂಗ್ರಹಕ್ಕೆ ಪಾಲಿಕೆ ಮುಂದಾಗಿದೆ. ಟಾರ್ಗೆಟ್ ರೀಚ್ ಮಾಡಲು ಹೊಸ ಅಸ್ತ್ರಕ್ಕೆ ಪಾಲಿಕೆ ಮುಂದಾಗಿದೆ.

**ಪೀಣ್ಯ ಇಂಡಸ್ಟ್ರಿಯಲ್ ಏರಿಯಾದಲ್ಲಿ ಪಾಲಿಕೆ ಸ್ಪೆಷಲ್ ಡ್ರೈವ್:** ಬಿಬಿಎಂಪಿ ವಲಯಗಳಲ್ಲಿ ಹಳೆ ಬಾಕಿ ಬಿಲ್ ಉಳಿಸಿಕೊಂಡಿದ್ದ ಸಣ್ಣ ಪುಟ್ಟ ಅಂಗಡಿಗಳಿಗೆ ನೋಟಿಸ್ ನೀಡಿ ಬಿಸಿ ಮುಟ್ಟಿಸಿತ್ತು. ನಿನ್ನೆ ಪೀಣ್ಯ ಇಂಡಸ್ಟ್ರಿಯಲ್ ಏರಿಯಾದಲ್ಲಿ ಸ್ಪೆಷಲ್ ಡ್ರೈವ್ ನಡೆಸಿರೋ ಬಿಬಿಎಂಪಿ ಅಧಿಕಾರಿಗಳು 2016-17 ನೇ ಸಾಲಿನಿಂದ ಪಾಲಿಕೆ ತೆರಿಗೆಯನ್ನ ಸರಿ ಪ್ರಮಾಣದಲ್ಲಿ ಕಟ್ಟದೇ ಇರುವ ಹಾಗೂ ದೊಡ್ಡ ಮೊತ್ತದಲ್ಲಿ ಹಳೆ ಬಾಕಿ ಬಿಲ್ ಉಳಿಸಿಕೊಂಡ ಹಲವಾರು ಕಂಪನಿಗಳಿಗೆ ನೋಟಿಸ್ ನೀಡಿ ಬೀಗ ಹಾಕಿದೆ.

# ರಾಜ್ಯಸಭಾ ಚುನಾವಣೆಗೆ ಕಾಂಗ್ರೆಸ್‌ನಿಂದ ಆರ್‌ಬಿಐ ಮಾಜಿ ಗವರ್ನರ್ ಸ್ಪರ್ಧೆ ಸಾಧ್ಯತೆ



**ಬೆಂಗಳೂರು:** ಇದೇ ಫೆಬ್ರವರಿ 27ಕ್ಕೆ ರಾಜ್ಯಸಭೆಗೆ ಚುನಾವಣೆಗೆ ನಡೆಯಲಿದೆ. ರಾಜ್ಯ ವಿಧಾನಸಭೆಯಿಂದ ಮೂರು ಸ್ಥಾನಗಳಿಗೆ ರಾಜ್ಯಸಭೆಗೆ ಚುನಾವಣೆ ನಡೆಯಲಿದೆ. ರಾಜೀವ್ ಚಂದ್ರಶೇಖರ್, ಎಲ್.ಹನುಮಂತಯ್ಯ, ಜಿ.ಸಿ.ಚಂದ್ರಶೇಖರ್, ನಾಸಿರ್ ಹುಸೇನ್ ಅವಧಿ ಏಪ್ರಿಲ್ 2ಕ್ಕೆ ಮುಕ್ತಾಯವಾಗಲಿದೆ. ಈ ಬಾರಿ ವಿಧಾನಸಭೆಯಿಂದ ಯಾರೆಲ್ಲಾ ರಾಜ್ಯಸಭೆಗೆ ಹೋಗ್ತಾರೆ ಎಂಬುದರ ಬಗ್ಗೆ ಚರ್ಚೆಗಳು ಶುರುವಾಗಿವೆ. ಕಾಂಗ್ರೆಸ್ ಅಧಿನಾಯಕಿ ಸೋನಿಯಾ ಗಾಂಧಿ ಅವರನ್ನ ವಿಧಾನಸಭೆಯಿಂದ ರಾಜ್ಯಸಭೆಗೆ ಕಳುಹಿಸುವ ಕುರಿತು ಚರ್ಚೆಗಳು ನಡೆದಿದ್ದವು. ಇದೀಗ ಮತ್ತೊಂದು ಹೆಸರು ಕಾಂಗ್ರೆಸ್ ಅಂಗಳದಲ್ಲಿ ಹರಿದಾಡುತ್ತಿವೆ. ಭಾರತೀಯ ರಿಸರ್ವ್ ಬ್ಯಾಂಕ್‌ನ ಮಾಜಿ ಅಧ್ಯಕ್ಷ, ಆರ್ಥಿಕ ತಜ್ಞ ರಘುರಾಮ್ ರಾಜನ್ ಅವರನ್ನು ರಾಜ್ಯಸಭೆಗೆ ಕರೆತರಲು ಕಾಂಗ್ರೆಸ್ ಹೈಕಮಾಂಡ್ ಪ್ಲಾನ್ ಮಾಡುತ್ತಿದೆ. ಬಿಜೆಪಿ ಸರ್ಕಾರದ ವಿರುದ್ಧ ರಚನಾತ್ಮಕವಾಗಿ, ಅಂಕಿ- ಅಂಶ ಸಮೇತ ಟೀಕೆಗೆ ರಾಜನ್ ಅಸ್ತ್ರ ಪ್ರಯೋಗಿಸಲು ಕಾಂಗ್ರೆಸ್ ಚಿಂತನೆ ನಡೆಸಿದೆ ಎಂದು ತಿಳಿದು ಬಂದಿದೆ.

**ರಘುರಾಮ್ ರಾಜನ್ ಸಂಪರ್ಕಕ್ಕೆ ಪ್ರಯತ್ನ!:** ರಘುರಾಮ್ ರಾಜನ್ ಅವರನ್ನು ರಾಜ್ಯಸಭೆಗೆ ಕಳಿಸಿ ಕೊಡಲು ಕಾಂಗ್ರೆಸ್ ಹೈಕಮಾಂಡ್ ರೂಪುರೇಷೆ ಸಿದ್ಧತೆ ನಡೆಸಿಕೊಂಡಿದೆಯಂತೆ. ಈ ಹಿನ್ನೆಲೆ ರಘುರಾಮ್ ಅವರಿಗೆ ರಾಜ್ಯಸಭೆಗೆ ಹೋಗಲು ಆಸಕ್ತಿ ಇದೆಯಾ ಎಂದು ತಿಳಿದುಕೊಳ್ಳಲು ಕಾಂಗ್ರೆಸ್ ಹೈಕಮಾಂಡ್ ಮುಂದಾಗಿದೆ ಎನ್ನಲಾಗಿದೆ.

**ಕರ್ನಾಟಕದಿಂದ ಆಯ್ಕೆ ಸಾಧ್ಯತೆ?:** ಒಂದು ವೇಳೆ ರಘುರಾಮ್ ರಾಜನ್ ಒಪ್ಪಿದ್ರೆ ಕರ್ನಾಟಕ ಅಥವಾ ಮಹಾರಾಷ್ಟ್ರದಿಂದ ಆಯ್ಕೆ ಮಾಡೋ ಬಗ್ಗೆ ಕಾಂಗ್ರೆಸ್ ಚಿಂತನೆ ನಡೆಸಿದೆಯಂತೆ. ಕರ್ನಾಟಕದಲ್ಲಿ ಮೂವರನ್ನು ಮತ್ತು ಮಹಾರಾಷ್ಟ್ರದಿಂದ ಒಬ್ಬರನ್ನು ರಾಜ್ಯಸಭೆಗೆ ಆರಿಸಿ ಕಳಿಸಬಹುದು. ಮಹಾರಾಷ್ಟ್ರದಿಂದ ಸ್ಥಳೀಯ ನಾಯಕರ ಆಯ್ಕೆಗೆ ಬಿಟ್ಟು ಕೊಡುವ ಚರ್ಚೆಗಳು ನಡೆಯುತ್ತಿರೋ ಹಿನ್ನೆಲೆ ಕರ್ನಾಟಕದಿಂದಲೇ ಆಯ್ಕೆ ಮಾಡುವ ಬಗ್ಗೆ ಪ್ಲಾನ್ ನಡೆದಿವೆ ಎನ್ನಲಾಗಿದೆ.

**ಎಲ್ಲೆಲ್ಲಿ ಚುನಾವಣೆ?:** ಕರ್ನಾಟಕ ಮಾತ್ರವಲ್ಲದೇ ಆಂಧ್ರ ಪ್ರದೇಶದ 3 ಸ್ಥಾನ, ಬಿಹಾರ್ 6 ಸ್ಥಾನ, ಗುಜರಾತ್ 4 ಸ್ಥಾನ, ಹರಿಯಾಣ, ಚತ್ತೀಸ್‌ಗಢ, ಹಿಮಾಚಲ ಪ್ರದೇಶ, ಉತ್ತರಾಖಂಡದಲ್ಲಿ ಒಂದು ಸ್ಥಾನ, ಉತ್ತರ ಪ್ರದೇಶ 10 ಸ್ಥಾನ, ತೆಲಂಗಾಣ, ಒಡಿಸ್ಸಾ, ರಾಜಸ್ಥಾನದಲ್ಲಿ ಮೂರು ಸ್ಥಾನ, ಪಶ್ಚಿಮ ಬಂಗಾಳದಲ್ಲಿ 5 ಸ್ಥಾನ, ಮಹಾರಾಷ್ಟ್ರದಲ್ಲಿ 6 ಸ್ಥಾನ, ಮಧ್ಯ ಪ್ರದೇಶದಲ್ಲಿ 5 ರಾಜ್ಯ ಸಭಾ ಸ್ಥಾನಗಳಿಗೆ ಚುನಾವಣೆಯನ್ನು ಘೋಷಣೆ ಮಾಡಲಾಗಿದೆ.

# ರಮೇಶ್ ಜಾರಕಿಹೊಳಿ ಮಾಲೀಕತ್ವದ ಸಕ್ಕರೆ ಕಾರ್ಖಾನೆ ಮೇಲೆ ಸಿಐಡಿ ದಾಳಿ



**ಬೆಳಗಾವಿ:** ಬೆಳಗಾವಿ ಜಿಲ್ಲೆಯ ಗೋಕಾಕ್ ವಿಧಾನಸಭಾ ಕ್ಷೇತ್ರದ ಬಿಜೆಪಿ ಶಾಸಕ ರಮೇಶ ಜಾರಕಿಹೊಳಿ ಮಾಲೀಕತ್ವದ ಸಕ್ಕರೆ ಕಾರ್ಖಾನೆ ಮೇಲೆ ಸಿಐಡಿ ಅಧಿಕಾರಿಗಳು ದಾಳಿ ಮಾಡಿದ್ದಾರೆ. ಅಫೆಕ್ಸ್ ಬ್ಯಾಂಕ್ ನಲ್ಲಿ ಸಾಲ ಪಡೆದು ಪರುಪಾವತಿ ಮಾಡದಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಗೋಕಾಕ್ ತಾಲೂಕಿನ ಚಿಕ್ಕನಂದಿ ಗ್ರಾಮದ ಬಳಿ ಇರುವ ಸೌಭಾಗ್ಯಲಕ್ಷ್ಮಿ ಶುಗರ್ ಲಿಮಿಟೆಡ್ ಕಾರ್ಖಾನೆ ಮೇಲೆ ದಾಳಿ ಮಾಡಿದ್ದು, ದಾಖಲೆ ಪರಿಶೀಲನೆ ನಡೆಸಿದ್ದಾರೆ. ಕಾರ್ಖಾನೆ ಸ್ಥಾಪಿಸಲು 439 ಕೋಟಿ ರೂಪಾಯಿಯನ್ನು ಅಫೆಕ್ಸ್ ಬ್ಯಾಂಕ್ ನಲ್ಲಿ ಸಾಲ ಪಡೆದುಕೊಂಡಿದ್ದರು. ಆದ್ರೆ, ಸಾಲ ಮರುಪಾವತಿ ಮಾಡದ ಹಿನ್ನೆಲೆಯಲ್ಲಿ ಜನವರಿ 5ರಂದು ಕರ್ನಾಟಕ ರಾಜ್ಯ ಸಹಕಾರಿ ಅಪೆಕ್ಸ್ ಬ್ಯಾಂಕ್‌ನಲ್ಲಿ ಸಾಲ ಪಡೆದು ಪಾವತಿಸದೇ ಮೋಸ ಮಾಡುವ ಉದ್ದೇಶ ಹೊಂದಿದ್ದಾರೆ ಎಂದು ಬ್ಯಾಂಕ್ ಮ್ಯಾನೇಜರ್ ರಾಜಣ್ಣ ಬೆಂಗಳೂರಿನ ವಿವಿಪುರಂ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು.

ಸಾಲ ಪಡೆಯುವ ಸಂದರ್ಭದಲ್ಲಿ ಶುಗರ್ ಕಂಪೆನಿಯಲ್ಲಿ ಜಾರಕಿಹೊಳಿ ವ್ಯವಸ್ಥಾಪಕ ನಿರ್ದೇಶಕರಾಗಿದ್ದು, ವಸಂತ್ ಮತ್ತು ಶಂಕರ್ ಅವರು ನಿರ್ದೇಶಕರಾಗಿದ್ದರು. ಸಾಲ ಇರುವ ಸಂದರ್ಭದಲ್ಲಿ ನಿರ್ದೇಶಕರನ್ನು ಬದಲಿಸುವಂತಿಲ್ಲ ಎಂಬ ಷರತ್ತು ವಿಧಿಸಲಾಗಿತ್ತು. ಆದರೆ, ಆರೋಪಿಗಳು/ಅರ್ಜಿದಾರರು ಕಂಪೆನಿಯಲ್ಲಿನ ಹುದ್ದೆಗಳಿಗೆ ರಾಜೀನಾಮೆ ಸಲ್ಲಿಸಿದ್ದು, ಸಂಬಂಧಪಡದ ವ್ಯಕ್ತಿಗಳನ್ನು ಆ ಹುದ್ದೆಗಳಿಗೆ ನೇಮಿಸಲಾಗಿದೆ. ಈ ವಿಚಾರವನ್ನು ತಮ್ಮ ಗಮನಕ್ಕೆ ತಂದಿಲ್ಲ ಎಂದು ಕರ್ನಾಟಕ ರಾಜ್ಯ ಸಹಕಾರ ಅಪೆಕ್ಸ್ ಬ್ಯಾಂಕ್ ಲಿಮಿಟೆಡ್‌ನ ವ್ಯವಸ್ಥಾಪಕ ನಿರ್ದೇಶಕರು ಜನವರಿ 5ರಂದು ನೀಡಿದ ದೂರಿನ ಅನ್ವಯ ವಿ ವಿ ಪುರಂ ಠಾಣೆಯಲ್ಲಿ ಆರೋಪಿಗಳ ವಿರುದ್ಧ ಐಪಿಸಿ ಸೆಕ್ಷನ್‌ಗಳಾದ 406, 420 34ರ ಅಡಿ ಪ್ರಕರಣ ದಾಖಲಾಗಿದೆ. ತಮ್ಮ ವಿರುದ್ಧ ಎದುರಾಗಿರುವ ಬ್ಯಾಂಕ್ ವಂಚನೆ ಆರೋಪಕ್ಕೆ ಸಂಬಂಧಿಸಿದಂತೆ ದಾಖಲಾಗಿರುವ ದೂರು ಮತ್ತು ಎಫ್‌ಐಆರ್ ರದ್ದುಗೊಳಿಸಲು ಕೋರಿ ರಮೇಶ್ ಜಾರಕಿಹೊಳಿ ಹೈಕೋರ್ಟ್ ಮೆಟ್ಟಿಲೇರಿದ್ದಾರೆ. ಇದರ ಮಧ್ಯೆ ಈ ಪ್ರಕರಣದ ತನಿಖೆಗೆ ರಾಜ್ಯ ಸರ್ಕಾರ ಸಿಐಡಿ ವಹಿಸಿತ್ತು. ಅದರಂತೆ ಇಂದು ನಾಲ್ಕು ಸಿಐಡಿ ಅಧಿಕಾರಿಗಳು ರಮೇಶ್ ಜಾರಕಹೊಳಿ ಕಾರ್ಖಾನೆ ಮೇಲೆ ದಾಳಿ ಮಾಡಿ ದಾಖಲೆ ಪರಿಶೀಲನೆ ನಡೆಸಿದ್ದಾರೆ.

## ನಿರ್ಮಾಣಕ್ಕೆ ಆಗ್ರಹ

ಇನ್ನೂ ಈ ಬಗ್ಗೆ ಬಿಬಿಎಂಪಿ ಅಧಿಕಾರಿಗಳನ್ನ ಸಂಪರ್ಕಿಸಿದರೆ ಈಗಾಗಲೇ ಸಾರ್ವಜನಿಕರಿಂದ ಆಗ್ರಹ ಬಂದ ಮೇರೆಗೆ ಸ್ಕೈ ವಾಕರ್ ನಿರ್ಮಾಣಕ್ಕೆ ನಿಯೋಜನೆ ಮಾಡಲಾಗಿದೆ. ಆದರೆ ಪಕ್ಕದಲ್ಲೆ ಮೆಟ್ರೋ ಹಾಗೂ ಮೆಟ್ರೋ ಲೈನ್ ಕೆಳಗಡೆ ಸ್ಕೈ ವಾಕರ್ ನಿರ್ಮಾಣ ಮಾಡಬೇಕಾಗಿರುವುದರಿಂದ ಬಿಎಂಆರ್‌ಸಿಎಲ್‌ಗೆ ನೋ ಆಬ್ಜಕ್ಷನ್ (ಎನ್‌ಓಸಿ) ಗಾಗಿ ಅರ್ಜಿ ಸಲ್ಲಿಸಲಾಗಿದೆ. ಆದರೆ ಅವರು ಇನ್ನೂ ಎನ್‌ಓಸಿ ಕೊಟ್ಟಿಲ್ಲ. ಕೊಟ್ಟ ಕೂಡಲೆ ಸ್ಕೈ ವಾಕರ್ ಕಾಮಗಾರಿ ಅರಂಭಿಸುವುದಾಗಿ ತಿಳಿಸಿದ್ದಾರೆ.

ಒಟ್ಟಿನಲ್ಲಿ ಬಿಎಂಆರ್‌ಸಿಎಲ್ ಹಾಗೂ ಬಿಬಿಎಂಪಿ ಅಧಿಕಾರಿಗಳ ಸಮನ್ವಯತೆ ಕೊರತೆಯಿಂದ ಪ್ರತಿ ದಿನ ಜನರು ರಸ್ತೆ ದಾಟಲು ಭಯಪಡುತ್ತಿದ್ದಾರೆ. ಜೀವ ಭಯದಲ್ಲೆ ಓಡಾಡುವಂತಾಗಿದೆ. ಇನ್ನಾದ್ರು ಸಂಬಂಧಪಟ್ಟವರು ಎಚ್ಚೆತ್ತುಕೊಂಡು ಪಾದಚಾರಿಗಳಿಗೆ ತೊಂದರೆ ಆಗದಂತೆ ಸ್ಕೈ ವಾಕರ್ ನಿರ್ಮಾಣ ಮಾಡುವ ಮೂಲಕ ಜನರ ಸಮಸ್ಯೆ ಬಗೆ ಹರಿಸಬೇಕಿದೆ.

## ಸಿಎಂ ಘೋಷಣೆ

15ನೇ ಹಣಕಾಸು ಆಯೋಗದ ನಿಯಮಾನುಸಾರ ರಾಜ್ಯಕ್ಕೆ ಶೇ 41ರಷ್ಟು ಹಣ ನೀಡಬೇಕು ಎಂದು ಸಿಎಂ ಆಗ್ರಹಿಸಿದರು.

**ಬಜೆಟ್ ಬಳಿಕ ಶ್ವೇತಪತ್ರ ಹೊರಡಿಸುತ್ತೇವೆ:** ಕರ್ನಾಟಕಕ್ಕೆ ಆಗಿರುವ ಅನ್ಯಾಯದ ಬಗ್ಗೆ ರಾಜ್ಯ ಬಜೆಟ್ ಮಂಡನೆಯ ಬಳಿಕ ಶ್ವೇತಪತ್ರ ಹೊರಡಿಸುತ್ತೇವೆ ಎಂದೂ ಸಿದ್ದರಾಮಯ್ಯ ಹೇಳಿದರು.

## ದಿಲ್ಲಿಯಲ್ಲಿ ಕಾಂಗ್ರೆಸ್ ಪ್ರತಿಭಟನೆ

ಕರ್ನಾಟಕದ ಮುಖ್ಯಮಂತ್ರಿಗಳ ಆರೋಪಕ್ಕೆ ಯಾವುದೇ ದೃಢವಾದ ಆಧಾರವಿಲ್ಲ, 13 ರಾಜ್ಯಗಳ ಬಜೆಟ್‌ಗಳನ್ನು ಮಂಡಿಸಿರುವ ಸಿದ್ದರಾಮಯ್ಯನವರೇ ಹೀಗೆ ಅಸಂಬದ್ಧವಾಗಿ ಮಾತನಾಡುತ್ತಿದ್ದಾರೆಂದು ಅವರ ಪಕ್ಷದವರೇ ನಗುತ್ತಿರಬೇಕು. ಅದೇನೇ ಇದ್ದರೂ, ಕರ್ನಾಟಕದ ಮುಖ್ಯಮಂತ್ರಿಗಳ ಆರೋಪಕ್ಕೆ ಯಾವುದೇ ದೃಢವಾದ ಆಧಾರವಿಲ್ಲ. 13 ರಾಜ್ಯಗಳ ಬಜೆಟ್‌ಗಳನ್ನು ಮಂಡಿಸಿರುವ ಸಿದ್ದರಾಮಯ್ಯನವರೇ ಹೀಗೆ ಅಸಂಬದ್ಧವಾಗಿ ಮಾತನಾಡುತ್ತಿದ್ದಾರೆಂದು ಅವರ ಪಕ್ಷದವರೇ ನಗುತ್ತಿರಬೇಕು. ಅದೇನೇ ಇದ್ದರೂ, ನೆನಪಿಟ್ಟುಕೊಳ್ಳಲಿ.

- 15ನೇ ಆರ್ಥಿಕ ಸಮಿತಿಯು ಯಾವುದೇ ರಾಜ್ಯಕ್ಕೆ ವಿಶೇಷ ಅನುದಾನವನ್ನು ಶಿಫಾರಸ್ಸು ಮಾಡಿಲ್ಲ. ಹೀಗಾಗಿ ಶಿಫಾರಸ್ಸು ಸ್ವೀಕರಿಸದ ಪ್ರಶ್ನೆಯೇ ಉದ್ಭವಿಸುವುದಿಲ್ಲ.
- ಆರ್ಥಿಕ ವರ್ಷ 2020-21 ರಿಂದ, ಕರ್ನಾಟಕಕ್ಕೆ ಬಂಡವಾಳ ವೆಚ್ಚ ಯೋಜನೆಗಳಿಗೆ ಸಹಾಯ ಮಾಡಲು 50 ವರ್ಷಗಳ ಬಡ್ಡಿ-ರಹಿತ ಸಾಲವಾಗಿ ರೂ 6279.94 ಕೋಟಿ ಒದಗಿಸಲಾಗಿದೆ.
- ಯುಪಿಎ ಆಡಳಿತದ 10 ವರ್ಷಗಳಿಗೆ ಹೋಲಿಸಿದರೆ ಕರ್ನಾಟಕಕ್ಕೆ ನೀಡಲಾದ ಅನುದಾನ ಗಣನೀಯವಾಗಿ ಹೆಚ್ಚಿದೆ. ಎನ್‌ಡಿಎಯ 9 ವರ್ಷಗಳಲ್ಲಿ ಈಗಾಗಲೇ 2.08 ಲಕ್ಷ ಕೋಟಿ ರೂಪಾಯಿ ಬಿಡುಗಡೆ ಮಾಡಿದೆ, ಇದು ಯುಪಿಎ ಅನುದಾನಕ್ಕಿಂತ 243% ಹೆಚ್ಚಾಗಿದೆ.
- ಈ ಆರ್ಥಿಕ ವರ್ಷದ ಬಜೆಟ್ ನಲ್ಲಿ ರೂ. 18,005 ಕೋಟಿ ಹೆಚ್ಚುವರಿ ಅನುದಾನವನ್ನು ಬಿಡುಗಡೆ ಮಾಡಲು ನಿರ್ಧರಿಸಲಾಗಿದೆ.

ಕರ್ನಾಟಕದ ಮುಖ್ಯಮಂತ್ರಿಗಳಿಗೆ ಇದೆಲ್ಲ ಅರ್ಥವಾಗಿದ್ದರೂ ರಾಜ್ಯದಲ್ಲಿ ಕೊಳಕು ರಾಜಕಾರಣ ಮಾಡುತ್ತಿದ್ದಾರೆ ಎಂಬುದು ಸ್ಪಷ್ಟ. ಕಾಂಗ್ರೆಸ್ ಪಕ್ಷವು ರಾಜ್ಯದ ರೈತರು ಮತ್ತು ಜನರ ಅಗತ್ಯಗಳನ್ನು ಪೂರೈಸಬೇಕು, ಆದರೆ ಅವರು ರಾಜ್ಯ ಚುನಾವಣೆಯಲ್ಲಿ ಪೂರೈಸಲಾಗದ ಭರವಸೆಗಳನ್ನು ನೀಡಿ, ಈಗ ಕೇಂದ್ರ ಸರ್ಕಾರದ ಮೇಲೆ ಆರೋಪ ಹೊರಿಸಲು ಪ್ರಯತ್ನಿಸುತ್ತಿದ್ದಾರೆ. 2023ರ ಜುಲೈ 23ರಲ್ಲಿ ಉಪಮುಖ್ಯಮಂತ್ರಿಗಳು ಈ ವರ್ಷ ಅಭಿವೃದ್ಧಿ ಕಾಮಗಾರಿಗಳಿಗೆ ಅನುದಾನ ನೀಡಲು ಸಾಧ್ಯವಿಲ್ಲ ಎಂದು ಹೇಳಿದ್ದಾರೆ. ಮುಖ್ಯಮಂತ್ರಿಗಳ ಸ್ವಂತ ಆರ್ಥಿಕ ಸಲಹೆಗಾರ, ''ಐದು ಖಾತರಿಗಳು (ಅವರ) ಸರ್ಕಾರಕ್ಕೆ ದೊಡ್ಡ ಆರ್ಥಿಕ ಹೊರೆಯಾಗಿ ಮಾರ್ಪಟ್ಟಿವೆ'' ಎಂದು ಹೇಳಿದರು.

ಆದ್ದರಿಂದ, ಈ ಆರೋಪಗಳು ತಮ್ಮ ಆಡಳಿತದ ವೈಫಲ್ಯಗಳನ್ನು ಸಾರ್ವಜನಿಕರಿಂದ ಮರೆಮಾಚಲು ಕರ್ನಾಟಕ ಸರ್ಕಾರದ ಮತ್ತೊಂದು ವಿಫಲ ಪ್ರಯತ್ನವಾಗಿದೆ. ಆದರೆ ಈ ಚೇಷ್ಟೆಗಳು ಜನರನ್ನು ಮೂರ್ಖರನ್ನಾಗಿಸಲು ಸಾಧ್ಯವಿಲ್ಲ ಎಂಬುದನ್ನು ಮುಖ್ಯಮಂತ್ರಿಗಳು ಅರಿಯಬೇಕು ಎಂದು ವಾಗ್ದಾಳಿ ನಡೆಸಿದರು.

## ರಾಮನಿಗೆ ನೀಡಿದಂತೆ

ಉತ್ತರ ಕನ್ನಡ ಜಿಲ್ಲೆಯ ಶಿರಸಿ ನಗರದ ಕಚೇರಿಯಲ್ಲಿ ಮಾತನಾಡಿದ ಅವರು, ಕೆನರಾ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಕಮಲದ ಹೂ. ವ್ಯಕ್ತಿ ಯಾರು ಎಂಬುದನ್ನು ವರಿಷ್ಠರು ಸೂಕ್ತ ಸಮಯದಲ್ಲಿ ಘೋಷಣೆ ಮಾಡುತ್ತಾರೆ. ಕಳೆದ ಬಾರಿಗಿಂತಲೂ ದಾಖಲೆ ಮತಗಳಿಂದ ಈ ಬಾರಿ ನಮ್ಮ ಬಿಜೆಪಿ ಗೆಲ್ಲಲಿದೆ. ಕಳೆದ ಬಾರಿ 4 ಲಕ್ಷ 80 ಸಾವಿರ ಮತಗಳ ಅಂತರದಿಂದ ಈ ಕ್ಷೇತ್ರದಲ್ಲಿ ಬಿಜೆಪಿ ಗೆದ್ದಿತ್ತು. ಈ ಬಾರಿ ಆ ದಾಖಲೆಯನ್ನು ಮುರಿದು ಇನ್ನೊಂದು ದಾಖಲೆಯನ್ನು ನಾವು ಸೃಷ್ಟಿಸುತ್ತೇವೆ ಎಂದು ಅವರು ಹೇಳಿದ್ದಾರೆ.

ನಮ್ಮ ಕಾರ್ಯಕರ್ತರು ಹಾಗೂ ಮತದಾರರಲ್ಲಿ ಮನವಿ ಮಾಡುತ್ತೇನೆ. ಬಿಜೆಪಿಗೆ ಮತ ಹಾಕಿದ್ರೆ ಅದು ರಾಮನಿಗೆ ಮತ ನೀಡಿದಂತೆ. ಬಿಜೆಪಿಗೆ ಮತ ಚಲಾಯಿಸಿದರೆ ಅದು ನರೇಂದ್ರ ಮೋದಿಗೆ ಮತ ಹಾಕಿದಂತೆ. ಜತೆಗೆ, ದೇಶದ ಐಕ್ಯತೆಗೆ ಮತ ನೀಡಿದಂತೆ. ಈ ಸಂದೇಶವನ್ನು ಜನರಿಗೆ ತಲುಪಿಸೋಣ, ಅವರಲ್ಲಿ ಜಾಗೃತಿ ಮೂಡಿಸೋಣ. ಎಲ್ಲರೂ ಮತದಾನ ಮಾಡುವಂತೆ ನಾವು ಮಾಡೋಣ ಎಂದು ಕಾರ್ಯಕರ್ತರು ಹಾಗೂ ಮುಖಂಡರಿಗೆ ಮನವಿ ಮಾಡಿದ್ದಾರೆ.

ಉತ್ತರ ಕನ್ನಡ ಲೋಕಸಭಾ ಕ್ಷೇತ್ರದಿಂದ ಬಿಜೆಪಿಯ ಅನಂತಕುಮಾರ್ ಹೆಗಡೆ ಹಾಲಿ ಸಂಸದರಾಗಿದ್ದಾರೆ. ಕೆಲವು ವರ್ಷಗಳಿಂದ ಸಾರ್ವಜನಿಕವಾಗಿ ಹೆಚ್ಚು ಕಾಣಿಸಿಕೊಳ್ಳದಿದ್ದ ಹೆಗಡೆ ಇತ್ತೀಚೆಗೆ ಸಕ್ರಿಯರಾಗಿ ರಾಜಕೀಯ ಚಟುವಟಿಕೆಗಳಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. ಕಳೆದ ಕೆಲವು ದಿನಗಳಿಂದ ಪಕ್ಷದ ಕಾರ್ಯಕರ್ತರ ಸಭೆಗಳಲ್ಲಿ ಭಾಗಿಯಾಗುತ್ತಿದ್ದು, ಈ ಬಾರಿಯೂ ಟಿಕೆಟ್ ಆಕಾಂಕ್ಷಿಯಾಗಿದ್ದಾರೆ ಎನ್ನಲಾಗಿದೆ.

ಇತ್ತೀಚೆಗಷ್ಟೇ ಸಿಎಂ ಸಿದ್ದರಾಮಯ್ಯ ವಿರುದ್ಧ ಏಕವಚನದಲ್ಲಿ ಹೆಗಡೆ ವಾಗ್ದಾಳಿ ನಡೆಸಿದ್ದು ವಿವಾದಕ್ಕೆ ಗ್ರಾಸವಾಗಿತ್ತು. ಆ ನಂತರವೂ ಕೆಲವು ವಿವಾದಿತ ಹೇಳಿಕೆಗಳನ್ನು ನೀಡುವ ಮೂಲಕ ಅವರು ಸುದ್ದಿಯಲ್ಲಿದ್ದಾರೆ. ಈ ಮಧ್ಯೆ, ವಿಧಾನಸಭೆ ಚುನಾವಣೆ ಸೋಲಿನ ನಂತರ ತುಸು ಮೌನಕ್ಕೆ ಶರಣಾಗಿದ್ದ ಕಾಗೇರಿಯೂ ಇದೀಗ ರಾಜಕೀಯ ಚಟುವಟಿಕೆ ಬಿರುಸುಗೊಳಿಸಿರುವುದು ಉತ್ತರ ಕನ್ನಡ ರಾಜಕೀಯದಲ್ಲಿ ಕುತೂಹಲ ಮೂಡಿಸಿದೆ.

## ಸಿಗುವುದಿಲ್ಲ

ಅವರ ಸಿದ್ಧಾಂತದಲ್ಲಿ ಬೇರೂರಿರುವ ರಾಜಕಾರಣಿಗಳಿದ್ದರೂ, ಅವರ ಸಂಖ್ಯೆ ಕ್ರಮೇಣ ಕಡಿಮೆಯಾಗುತ್ತಿದೆ ಎಂದು ಅವರು ಪ್ರತಿಪಾದಿಸಿದರು. ಪ್ರಧಾನಿ ನರೇಂದ್ರ ಮೋದಿ ಅವರನ್ನು ಉಲ್ಲೇಖಿಸಿದ ಗಡ್ಕರಿ, ಭಾರತ ಪ್ರಜಾಪ್ರಭುತ್ವದ ತಾಯಿ ಎಂದು ಹೇಳಿದರು. ಈ ವಿಶೇಷತೆಯಿಂದಾಗಿಯೇ ನಮ್ಮ ಪ್ರಜಾಸತ್ತಾತ್ಮಕ ಆಡಳಿತ ವ್ಯವಸ್ಥೆಯು ಜಗತ್ತಿನ ಇತರ ದೇಶಗಳಿಗೆ ಆದರ್ಶಪ್ರಾಯವಾಗಿದೆ ಎಂದರು.

ಭಾರತ ವಿಶ್ವದಲ್ಲೇ ಅತಿ ದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರವಾಗಿದ್ದು, ಪ್ರಧಾನಿ ನರೇಂದ್ರ ಮೋದಿ ಅವರ ಮಾತಿನಲ್ಲಿ ಹೇಳುವುದಾದರೆ ಭಾರತ ಪ್ರಜಾಪ್ರಭುತ್ವದ ತಾಯಿ ಎಂದು ಗಡ್ಕರಿ ಹೇಳಿದ್ದಾರೆ. ರಾಜಕಾರಣಿಗಳು ಬಂದು ಹೋದರೂ ಅಂತಿಮವಾಗಿ ಅವರು ಕ್ಷೇತ್ರಗಳಲ್ಲಿ ಜನರಿಗೆ ಏನು ಮಾಡಿದ್ದಾರೆ ಎಂಬುದು ಮುಖ್ಯವಾಗುತ್ತದೆ. ಪ್ರಚಾರ ಮತ್ತು ಜನಪ್ರಿಯತೆ ಬೇಕು, ಆದರೆ ಅವರು ಸಂಸತ್ತಿನಲ್ಲಿ ಏನು ಮಾತನಾಡುತ್ತಾರೆ ಎನ್ನುವುದಕ್ಕಿಂತ ಆಯಾ ಕ್ಷೇತ್ರದ ಜನರಿಗಾಗಿ ಅವರು ಹೇಗೆ ಕಾರ್ಯನಿರ್ವಹಿಸುತ್ತಾರೆ ಎಂಬುದು ಮುಖ್ಯವಾಗಿದೆ ಎಂದು ಅವರು ಹೇಳಿದರು.

ಆರ್‌ಜೆಡಿ ಮುಖ್ಯಸ್ಥ ಲಾಲು ಪ್ರಸಾದ್ ಯಾದವ್ ಅವರ ವಾಕ್ಚಾತುರ್ಯವನ್ನು ಶ್ಲಾಘಿಸಿದ ಗಡ್ಕರಿ, ಮಾಜಿ ರಕ್ಷಣಾ ಸಚಿವ ಜಾರ್ಜ್ ಫರ್ನಾಂಡಿಸ್ ಅವರ ನಡವಳಿಕೆ, ಸರಳತೆ ಮತ್ತು ವ್ಯಕ್ತಿತ್ವದಿಂದ ನಾನು ಸಾಕಷ್ಟು ಕಲಿತಿದ್ದೇನೆ ಮತ್ತು ಅಟಲ್ ಬಿಹಾರಿ ವಾಜಪೇಯಿ ನಂತರ ನನ್ನನ್ನು ಹೆಚ್ಚು ಪ್ರಭಾವಿಸಿದ ವ್ಯಕ್ತಿ ಜಾರ್ಜ್ ಫರ್ನಾಂಡಿಸ್ ಎಂದು ಹೇಳಿದರು. ಇತ್ತೀಚೆಗೆ ಮರಣೋತ್ತರವಾಗಿ ಭಾರತ ರತ್ನ ಪ್ರಶಸ್ತಿ ಪಡೆದ ಬಿಹಾರದ ಮಾಜಿ ಮುಖ್ಯಮಂತ್ರಿ ಕರ್ಪೂರಿ ಠಾಕೂರ್ ಅವರನ್ನು ಶ್ಲಾಘಿಸಿದರು.

ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿದ ನಂತರ ಅವರು ಆಟೋರಿಕ್ಷಾದಲ್ಲಿ ಪ್ರಯಾಣಿಸಿದರು. ಇಂತಹವರನ್ನು ರಾಜಕೀಯ ನಾಯಕರು ಪ್ರೇರೇಪಿಸಬೇಕು ಎಂದು ಸಲಹೆ ನೀಡಿದರು. ಬಹುಜನ ಸಮಾಜ ಪಕ್ಷ (ಬಿಎಸ್‌ಪಿ)ಯಿಂದ ಅಮಾನತುಗೊಂಡಿರುವ ಲೋಕಸಭೆ ಸಂಸದ ಡ್ಯಾನಿಶ್ ಅಲಿ ಮತ್ತು ಸಿಪಿಐ-ಎಂ ರಾಜ್ಯಸಭಾ

## ಮೊದಲ ಪುಟದಿಂದ...

ಸಂಸದ ಜಾನ್ ಬ್ರಿಟ್ಟಾಸ್ ಅವರು ಅತ್ಯುತ್ತಮ ಹೊಸ ಸಂಸದೀಯ ಪ್ರಶಸ್ತಿ ಪಡೆದರು.

ಸಮಾರಂಭದಲ್ಲಿ ಬಿಜೆಪಿ ಸಂಸದೆ ಮೇನಕಾ ಗಾಂಧಿ ಮತ್ತು ಸಮಾಜವಾದಿ ಪಕ್ಷದ ಸಂಸದ ರಾಮ್ ಗೋಪಾಲ್ ಯಾದವ್ ಅವರಿಗೆ ಜೀವಮಾನ ಸಾಧನೆ ಪ್ರಶಸ್ತಿ ಪ್ರದಾನ ಮಾಡಲಾಯಿತು. ಅಕಾಲಿದಳದ ಸಂಸದೆ ಹರ್ಷಿಮ್ರತ್ ಕೌರ್ ಮತ್ತು ಬಿಜೆಪಿ ಸಂಸದೆ ಸರೋಜ್ ಪಾಂಡೆ ವರ್ಷದ ಅತ್ಯುತ್ತಮ ಮಹಿಳಾ ಸಂಸದೀಯ ಪ್ರಶಸ್ತಿಯನ್ನು ಸ್ವೀಕರಿಸಿದರು.

## ಅಖಿಲೇಶ್

ಫೆಬ್ರವರಿ 16 ರಂದು ಉತ್ತರ ಪ್ರದೇಶಕ್ಕೆ ಪ್ರವೇಶಿಸುವ ರಾಹುಲ್ ಗಾಂಧಿ ನೇತೃತ್ವದ ಭಾರತ್ ಜೋಡೋ ನ್ಯಾಯ ಯಾತ್ರೆಯಲ್ಲಿ ಪಾಲ್ಗೊಳ್ಳಲು ಅಖಿಲೇಶ್ ಯಾದವ್ ಅವರಿಗೆ ಮಲ್ಲಿಕಾರ್ಜುನ ಖರ್ಗೆ ಅವರ ಆಹ್ವಾನ ಬಂದಿದೆ. ಅಮೇಥಿ ಅಥವಾ ರಾಯ್ಬರೇಲಿಯಲ್ಲಿ ಯಾತ್ರೆಗೆ ಸೇರಲು ಯಾದವ್ ಒಪ್ಪಿಗೆ ನೀಡಿದ್ದಾರೆ ಎಂದು ಎಸ್ಪಿ ಹೇಳಿಕೆಯಲ್ಲಿ ತಿಳಿಸಿದೆ.

ಕಾಂಗ್ರೆಸ್ ಮತ್ತು ಎಸ್‌ಪಿ ಎರಡೂ ವಿರೋಧ ಪಕ್ಷಗಳಾದ ಇಂಡಿಯಾ ಬ್ಲಾಕ್‌ನ ಸದಸ್ಯರಾಗಿದ್ದಾರೆ. 80 ಸಂಸದರನ್ನು ಲೋಕಸಭೆಗೆ ಕಳುಹಿಸುವ ಯುಪಿಯಲ್ಲಿ ಮುಂಬರುವ ಸಂಸತ್ತಿನ ಚುನಾವಣೆಗಾಗಿ ಸಮಾಜವಾದಿ ಪಕ್ಷ ಇತ್ತೀಚೆಗೆ ಕಾಂಗ್ರೆಸ್‌ಗೆ 11 ಸ್ಥಾನಗಳನ್ನು ನೀಡಿತ್ತು. ಎಂಸಿ ವರಿಷ್ಠೆ ಮತ್ತು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರು ತಮ್ಮ ರಾಜ್ಯದಲ್ಲಿದ್ದಾಗ ಯಾತ್ರೆಯಿಂದ ದೂರ ಉಳಿದಿದ್ದರು.

ಉತ್ತರ ಪ್ರದೇಶ ಕಾಂಗ್ರೆಸ್ ಸಮಿತಿಯು ಕವಿ ಪ್ರದೀಪ್ ಅವರ ಜನ್ಮದಿನದಂದು ಇಲ್ಲಿ ಆಯೋಜಿಸಿದ್ದ 'ಜ್ಯೋತ್ ಸೆ ಜ್ಯೋತ್ ಜಗಾತೇ ಚಲೋ' ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಮಂಗಳವಾರ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಮತ್ತು ಯುಪಿ ಉಸ್ತುವಾರಿ ಅವಿನಾಶ್ ಪಾಂಡೆ ಭಾಗವಹಿಸಿದ್ದರು.

ಪಾಂಡೆ ಮಾತನಾಡಿ, ರಾಹುಲ್ ಗಾಂಧಿಯವರು ದೇಶದಲ್ಲಿ ಮಾನವೀಯತೆ, ಪ್ರೀತಿ, ಭ್ರಾತೃತ್ವದ ಸಂದೇಶವನ್ನು ಸಾರುತ್ತಿದ್ದಾರೆ. ಇನ್ನೊಂದೆಡೆ ಬಿಜೆಪಿ ಮತ್ತು ಆರ್‌ಎಸ್‌ಎಸ್ ದ್ವೇಷ ಹರಡುವ ಮೂಲಕ ದೇಶವನ್ನು ಹಿನ್ನಡೆಗೆ ಕೊಂಡೊಯ್ಯಲು ಬಯಸುತ್ತಿದೆ. ದೇಶದ ಸಂವಿಧಾನವನ್ನು ಉಳಿಸಲು ನಮ್ಮ ನಾಯಕನೊಂದಿಗೆ ನಿಲ್ಲುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದಿದ್ದಾರೆ.

## ಸಚಿವರಿಂದ ಭರವಸೆ

ಈ ಕಾರಣದಿಂದಾಗಿ ಹೋಟೆಲ್ ಅಸೋಸಿಯೇಷನ್ ದಿನದ 24 ಗಂಟೆಗಳ ಕಾಲ ಹೋಟೆಲ್ ತೆರೆಯುವಂತೆ ಸರ್ಕಾರಕ್ಕೆ ಮನವಿಯನ್ನ ಸಲ್ಲಿಸುತ್ತಲೇ ಬಂದಿದೆ. ಆದರೆ ಈ ಹಿಂದಿನ ಬಿಜೆಪಿ ಸರ್ಕಾರ ಮಾತ್ರ ಇವರ ಬೇಡಿಕೆಗೆ ಸ್ಪಂದಿಸಿರಲಿಲ್ಲ. ಇದೀಗಾ ಕಾಂಗ್ರೆಸ್ ಸರ್ಕಾರ ಈ ಬೇಡಿಕೆಯನ್ನ ಇಡೇರಿಸುವ ಭರವಸೆ ನೀಡಿದ್ದು, ಇನ್ನು ಕೆಲವೇ ದಿನಗಳಲ್ಲಿ ಮಾರ್ಗಸೂಚಿಯನ್ನ ಬಿಡುಗಡೆ ಮಾಡುವ ಸಾಧ್ಯತೆ ಇದೆ.

ಇನ್ನು, ದಿನದ 24 ಗಂಟೆಗಳ ಕಾಲ ಹೋಟೆಲ್ ಗಳನ್ನ ತೆರೆಯುವುದಕ್ಕೆ ಅನುಮತಿ ನೀಡುವುದರಿಂದ ಉದ್ಯೋಗ ಸೃಷ್ಟಿಯಾಗಲಿದೆ. ರಾತ್ರಿ ಪಾಳಯದಲ್ಲಿ ಕೆಲಸ ಮಾಡಲು ಸಾಕಷ್ಟು ಯುವಕರು ಬರ್ತಾರೆ. ಅಲ್ಲದೇ ಇಂದಿಗೂ ರಾತ್ರಿ ವೇಳೆ ಪ್ರಯಾಣ ಮಾಡುವವರಿಗೆ ಸಾಕಷ್ಟು ಸಮಸ್ಯೆಯಾಗುತ್ತಿದೆ. ಸಧ್ಯ ಕೇರಳದಲ್ಲಿ ದಿನದ 24 ಗಂಟೆಗಳ ಕಾಲ ಹೋಟೆಲ್ ತೆರೆಯಲು ಅನುಮತಿ ಇದೆ. ಅದರಂತೆ ನಮ್ಮ ಸರ್ಕಾರಕ್ಕೂ ಬೇಡಿಕೆ ಇಟ್ಟಿದ್ದೀವಿ. ಸರ್ಕಾರ ಭರವಸೆ ಕೊಟ್ಟಿದೆ. ಆ ಭರವಸೆ ಕಾರ್ಯರೂಪಕ್ಕೆ ಬಂದಿದ್ದೆ ಆದಾಲ್ಲಿ ಹೆಚ್ಚು ಅನುಕೂಲವಾಗಲಿದೆ ಎಂದು ಹೋಟಲ್ ಮಾಲೀಕರು ಹೇಳಿದರು.

ದಿನದ 24 ಗಂಟೆಗಳ ಕಾಲ ಹೋಟೆಲ್ ಓಪನ್ ಮಾಡಲು ಅನುಮತಿ ಕೊಡುವುದು ಒಳ್ಳೆಯ ಸಂಗತಿ. ರಾತ್ರಿ ವೇಳೆ ಪ್ರಯಾಣ ಮಾಡುವಾಗ ತುಂಬ ಕಷ್ಟವಾಗುತ್ತದೆ. ಸರ್ಕಾರ ಒಪ್ಪಿಗೆ ಕೊಟ್ಟಿದ್ದೆ ಆದಲ್ಲಿ ತುಂಬ ಉಪಯೋಗವಾಗಲಿದೆ ಎಂದು ಗ್ರಾಹಕರೊಬ್ಬರು ಸಂತಸ ಹಂಚಿಕೊಂಡಿದ್ದಾರೆ. ಒಟ್ನಲ್ಲಿ, ಹೋಟೆಲ್ ಗಳನ್ನ 24 ಗಂಟೆಗಳ ಕಾಲ ಓಪನ್ ಮಾಡುವುದಕ್ಕೆ ಅನುಮತಿಯನ್ನ ನೀಡಿದ್ರು ಕೂಡ ಟಫ್ ರೂಲ್ಸ್ ಗಳನ್ನ ಜಾರಿ ಮಾಡುವ ಸಾಧ್ಯತೆ ಇದೆ. ಅದ್ರಲ್ಲಿ, 10 ಕ್ಕಿಂತ ಹೆಚ್ಚು ನೌಕರರು ಇರಬೇಕು. ವಾಚ್ ಮ್ಯಾನ್ ಇರಬೇಕು, ಸಿಸಿ ಟಿವಿ ಕ್ಯಾಮರಾಗಳು ಇರಬೇಕು, ಸುರಕ್ಷ ವ್ಯವಸ್ಥೆ ಇರಬೇಕು ಎನ್ನುವ ರೂಲ್ಸ್ ಗಳು ಜಾರಿಯಾಗುವ ಸಾಧ್ಯತೆ ಇದ್ದು, ಹೋಟೆಲ್ ಗಳಿಗೆ 10 ರಿಂದ 20 % ಲಾಭದ ಜೊತೆಗೆ 10 ರಿಂದ 20 ಸಾವಿರ ಉದ್ಯೋಗವು ಸೃಷ್ಟಿಯಾಗಲಿದೆ.

## 5 ದಿನ ಹೈ ಅಲರ್ಟ್

ಕರ್ನಾಟಕದ ನಕ್ಸಲ್ ನಾಯಕತ್ವವನ್ನು ವಿಕ್ರಂ ಗೌಡ ವಹಿಸಿಕೊಂಡಿದ್ದಾನೆ. ಈತನ ತಂಡದ ಮೂವರು ಮೂವರು ಸಶಸ್ತ್ರಧಾರಿಯಾಗಿ ಬೈಂದೂರಿಗೆ ಆಗಮಿಸಿರುವ ಮಾಹಿತಿ ಲಭ್ಯವಾಗಿದೆ. ಈ ಮೂವರು ಗ್ರಾಮದ ಮನೆಗಳಿಗೂ ತೆರಳಿ ಹೋಗಿರುವುದಾಗಿ ಮಾಹಿತಿ ಸಿಕ್ಕಿದೆ. ನಕ್ಸಲರ ಓಡಾಟ ಮಾಹಿತಿ ಬೆನ್ನಲ್ಲೇ ಪೊಲೀಸರು ಅಲರ್ಟ್ ಆಗಿದ್ದು, ವರ್ಷಗಳ ನಂತರ ಮತ್ತೆ ಬೈಂದೂರಿನಲ್ಲಿ ಕೂಂಬಿಂಗ್ ಸಾಧ್ಯತೆ ಇದೆ.

ನಕ್ಸಲ್ ಹುತಾತ್ಮ ದಿನ ಆಚರಿಸಲು ತಯಾರಿ

2005ರ ಫೆಬ್ರವರಿ 5 ರಂದು ಕಳಸ ತಾಲೂಕಿನ ಮೆಣಸಿನ ಹಾಡ್ಯದಲ್ಲಿ ರಾತ್ರಿ ಪೊಲೀಸರ ಎನ್ಕೌಂಟರ್ ನಲ್ಲಿ ಸಾಕೇತ್ ಎಂಬ ನಕ್ಸಲ್ ಸಾವಿಗೀಡಾಗಿದ್ದನು. ಸಾಕೇತ್ ರಾಜನ್ ಸಾವಿಗೆ ರೆಡ್ ಸಲ್ಯೂಟ್ ದಿನ ಆಚರಿಸಲು ನಕ್ಸಲರು ತಯಾರಿ ನಡೆಸಿದ್ದಾರೆ ಎನ್ನಲಾಗಿದೆ. ಸಾಕೇತ್ ನೆನಪಿಗಾಗಿ ನಕ್ಸಲರು ಪ್ರತಿ ವರ್ಷ ನಕ್ಸಲ್ ಹುತಾತ್ಮ ದಿನಾಚರಣೆ ಆಚರಿಸುತ್ತಾರೆ.

**ನಕ್ಸಲರ ದಾಳಿ**

- ನವೆಂಬರ್ 17, 2003: ಉಡುಪಿ ಜಿಲ್ಲೆಯಲ್ಲಿ ನಕ್ಸಲೀಯರಾದ ಹಾಜಿಮಾ ಮತ್ತು ಪಾರ್ವತಿ ಪೊಲೀಸರ ಗುಂಡಿಗೆ ಬಲಿಯಾದರು.
- ಫೆಬ್ರವರಿ 6, 2005: ಚಿಕ್ಕಮಗಳೂರಿನಲ್ಲಿ ರಾಜ್ಯ ನಕ್ಸಲ್ ನಿಗ್ರಹ ದಳದಿಂದ ನಕ್ಸಲ್ ನಾಯಕ ಸಾಕೇತ್ ರಾಜನ್ ಹತ್ಯೆ ಮಾಡಲಾಯಿತು.
- ಮೇ 17, 2005: ಪೊಲೀಸ್ ಮಾಹಿತಿದಾರ ಎಂಬ ಕಾರಣಕ್ಕೆ ಆದಿವಾಸಿ ನಾಯಕ ಶೇಷಯ್ಯನನ್ನು ನಕ್ಸಲರು ಕೊಂದರು.
- ಫೆಬ್ರವರಿ 10, 2005: ತುಮಕೂರಿನ ವೆಂಕಟಮ್ಮನಹಳ್ಳಿಯಲ್ಲಿ ನಕ್ಸಲರು 6 ಪೊಲೀಸರು ಮತ್ತು ಒಬ್ಬ ನಾಗರಿಕನನ್ನು ಕೊಂದರು. ಈ ದಾಳಿಯೇ ನಕ್ಸಲ್ ವಿರೋಧಿ ಪಡೆ ರಚನೆಗೆ ಕಾರಣವಾಗುತ್ತದೆ.
- ನವೆಂಬರ್ 19, 2008: ಹೊರನಾಡು ಬಳಿ ಎನ್‌ಕೌಂಟರ್‌ನಲ್ಲಿ ಮೂವರು ನಕ್ಸಲರು ಮೃತಪಟ್ಟರು. ಈ ಕಾರ್ಯಾಚರಣೆಯಲ್ಲಿ ಓರ್ವ ಎಎನ್‌ಎಫ್ ಅಧಿಕಾರಿ ಕಮಾಂಡೋ ಹುತಾತ್ಮರಾದರು.

## ಸಾಧ್ಯವಿಲ್ಲ

ಮೂರು ಕೋಟಿಗೂ ಅಧಿಕ ವರ್ತಕರು ಪೇಟಿಎಂ ಪ್ಲಾಟ್ ಫಾರ್ಮ್ ನಲ್ಲಿ ಇದ್ದಾರೆ. ಇದರಲ್ಲಿ ಶೇ. 20ರಷ್ಟು ವರ್ತಕರು ಪೇಟಿಎಂ ಪೇಮೆಂಟ್ಸ್ ಬ್ಯಾಂಕ್ ನ ಖಾತೆಯನ್ನು ಸೆಟಲ್ಮೆಂಟ್ ಅಕೌಂಟ್ ಆಗಿ ಬಳಸುತ್ತಾರೆ. ಅಂದರೆ ಸುಮಾರು 60 ಲಕ್ಷದಷ್ಟು ಅಕೌಂಟ್ ಗಳು ಪೇಮೆಂಟ್ಸ್ ಬ್ಯಾಂಕ್ ನಲ್ಲಿವೆ.

ಅಷ್ಟೇ ಅಲ್ಲ, ಪೇಟಿಎಂ ಆ ಯಪ್ ನ ಯುಪಿಐ ಸೇವೆಗೂ ಕೂಡ ಪೇಟಿಎಂ ಪೇಮೆಂಟ್ಸ್ ಬ್ಯಾಂಕನ್ನೇ ಬಳಸಲಾಗುತ್ತಿದೆ. ಅಂದರೆ, ಪೇಮೆಂಟ್ ಸರ್ವಿಸ್ ನೀಡುವ ಪ್ರಾಯೋಜಕ ಬ್ಯಾಂಕ್ ಆಗಿರುವುದು ಪೇಟಿಎಂ ಪೇಮೆಂಟ್ಸ್ ಬ್ಯಾಂಕ್.

ಈ ಎಲ್ಲಾ ಅಕೌಂಟ್ ಗಳನ್ನು ಫೆಬ್ರುವರಿ 29ರೊಳಗೆ ಥರ್ಡ್ ಪಾರ್ಟಿ ಬ್ಯಾಂಕುಗಳಿಗೆ ವರ್ಗಾವಣೆ ಮಾಡಬೇಕು. ಇದು ಅಷ್ಟು ಸುಲಭದ ಕೆಲಸವಲ್ಲ.

ಪೇಟಿಎಂ ಪೇಮೆಂಟ್ಸ್ ಬ್ಯಾಂಕ್ ನಲ್ಲಿರುವ 60 ಲಕ್ಷ ಖಾತೆಗಳನ್ನು ಬೇರೆ ಬ್ಯಾಂಕ್ ಗೆ ವರ್ಗಾವಣೆ ಮಾಡಲು ದೊಡ್ಡ ತೊಡಕಿದೆ. ಅಷ್ಟೂ ಖಾತೆಗಳನ್ನು ಹಾಗೇ ವರ್ಗಾವಣೆ ಅಸಾಧ್ಯ. ಪೇಮೆಂಟ್ಸ್ ಬ್ಯಾಂಕ್ ತನ್ನ ಖಾತೆಗಳನ್ನು ವಿತರಿಸುವಾಗ ಸರಿಯಾಗಿ ಕೆವೈಸಿ ನಿಯಮ ಪಾಲಿಸಿರಲಿಲ್ಲ. ಈಗ ಬೇರೆ ಬ್ಯಾಂಕುಗಳು ಈ ಖಾತೆಗಳನ್ನು ಪಡೆಯುವಾಗ ಹೊಸದಾಗಿ ಕೆವೈಸಿ ಪಡೆಯಲೇಬೇಕು. ಫೆಬ್ರುವರಿ 29ರೊಳಗೆ ಈ ಕೆಲಸ ಬಹುತೇಕ ಕಷ್ಟಸಾಧ್ಯ. ಹೀಗಾಗಿ, ಯಾವ ಬ್ಯಾಂಕ್ ಕೂಡ ಪೇಟಿಎಂನೊಂದಿಗೆ ಈ ವಿಚಾರದಲ್ಲಿ ಜೋಡಿಸಿಕೊಳ್ಳಲು ಹಿಂದೇಟು ಹಾಕುತ್ತಿವೆ.

**ಡೆಡ್ ಲೈನ್ ವಿಸ್ತರಣೆ ಆಗುವುದೊಂದೇ ದಾರಿ:** ಈಗ ಪೇಟಿಎಂ ಪೇಮೆಂಟ್ಸ್ ಬ್ಯಾಂಕ್ ನ ಸಮಸ್ಯೆಗೆ ಪರಿಹಾರ ಸಿಗಬೇಕೆಂದರೆ ಡೆಡ್ ಲೈನ್ ವಿಸ್ತರಿಸುವ ಕಾರ್ಯವಾಗಬೇಕು ಅಷ್ಟೇ. ಹೀಗಾಗಿ, ಪೇಟಿಎಂ ಸಿಇಒ ಅವರು ಹಣಕಾಸು ಸಚಿವರನ್ನು ಮತ್ತು ಆರ್ ಬಿಐ ಅಧಿಕಾರಿಗಳನ್ನು ಭೇಟಿ ಮಾಡಿದ್ದು.

ಫೆಬ್ರುವರಿ 29ಕ್ಕೆ ನಿಗದಿ ಮಾಡಲಾಗಿರುವ ಡೆಡ್ ಲೈನ್ ಅನ್ನು ವಿಸ್ತರಿಸಿ. ಪೇಮೆಂಟ್ಸ್ ಬ್ಯಾಂಕ್ ಖಾತೆಗಳನ್ನು ಸ್ವೀಕರಿಸಲು ಯಾವುದಾದರೂ ಬ್ಯಾಂಕುಗಳಿಗೆ ತಿಳಿಸಿ ಎಂಬುದು ವಿಜಯ್ ಶೇಖರ್ ಶರ್ಮಾ ಅವರ ಎರಡು ಪ್ರಮುಖ ಮನವಿಯಾಗಿತ್ತು.

**ಹಣಕಾಸು ಸಚಿವಾಲಯ ಅಸಹಾಯಕತೆ:** ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರೊಂದಿಗೆ ಮಂಗಳವಾರ ಸಂಜೆ 4 ಗಂಟೆಯ ಬಳಿಕ ಒಂದತ್ತು ನಿಮಿಷ ಕಾಲ ಶರ್ಮಾ ಮಾತನಾಡಿದರು. ಈ ವಿಚಾರಕ್ಕೂ ಸರ್ಕಾರಕ್ಕೂ ಸಂಬಂಧ ಇಲ್ಲ. ಸರ್ಕಾರ ಏನೂ ಮಾಡಲು ಸಾಧ್ಯ ಇಲ್ಲ ಎಂದು ಹಣಕಾಸು ಸಚಿವೆ ಅಸಹಾಯಕತೆ ತೋರಿದರೆನ್ನಲಾಗಿದೆ.

## 10 ಕೋಟಿ ಹೆಚ್ಚಳ

ಮಹಿಳೆಯರಿಗೆ ಉಚಿತ ಪ್ರಯಾಣ ಸೌಲಭ್ಯವನ್ನು ಒದಗಿಸುವ ಸರ್ಕಾರದ ಶಕ್ತಿ ಯೋಜನೆಯು ಗಮನಾರ್ಹ ಪರಿಣಾಮ ಬೀರಿದೆ. ಇದರಿಂದಾಗಿ ದೇವಾಲಯಗಳಿಗೆ ಭೇಟಿ ನೀಡುವವರ ಸಂಖ್ಯೆಯಲ್ಲಿ ಗಣನೀಯ ಹೆಚ್ಚಳವಾಗಿದೆ ಎಂದು ಮತ್ತೊಬ್ಬರು ಅಧಿಕಾರಿ ತಿಳಿಸಿದ್ದಾರೆ. ಕೋವಿಡ್ ಪೂರ್ವದ ದಿನಗಳಿಗೆ ಹೋಲಿಸಿದರೆ ಟೂರ್ ಆಪರೇಟರ್ ಗಳ ಉದ್ಯಮದಲ್ಲಿ ಶೇ 10 ರಿಂದ 15ರಷ್ಟು ಏರಿಕೆಯಾಗಿದೆ ಎಂದು ಅವರು ತಿಳಿಸಿದ್ದಾರೆ. ಪ್ರತಿ ವಾರಾಂತ್ಯದಲ್ಲಿ ಹೆಚ್ಚು ಬುಕಿಂಗ್ ಇರುತ್ತವೆ. ವಾರಾಂತ್ಯಗಳಲ್ಲಿ ಸಣ್ಣ ಟ್ರಿಪ್ ಮಾಡಲು ಬಯಸುವವರ ಸಂಖ್ಯೆ ಹೆಚ್ಚಾಗಿದೆ. ಹೀಗಾಗಿ ವಾರಾಂತ್ಯಗಳಲ್ಲಿ ಪ್ರವಾಸಿ ತಾಣಗಳು ಜನಜಂಗುಳಿಯಿಂದ ಕೂಡಿರುತ್ತವೆ ಎಂದು ವರದಿ ಉಲ್ಲೇಖಿಸಿದೆ.

## ಹತ್ಯೆ

ಮೊನ್ನೆ ಸೋಮವಾರ ರಾತ್ರಿ ಈತನ ಕುತ್ತಿಗೆಗೆ ತಂತಿ ಬಿಗಿದು ಯಾರೋ ದುಷ್ಕರ್ಮಿಗಳು ಕೊಲೆ ಮಾಡಿ ಎಸ್ಕೇಪ್ ಆಗಿದ್ದಾರೆ. ಬೀಳಗಿ ಪಟ್ಟಣದಿಂದ ಜಮಖಂಡಿಗೆ ಹೋಗುವ ರಸ್ತೆ ಮಾರ್ಗದಲ್ಲಿ ಬೀಳಗಿ ಹೊರವಲಯದಲ್ಲಿ ಕೊಲೆ ಮಾಡಿ ದುಷ್ಕರ್ಮಿಗಳು ಪರಾರಿಯಾಗಿದ್ದಾರೆ. ಇದರಿಂದ ಈರಪ್ಪ ಗರಸಂಗಿ ಪತ್ನಿ ಮಕ್ಕಳು ಹಾಗೂ ಕುಟುಂಬಸ್ಥರು, ಸಂಬಂಧಿಕರು ಒಂದೇ ಮನೇ ಗೋಳಾಡುತ್ತಿದ್ದಾರೆ. ಮೃತ ಈರಪ್ಪನ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದೆ. ಆದರೆ ಈರಪ್ಪ ಕುಟುಂಬಸ್ಥರಿಗೆ ಆತನ ಕೊಲೆ ಮಾಡಿರುವುದು ಯಾರು, ಹಿನ್ನೆಲೆ ಏನು, ಒಂದೂ ಗೊತ್ತಿಲ್ಲ ಅಂತಿದ್ದು ದಿಕ್ಕು ತೋಚದಂತಾಗಿದ್ದಾರೆ.

ಇಲ್ಲಿ ಈರಪ್ಪ ಗರಸಂಗಿ ಎಲ್ಲ ರೀತಿಯಿಂದ ಅನುಕೂಲಕರ ಸ್ಥಿತಿಯಲ್ಲಿದ್ದ ವ್ಯಕ್ತಿ. ಡವಳೇಶ್ವರ ಗ್ರಾಮದ ಈರಪ್ಪನಿಗೆ 12 ಎಕರೆ ಆಸ್ತಿ, ಒಳ್ಳೆಯ ಮನೆ ಎಲ್ಲವೂ ಇದ್ದು ಯಾವುದಕ್ಕೂ ಕಡಿಮೆಯಿರಲಿಲ್ಲ. ಈರಪ್ಪ ಗರಸಂಗಿ ಮೂರು ಜನರನ್ನು ಮದುವೆಯಾಗಿದ್ದಾನೆ. ಮೊದಲ ಪತ್ನಿ ಮೃತಪಟ್ಟಿದ್ದಾಳೆ. ನಂತರ ಮೊದಲ ಪತ್ನಿಯ ಸಹೋದರಿಯನ್ನೇ ಮದುವೆಯಾಗಿದ್ದ. ಆದರೆ ಆಕೆ ಓದಬೇಕು, ಪೊಲೀಸ್ ಪರೀಕ್ಷೆ ಬರೆಯಬೇಕು ಅಂತ ಈತನನ್ನು ಬಿಟ್ಟು ಹೋಗಿ, ಪೊಲೀಸ್ ಕಾನ್ಸ್‌ಟೇಬಲ್ ಆಗಿದ್ದಾರೆ.

ಆಕೆಯ ನಂತರ ಮೂರನೇ ಮದುವೆಯಾಗಿರುವ ಈರಪ್ಪನಿಗೆ ಒಬ್ಬ ಗಂಡು ಮಗನಿದ್ದಾನೆ. ಹೊಲ ಮನೆ ಆಸ್ತಿಪಾಸ್ತಿ ಎಲ್ಲ ರೀತಿಯಿಂದ ಸಮೃದ್ಧವಾಗಿದ್ದ ಈರಪ್ಪನ ಕೊಲೆ ಕುತೂಹಲ ಮೂಡಿಸಿದೆ. ಮೊನ್ನೆ ಸಂಜೆ 5.30 ರ ಸುಮಾರಿಗೆ ಮನೆಯಿಂದ ಈರಪ್ಪ ಹೋಗಿದ್ದ. ರಾತ್ರಿ 8 ರ ಸುಮಾರಿಗೆ ಈ ಕೊಲೆ ನಡೆದಿದೆ ಎಂದು ತಿಳಿದು ಬಂದಿದೆ. ಸುದ್ದಿ ತಿಳಿದ ತಕ್ಷಣ ಬೀಳಗಿ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

## ಕೊಲೆ

ಈ ಪ್ರಕರಣಕ್ಕೆ ಜಯಪ್ಪ ಪ್ರಮುಖ ಸಾಕ್ಷಿಯಾಗಿದ್ದರು. ಒಂದು ವೇಳೆ ಜಯಪ್ಪ ಸಾಕ್ಷಿ ಹೇಳಿದರೆ ಕಠಿಣ ಶಿಕ್ಷೆಯಾಗುವ ಭೀತಿಯಲ್ಲಿ ಅಣ್ಣಯ್ಯ ಇದ್ದನು. ಹೀಗಾಗಿ ರಾಜಿಯಾಗುವಂತೆ ಆರೋಪಿ ಅಣ್ಣಯ್ಯ ಜಯಪ್ಪನ ಹಿಂದೆ ಬಿದ್ದಿದ್ದನು. ಜಯಪ್ಪ ಜನವರಿ 31 ರಂದು ಹಾಸನ ನ್ಯಾಯಾಲಯದಲ್ಲಿ ಅಣ್ಣಯ್ಯನ ವಿರುದ್ಧ ಸಾಕ್ಷಿ ಹೇಳಿ ಮರಳಿ ಹೋಗುತ್ತಿದ್ದರು. ಈ ವೇಳೆ ಅಣ್ಣಯ್ಯ ಜಯಪ್ಪನನ್ನು ಕರೆದೊಯ್ದು ಎಣ್ಣೆ ಕುಡಿಸಿದ್ದನು. ಕಂಠಪೂರ್ತಿ ಕುಡಿಸಿ ತನಗೆ ಅನುಕೂಲ ಆಗುವಂತೆ ಸಹಾಯ ಮಾಡು ಎಂದು ಮನವಿ ಮಾಡಿದ್ದನು.

ತನ್ನ ಬೇಡಿಕೆಗೆ ಒಪ್ಪದಿದ್ದಾಗ ಅಣ್ಣಯ್ಯ ಹಾಸನ ಬಡಾವಣೆ ಠಾಣೆ ವ್ಯಾಪ್ತಿಯಲ್ಲಿ ಜಯಪ್ಪನ ತಲೆ ಮೇಲೆ ಕಲ್ಲು ಎತ್ತಿಹಾಕಿ ಕೊಲೆ ಮಾಡಿ ಪರಾರಿಯಾಗಿದ್ದಾನೆ. ಎಷ್ಟು ಹೊತ್ತಾದರು ಪುತ್ರ ಮನೆಗೆ ಬಾರದಿದ್ದಕ್ಕೆ ಜಯಪ್ಪನ ತಾಯಿ ಅರಸೀಕೆರೆ ಗ್ರಾಮಾಂತರ ಠಾಣೆಯಲ್ಲಿ ಪುತ್ರ ಕಾಣೆಯಾದ ಬಗ್ಗೆ ದೂರು ನೀಡಿದ್ದರು.

# ಸಂವಿಧಾನ ಜಾಗೃತಿ ಜಾಥಾ ಪರಿಣಾಮಕಾರಿಯಾಗಿ ಮೂಡಿಬರಲಿ



**ಮೈಸೂರು :** ನಂಜನಗೂಡು, ಪಿರಿಯಾಪಟ್ಟಣ ಹಾಗೂ ಕೆ.ಆರ್. ನಗರ ತಾಲೂಕಿನಲ್ಲಿ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮ ಆರಂಭವಾಗಿದ್ದು ಜಿಲ್ಲೆಯ ಗ್ರಾಮ ಪಂಚಾಯಿತಿಗಳಲ್ಲಿ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮದಲ್ಲಿ ಅರಿವು ಮೂಡಿಸುವ ಕೆಲಸ ಪರಿಣಾಮಕಾರಿ ಮೂಡಿಬರಲಿ ಎಂದು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳಾದ ಕೆ.ಎಂ.ಗಾಯಿತ್ರಿ ಅವರು ತಿಳಿಸಿದರು.

ಇಂದು ಜಿಲ್ಲಾ ಪಂಚಾಯತ್ ಕಾರ್ಯಾಲಯದಲ್ಲಿ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳೊಂದಿಗೆ ಸಂವಿಧಾನ ಜಾಗೃತಿ ಜಾಥಾ ಆಚರಣೆ ಸಂಬಂಧ ಜೂಮ್ ಮೂಲಕ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಸಂವಿಧಾನ ಜಾಥಾ ಕಾರ್ಯಕ್ರಮವು ಯಶಸ್ವಿಯಾಗಿ ಮೂಡಿಬರಲು ಹಾಗೂ ಕಾರ್ಯಕ್ರಮದ ವೆಚ್ಚವನ್ನು ಭರಿಸಲು ಸರ್ಕಾರವು ಪ್ರತೀ ಪಂಚಾಯಿತಿಗೆ 10 ಸಾವಿರ ಅನುದಾನವನ್ನು ನೀಡುತ್ತಿ ಯದ್ದು ಕಾರ್ಯಕ್ರಮ ಪರಿಣಾಮಕಾರಿಯಾಗಿ ಮೂಡಿಬರಲು ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಅವರು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಜನ ಸೇರುವ ಸ್ಥಳಗಳಲ್ಲಿ ಅರಿವು : ಹೆಚ್ಚು ಜನ ಸೇರುವ ಸ್ಥಳಗಳಾದ ಕೈಗಾರಿಕಾ ಪ್ರದೇಶಗಳಲ್ಲಿ ಮಹಿಳೆಯರನ್ನೊಳಗೊಂಡಂತೆ ಸಂವಿಧಾನ ಪೀಠಿಕೆಯನ್ನು ಓದಿಸುವ ಹಾಗೂ ಸಂವಿಧಾನ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ, ಚಾಮುಂಡಿಬೆಟ್ಟದಲ್ಲಿ ಭಕ್ತಾಧಿಗಳೊಂದಿಗೆ ಸಂವಿಧಾನದ ಪೀಠಿಕೆಯನ್ನು ಓದಿಸಿ ಅವರಲ್ಲಿ ಅರಿವು ಮೂಡಿಸಲು, ಶಾಲಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳನ್ನು ಒಟ್ಟುಗೂಡಿಸಿ ಸಂವಿಧಾನ ಪೀಠಿಕೆ ಹಾಗೂ ನಿರ್ದೇಶಕ ತತ್ವಗಳ ಬಗ್ಗೆ ಉಪನ್ಯಾಸ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಸಂಬಂಧ ಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಮಹಿಳಾ ಮತ್ತು ಮಕ್ಕಳ ಇಲಾಖೆಯ ವತಿಯಿಂದ ತೃತೀಯ ಲಿಂಗಿಗಳನ್ನೆಲ್ಲ ಒಟ್ಟುಗೂಡಿಸಿ ಒಂದು ಜಾಥಾವನ್ನು ಕೈಗೊಳ್ಳುವುದು. ಕೃಷಿ ಇಲಾಖೆಯಿಂದ ರೈತ ಸಂಪರ್ಕ ಕೇಂದ್ರಗಳಲ್ಲಿ ಸೇರುವ ಸಾರ್ವಜನಿಕರಿಗೆ ಸಂವಿಧಾನದ ಕುರಿತಾಗಿ ಒಂದು ಅರಿವು ಮೂಡಿಸುವ ಕಾರ್ಯಕ್ರಮವನ್ನು ಕೈಗೊಳ್ಳುವುದು.

ಎ.ಪಿ.ಎಂ.ಸಿ. ಮಾರುಕಟ್ಟೆಯಲ್ಲಿ ಅಲ್ಲಿ ಬರುವ ರೈತರಿಗೆ ಸಂವಿಧಾನ ಪೀಠಿಕೆ ಓದುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವುದು. ನರೇಗಾ ಸ್ಥಳದಲ್ಲಿ ರೈತರಿಗೆ ಜಾಗೃತಿ ಮೂಡಿಸುವ ಹಾಗೂ ಸಂಘ ಸಂಸ್ಥೆಗಳು ಒಗ್ಗೂಡಿಸಿಕೊಂಡು ಇಂಡಸ್ಟ್ರೀಸ್ ವರ್ಕರ್ಸ್ ಗೆ ಅರಿವು ಮೂಡಿಸುವುದು ಮುಂತಾದ ಕಾರ್ಯಕ್ರಮವನ್ನು ಕೈಗೊಂಡು ಜನರಿಗೆ ಅರಿವು ಮೂಡಿಸುವ ಕಾರ್ಯವನ್ನು ಕೈಗೊಳ್ಳಬೇಕೆಂದು ಸೂಚನೆ ನೀಡಿದರು.

ಸೈಕಲ್ ಜಾಥಾ, ಬೈಕ್ ಜಾಥಾ, ಎತ್ತಿನಗಾಡಿ ಮೆರವಣಿಗೆ , ಟ್ರ್ಯಾಕ್ಟರ್ ಜಾಥಾ, ಮುಂತಾದವುಗಳ ಮೂಲಕ ಸಂವಿಧಾನದ ಜಾಗೃತಿ ಮೂಡಿಸುವ ಕಾರ್ಯಕ್ರಮವನ್ನು ಕೈಗೊಳ್ಳುವುದು ಹಾಗೂ ಜನರು ಅತೀ ಹೆಚ್ಚಾಗಿ ಸೇರುವ ಕಡೆ ಅರಿವು ಮೂಡಿಸುವ ಕಾರ್ಯವನ್ನು ನಡೆಸುವುದರಿಂದ ಕಾರ್ಯಕ್ರಮವು ಯಶಸ್ವಿಗೊಳ್ಳಲು ಸಾಧ್ಯ ಎಂದು ಅವರು ಹೇಳಿದರು.

ಈ ಕಾರ್ಯಕ್ರಮ ಆಚರಣೆ ಮಾಡುವಾಗ ಯಾವುದೇ ಕಾರಣಕ್ಕೂ ಯಾವ ವಿಷಯದಲ್ಲೂ ಗೊಂದಲಗಳು ಉಂಟಾಗಬಾರದು. ಈ ನಿಟ್ಟಿನಲ್ಲಿ ಅಧಿಕಾರಿಗಳು ಜಾಗೃತೆಯಿಂದ ಅಗತ್ಯ ಕ್ರಮ ವಹಿಸಬೇಕು ಎಂದು ಸೂಚಿಸಿದರು.

ನಂತರ ಸಮಾಜ ಕಲ್ಯಾಣ ಇಲಾಖೆಯ ಪ್ರಭಾರ ಜಂಟಿ ನಿರ್ದೇಶಕರಾದ ಚಂದ್ರ ಶೇಖರ್ ಅವರು ಮಾತನಾಡಿ ವಿಶ್ವವಿದ್ಯಾಲಯ ಹಾಗೂ ಇಂಜಿನಿಯರಿಂಗ್ ಕಾಲೇಜಿನಲ್ಲಿ ಅರಿವು ಮೂಡಿಸುವ ವಿಚಾರ ಸಂಕಿರಣ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಸಂವಿಧಾನದ ಬಗ್ಗೆ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮ ಆಗಬೇಕು .

ಕಾಲೇಜು ಮತ್ತು ಶಾಲಾ ಕಾಲೇಜುಗಳಲ್ಲಿ ವಿಶೇಷ ಉಪನ್ಯಾಸ ಹಾಗೂ ನಿರ್ದೇಶಕ ತತ್ವಗಳ ಅರಿವು, ಎಲ್ಲ ಗ್ರಾಮ ಪಂಚಾಯಿತಿಗಳಲ್ಲಿನ ಗ್ರಂಥಾಲಯಗಳಲ್ಲಿ ಸಂವಿಧಾನ ಕುರಿತ ಪುಸ್ತಕಗಳನ್ನು ಪ್ರದರ್ಶನ ಕೈಗೊಂಡು ಉತ್ತಮವಾಗಿ ಮೂಡಿಬರುವಂತೆ ಎಲ್ಲಾ ಅಧಿಕಾರಿಗಳು ಮುಂದಾಗಬೇಕು ಅವರು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ (ಅಭಿವೃದ್ಧಿ ) ಡಾ.ಎಂ. ಕೃಷ್ಣರಾಜು, ಜಿಲ್ಲಾ ಪಂಚಾಯತಿ ಉಪ ಕಾರ್ಯದರ್ಶಿ (ಆಡಳಿತ) ಸವಿತಾ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಸಂವಿಧಾನದ ಅರಿವು ಅಗತ್ಯ: ಸಮಾಜ ಕಲ್ಯಾಣಾಧಿಕಾರಿ ಚಂದ್ರಶೇಖರ್

**ಪಿರಿಯಾಪಟ್ಟಣ:** ಸಾರ್ವಜನಿಕರಿಗೆ ಸಂವಿಧಾನದ ಬಗ್ಗೆ ಅರಿವು ಮೂಡಿಸುವ ಸಲುವಾಗಿ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ ಎಂದು ಸಮಾಜ ಕಲ್ಯಾಣಾಧಿಕಾರಿ ಚಂದ್ರಶೇಖರ್ ತಿಳಿಸಿದರು.

ತಾಲೂಕಿನ ಪಂಚವಳ್ಳಿ, ಕಿರನಲ್ಲಿ, ರಾಮನಾಥ ತುಂಗಾ, ದೊಡ್ಡ ಬ್ಯಾಲಾಳು ಹಾಗೂ ಕಂಪಲಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಆಗಮಿಸಿದ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಜನರಿಗೆ ಮನವರಿಕೆ ಮಾಡಿಸಿ: ದೇಶದಲ್ಲಿ ನೆಲೆಸಿರುವ ಪ್ರತಿಯೊಬ್ಬರೂ ಸಂವಿಧಾನದ ಅಡಿಯಲ್ಲಿಯೇ ಜೀವನ ನಡೆಸುತ್ತಿದ್ದಾರೆ. ಸಂವಿಧಾನದಲ್ಲಿರುವ ಹಕ್ಕು ಮತ್ತು ಕರ್ತವ್ಯಗಳ ಬಗ್ಗೆ ಜನರಿಗೆ ಮನವರಿಕೆ ಮಾಡಿಕೊಡುವ ಉದ್ದೇಶದಿಂದಲೇ ಸಂವಿಧಾನದ ದಿನಾಚರಣೆ ಆಚರಿಸಲಾಗುತ್ತಿದೆ.

ಸಂವಿಧಾನ ನಮಗೆ ಎಲ್ಲಾ ರೀತಿಯ ಹಕ್ಕುಗಳನ್ನು ಕೊಟ್ಟಿದೆ. ಅದೇರೀತಿ ಕರ್ತವ್ಯವನ್ನೂ ವಹಿಸಿದೆ. ನಾವು ಹೇಗೆ ನಮ್ಮ ಹಕ್ಕುಗಳನ್ನು ಪಡೆದುಕೊಳ್ಳತ್ತೇವೆ ಅದೇ ರೀತಿ ಸಂವಿಧಾನ ನೀಡಿರುವ ಕರ್ತವ್ಯಗಳನ್ನು ಪಾಲನೆ ಮಾಡಬೇಕು. ತಮ್ಮ ಮೂಲ ಹಕ್ಕುಗಳ ರಕ್ಷಣೆ ಬಗ್ಗೆ ಅರಿವು ಮೂಡಿಸಕೊಳ್ಳಬೇಕು ಎಂದರು. ದಸಂಸ ಮುಖಂಡ ಟಿ.ಈರಯ್ಯ ಮಾತನಾಡಿ, ದೇಶದ ಪ್ರತಿಯೊಬ್ಬ ನಾಗರಿಕರೂ ಸಂವಿಧಾನ ಅಧ್ಯಯನ ಮಾಡುವ ಮೂಲಕ ಸಂವಿಧಾನದಲ್ಲಿ ಹಕ್ಕು ಮತ್ತು ಕರ್ತವ್ಯಗಳನ್ನು ಅರಿತುಕೊಳ್ಳಬೇಕು. ಹಕ್ಕು ಮತ್ತು ಕರ್ತವ್ಯ ಒಂದು ನಾಣ್ಯದ ಎರಡು ಮುಖಗಳಿದ್ದಂತೆ. ಎರಡನ್ನೂ ಸಮಾನವಾಗಿ ಕಾಣಬೇಕು. ಪ್ರತಿಯೊಬ್ಬರೂ ಸಂವಿಧಾನ ಅಧ್ಯಯನ ಮಾಡಬೇಕು, ನಿತ್ಯ ಓದುವ ಮೂಲಕ ತಮ್ಮ ಜ್ಞಾನ ವೃದ್ಧಿಸಿಕೊಳ್ಳಬೇಕು. ಪುಸ್ತಕ ಓದುವುದರಿಂದ ಜಾನಾರ್ಜನೆ ಜತೆಗೆ ಮಾನಸಿಕ ಆರೋಗ್ಯವೂ ವೃದ್ಧಿಸಲಿದೆ ಎಂದರು.

ಈ ಸಂದರ್ಭದಲ್ಲಿ ಪಿಡಿಒಗಳಾದ ವೀರಭದ್ರ, ಶೆಟ್ಟಿ, ಕವಿತಾ, ರಾಮಾರಾಧ್ಯ, ನೋಡಲ್ ಅಧಿಕಾರಿ ಪಶುಪಾಲನಾ ಇಲಾಖೆ ಸಹಾಯಕ ನಿರ್ದೇಶಕ ಸೋಮಯ್ಯ, ಗ್ರಾಪಂ ಅಧ್ಯಕ್ಷರಾದ ಯಶೋಧ, ಅನಿತಾ, ಎಸ್.ಆರ್.ಮಹೇಶ್, ಸದಸ್ಯರಾದ ಆರ್.ಎಸ್.ಹರೀಶ್, ಮಂಜಪ್ಪ, ಅನ್ವರ್ ಷರೀಫ್, ಕವಿತಾ, ಪ್ರದೀಪ್, ಮಹದೇವಮ್ಮ, ಓಂಕಾರ, ಪ್ರೇಮ ಕುಮಾರಿ, ಸುಶೀಲ, ಮಂಜುನಾಥ್, ರಾಮೇಗೌಡ, ಪದ್ಮಲತಾ, ನಂಜುಂಡೇಗೌಡ ನಿಲಯ ಪಾಲಕರಾದ ಮೋಹನ್ ಕುಮಾರ್, ಬಿ.ಟಿ.ಮಹದೇವ್, ಮುಖಂಡರಾದ ದೊಡ್ಡ ಬ್ಯಾಲಾಳು ಅಬಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ತಂಬಾಕು ಮುಕ್ತ ಮಾಡಲು ಕ್ರಮ ವಹಿಸಿ

**ರಾಮನಗರ:** ಕೋಟ್ಪಾ ಕಾಯ್ದೆಯಡಿ 100 ಮೀಟರ್ ನೊಳಗೆ ಯಾವುದೇ ಸಾರ್ವಜನಿಕ ಸ್ಥಳಗಳಲ್ಲಿ ಕಡ್ಡಾಯವಾಗಿ ತಂಬಾಕು ಪದಾರ್ಥಗಳ ಮಾರಾಟ ಹಾಗೂ ಅದರ ಬಳಕೆಯನ್ನು ನಿಯಂತ್ರಿಸಬೇಕು, ಈ ಕುರಿತು ಕಾರ್ಯಾಚರಣೆ ಮಾಡಿರುವ ಬಗ್ಗೆ ಪ್ರತಿ ಮಾಹೆ ವರದಿ ನೀಡುವಂತೆ ಅಪರ ಜಿಲ್ಲಾಧಿಕಾರಿ ಶಿವಾನಂದ ಮೂರ್ತಿ ಅವರು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಡಿ. 6ರ ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ತಂಬಾಕು ನಿಯಂತ್ರಣದ ಕೋಶದ ಜಿಲ್ಲಾ ಸಮನ್ವಯ ಸಮಿತಿಯ ತ್ರೈಮಾಸಿಕ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಜಿಲ್ಲೆಯಾದ್ಯಂತ ಶಾಲಾ ಕಾಲೇಜುಗಳ ವ್ಯಾಪ್ತಿಯ 100 ಮೀಟರ್ ವ್ಯಾಪ್ತಿಯಲ್ಲಿ ತಂಬಾಕು ಮುಕ್ತಗೊಳಿಸುವ ಬಗ್ಗೆ ಹಾಗೂ ತಂಬಾಕು ಮಾರಾಟ ನಿಷೇಧದ ಕುರಿತು ಹಾಗೂ ತಂಬಾಕು ಮಾರಾಟ ಮಾಡುತ್ತಿರುವವರ ಬಗ್ಗೆ ಮಾಹಿತಿ ನೀಡುವ ಕುರಿತು ಕ್ಷೇತ್ರ ಶಿಕ್ಷಣಾಧಿಕಾರಿಗಳು ಎಲ್ಲಾ ಶಾಲಾ ಕಾಲೇಜುಗಳ ಮುಖ್ಯ ಶಿಕ್ಷಕರುಗಳಿಗೆ ಸುತ್ತೋಲೆಗಳನ್ನು ಹೊರಡಿಸುವಂತೆ ಸೂಚಿಸಿದರು.

ಒಂದು ವೇಳೆ ತಂಬಾಕು ಮಾರಾಟ ಮಾಡುತ್ತಿದ್ದರೆ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಈ ಮಾಹಿತಿಯನ್ನು ತಿಳಿಸಬೇಕು. ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಈ ಕುರಿತು ಕ್ರಮಕೈಗೊಂಡು 20 ದಿನಗಳೊಳಗೆ ತಂಬಾಕು ಮಾರಾಟ ಮಾಡುತ್ತಿರುವುದನ್ನು ತೆರವುಗೊಳಿಸಿ ಮಾಹಿತಿ ನೀಡುವಂತೆ ತಿಳಿಸಿದರು.

ಪ್ರತಿ ಮೂರು ತಿಂಗಳಿಗೊಮ್ಮೆ ತಾಲ್ಲೂಕು ಆರೋಗ್ಯಾಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಕಡ್ಡಾಯವಾಗಿ ತಂಬಾಕು ನಿಯಂತ್ರಣ ಕುರಿತು ತ್ರೈಮಾಸಿಕ ಸಭೆ ನಡೆಸಿರಬೇಕು ಹಾಗೂ ತಂಬಾಕು ಮಾರಾಟದ ಕುರಿತು ಕಾರ್ಯಾಚರಣೆ ಮಾಡಿಬೇಕು. ಸಭೆ ಹಾಗೂ ಕಾರ್ಯಾಚರಣೆ ಮಾಡದಿದ್ದರೆ ತಾಲ್ಲೂಕು ಆರೋಗ್ಯಾಧಿಕಾರಿಗಳನ್ನು ನೇರ ಹೊಣೆಯನ್ನಾಗಿ ಮಾಡಲಾಗುವುದು ಎಂದರು. ಶಾಲಾ-ಕಾಲೇಜು, ಪ್ರವಾಸಿ ತಾಣಗಳು, ಮುಜರಾಯಿ ಇಲಾಖಾ ವ್ಯಾಪ್ತಿಯ ದೇವಾಲಯಗಳ ಸುತ್ತಮುತ್ತಲು 100 ಮೀಟರ್ ವ್ಯಾಪ್ತಿಯಲ್ಲಿ ಕಡ್ಡಾಯವಾಗಿ ತಂಬಾಕು ಮಾರಾಟ ನಿಷೇಧದ ಹಾಗೂ ತಂಬಾಕು ಮಾರಾಟ ನಿಷೇಧದ ಕುರಿತು ಸಾರ್ವಜನಿಕರಿಗೆ ಕಾಣಿಸುವಂತೆ ಫಲಕಕಗಳನ್ನು ಪ್ರದರ್ಶಿಸಬೇಕು. ಈ ಕುರಿತು ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲಿಸಿ ವರದಿ ನೀಡುವಂತೆ ತಿಳಿಸಿದರು.

### ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವ ಎಸ್.ಮಧು ಬಂಗಾರಪ್ಪ ಹೇಳಿಕೆ

# ಸರ್ಕಾರಿ ಶಾಲೆಗಳತ್ತ ವಿದ್ಯಾರ್ಥಿಗಳನ್ನು ಕರೆತನ್ನಿ

**ಮೈಸೂರು:** ಹಲವಾರು ಕಾರಣಗಳಿಂದ ವಿದ್ಯಾರ್ಥಿಗಳು ಸರ್ಕಾರಿ ಶಾಲೆಗಳನ್ನು ತೊರೆಯುತ್ತಿದ್ದಾರೆ. ಅಧಿಕಾರಿಗಳು ಆ ಕಾರಣಗಳನ್ನು ತಿಳಿದು, ಸರ್ಕಾರಿ ಶಾಲೆಗಳಲ್ಲಿರುವ ಸೌಲಭ್ಯಗಳನ್ನು ವಿದ್ಯಾರ್ಥಿಗಳಿಗೆ ತಿಳಿಸಿ ಸರ್ಕಾರಿ ಶಾಲೆಗಳತ್ತ ಅವರನ್ನು ಕರೆತರಲು ಕ್ರಮವಹಿಸಬೇಕು ಎಂದು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಾದ ಎಸ್ ಮಧು ಬಂಗಾರಪ್ಪ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಇಂದು ಜಿಲ್ಲಾ ಪಂಚಾಯತಿಯ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ನಡೆದ ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಗಳ ಶಿಕ್ಷಣ ಇಲಾಖೆಯ ಕಾರ್ಯಕ್ರಮಗಳ ಕುರಿತು ಜಿಲ್ಲೆ ಸಾಧಿಸಿರುವ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಕರೋನಾ ಬಂದ ನಂತರ ನೋಡುವುದಾದರೆ 14000 ಮಕ್ಕಳು ಹಲವಾರು ಕಾರಣಗಳಿಂದ ಶಾಲೆ ಬಿಟ್ಟು ಹೋಗಿರುವುದು ಕಂಡುಬಂದಿದೆ. ಅಲ್ಲದೆ ಮೈಸೂರಿನಲ್ಲಿ ಸರ್ಕಾರಿ ಮತ್ತು ಖಾಸಗಿ ಶಾಲೆಗಳಲ್ಲೂ ಶಿಕ್ಷಣದ ಗುಣಮಟ್ಟದಲ್ಲಿ ಕಡಿಮೆ ಆಗುತ್ತಿರುವುದರಿಂದ 25000 ವಿದ್ಯಾರ್ಥಿಗಳು ಬೇರೆ ಬೇರೆ ಜಿಲ್ಲೆಗೆ ಓದಲು ಹೋಗುತ್ತಿದ್ದಾರೆ. ಇದಕ್ಕೆ ಶಿಕ್ಷಕರ ಕೊರತೆಯೂ ಕಾರಣವಾಗಿದ್ದು, ಅದರ ಸಲುವಾಗಿಯೇ 1000 ಹೆಚ್ಚುವರಿ ಶಿಕ್ಷಕರ ನೇಮಕಾತಿ ಮಾಡಲಾಗಿದೆ. ಸರ್ಕಾರಿ ಶಾಲೆಯ ಶಿಕ್ಷಕರು ಹೆಚ್ಚು ಬುದ್ಧಿವಂತರು ಮತ್ತು ತಿಳುವಳಿಕೆಯುಳ್ಳವರು ಅವರನ್ನು ಸರಿಯಾಗಿ ಸದುಪಯೋಗ ಮಾಡಿಕೊಂಡು ಮುಂಬರುವ ವರ್ಷಗಳಲ್ಲಿ ಪ್ರಗತಿ ಸಾಧಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ರಾಜ್ಯದಲ್ಲಿ ಶಿಕ್ಷಣ ಇಲಾಖೆಯು ದೊಡ್ಡ ಇಲಾಖೆಯಾಗಿದೆ. ಹಾಗೆಯೇ ಇಲ್ಲಿ ಸಮಸ್ಯೆಗಳು ಇವೆ. ಇದನ್ನು ಪರಿಹರಿಸಲು ಎಲ್ಲರೂ ಒಗ್ಗಟ್ಟಾಗಿ ಕೆಲಸಮಾಡಬೇಕು. ರಾಜ್ಯದಾದ್ಯಂತ 48000 ಸರ್ಕಾರಿ ಶಾಲೆಗಳಿದ್ದು, ಸರ್ಕಾರದಿಂದ ಬಂದಂತಹ ಅನುದಾನದಲ್ಲಿ ಮುಂದಿನ ಮೂರು ವರ್ಷದೊಳಗೆ 3000 ಕೆ.ಪಿ.ಎಸ್. ಶಾಲೆಗಳನ್ನು ಅಭಿವೃದ್ಧಿ ಪಡಿಸಬೇಕು ಎಂದರು. ಶಾಲೆಯ ವಾತಾವರಣವನ್ನು ಸ್ವಚ್ಛವಾಗಿಟ್ಟುಕೊಂಡು ಮತ್ತು ಸರ್ಕಾರಿ ಶಾಲೆಯಲ್ಲಿ ಮಕ್ಕಳಿಗೆ ಸಿಗುವ ಸೌಲಭ್ಯಗಳನ್ನು ಪೋಷಕರಿಗೆ ಹಾಗೂ ಮಕ್ಕಳಿಗೆ ತಿಳಿಯುವಂತೆ ಮಾಡಿ, ಶಾಲೆ ಬಿಟ್ಟ ಮಕ್ಕಳನ್ನು ಶಾಲೆಗೆ ಕರೆತರುವ ಕೆಲಸ ಮಾಡಬೇಕು. ಮಾಹಿತಿಯ ಪ್ರಕಾರ 7 ನೇ ತರಗತಿಯ ನಂತರ ಮಕ್ಕಳು ಶಾಲೆಯನ್ನು ಬಿಡುತ್ತಿದ್ದಾರೆ. ಈ ಬಾರಿಯ ಶೈಕ್ಷಣಿಕ ವರ್ಷ ಪ್ರಾರಂಭವಾಗಲು ಇನ್ನು 3 ರಿಂದ 4 ತಿಂಗಳ ಕಾಲಾವಕಾಶ ಇರುವುದರಿಂದ ಆದಷ್ಟು ಮಕ್ಕಳನ್ನು ಶಾಲೆಗೆ ಕರೆತರುವ ಕೆಲಸ ಮಾಡಿ ದಾಖಲಾತಿ ಹೆಚ್ಚಿಸಿ ಎಲ್ಲಾ ಮಕ್ಕಳು ಶಿಕ್ಷಣ ಪಡೆಯುವಂತೆ ಮಾಡಬೇಕು ಎಂದರು.

ಸಮವಸ್ತ್ರ, ಶೂ, ಮಧ್ಯಾಹ್ನ ಊಟ, ಹಾಲು, ಮೊಟ್ಟೆ ಇವೆಲ್ಲವೂ ಎಲ್ಲಾ ಮಕ್ಕಳಿಗೂ ಸಿಗುವಂತೆ ಮಾಡಬೇಕು. ಮಕ್ಕಳಿಗೆ ಆಸಕ್ತಿ ತರುವ ಯೋಜನೆಗಳನ್ನು ರೂಪಿಸಿ ಅವರಲ್ಲಿ ಓದಿನ ಬಗ್ಗೆ ಇರುವ ಭಯವನ್ನು ಹೋಗಲಾಡಿಸಿ ಆತ್ಮ ಸ್ಥೈರ್ಯ ತುಂಬಬೇಕು. ಸರ್ಕಾರಿ ಶಾಲೆಗಳನ್ನು ಉನ್ನತ ಮಟ್ಟಕ್ಕೆ ತರುವುದು ನಮ್ಮ ಕರ್ತವ್ಯ. ಎಲ್ಲಾ ಶಾಲೆಗಳನ್ನು ಮಾದರಿ ಶಾಲೆಗಳನ್ನಾಗಿ ಮಾಡಿ ಮಕ್ಕಳು ಸರ್ಕಾರಿ ಶಾಲೆಗಳತ್ತ ತಾವಾಗಿಯೇ ಬರುವಂತೆ ಮಾಡಬೇಕು. ಆದರ್ಶ ಶಾಲೆಗಳನ್ನು ಮೇಲ್ದರ್ಜೆಗೆ ಏರಿಸಿ ಪಿ ಯು ಕಾಲೇಜುಗಳಾಗಿ ಪರಿವರ್ತಿಸಬೇಕು ಎಂದರು. ಪ್ರಾಥಮಿಕ ಶಾಲಾ ಮಕ್ಕಳು ನೆಲದಲ್ಲಿ ಕೂತು ಪಾಠ ಕೇಳುವ ಪರಿಸ್ಥಿತಿ ಕಂಡುಬಡಿದ್ದು ಮುಂದಿನ ದಿನಗಳಲ್ಲಿ ಹೆಚ್ಚುವರಿ ಡೆಸ್ಕ್ ವ್ಯವಸ್ಥೆ ಮಾಡಿ ಪ್ರತಿಯೊಬ್ಬ ವಿದ್ಯಾರ್ಥಿಯೂ ಸಮಾನ ವಿದ್ಯಾಭ್ಯಾಸ ಪಡೆಯುವಂತೆ ಮಾಡಲಾಗುತ್ತದೆ. ಫೇಲ್ ಆದ ಯಾವುದೇ ವಿದ್ಯಾರ್ಥಿಗೆ ಮತ್ತೊಂದು ಅವಕಾಶ ಇದೆ ಎಂದು ಉತ್ತೇಜನ ನೀಡಬೇಕು ಹೊರತು, ಅವರನ್ನು ಮಾನಸಿಕವಾಗಿ ಕುಂದಿಸುವ ಕೆಲಸ ಆಗಬಾರದು. ಡಿಜಿಟಲ್ ಲೈಬ್ರರಿಗಳನ್ನು ಸ್ಥಾಪಿಸಿ ಅದರಿಂದ ವಿದ್ಯಾರ್ಥಿಗಳು ಪ್ರಯೋಜನ ಪಡೆದುಕೊಳ್ಳುವಂತೆ ಆಗಬೇಕು ಎಂದು ಹೇಳಿದರು.



### ಸಮಾಜದಲ್ಲಿ ವಿಷ ಬಿತ್ತುವ ಕೆಲಸ

**ರಾಜ್ಯ ಸರ್ಕಾರ ಎಸ್ಎಸ್ಎಲ್ಸಿ ಪರೀಕ್ಷೆಯನ್ನು ಮಧ್ಯಾಹ್ನಕ್ಕೆ ನಿಗದಿಪಡಿಸಿರುವ ಬಗ್ಗೆ ಯುವ ಬ್ರಿಗೇಡ್ ಅಧ್ಯಕ್ಷ ಚಕ್ರವರ್ತಿ ಸೂಲಿಬೆಲೆ ನಮಾಜ್‌ಗಾಗಿ ವೇಳೆ ಬದಲಾಯಿಸಲಾಗಿದೆಯೇ ಎಂದು ಟ್ವೀಟ್ ಮಾಡಿದ್ದನ್ನು ಉಲ್ಲೇಖಿಸಿರುವ ಶಿಕ್ಷಣ ಸಚಿವ ಮಧು ಬಂಗಾರಪ್ಪ, ಚಕ್ರವರ್ತಿ ಸೂಲಿಬೆಲೆ ಅವನೊಬ್ಬ ತಲೆಹರಟೆ, ಅವನಿಗೆ ಮಾನ ಮರ್ಯಾದೆ ಇದಿಯಾ? ಸಮಾಜದಲ್ಲಿ ವಿಷ ಬಿತ್ತುವ ಕೆಲಸವನ್ನು ಸೂಲಿಬೆಲೆ ಮಾಡುತ್ತಿದ್ದಾರೆ ಎಂದು ತೀವ್ರ ವಾಗ್ದಾಳಿ ನಡಸಿದ್ದಾರೆ. ನಗರದಲ್ಲಿಂದು ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ಎಸ್ಸೆಸ್ಸೆಲ್ಸಿಯ ಎಲ್ಲ ಪರೀಕ್ಷೆಗಳು ಬೆಳಗಿನ ಸೆಷನ್ ನಲ್ಲಿ ನಡೆಸಲಾಗುತ್ತಿದೆ ಆದರೆ, ಮಾರ್ಚ್ ಒಂದರಂದು ಮಾತ್ರ ಒಂದು ಪರೀಕ್ಷೆಯನ್ನು ಮಧ್ಯಾಹ್ನ ನಡೆಸಲಾಗುತ್ತಿದೆ. ಅವತ್ತು ಶುಕ್ರವಾರ ಆಗಿರುವುದರಿಂದ ನಮಾಜಿಗೋಸ್ಕರ ವೇಳೆ ಬದಲಾಯಿಸಲಾಗಿದೆಯೇ ಅಂತ ಸೂಲಿಬೆಲೆ ಟ್ವಿಟ್ ಮಾಡಿದ್ದಾರೆ. ಇದರಿಂದಾಗಿ ಸಮಾಜದ ಸ್ವಾಸ್ಥ್ಯ ಹಾಳಾಗುತ್ತದೆ. ಸಮಾಜದಲ್ಲಿ ವಿಷ ಬೀಜ ಬಿತ್ತುವ ಕೆಲಸ ಮಾಡುತ್ತಿದ್ದಾರೆ. ಅವರ ಮೇಲೆ ಪ್ರಕರಣ ದಾಖಲಿಸಲಾಗುವುದು ಎಂದು ಏಕವಚನದಲ್ಲೇ ಛಾಡಿಸಿದರು. ಕನಿಷ್ಟ ಸಾಮಾನ್ಯ ಜ್ಞಾನವನ್ನಾದರೂ ಅವರು ಪ್ರದರ್ಶಿಸಬೇಕಿತ್ತು, ಅವತ್ತು ಯಾಕೆ ಪರೀಕ್ಷೆಯನ್ನು ಮಧ್ಯಾಹ್ನಕ್ಕೆ ಮುಂದೂಡಲಾಗಿದೆ ಅಂತ ಯೋಚಿಸುವ ವ್ಯವಧಾನವೂ ಅವರಿಗಿಲ್ಲ, ಅಸಲು ವಿಷಯವೇನೆಂದರೆ ಅದೇ ದಿನ ದ್ವಿತೀಯ ಪರೀಕ್ಷೆಗಳು ಆರಂಭವಾಗಲಿದ್ದು, ಬೆಳಗ್ಗೆ ಆ ಪರೀಕ್ಷೆ ನಡೆಯಲಿರುವುದರಿಂದ ಎಸ್ಸೆಸ್ಸೆಲ್ಸಿ ಪರೀಕ್ಷೆಯನ್ನು ಮಧ್ಯಾಹ್ನಕ್ಕೆ ಮುಂದೂಡಲಾಗಿದೆ ಎಂದು ಸಚಿವರು ಸ್ಪಷ್ಟನೆ ನೀಡಿದರು. ಬಿಜೆಪಿ ನಾಯಕರು ಚುನಾವಣೆ ಸಮಯದಲ್ಲಿ ರಾಜ್ಯದಲ್ಲಿ ಈ ರೀತಿಯ ಭಾವನಾತ್ಮಕ ವಿಷಯಗಳಿಂದ ಜನರ ತಲೆಕೆಡಿಸುವುದನ್ನು ನಿಲ್ಲಿಸಬೇಕು, ಕರ್ನಾಟಕದಲ್ಲಿ ಅದೆಲ್ಲ ನಡೆಯಲ್ಲ. ರಾಜ್ಯದಲ್ಲಿ ಭಾವನಾತ್ಮಕ ವಿಷಯಗಳನ್ನು ಮುಂದಿಟ್ಟು ರಾಜಕೀಯ ನಡೆಸಿದರೇ ಜನರು ಇನ್ನೂ ಹೆಚ್ಚಿನ ಶಿಕ್ಷೆ ನೀಡುತ್ತಾರೆ ಎಂದು ಮಧು ಬಂಗಾರಪ್ಪ ಕಿಡಿಕಾರಿದ್ದಾರೆ.**

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳಾದ ಕೆ. ಎಂ. ಗಾಯತ್ರಿ ಅವರು ಮಾತನಾಡಿ ಶಾಲೆಯ ಸ್ವಚ್ಛತೆ ಹಾಗೂ ಶೌಚಾಲಯದ ಸ್ವಚ್ಛತೆಗೆ ಸಂಬಂಧಿಸಿದಂತೆ ಗ್ರಾಮ ಪಂಚಾಯಿತಿಗಳಲ್ಲಿ ಸ್ಕ್ಯಾವೆಂಜರ್ಸ್‌ಗಳನ್ನು ನೇಮಿಸಿ ಸ್ವಚ್ಛಗೊಳಿಸಲಾಗುವುದು. ವಿದ್ಯಾರ್ಥಿಗಳು ಶುಲ್ಕ ಪಾವತಿಸಲಾಗದೆ ಶಾಲೆ ಬಿಡುತ್ತಿದ್ದಾರೆ. ಇದಕ್ಕೂ ಪರಿಹಾರವಾಗಿ ಅನುದಾನಿಗಳಿಂದ ಹಣ ಪಡೆದು ಶುಲ್ಕ ಪಾವತಿಸಿ ಮಕ್ಕಳ ಓದಿಗೆ ಪ್ರೋತ್ಸಾಹ ನೀಡಲಾಗುತ್ತಿದೆ. ದೂರದಿಂದ ಬರುವ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ವ್ಯವಸ್ಥೆ ಮಾಡಿ ಅಲ್ಲಿ ಓದಿಗೆ ಸಂಬಂಧಿಸಿದ ವಿವಿಧ ತರಬೇತಿ ನೀಡಿ ಪ್ರೋತ್ಸಾಹಿಸಲಾಗುತ್ತಿದೆ ಎಂದರು. ಮೈಸೂರು ಜಿಲ್ಲಾ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಹೆಚ್. ಕೆ ಪಾಂಡು ಅವರು ಮಾತನಾಡಿ ಈ ಬಾರಿ ಮೈಸೂರು ಸರಾಸರಿ ಸಾಕ್ಷರತಾ ಪ್ರಮಾಣವು 87.67% ಇದ್ದು, ಮುಂಬರುವ ದಿನಗಳಲ್ಲಿ ಹೆಚ್ಚಿಸುವ ಗುರಿ ಇದೆ ಎಂದರು.

ಇದುವರೆಗೂ ಮಕ್ಕಳನ್ನು ಪ್ರೋತ್ಸಾಹಿಸಲು ವಿದ್ಯಾರ್ಥಿ ಪ್ರೇರಣಾದಾಯಿ ಕಾರ್ಯಕ್ರಮ, ರೇಡಿಯೋ ಕಾರ್ಯಕ್ರಮ, ಸಸ್ಯ ಶ್ಯಾಮಲ ಕಾರ್ಯಕ್ರಮ, ಶಾಲಾ ಬಿಟ್ಟ ಮಕ್ಕಳ ಸಮೀಕ್ಷೆ ಜಾಥಾ, ಜಾಗೃತಿ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗಿದ್ದು ವಿದ್ಯಾರ್ಥಿಗಳಿಂದ ಉತ್ತಮ ಪ್ರತಿಕ್ರಿಯೆ ಹಾಗೂ ಫಲಿತಾಂಶ ಬರುತ್ತಿದೆ. ಈಗಿರುವ ನ್ಯೂನ್ಯತೆಗಳನ್ನು ಸರಿಪಡಿಸಿಕೊಂಡು ಮುಂದಿನ ವರ್ಷಗಳಲ್ಲಿ ಶೈಕ್ಷಣಿಕವಾಗಿ ಪ್ರಗತಿ ಸಾಧಿಸಲು ಕೆಲಸ ಮಾಡಲಾಗುತ್ತದೆ ಎಂದರು.

ಚಾಮರಾಜನಗರ ಜಿಲ್ಲಾ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಮಾತನಾಡಿ ಜಿಲ್ಲೆಯಲ್ಲಿ ಒಟ್ಟು 1171 ಸರ್ಕಾರಿ ಶಾಲೆಗಳಿದ್ದು 1 ಲಕ್ಷಕ್ಕೂ ಅಧಿಕ ವಿದ್ಯಾರ್ಥಿಗಳು ವಿದ್ಯಾಭ್ಯಾಸ ಮಾಡುತ್ತಿದ್ದಾರೆ. 2023-24 ನೇ ಸಾಲಿನ ದಾಖಲಾತಿಯಲ್ಲಿ 3938 ಕುಸಿತ ಕಂಡಿದ್ದು ಇದಕ್ಕೆ ಪ್ರಾಥಮಿಕ ಶಿಕ್ಷಣದ ನಂತರದ ವಿದ್ಯಾಭ್ಯಾಸ ಕ್ಕೆ ಮಕ್ಕಳಿಗೆ ಇರುವ ಸೌಲಭ್ಯದ ಕೊರತೆ, ಬುಡಕಟ್ಟು ಜನಾಂಗದ ಮಕ್ಕಳು ಶಾಲೆ ಬಿಡುತ್ತಿರುವುದು ಹಾಗೂ ಖಾಸಗಿ ಶಾಲೆ ಮೇಲಿನ ಒಲವಾಗಿದೆ ಎಂದರು.

ಸರಾಸರಿ ಸಾಕ್ಷರತಾ ಪ್ರಮಾಣವು 93% ಇದ್ದು, ಇದನ್ನು ಹೆಚ್ಚಿಸಲು ವಿಶೇಷ ತರಗತಿಗಳನ್ನು ಆಯೋಜಿಸಲಾಗಿದೆ. ಜಿಲ್ಲೆಯಲ್ಲಿ ಬುಡಕಟ್ಟು ಜನಾಂಗದ ಮಕ್ಕಳು ಹೆಚ್ಚಾಗಿರುವುದರಿಂದ ಅವರಿಗೆ ಉಳಿದುಕೊಳ್ಳುವ ವ್ಯವಸ್ಥೆ ಮಾಡಿ ನಿರಂತರವಾಗಿ ಶಿಕ್ಷಣವನ್ನು ನೀಡುವ ಮೂಲಕ ಅವರನ್ನು ಉತ್ತೇಜಿಸಲಾಗುತ್ತಿದೆ. ಹಲವು ಕಡೆಗಳಲ್ಲಿ ಸರ್ಕಾರಿ ಶಿಕ್ಷಕರಿಂದಲೇ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ ನೀಡಿ ವಿದ್ಯಾರ್ಥಿಗಳ ಭವಿಷ್ಯ ರೂಪಿಸಲು ನೆರವು ಮಾಡಿಕೊಡಲಾಗುತ್ತಿದೆ ಎಂದರು. ವಿಧಾನ ಪರಿಷತ್ತಿನ ಸದಸ್ಯರಾದ ಮರಿತಿಬ್ಬೇಗೌಡ, ಚಾಮರಾಜನಗರದ ಮುಖ್ಯ ನಿರ್ವಹಣಾಧಿಕಾರಿಗಳಾದ ಆನಂದ್ ಪ್ರಕಾಶ್ ಮೀನಾ, ಸಚಿವರ ಕಾರ್ಯದರ್ಶಿಗಳಾದ ಕಿಶೋರ್ ಕುಮಾರ್, ಮೈಸೂರು ಜಿಲ್ಲೆಯ ಬಿಇಒ ಗಳ ಉಪನಿರ್ದೇಶಕರಾದ ಮಹದೇವಸ್ವಾಮಿ ಉಪಸ್ಥಿತರಿದ್ದರು.

## ‘ಸೆಂಟರ್ ಸ್ಟೇಜ್ ಕಪ್ಪಣ್ಣ’ ಪ್ರಶಸ್ತಿಗೆ ಆಯ್ಕೆ



ಜೀವನರಾಂ ಸುಳ್ಯ



ನರೇಶ್ ಡಿಂಗ್ರಿ

**ಹುಳಿಯಾರು:** ಹುಳಿಯಾರು ಕೋಡಿಪಾಳ್ಯದ ಶ್ರೀ ಮಾತಾ ಚಾರಿಟಬಲ್ ಟ್ರಸ್ಟ್ ಮತ್ತು ಬೆಂಗಳೂರಿನ ಸೆಂಟರ್ ಸ್ಟೇಜ್ ಸಹಯೋಗದೊಂದಿಗೆ ಸಾಂಸ್ಕೃತಿಕ ರಂಗದಲ್ಲಿ ಗಮನಾರ್ಹ ಸಾಧನೆ ಮಾಡಿದವರಿಗೆ ನೀಡುವ ಪ್ರಸಕ್ತ ಸಾಲಿನ 'ಸೆಂಟರ್ ಸ್ಟೇಜ್-ಕಪ್ಪಣ್ಣ ಸಾಂಸ್ಕೃತಿಕ ಪ್ರಶಸ್ತಿ'ಗೆ ರಂಗಭೂಮಿ ನಟ ಜೀವನರಾಂ ಸುಳ್ಯ ಹಾಗೂ 'ಸೆಂಟರ್ ಸ್ಟೇಜ್ -ಕಪ್ಪಣ್ಣ ಸಾಂಸ್ಕೃತಿಕ ಯುವ ಪ್ರಶಸ್ತಿ'ಗೆ ನರೇಶ್ ಡಿಂಗ್ರಿ ಅವರನ್ನು ಆಯ್ಕೆ ಮಾಡಲಾಗಿದೆ. ಪ್ರಶಸ್ತಿಯು ಕ್ರಮವಾಗಿ 50 ಸಾವಿರ ರೂ. ಹಾಗೂ 25 ಸಾವಿರ ರೂ. ನಗದು ಮತ್ತು ಫಲಕ ಒಳಗೊಂಡಿದೆ. ಫೆ. 13 ರಂದು ಬೆಂಗಳೂರಿನ ಇಂಡಿಯನ್ ಇನ್‌ಟಿಟ್ಯೂಟ್ ಆಫ್ ವರ್ಲ್ಡ್ ಕಲ್ಚರ್ ಸಭಾಂಗಣದಲ್ಲಿ ನಡೆಯಲಿರುವ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಟ್ರಸ್ಟ್ ಅಧ್ಯಕ್ಷ ಟಿ.ಎಸ್. ನಾಗಾಭರಣ ತಿಳಿಸಿದ್ದಾರೆ.

## ಕೆಎಸ್‌ಒಯು ಪ್ರಾದೇಶಿಕ ಕೇಂದ್ರ-4 ರ ಕಚೇರಿ ವಿಳಾಸ ಬದಲಾವಣೆ

**ಬೆಂಗಳೂರು:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಪ್ರಾದೇಶಿಕ ಕೇಂದ್ರ-04ರ ಕಛೇರಿಯು ಹಾಲಿ ಬೊಮ್ಮನಹಳ್ಳಿ ಇಲ್ಲಿ ಕಾರ್ಯ ನಿರ್ವಹಿಸುತ್ತಿತ್ತು, ಆದರೆ, ವಿದ್ಯಾರ್ಥಿಗಳಿಗೆ ಮತ್ತು ಅಸತ್ತ ಸಾರ್ವಜನಿಕರ ಹಿತದೃಷ್ಟಿಯಿಂದ ಈ ಪ್ರಾದೇಶಿಕ ಕೇಂದ್ರದ ಕಛೇರಿಯನ್ನು ಬೊಮ್ಮನಹಳ್ಳಿಯಿಂದ ನೂತನವಾಗಿ 121, 2ನೇ ಮಹಡಿ, ಮಡಿವಾಳ ಟ್ರಾಫಿಕ್ ಪೊಲೀಸ್ ಠಾಣೆ ಹತ್ತಿರ, ಹೊಸೂರು ಮುಖ್ಯ ರಸ್ತೆ, ಮಡಿವಾಳ, ಬೆಂಗಳೂರು-560008 ಇಲ್ಲಿಗೆ ಸ್ಥಳಾಂತರಿಸಲಾಗಿದೆ. ಜನವರಿ 10 ರಿಂದ ವಿಶ್ವವಿದ್ಯಾನಿಲಯದ ವಿವಿಧ ಕೋರ್ಸ್‌ಗಳಿಗೆ (ಜನವರಿ ಆವೃತ್ತಿ) ಪ್ರವೇಶಾತಿ ಕಾರ್ಯವು ಆರಂಭವಾಗಿದ್ದು, ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಹಾಗೂ ಅರ್ಜಿ ಸಲ್ಲಿಸಲು ಮಾರ್ಚ್ 31 ಕಡೆಯ ದಿನಾಂಕವಾಗಿದ್ದು, ಅರ್ಹ ವಿದ್ಯಾರ್ಥಿಗಳು ಅರ್ಹ ಶಿಕ್ಷಣ ಕ್ರಮಗಳಿಗೆ ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಲಭ್ಯವಿರುವ ಆನ್‌ಲೈನ್ ನಲ್ಲಿ ಅರ್ಜಿ ಭರ್ತಿ ಮಾಡಿ ನಂತರ ನೂತನ ಪ್ರಾದೇಶಿಕ ಕೇಂದ್ರ ಕಛೇರಿಗೆ ಭೇಟಿ ನೀಡಿ ಅರ್ಜಿಯನ್ನು ಪರಿಶೀಲಿಸಿಕೊಂಡು ಆನ್ ಲೈನ್ ಮುಖಾಂತರ ಪ್ರವೇಶಾತಿ ಶುಲ್ಕ ಪಾವತಿಸಿ ಪ್ರವೇಶಾತಿ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಪ್ರಾದೇಶಿಕ ನಿರ್ದೇಶಕರು, ಬೆಂಗಳೂರು ಪ್ರಾದೇಶಿಕ ಕೇಂದ್ರ-04, ನಂ.121, 2ನೇ ಮಹಡಿ, ಮಡಿವಾಳ ಟ್ರಾಫಿಕ್ ಪೊಲೀಸ್ ಠಾಣೆ ಹತ್ತಿರ, ಹೊಸೂರು ಮುಖ್ಯರಸ್ತೆ, ಮಡಿವಾಳ, ಬೆಂಗಳೂರು-580068 ಹಾಗೂ ದೂರವಾಣಿ ಸಂಖ್ಯೆ - 080-23158888 ಕ್ಕೆ ಸಂಪರ್ಕಿಸಬಹುದಾಗಿದೆ ಎಂದು ವಿಶ್ವವಿದ್ಯಾನಿಲಯದ ಪ್ರಾದೇಶಿಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಹುಳಿಯಾರು ಗ್ರಾಮ ದೇವತೆ ಶ್ರೀ ಹುಳಿಯಾರಮ್ಮನವರ 11 ನೇ ವರ್ಷದ ಜಾತ್ರಾ ಮಹೋತ್ಸವದ ಪ್ರಯುಕ್ತ ಧೂತರಾಯ ಸ್ವಾಮಿಯವರ ಅದ್ದೂರಿ ಮಣೇವು ಕಾರ್ಯಕ್ರಮ ಧೂತರಾಯ ಸ್ವಾಮಿ ಗೆಳೆಯರ ಬಳಗದಿಂದ ಜರುಗಿತು.

# 12 ರಿಂದ ಮೇಕೆ ಸಾಕಾಣಿಕೆ ತರಬೇತಿ

**ರಾಮನಗರ:** ಧರ್ಮಸ್ಥಳ ಮಂಜುನಾಥೇಶ್ವರ ಶಿಕ್ಷಣ ಟ್ರಸ್ಟ್ ಮತ್ತು ಕೆನರಾ ಬ್ಯಾಂಕ್‌ನ ಸಹಯೋಗದಲ್ಲಿ ನಡೆಸುತ್ತಿರುವ ರುಡ್‌ಸೆಟ್ ಸಂಸ್ಥೆಯ ವತಿಯಿಂದ ಹಮ್ಮಿಕೊಂಡಿರುವ ಮೇಕೆ/ಆಡು ಸಾಕಾಣಿಕೆ ಕುರಿತ 10 ದಿನಗಳ ಉಚಿತ ತರಬೇತಿಯು ಇದೇ ಫೆ. 12 ರಿಂದ 21 ರವರೆಗೆ 10 ದಿನಗಳ ಕಾಲ ಆಯೋಜಿಸಲಾಗಿದ್ದು, ಬೆಂಗಳೂರು ಗ್ರಾಮಾಂತರ, ಬೆಂಗಳೂರು ನಗರ, ರಾಮನಗರ ಹಾಗೂ ತುಮಕೂರು ಜಿಲ್ಲಾ ವ್ಯಾಪ್ತಿಯ ಗ್ರಾಮೀಣ ಆಸಕ್ತ ನಿರುದ್ಯೋಗಿ ಯುವಕ-ಯುವತಿಯರು ಅರ್ಜಿ ಸಲ್ಲಿಸಬಹುದಾಗಿದೆ.

ಆಸಕ್ತರು 18 ರಿಂದ 45 ವರ್ಷ ವಯೋಮಾನದವರಾಗಿದ್ದು, ಕನ್ನಡ ಭಾಷೆ ಓದಲು ಮತ್ತು ಬರೆಯಲು ಬಲ್ಲವರಾಗಿರಬೇಕು. ಅಭ್ಯರ್ಥಿಗಳು ಆಧಾರ್ ಕಾರ್ಡ್ನ್ನು ಹೊಂದಿರಬೇಕು ಹಾಗೂ ಬಿಪಿಎಲ್ ಕಾರ್ಡ್ ಅನ್ನು ಹೊಂದಿರುವ ಗ್ರಾಮೀಣ ಪ್ರದೇಶದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

ತರಬೇತಿಯು ಕಡ್ಡಾಯವಾಗಿ ವಸತಿಯುತವಾಗಿದ್ದು, ತರಬೇತಿಯ ಅವಧಿಯಲ್ಲಿ ಉಚಿತವಾಗಿ ಊಟ ಮತ್ತು ವಸತಿ ನೀಡಲಾಗುವುದು ಹಾಗೂ ತರಬೇತಿ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರದ ಗ್ರಾಮೀಣಾಭಿವೃದ್ಧಿ ಸಚಿವಾಲಯದಿಂದ ಪ್ರಮಾಣಪತ್ರವನ್ನು ವಿತರಿಸಲಾಗುವುದು. ಅರ್ಜಿ ಸಲ್ಲಿಸಲು ಇದೇ ಫೆ. 11 ಕೊನೆಯ ದಿನವಾಗಿದೆ.

ಆಸಕ್ತರು ಅರ್ಜಿ ಸಲ್ಲಿಸಲು ಹಾಗೂ ಹೆಚ್ಚಿನ ಮಾಹಿತಿಗಾಗಿ ರುಡ್‌ಸೆಟ್ ಸಂಸ್ಥೆ, ಅರಿಶಿನಕುಂಟೆ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಮೊಬೈಲ್ ಸಂಖ್ಯೆ: 8884554510, 9740982585, 9113880324 ಅನ್ನು ಸಂಪರ್ಕಿಸಬಹುದಾಗಿದೆ ಎಂದು ರುಡ್‌ಸೆಟ್ ಸಂಸ್ಥೆಯ ಬೆಂಗಳೂರು ಶಾಖೆಯ ನಿರ್ದೇಶಕ ರವಿಕುಮಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸುತ್ತೂರು ಜಾತ್ರಾ ಮಹೊತ್ಸವ: ಕೃಷಿ ಮೇಳಕ್ಕೆ ಚಾಲನೆ ನೀಡಿದ ದಿನೇಶ್ ಗುಂಡೂರಾವ್

**ಮೈಸೂರು:** ಆರು ದಿನಗಳ ಕಾಲ ನಡೆಯುವ ಸುತ್ತೂರು ಶ್ರೀಕ್ಷೇತ್ರ ಜಾತ್ರಾ ಮಹೊತ್ಸವದ ಮೊದಲ ದಿನವೇ ಭಾರೀ ಸಂಖ್ಯೆಯಲ್ಲಿ ಭಕ್ತರು ಆಗಮಿಸಿದ್ದರು. ಪರಮಪೂಜ್ಯ ಆದಿಜಗದ್ಗುರು ಶ್ರೀ ಶಿವರಾತ್ರೀಶ್ವರ ಶಿವಯೋಗಿ ಮಹಾಸ್ವಾಮೀಜಿಯವರ ಜಾತ್ರಾ ಮಹೋತ್ಸವದ ಅಂಗವಾಗಿ ಆಯೋಜಿಸಲಾಗಿರುವ ಕೃಷಿ ಮೇಳವನ್ನು ಜಗದ್ಗುರು ಶ್ರೀಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮೀಜಿಯವರ ದಿವ್ಯ ಸಾನ್ನಿಧ್ಯದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ಅವರು ನೆರವೇರಿಸಿದರು. ನಂತರ ಸ್ವಾಮೀಜಿಗಳೊಡನೆ ಸಚಿವರು ಹಾಗೂ ಇತರ ಗಣ್ಯರು ಕೃಷಿ ಮೇಳದಲ್ಲಿ ತೆರಯಲಾಗಿರುವ ಹಲವು ಮಳಿಗೆಗಳು ಹಾಗೂ ವಿವಿಧ ಬೆಳೆಗಳ ವೀಕ್ಷಣೆ ನಡೆಸಿದರು. ಅಲ್ಲದೇ ರೈತರ ಸಾಕು ಪ್ರಾಣಿಗಳಾದ ದೇಶೀ ತಳಿಯ ಹಸು, ಕುರಿಗಳ ಪ್ರದರ್ಶನ ಮತ್ತು ಕೃಷಿ ಪರಿಕರಗಳ ವೀಕ್ಷಣೆ ನಡೆಸಿ ಮೆಚ್ಚುಗೆ ವ್ಯಕ್ತಪಡಿಸಿದರು. ಇದಲ್ಲದೇ ಆಹಾರ ಧಾನ್ಯಗಳ ಮಳಿಗೆಗಳಿಗೆ ಭೇಟಿ ನೀಡಿ ಪ್ರದರ್ಶನಕ್ಕಿಡಲಾಗಿರುವ ವಿವಿಧ ರೀತಿಯ ಆಹಾರ ಪದಾರ್ಥಗಳ ಬಳಸಲು ಪ್ರೇರಣೆ ನೀಡಿರುವ ಮಾದರಿಗಳನ್ನು ಶ್ಲಾಘಿಸಿದರು.



## ಕಾಯಕಲ್ಪ ಪ್ರಶಸ್ತಿ ವಿತರಣೆ

**ಮೈಸೂರು:** ಆರೋಗ್ಯ ಸೇವಾ ಕ್ಷೇತ್ರದಲ್ಲಿ ಅತ್ಯುತ್ತಮ ಸೇವೆಗಾಗಿ ಪ್ರಶಸ್ತಿ ಸ್ವೀಕರಿಸುತ್ತಿರುವ ತಮ್ಮೆಲ್ಲರ ಸೇವಾ ಮನೋಭಾವ ಮುಂದಿನ ದಿನಗಳಲ್ಲಿ ಪ್ರಶಸ್ತಿ ಪಡೆಯಬೇಕೆಂಬುವವರಿಗೆ ಪ್ರೇರಣೆಯಾಗಲಿ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಚಿವರಾದ ದಿನೇಶ್ ಗುಂಡೂರಾವ್ ಹೇಳಿದರು. ರಾಷ್ಟ್ರೀಯ ಆರೋಗ್ಯ ಅಭಿಯಾನ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರಿಂದ ಮೈಸೂರು ವೈದ್ಯಕೀಯ ಮಹಾವಿದ್ಯಾಲಯದ ಜೆ.ಕೆ.ಮೈದಾನ ಪ್ಲಾಟಿನಮ್ ಜ್ಯುಬಿಲಿ ಹಾಲ್‌ನಲ್ಲಿ ನಡೆದ ಸರ್ಕಾರಿ ಆಸ್ಪತ್ರೆಗಳ ಸ್ವಚ್ಛತೆ,ಶುಚಿತ್ವ ಮತ್ತು ನೈರ್ಮಲ್ಯಕ್ಕಾಗಿ ನೀಡಲಾಗುವ ರಾಜ್ಯ ಮಟ್ಟದ ಕಾಯಕಲ್ಪ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪ್ರಶಸ್ತಿ ವಿತರಣೆ ಮಾಡಿ ಮಾತನಾಡಿದ ಅವರು, ನಮ್ಮ ಮನೆ ಕಚೇರಿಗಳನ್ನು ಹೇಗೆ ಸ್ವಚ್ಛವಾಗಿಟ್ಟುಕೊಳ್ಳುತ್ತೇವೆಯೋ ಹಾಗೆ ನಾವು ಸೇವೆ ಒದಗಿಸುವ ಆಸ್ಪತ್ರೆಗಳನ್ನು ಜನಸ್ನೇಹಿಯಾಗಿಡುವ ಮೂಲಕ ಇಲಾಖೆಯನ್ನ ರಾಷ್ಟ್ರಮಟ್ಟದಲ್ಲಿ ಮಂಚೂಣಿಗೆ ಬರುವಂತೆ ನೋಡಿಕೊಳ್ಳೋಣ ಎಂದರು. ವಿವಿಧ ಮಾನದಂಡಗಳಡಿ ಆಸ್ಪತ್ರೆಗಳನ್ನ ಪ್ರಶಸ್ತಿಗೆ ಆಯ್ಕೆ ಮಾಡಲಾಗುತ್ತದೆ ಶೇ,70ಕ್ಕಿಂತ ಹೆಚ್ಚು ಅಂಕಗಳನ್ನು ಪಡೆಯುವ ಆಸ್ಪತ್ರೆಗಳನ್ನು ಪ್ರಶಸ್ತಿಗೆ ಪರಿಗಣಿಸಲಾಗುತ್ತದೆ. ಆರೋಗ್ಯ ಇಲಾಖೆಯಡಿ ಬರುವ ಜಿಲ್ಲಾ ಮತ್ತು ತಾಲೂಕು ಆಸ್ಪತ್ರೆಗಳು, ಸಮುದಾಯ ಆರೋಗ್ಯ ಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರಗಳು ಸ್ವಚ್ಛತೆ ಹಾಗೂ ನೈರ್ಮಲ್ಯದ ಕಡೆಗೆ ವಿಶೇಷ ಕಾಳಜಿವಹಿಸಿ ಆರೋಗ್ಯ ಕೇಂದ್ರಗಳಲ್ಲಿ ಸೇವೆ ನೀಡುವುದನ್ನೂ ಪರಿಗಣಿಸಲಾಗುತ್ತದೆ ಎಂದರು.



## ಪ್ರಧಾನಿ ಮೋದಿ ಹೇಳಿಕೆಗೆ ಗರಂ

ಕಾಂಗ್ರೆಸ್ ದೇಶ ಒಡೆಯುವ ಮನಸ್ಥಿತಿಯಲ್ಲೇ ಇದೆ ಎಂಬ ಪ್ರಧಾನಿ ಮೋದಿ ಹೇಳಿಕೆಗೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಕಿಡಿಕಾರಿದ್ದಾರೆ. ಮೈಸೂರಿನಲ್ಲಿ ಮಾತನಾಡಿದ ಸಚಿವ ದಿನೇಶ್ ಗುಂಡೂರಾವ್, ಬಿಜೆಪಿ ಯಾವತ್ತು ದೇಶ ಕಟ್ಟುವ ಕೆಲಸ ಮಾಡಿಲ್ಲ. ಬ್ರಿಟಿಷರ ವಿರುದ್ಧ ಕಾಂಗ್ರೆಸ್ ಹೋರಾಡಿದಾಗ ಹಿಂದೂಮಹಾಸಭಾ ಬ್ರಿಟಿಷ್ ಪರ ಇದ್ದರು. ಪಾಕಿಸ್ತಾನವನ್ನು ಇಬ್ಭಾಗ ಮಾಡಿದ್ದು ನಾವೇ ಅದನ್ನು ಹೊರತುಪಡಿಸಿ ಎಲ್ಲವನ್ನೂ ಒಗ್ಗೂಡಿಸಿದ್ದೇವೆ. ಆರ್ ಎಸ್ ಎಸ್ ಹಿಂದೂ ಮಹಾಸಭಾ ಎಂದೂ ಸ್ವಾತಂತ್ರ್ಯ ಹೋರಾಟದಲ್ಲಿ ಭಾಗಿಯಾಗಿಲ್ಲ. ಅವರು ದೇಶ ಭಕ್ತರಲ್ಲ ಅಂತಾ ಹೇಳಲ್ಲ ಆದರೆ ಅವರು ಮಾತ್ರ ದೇಶಭಕ್ತರು ಬೇರೆಯವರು ಅಲ್ಲ ಅನ್ನೋದನ್ನ ನಾವು ಒಪ್ಪಲ್ಲ ಎಂದು ಟಾಂಗ್ ಕೊಟ್ಟರು. ಫೆಬ್ರವರಿ 7ರಂದು ದೆಹಲಿ ಪ್ರತಿಭಟನೆ ಸಮರ್ಥನೆ ಮಾಡಿದ ಸಚಿವ ದಿನೇಶ್ ಗುಂಡೂರಾವ್, ಅನಿವಾರ್ಯವಾಗಿ ಪ್ರತಿಭಟನೆ ಮಾಡಲಾಗುತ್ತಿದೆ. ಇದು ಕರ್ನಾಟಕದ ಪರಿಸ್ಥಿತಿ ಮಾತ್ರವಲ್ಲ. ಬಿಜೆಪಿ ಸರ್ಕಾರ ಇಲ್ಲದ ಎಲ್ಲಾ ರಾಜ್ಯದ ಪರಿಸ್ಥಿತಿ ಇದೆ ಆಗಿದೆ. ಈ ಕಾರಣಕ್ಕಾಗಿ ನಾವು ಪ್ರತಿಭಟನೆ ಮಾಡುತ್ತಿದ್ದೇವೆ. ಒಕ್ಕೂಟ ವ್ಯವಸ್ಥೆಗೆ ಧಕ್ಕೆಯಾಗುತ್ತದೆ ಎಂದು ಅನ್ಯಾಯ ಸಹಿಸಲು ಸಾಧ್ಯವಿಲ್ಲ. ಬಿಜೆಪಿ ಸಂಸದರಿಗೆ ಮೋದಿ ಮುಂದೆ ಕೇಳುವ ಧೈರ್ಯವಿಲ್ಲ. ಸುಖಾ ಸುಮ್ಮನೆ ನಮ್ಮ ಮೇಲೆ ಕೂಗಾಡುತ್ತಾರೆ. ಇದೇ ಕೆಲಸವನ್ನು ಮೋದಿ ಮುಂದೆ ಮಾಡಿದ್ದರೆ ಪ್ರತಿಭಟನೆ ಅವಶ್ಯಕತೆಯೇ ಇರಲಿಲ್ಲ ಎಂದು ತಿಳಿಸಿದರು. ದಕ್ಷಿಣ ಭಾರತ ಉತ್ತರ ಭಾರತ ಪ್ರತ್ಯೇಕತೆ ಬಗ್ಗೆ ಸಂಸದ ಡಿ ಕೆ ಸುರೇಶ್ ಹೇಳಿಕೆ ಕುರಿತು ಪ್ರತಿಕ್ರಿಯಿಸಿದ ದಿನೇಶ್ ಗುಂಡೂರಾವ್, ಆ ರೀತಿ ಹೇಳಿಕೆ ಸರಿಯಲ್ಲ ಆ ರೀತಿ ಹೇಳಬಾರದು. ಇದನ್ನು ನಾನು ಸಿಎಂ ಸೇರಿ ಎಲ್ಲರೂ ಹೇಳಿದ್ದೇವೆ. ಆದರೆ ಅವರು ಹೇಳಿರುವ ಉದ್ದೇಶ ಬೇರೆ ಇದೆ ಎಂದರು. ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಸೋತರೆ ಗ್ಯಾರಂಟಿ ಯೋಜನೆಗಳು ರದ್ದು ಎಂಬ ಶಾಸಕ ಬಾಲಕೃಷ್ಣ ಹೇಳಿಕೆ ವಿಚಾರ ಕುರಿತು ಪ್ರತಿಕ್ರಿಯಿಸಿದ ದಿನೇಶ್ ಗುಂಡೂರಾವ್, ಯಾವುದೇ ಕಾರಣಕ್ಕೂ ಗ್ಯಾರಂಟಿ ಯೋಜನೆ ನಿಲ್ಲಲ್ಲ. ಬಾಲಕೃಷ್ಣ ಹೇಳಿದರೂ ರಾಜಣ್ಣ ಹೇಳಿದರೂ ಯಾರೋ ಏನೋ ಹೇಳಿದರೂ ಅಂತಾ ಗ್ಯಾರಂಟಿ ಯೋಜನೆ ನಿಲ್ಲಲ್ಲ. ಸಿದ್ದರಾಮಯ್ಯ ಹೇಳಿದ ಎಲ್ಲಾ ಕೆಲಸ ಮಾಡಿದ್ದಾರೆ ಎಂದು ಸ್ಪಷ್ಟನೆ ನೀಡಿದರು.

# ಪೋಷಕರಿಗೂ ಅರಿವು ಮೂಡಿಸುವ ಅಗತ್ಯವಿದೆ; ನಾಗರಾಜ್

**ಚನ್ನಪಟ್ಟಣ:** ವಿದ್ಯುತ್ ಸುರಕ್ಷತೆ ಮತ್ತು ಸಂರಕ್ಷಣೆ ಬಗ್ಗೆ ಶಾಲಾ ಮಕ್ಕಳು ತಿಳಿದುಕೊಂಡು ಪೋಷಕರಿಗೂ ಅರಿವು ಮೂಡಿಸುವ ಅಗತ್ಯವಿದೆ ಎಂದು ಬೆಸ್ಕಾಂ ಕಾರ್ಯನಿರ್ವಾಹಕ ಇಂಜಿನಿಯರ್ ನಾಗರಾಜ್ ತಿಳಿಸಿದರು.

ನಗರದ ನ್ಯೂ ಸನ್ ರೈಸ್ ಆಂಗ್ಲ ಶಾಲೆ ಕೋಟೆ ಇಲ್ಲಿ ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ (ಬೆಸ್ಕಾಂ) ವತಿಯಿಂದ ಶಾಲಾ ಮಕ್ಕಳಲ್ಲಿ ವಿದ್ಯುತ್ ಸುರಕ್ಷತೆ ಬಗ್ಗೆ ಅರಿವು ಮೂಡಿಸಲು ಪ್ರಾಥಮಿಕ ಮತ್ತು ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಚಿತ್ರಕಲಾ ಸ್ಪರ್ಧೆ, ಪ್ರಬಂಧ ಸ್ಪರ್ಧೆ, ಭಾಷಣ ಸ್ಪರ್ಧೆಗಳಲ್ಲಿ ವಿಜೇತರಾದ ಮಕ್ಕಳಿಗೆ ಪ್ರಶಸ್ತಿ ಪತ್ರ ಮತ್ತು ನಗದು ಬಹುಮಾನವನ್ನು ವಿತರಿಸಿ ಅವರು ಮಾತನಾಡಿದರು.ಮನುಷ್ಯನ ಸುಗಮ ಜೀವನಕ್ಕೆ ವಿದ್ಯುತ್ ಬೇಕು. ಬದುಕಿನ ಪ್ರತಿ ಹಂತದಲ್ಲಿ ನಾವು ವಿದ್ಯುತ್ ಬಳಕೆ ಮಾಡುವ ಸಂದರ್ಭದಲ್ಲಿ ಪ್ರಾಣ ರಕ್ಷಣೆಗೆ ಪೂರಕವಾಗಿ ಸುರಕ್ಷತಾ ಕ್ರಮಗಳನ್ನು ಮುನ್ನೆಚ್ಚರಿಕೆಯಿಂದ ಕೈಗೊಳ್ಳಬೇಕು. ಬಹಳಷ್ಟು ಸಂದರ್ಭದಲ್ಲಿ ನಿರ್ಲಕ್ಷ್ಯ ತೋರಿ ಸುರಕ್ಷತೆಗೆ ಒತ್ತು ಕೊಡದೇ ರೈತರು, ಕಾರ್ಮಿಕರು ವಿದ್ಯುತ್ ಅವಘಡಗಳಿಗೆ ಬಲಿಯಾಗುತ್ತಿದ್ದಾರೆ ಎಂದರು.

ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ ಪುಟ್ಟಸ್ವಾಮಿ ಮಾತನಾಡಿ ಬೆಸ್ಕಾಂ ವಿದ್ಯುತ್ ಅಪಘಾತಗಳು ಆಗದಂತೆ ಎಷ್ಟೋ ಸುರಕ್ಷತಾ ಕ್ರಮಗಳನ್ನು ಅಳವಡಿಸಿಕೊಂಡಿದ್ದರೂ ಕೆಲವೊಂದು ಅಚಾತುರ್ಯಗಳಿಂದ ದುರಂತಗಳು ಸಂಭವಿಸುತ್ತಿದೆ. ದಿನನಿತ್ಯ ಬೆಸ್ಕಾಂ ಸಿಬ್ಬಂದಿ ಎಲ್ಲೇ ಸಮಸ್ಯೆ ಇದ್ದರೂ ಬಗೆಹರಿಸಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ಕೆಲಸ ನಿರ್ವಹಿಸುತ್ತಾರೆ. ಆದರೆ ಕೆಲವೊಂದು ಸಂದರ್ಭಗಳಲ್ಲಿ, ಮಳೆಗಾಲ, ಬಿರುಗಾಳಿ ವೇಳೆ ಅಪಘಾತಗಳಾಗುತ್ತವೆ.

ಈ ಸಂದರ್ಭದಲ್ಲಿ ಜನರು ಎಚ್ಚೆತ್ತುಕೊಂಡು ವಿದ್ಯುತ್ ಪ್ರವಹಿಸುವ ಸ್ಥಳಗಳಿಂದ ಅಂತರ ಕಾಯ್ದುಕೊಂಡರೆ ಒಳ್ಳೆಯದು ಎಂದರು. ಸಹಾಯಕ ಇಂಜಿನಿಯರ್ ದಿಲೀಪ್ ಮಾತನಾಡಿ ವಿದ್ಯುತ್ ಬಳಕೆಯಿಂದ ಆಗುವ ಲಾಭ ಮತ್ತು ದುರ್ಬಳಕೆಯಿಂದ ಆಗುವ ಅಪಾಯಗಳ ಕುರಿತು ಮಕ್ಕಳು ಪೋಷಕರಿಗೆ ಮತ್ತು ಸಾರ್ವಜನಿಕರಿಗೆ ಅರಿವು ಮೂಡಿಸಬೇಕು,ವಿದ್ಯುತ್ ಕಂಬ ಏರಿ ದುರಸ್ತಿ ಮಾಡುವುದು, ಲೈನ್‌ಗಳಿಗೆ ನೇರವಾಗಿ ವೈರ್ ಹಾಕಿ ವಿದ್ಯುತ್ ಕಳ್ಳತನ ಮಾಡುವುದು, ವಿದ್ಯುತ್ ಕಂಬಗಳಿಗೆ ಕುರಿ–, ಜಾನುವಾರಗಳನ್ನು ಕಟ್ಟುವುದು ಅಪಾಯಕಾರಿ. ಇಂತಹ ಕೆಲಸಗಳು ನೆರೆಹೊರೆಯಲ್ಲಿ ಕಂಡುಬಂದರೆ ಸಾರ್ವಜನಿಕರು ಬೆಸ್ಕಾಂ ಅಧಿಕಾರಿಗಳ ಗಮನಕ್ಕೆ ತರಬೇಕು ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಬಿ. ಎನ್. ಮರಿಗೌಡ ಮಾತನಾಡಿ, ಬೆಸ್ಕಾಂ ವಿದ್ಯುತ್ ಅಪಘಾತಗಳ ಬಗ್ಗೆ ಕನಿಷ್ಠ ವರ್ಷಕ್ಕೊಮ್ಮೆ ಮಕ್ಕಳಿಗೆ ಜಾಗೃತಿ ಮೂಡಿಸುವ ಅಗತ್ಯವಿದೆ. ಮಕ್ಕಳು ಕಲಿತರೆ ಅವರು ಪೋಷಕರಿಗೆ ಅರಿವು ಮೂಡಿಸಬಹುದು. ಇಂತಹ ಕೆಲಸವನ್ನು ಬೆಸ್ಕಾಂ ಮಾಡಿದರೆ ಸಾರ್ವಜನಿಕ ಶಿಕ್ಷಣ ಇಲಾಖೆ ಕೈಜೋಡಿಸಿ ಕಾರ್ಯಕ್ರಮ ಯಶಸ್ವಿಯಾಗಲು ಪ್ರಯತ್ನಿಸುತ್ತದೆ ಎಂದರು.

ಬೆಸ್ಕಾಂ ಸಹಾಯಕ ಇಂಜಿನಿಯರ್ ಚಂದ್ರಶೇಖರ್ ಕಾರ್ಯಕ್ರಮದ ನೋಡಲ್ ಅಧಿಕಾರಿ, ಶಿಕ್ಷಣ ಸಂಯೋಜಕ ಯೋಗೇಶ್ ಚಕ್ಕೆರೆ, ನ್ಯೂ ಸನ್ ರೈಸ್ ಶಾಲೆಯ ಆಡಳಿತ ಅಧಿಕಾರಿ ಹೇಮಾವತಿ, ಮುಖ್ಯ ಶಿಕ್ಷಕ ಸುನಿಲ್ ಕುಮಾರ್, ದೈಹಿಕ ಶಿಕ್ಷಕ ಪ್ರದೀಪ್ ಕುಮಾರ್ , ತಗಚಗೆರೆ ಪ್ರೌಢಶಾಲೆಯ ಮುಖ್ಯ ಶಿಕ್ಷಕಿ ಮಂಗಳ, ಶಿಕ್ಷಕರಾದ ರಾಜಶೇಖರ್ , ಶಶಿಕುಮಾರ್ ರತ್ನ ಚಿತ್ರಕಲಾ ಶಿಕ್ಷಕಿ ಯೋಗಿತಾ ಮೊದಲದ ಗಣ್ಯರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಚಿತ್ರಕಲಾ ಸ್ಪರ್ಧೆಯಲ್ಲಿ 6 ರಿಂದ 8 ನೇ ತರಗತಿ ವಿಭಾಗದಲ್ಲಿ ಕೇಂದ್ರೀಯ ವಿದ್ಯಾಲಯದ ಜೀವಿತಾ ಸಿ.ವೈ (ಪ್ರಥಮ), ಭೂಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಯಶವಂತ್ (ದ್ವಿತೀಯ), ವಿರೂಪಸಂದ್ರ ಹಿರಿಯ ಪ್ರಾಥಮಿಕ ಶಾಲೆಯ ತನು ವಿ .ಎಸ್ (ತೃತಿಯ), 9 ರಿಂದ 10 ನೇ ತರಗತಿ ವಿಭಾಗದಲ್ಲಿ ಬಾಲಕಿಯರ ಪ್ರೌಢಶಾಲೆಯ ಸುಫಿಯಾ ತೆಹರಿನ್ (ಪ್ರಥಮ),ಬಾಲಕಿಯರ ಪ್ರೌಢಶಾಲೆಯ ದೇವಾಕಿ ಶ್ರೀ(ದ್ವಿತೀಯ), ಬಾಲಕರ ಪ್ರೌಢಶಾಲೆಯ ಶಾಹಿದ್ ಪಾಷಾ (ತೃತೀಯ), ಪ್ರಬಂಧ ಸ್ಪರ್ಧೆಯಲ್ಲಿ 6 ರಿಂದ 8 ನೇ ತರಗತಿ ವಿಭಾಗದಲ್ಲಿ ತಗಚಗೆರೆ ಸರ್ಕಾರಿ ಪ್ರೌಢಶಾಲೆಯ ಪ್ರೀತಿ (ಪ್ರಥಮ), ಭೂಹಳ್ಳಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಸ್ಪಂದನ (ದ್ವಿತೀಯ), ಮಳೂರುಪಟ್ಟಣ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಭೂಮಿಕ (ತೃತೀಯ),9 ರಿಂದ 10ನೇ ತರಗತಿ ವಿಭಾಗದಲ್ಲಿ ಬಾಲು ಪಬ್ಲಿಕ್ ಶಾಲೆಯ ಧೃತಿ (ಪ್ರಥಮ), ಸಾರ್ವಜನಿಕ ಪ್ರೌಢಶಾಲೆಯ ಇಂಚರ (ದ್ವಿತೀಯ), ಬ್ರಹ್ಮಣಿಪುರ ಸರ್ಕಾರಿ ಪ್ರೌಢಶಾಲೆಯ ಹರ್ಷಿತ ಬಿ.ವಿ(ತೃತಿಯ), ಭಾಷಣ ಸ್ಪರ್ಧೆಯಲ್ಲಿ 6 ರಿಂದ 8 ನೇ ತರಗತಿ ವಿಭಾಗದಲ್ಲಿ ಬ್ರಹ್ಮಣಿಪುರ ಸರ್ಕಾರಿ ಪ್ರೌಢಶಾಲೆಯ ಸಂಜನಾ (ಪ್ರಥಮ), ಲಾಳಘಟ್ಟ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಉಲ್ಲಾಸ್ (ದ್ವಿತೀಯ), ನ್ಯೂ ಸನ್ ರೈಸ್ ಶಾಲೆಯ ದೀಪ್ತಿ (ತೃತೀಯ) 9 ರಿಂದ 10ನೇ ತರಗತಿ ವಿಭಾಗದಲ್ಲಿ ತಗಚಗೆರೆ ಸರ್ಕಾರಿ ಪ್ರೌಢಶಾಲೆಯ ಲಕ್ಷ್ಮಿ. ಆರ್ (ಪ್ರಥಮ),ಬ್ರಹ್ಮಣಿಪುರ ಸರ್ಕಾರಿ ಪ್ರೌಢಶಾಲೆಯ ಹರ್ಷಿತ ಬಿ.ವಿ(ದ್ವಿತೀಯ), ಬಾಲಕರ ಪ್ರೌಢಶಾಲೆಯ ಧರಣಿ (ತೃತೀಯ) ಬಹುಮಾನ ಪಡೆದುಕೊಂಡರು.

ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಥಮ ಬಹುಮಾನವಾಗಿ 2000 ರೂಪಾಯಿ ,ದ್ವಿತೀಯ ಬಹುಮಾನವಾಗಿ 1000 ಸಾವಿರ ರೂಪಾಯಿ, ತೃತೀಯ ಬಹುಮಾನವಾಗಿ 750 ರೂಪಾಯಿಗಳು ಮತ್ತು ಪ್ರಶಸ್ತಿ ಪತ್ರ ನೀಡಿ ಅಭಿನಂದಿಸಲಾಯಿತು.

# ಪೌತಿ ಖಾತೆ ಆಂದೋಲನ ಸದ್ಬಳಕೆ ಮಾಡಿಕೊಳ್ಳಿ

**ಪಿರಿಯಾಪಟ್ಟಣ:** ಖಾತೆ ಸಮಸ್ಯೆಯಿಂದ ಬರ ಪರಿಹಾರ ಸೇರಿದಂತೆ ಸರ್ಕಾರದ ವಿವಿಧ ಯೋಜನೆಗಳ ಸೌಲಭ್ಯಗಳನ್ನು ಪಡೆಯಲು ತೊಂದರೆ ಅನುಭವಿಸುತ್ತಿರುವ ರೈತರಿಗೆ ಅನುಕೂಲ ಮಾಡಿಕೊಡಲು ಸರ್ಕಾರ ಪೌತಿ ಖಾತೆ ಆಂದೋಲನ ಕಾರ್ಯಕ್ರಮವನ್ನು ಜಾರಿಗೊಳಿಸಿದ್ದು ಇದನ್ನು ಪ್ರತಿಯೊಬ್ಬರೂ ಸದ್ಬಳಕೆ ಮಾಡಿಕೊಳ್ಳಬೇಕು ಎಂದು ತಹಶೀಲ್ದಾರ್ ಕುಂಞಿ ಅಹಮದ್ ತಿಳಿಸಿದರು.

ತಾಲ್ಲೂಕು ಆಡಳಿತ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅನೇಕ ರೈತರು ಜಮೀನಿನ ಅನುಭವದಲ್ಲಿ ಇದ್ದರೂ ಪಿತ್ರಾರ್ಜಿತ ಆಸ್ತಿಯ ಹಕ್ಕು ಪಡೆಯಲು ಸಾಕಷ್ಟು ಸಾಧ್ಯವಾಗಿಲ್ಲ. ಹಿರಿಯರ ಮರಣ ಪ್ರಮಾಣ ಪತ್ರ ಇಲ್ಲದೆ ಜಮೀನಿನ ಖಾತೆ ವರ್ಗಾವಣೆ ಸಾಧ್ಯವಾಗುತ್ತಿಲ್ಲ. ಪೂರ್ವಿಕರ ಮರಣ ಪ್ರಮಾಣ ಪತ್ರ ಪಡೆಯಲು ಅನುಕೂಲವಾಗುವಂತೆ ಕಾನೂನಾತ್ಮಕ ನೆರವು ನೀಡುವ ನಿಟ್ಟಿನಲ್ಲಿ ಸರ್ಕಾರ ಉಚಿತವಾಗಿ ಈ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು, ಆರ್‌ಟಿಸಿ, ಕ್ರಯಪತ್ರ, ವಂಶವೃಕ್ಷದಂತಹ ಮೂಲ ದಾಖಲಾತಿಗಳನ್ನು ಸಲ್ಲಿಸಿ ಮರಣ ಹೊಂದಿದ ಹಿರಿಯರ ಹೆಸರಿನಲ್ಲಿಯೇ ದಾಖಲೆ ಇರುವುದರಿಂದ ಇಂತಹ ಸಮಸ್ಯೆಗಳಿಗೆ ಪರಿಹಾರ ಮಾಡಿಕೊಳ್ಳಲು ಹದ್ದುಬಸ್ತು ಮಾಡಿಸಿಕೊಳ್ಳಿ. 11?ಇ ಸ್ಕೆಚ್ ಮಾಡಿಸಿಕೊಳ್ಳಿ. ಪೌತಿ ಖಾತೆ, ಆರ್‌ಟಿಸಿ ತಿದ್ದುಪಡಿ, ಇಂಡೀಕರಣದಂತಹ ಸಮಸ್ಯೆ, ಬ್ಯಾಂಕ್ ಆಧಾರದ ಸಾಲ, ಬ್ಯಾಂಕ್ ವಹಿವಾಟು, ಮಾರಾಟ ಮತ್ತಿತರ ಸಮಸ್ಯೆ ಪರಿಹರಿಸಿಕೊಳ್ಳಲು ಸುಲಭವಾಗಲಿದೆ ಎಂದರು. ಈ ಸಂದರ್ಭದಲ್ಲಿ ಶಿರಸ್ತೇದಾರ್ ಶಕೀಲಾಬಾನು, ವಿನೋದ್ ಕುಮಾರ್, ರಾಜಸ್ವ ನಿರೀಕ್ಷಕರಾದ ಎಸ್.ಎಸ್.ಆನಂದ್, ಅಪ್ಜಲ್ ಷರೀಫ್ ಉಪಸ್ಥಿತರಿದ್ದರು.

# ಶ್ರೀ ರಂಭಾಪುರಿ ಜಗದ್ಗುರುಗಳ ಸಾನ್ನಿಧ್ಯದಲ್ಲಿ ಸಂಸ್ಕೃತಿ ಸಂವರ್ಧನಾ ಸಮಾರಂಭ

**ಬೆಂಗಳೂರು:** ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳವರ ಇಷ್ಟಲಿಂಗ ಮಹಾಪೂಜಾ ಹಾಗೂ ಸಂಸ್ಕೃತಿ ಸಂವರ್ಧನಾ ಸಮಾರಂಭ ಫೆಬ್ರುವರಿ 9ರಿಂದ 11ರ ವರೆಗೆ ನಗರದಲ್ಲಿ ಜರುಗಲಿದೆ. ಇಷ್ಟಲಿಂಗ ಮಹಾಪೂಜೆ ಬೆಳಿಗ್ಗೆ 8.00ಕ್ಕೆ ಚಿಕ್ಕಪೇಟೆ ಶ್ರೀ ಮಹಂತಿನಮಠದಲ್ಲಿ ಹಾಗೂ ಸಮಾರಂಭ ಸಂಜೆ 6.30ಕ್ಕೆ ಶ್ರೀಗದ್ಗುರು ರೇಣುಕಾಚಾರ್ಯ ವಿದ್ಯಾ ಸಂಸ್ಥೆಯ ಶ್ರೀ ಷರಾಫ ಬಸಪ್ಪ ಸಭಾಂಗಣದಲ್ಲಿ ನಡೆಯಲಿದ್ದು ಶ್ರೀ ರಂಭಾಪುರಿ ಜಗದ್ಗುರುಗಳು ಸಾನ್ನಿಧ್ಯ ವಹಿಸುವರು. ದಿನಾಂಕ 9ರಂದು ಸಂಸ್ಕೃತಿ ಸಂವರ್ಧನಾ ಸಮಾರಂಭವನ್ನು ಮಾಜಿ ಮುಖ್ಯ ಮಂತ್ರಿ ಜಗದೀಶ ಶೆಟ್ಟರ್ ಉದ್ಘಾಟಿಸಲಿದ್ದು ಬಿ.ಜೆ.ಪಿ.ಅಧ್ಯಕ್ಷ ಬಿ.ವೈ.ವಿಜಯೇಂದ್ರ, ಮಾಜಿ ಸಚಿವ–ಶಾಸಕ ಕೆ.ಗೋಪಾಲಯ್ಯ ಮುಖ್ಯ ಅತಿಥಿಗಳಾಗಿ ಆಗಮಿಸುವರು. ಡಾ.ಮಮತಾ ಸಾಲಿಮಠ 'ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ಜ್ಞಾನ ಕ್ರಿಯಾತ್ಮಕ ವಿಚಾರಧಾರೆ' ಕುರಿತು ಉಪನ್ಯಾಸ ನೀಡುವರು. ಎಡೆಯೂರು ರೇಣುಕ ಶಿವಾಚಾರ್ಯರು, ಚಿಕ್ಕಕಲ್ಲುಬಾಳಮಠದ ಶಿವಾನಂದ ಶಿವಾಚಾರ್ಯರು, ಸಿದ್ಧರಬೆಟ್ಟದ ವೀರಭದ್ರ ಶಿವಾಚಾರ್ಯರು ಪಾಲ್ಗೊಳ್ಳುವರು. 10ರ ಸಮಾರಂಭದಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರಂಭಾಪುರಿ ಬೆಳಗು ಬಿಡುಗಡೆಗೊಳಿಸುವರು. ಮುಖ್ಯ ಅತಿಥಿಗಳಾಗಿ ಕೈಗಾರಿಕಾ ಸಚಿವ ಎಮ್ .ಬಿ.ಪಾಟೀಲ, ಆರೋಗ್ಯ–ಕುಟುಂಬ ಕಲ್ಯಾಣ ಸಚಿವ ದಿನೇಶ ಗುಂಡೂರಾವ್, ಸಣ್ಣ ನೀರಾವರಿ–ಅಂತರ್ಜಲ ಅಭಿವೃದ್ಧಿ ಇಲಾಖೆ ಜಂಟಿ ಕಾರ್ಯದರ್ಶಿ ಪಂಪನಗೌಡ್ರು ಮೆಲ್ಸೀಮೆ ಆಗಮಿಸುವರು.

### ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಹೇಳಿಕೆ

# ₹15 ಕೋಟಿ ಶೂನ್ಯ ಬಡ್ಡಿ ಸಾಲ

**ಮಂಡ್ಯ:** ಮಹಿಳಾ ಸಂಘಗಳಿಗೆ ಡಿ.ಸಿ.ಸಿ ಬ್ಯಾಂಕ್ ಹಾಗೂ ಸರ್ಕಾರದ ವಿವಿಧ ಯೋಜನೆಗಳಡಿ ಶೂನ್ಯ ಬಡ್ಡಿ ದರದಲ್ಲಿ 15 ಕೋಟಿ ರೂ ಸಾಲ ವಿತರಣೆ ಮಾಡಲಾಗುತ್ತಿದೆ ಮಹಿಳೆಯರು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್ ಚಲುವರಾಯಸ್ವಾಮಿ ಅವರು ತಿಳಿಸಿದರು.



ಅವರು ಇಂದು ಶ್ರೀರಂಗಪಟ್ಟಣ ತಾಲ್ಲೂಕು ಆಡಳಿತ ಹಾಗೂ ತಾಲ್ಲೂಕು ಪಂಚಾಯತ್ ವತಿಯಿಂದ ಆಯೋಜಿಸಲಾಗಿದ್ದ ಗ್ಯಾರಂಟಿ ಯೋಜನೆಗಳ ಸಮಾವೇಶ ಹಾಗೂ ಡಿ.ಸಿ.ಸಿ ಬ್ಯಾಂಕ್ ವತಿಯಿಂದ ಮಹಿಳಾ ಸಂಘಗಳಿಗೆ ಸಾಲ ವಿತರಣೆ ಮತ್ತು ಮಾಹಿತಿ ನೀಡುವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ರಾಜ್ಯದ 236 ತಾಲ್ಲೂಕಿನಲ್ಲಿ 223 ತಾಲ್ಲೂಕು ಬರಪೀಡಿತವಾಗಿದ್ದು, ರೈತರಿಗೆ ಪರಿಹಾರ ಒದಗಿಸುವಂತೆ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲಾಯಿತು. ಬರ ಪರಿಹಾರ ಬರುವುದು ತಡವಾಗುತ್ತದೆ ಎಂದು ತಿಳಿದ ಹಿನ್ನಲೆಯಲ್ಲಿ ರೈತರಿಗೆ ಮೊದಲ ಹಂತದಲ್ಲಿ ಪರಿಹಾರವಾಗಿ 2000 ರೂ ನೀಡಲಾಗುತ್ತಿದೆ ಎಂದರು. ರಾಜ್ಯದಲ್ಲಿ ಬರ ಎಂದು ತಿಳಿದ ತಕ್ಷಣ ಕಂದಾಯ ಸಚಿವರೊಂದಿಗೆ ಜಿಲ್ಲೆಗಳ ಪ್ರವಾಸ ಕೈಗೊಂಡು ರೈತರ ಕಷ್ಟ?ಟಗಳ ಬಗ್ಗೆ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳಿಗೆ ವರದಿ ನೀಡಲಾಗಿದೆ ಎಂದರು.

ಗ್ಯಾರಂಟಿ ಯೋಜನೆಗಳಿಗೆ 69 ಸಾವಿರ ಕೋಟಿ ಅನುದಾನ ಬೇಕಾಗುತ್ತದೆ. ಇದರೊಂದಿಗೆ ಅಭಿವೃದ್ಧಿಯಲ್ಲೂ ಹಿಂದೆ ಉಳಿದಿಲ್ಲ. ವಿವಿಧ ಇಲಾಖೆಯ ಮೂಲಕ ರಸ್ತೆ ಅಭಿವೃದ್ಧಿಗೆ ಪ್ರತಿ ಜಿಲ್ಲೆಗೆ 50 ಕೋಟಿ ರೂ ಅನುದಾನ ನೀಡಲಾಗಿದೆ ಎಂದರು.

ಮಂಡ್ಯ ಜಿಲ್ಲೆ ಒಂದರಲ್ಲೇ ಅಂದಾಜು 47 ಲಕ್ಷ ಕುಟುಂಬಗಳಿಗೆ ಐದು ಗ್ಯಾರಂಟಿ ಯೋಜನೆಗಳಲ್ಲಿ ಒಂದಲ್ಲ ಒಂದು ಗ್ಯಾರಂಟಿ ಯನ್ನು ಪಡೆದುಕೊಂಡಿದ್ದಾರೆ ಎಂದರು.

**ಬಡವರ ಕೈ ಬಲಪಡಿಸಲು ಗ್ಯಾರಂಟಿ ಯೋಜನೆ ಜಾರಿ;** ಬಡವರಿಗೆ, ರೈತರಿಗೆ, ಮಹಿಳೆಯರಿಗೆ ಶಕ್ತಿ ನೀಡುವುದೇ ಸರ್ಕಾರದ ಉದ್ದೇಶವಾಗಿದ್ದು, ನಿಮ್ಮ ಕೈ ಬಲಪಡಿಸಲು ಐದು ಗ್ಯಾರಂಟಿಗಳನ್ನು ನೀಡಿದ್ದೇವೆ ಎಂದು ಕಂದಾಯ ಸಚಿವರಾದ ಕೃಷ್ಣಭೈರೇಗೌಡ ಅವರು ತಿಳಿಸಿದರು.

ಸಂಸಾರದ ಆಧಾರ ಮಹಿಳೆ ಎಂದು ಮನಗಂಡ ಸರ್ಕಾರ ಮಹಿಳೆಯರಿಗೆ ಗೃಹ ಲಕ್ಷ್ಮಿ ಯೋಜನೆಯನ್ನು ಜಾರಿ ಮಾಡಿ ಮಹಿಳೆಯರನ್ನು ಆರ್ಥಿಕವಾಗಿ ಸದೃಢ ಮಾಡಿದೆ ಎಂದರು.

ಮಹಿಳೆಯರು ಸ್ವಾವಲಂಬಿಗಳಾಗಿ ಬದುಕಬೇಕು ಎನ್ನುವ ನಿಟ್ಟಿನಲ್ಲಿ ಸರ್ಕಾರ ಮಹಿಳೆಯರಿಗೆ ಸಾಕಷ್ಟು ಯೋಜನೆಗಳನ್ನು ನೀಡಿದೆ. ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಮಹಿಳೆಯರ ಸ್ವಾತಂತ್ರ್ಯ ಹಾಗೂ ಸಬಲೀಕರಣಕ್ಕಾಗಿ ಶಕ್ತಿ ಯೋಜನೆ ಜಾರಿಗೆ ತಂದಿದ್ದು, ಮಹಿಳೆ ಕಟ್ಟುಪಾಡುಗಳನ್ನು ಮೀರಿ ಹೊರಬಂದು ಕುಟುಂಬವನ್ನು ಮುನ್ನಡೆಸಿ ಸಮಾಜದಲ್ಲಿ ನಿರ್ಭೀತಿಯಿಂದ ಬದುಕುತ್ತಿದ್ದಾರೆ ಎಂದು ಹೇಳಿದರು.

ಶ್ರೀರಂಗಪಟ್ಟಣ ಶಾಸಕ ಹಾಗೂ ಚಾಮುಂಡೇಶ್ವರಿ ವಿದ್ಯುತ್ ನಿಗಮದ ಅಧ್ಯಕ್ಷ ರಮೇಶ್ ಬಾಬು ಬಂಡಿಸಿದ್ದೇಗೌಡ ಅವರು ಮಾತನಾಡಿ ಚುನಾವಣಾ ಪೂರ್ವದಲ್ಲಿ ನೀಡಲಾಗಿದ್ದ ಐದು ಗ್ಯಾರಂಟಿಗಳನ್ನು ಸರ್ಕಾರ ಅನುಷ್ಠಾನ ಮಾಡಿ ನುಡಿದಂತೆ ನಡೆದಿದ್ದೇವೆ ಎಂದರು. ಗೃಹ ಲಕ್ಷ್ಮಿ, ಅನ್ನ ಭಾಗ್ಯ, ಗೃಹ ಜ್ಯೋತಿ, ಯುವ ನಿಧಿ, ಶಕ್ತಿ ಯೋಜನೆಗಳನ್ನು ಜನರನ್ನು ಆರ್ಥಿಕವಾಗಿ ಸಬಲರಾಗಲು ನೀಡಲಾಗಿದೆ. ಇದರೊಂದಿಗೆ ಅಭಿವೃದ್ಧಿಗೂ ಸಹ ಅನುದಾನ ನೀಡಲಾಗಿದೆ ಎಂದರು.

ಶ್ರೀರಂಗಪಟ್ಟಣ ವಿಧಾನಸಭಾ ಕ್ಷೇತ್ರದ ಅಭಿವೃದ್ಧಿಗೆ ಸಂಬಂಧಿಸಿದಂತೆ ಸಿ.ಡಿ.ಎಸ್, ದೇವರಾಜ, ಗಿರಿಜಾ ಸೇರಿದಂತೆ ಇನ್ನಿತರ ನಾಲೆಗಳ ಅಭಿವೃದ್ಧಿಗೆ ರೂ 200 ಕೋಟಿ ಹಣ ನೀಡಲಾಗಿದ್ದು, ಟೆಂಡರ್ ಪ್ರಕ್ರಿಯೆ ಆರಂಭವಾಗಿದೆ ಎಂದರು.

ಲೋಕೋಪಯೋಗಿ ರಸ್ತೆ ಅಭಿವೃದ್ಧಿಗೆ ರೂ 40 ಕೋಟಿ, ಪುರಸಭೆ ವ್ಯಾಪ್ತಿಯಲ್ಲಿ ಕಾವೇರಿ ಕುಡಿಯುವ ನೀರು ಒದಗಿಸಲು ರೂ 20ಕೋಟಿ, ಯು.ಜಿ.ಡಿ ಅಭಿವೃದ್ಧಿಗೆ ರೂ 25 ಕೋಟಿ ಮೀಸಲಿಡಲಾಗಿದೆ ಎಂದರು. ಶ್ರೀರಂಗಪಟ್ಟಣ ತಾಲ್ಲೂಕಿನಲ್ಲಿ ಡಿಸಿ.ಸಿ ಬ್ಯಾಂಕ್ ವತಿಯಿಂದ ಬಡ್ಡಿ ರಹಿತವಾಗಿ ಮಹಿಳಾ ಸಂಘಗಳಿಗೆ 7 ರಿಂದ 8 ಕೋಟಿ ರೂ ಹಣ ವಿತರಿಸಲಾಗಿತ್ತಿದೆ. ಮಹಿಳೆಯರು ಸದುಪಯೋಗ ಪಡಿಸಿಕೊಳ್ಳಬೇಕು ಎಂದರು.

ಮಳವಳ್ಳಿ ವಿಧಾನಸಭಾ ಕ್ಷೇತ್ರದ ಶಾಸಕ ಪಿ.ಎಂ. ನರೇಂದ್ರಸ್ವಾಮಿ ಅವರು ಮಾತನಾಡಿ ಗ್ಯಾರಂಟಿ ಯೋಜನೆಗಳು ಸಾರ್ವಜನಿಕರಿಗೆ ಉಪಯುಕ್ತವಾಗಿದ್ದು, ಸರ್ಕಾರ ಮನೆ ಬಾಗಿಲಿಗೆ ಯೋಜನೆಗಳನ್ನು ಒದಗಿಸಿದೆ. ಮಾಜಿ ಪ್ರಧಾನಿ ಇಂದಿರಾ ಗಾಂಧಿ ಅವರು ಉಳುವವರಿಗೆ ಭೂಮಿ ಎಂದು ರೈತರ ಪರವಾಗಿ ನಿಂತರು ಅವರು ಸದಾ ಎಲ್ಲರಿಗೂ ಮಾದರಿ ಎಂದರು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಶಾಸಕ ದಿನೇಶ್ ಗೂಳಿಗೌಡ, ವಿಧಾನಸಭಾ ಶಾಸಕ ರವಿ ಕುಮಾರ್, ದರ್ಶನ್ ಪುಣ್ಣಣಯ್ಯ, ಜಿಲ್ಲಾ ಸಹಕಾರ ಬ್ಯಾಂಕ್ ಅಧ್ಯಕ್ಷ ಜೋಗಿಗೌಡ, ಜಿಲ್ಲಾಧಿಕಾರಿ ಡಾ: ಕುಮಾರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶೇಖ್ ತನ್ವೀರ್ ಆಸೀಫ್, ಜಿಲ್ಲಾ ಪೊಲೀಸ್, ವರಿಷ್ಠಾಧಿಕಾರಿ ಎನ್ ಯತೀಶ್ ಉಪಸ್ಥಿತರಿದ್ದರು.

# ಸಂವಿಧಾನ ಜಾಗೃತಿ ಜಾಥಾ

**ಕೋಲಾರ:** ಕೋಲಾರ ಜಿಲ್ಲೆ ಮುಳಬಾಗಿಲು ತಾಲ್ಲೂಕಿನ ಆವಣಿ ಗ್ರಾಮ ಪಂಚಾಯತಿಗೆ ಆಗಮಿಸಿದ ಸಂವಿಧಾನ ಜಾಗೃತಿ ಜಾಥಾವನ್ನು ಜಿಲ್ಲಾ ಪಂಚಾಯತ್‌ನ ಮುಖ್ಯಕಾರ್ಯನಿರ್ವಹಣಾಧಿಕಾರಿ ಶ್ರೀಮತಿ ಪದ್ಮಬಸವಂತಪ್ಪ ರವರು ಸ್ವಾಗತಿಸಿದರು. ಮೊದಲಿಗೆ ಭಾರತ ರತ್ನ ಸಂವಿಧಾನ ಶಿಲ್ಪಿ ಡಾ|| ಬಿ.ಆರ್ ಅಂಬೇಡ್ಕರ್ ರವರ ಪ್ರತಿಮೆ ಮಾಲಾರ್ಪಣೆ ಮಾಡಿ ನಂತರ ನೂರಾರು ಶಾಲಾ ಮಕ್ಕಳೊಂದಿಗೆ ಹೆಜ್ಜೆ ಹಾಕಿ ಜಾಥಾ ಕಾರ್ಯಕ್ರಮದಲ್ಲಿ ಸಾಗಿ ಬಂದರು. ತದನಂತರ ಮುಳಬಾಗಿಲು ತಾಲ್ಲೂಕಿನ ಆವಣಿ ಗ್ರಾಮ ಪಂಚಾಯತಿಯಲ್ಲಿ ಆಯೋಜಿದ್ದ ವೇದಿಕೆ ಕಾರ್ಯಕ್ರಮದಲ್ಲಿ ಭಾಗವಹಿಸಿ ದೀಪ ಬೆಳಗುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಶ್ರೀನಿವಾಸನ್. ಎಂ, ಸಹಾಯಕ ನಿರ್ದೇಶಕ ನರಸಿಂಹಯ್ಯ, ತಾಲ್ಲೂಕು ಕಾರ್ಯನಿರ್ವಣಾಧಿಕಾರಿ ಸರ್ವೇಶ್, ಅವಣಿ ಪಂಚಾಯತಿ ಅಭಿವೃದ್ಧಿ ಅಧಿಕಾರಿ ಕೆ.ವೆಂಕಟಾಚಲಪತಿ ಹಾಗೂ ವಿವಿಧ ಸಂಘಟನೆಗಳ ಮುಖಂಡರು ಕಾರ್ಯಕ್ರಮದಲ್ಲಿ ಹಾಜರಿದ್ದರು. ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮಕ್ಕೆ ಸಂಬಂಧಿಸಿದ ಭಾವಚಿತ್ರಗಳನ್ನು ಮತ್ತು ವಿಡಿಯೋ ತುಣುಕುಗಳನ್ನು ಹಾಗೂ ಜಾಥಾ ಕುರಿತು ಸಂಪೂರ್ಣ ವಿವರಗಳನ್ನು ಕಾಲ–ಕಾಲಕ್ಕೆ ಕೋಲಾರ ಜಿಲ್ಲೆಯ ಅಧಿಕೃತ ಖಾತೆಯಾದ T[B Hsobw (msobwTseb79174) ಯಲ್ಲಿ ಸಾರ್ವಜನಿಕರು ಹಾಗೂ ಎಲ್ಲರ ವೀಕ್ಷಣೆಗಾಗಿ ಆಪ್–ಲೋಡ್ ಮಾಡಲಾಗುತ್ತಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಶ್ರೀನಿವಾಸನ್. ಎಂ ರವರು ತಿಳಿಸಿದ್ದಾರೆ.

# ಆರೋಗ್ಯ ಸಂಸ್ಥೆಗಳು ಮಾನವೀಯ ನೆಲೆಗಟ್ಟಿನಲ್ಲಿ ಕಾರ್ಯನಿರ್ವಹಿಸಲಿ

**ಕೋಲಾರ:** ಖಾಸಗಿ ಆರೋಗ್ಯ ಸಂಸ್ಥೆಗಳು ಬಡವರ ಹಾಗೂ ನಿರ್ಗತಿಕರ ಪರವಾಗಿ ಮಾನವೀಯತೆ ನೆಲೆಗಟ್ಟಿನಲ್ಲಿ ಕಾರ್ಯ ನಿರ್ವಹಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳಾದ ಡಾ. ಶಂಕರ ವಣಿಕ್ಯಾಳ್ ಅವರು ಕಿವಿಮಾತು ಹೇಳಿದರು.

ಇಂದು ಜಿಲ್ಲಾಧಿಕಾರಿಗಳ ನ್ಯಾಯಾಂಗ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಅಯುಷ್?ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯ ಪ್ರಗತಿ ಪರಿಶೀಲನೆ ಹಾಗೂ ಕುಂದು ಕೊರತೆಗಳ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಜಿಲ್ಲೆಯ 80 ಆಸ್ಪತ್ರೆ ಗಳಲ್ಲಿ ಅಯುಷ್ಮಾನ್ ಭಾರತ್ ಯೋಜನೆಯಡಿಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಜಿಲ್ಲೆಯಲ್ಲಿ 13 ಲಕ್ಷಕ್ಕೂ ಅಧಿಕ ಬಿ.ಪಿ.ಎಲ್ ಕಾರ್ಡುದಾರರಿದ್ದು, ಕೇವಲ ಶೇ.26.9 ಮಾತ್ರ ಅಯುಷ್ಮಾನ್ ಭಾರತ್ ಕಾರ್ಡ್‌ಗಳನ್ನು ವಿತರಿಸಿ ಕೋಲಾರವು ರಾಜ್ಯದಲ್ಲಿ 25 ನೇ ಸ್ಥಾನದಲ್ಲಿದೆ. ಪ್ರತಿ ಗ್ರಾಮದಲ್ಲಿ ಯೋಜನೆಯ ಬಗ್ಗೆ ಅರಿವು ಮೂಡಿಸಿ ಗ್ರಾಮ ಒನ್‌ಗಳಲ್ಲಿ ಅಭಿಯಾನದಂತೆ ನೋಂದಣಿ ಮಾಡಿಸಿ ಎಂದು ತಿಳಿಸಿದರು.

ಸರ್ಕಾರವು ಜಿಲ್ಲಾದ್ಯಂತ ಪ್ರತಿನಿತ್ಯ 5000 ಕಾರ್ಡ್‌ಗಳನ್ನು ನೋಂದಾಯಿಸಲು ಗುರಿ ನೀಡಿದ್ದಾಗ್ಯೂ, ನಿಗಧಿತ ಗುರಿ ತಲುಪಲು ಸಾಧ್ಯವಾಗದಿರುವ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ ಅವರು, ತಾಲ್ಲೂಕು ಆರೋಗ್ಯಾಧಿಕಾರಿಗಳು ಆಸ್ಥೆ ವಹಿಸಿ ಗುರಿ ಸಾಧನೆ ಆಗುಮಾಡಿಸಬೇಕು. ಪ್ರತಿನಿತ್ಯ ಕನಿಷ್ಠ 100 ಕಾರ್ಡ್‌ಗಳನ್ನು ಪ್ರತಿ ತಾಲ್ಲೂಕಿನಲ್ಲಿ ನೋಂದಣಿ ಮಾಡಿಸಿದರೆ ಗುರಿ ತಲುಪುವಲ್ಲಿ ಯಶಸ್ವಿಯಾಗುತ್ತೇವೆ. ಎಲ್ಲದಕ್ಕೂ ಮನೋಬಲ ಮುಖ್ಯ ಎಂದರು. ತಾಂತ್ರಿಕ ಸಮಸ್ಯೆಗಳು ಎದುರಾದಾಗ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ತಿಳಿಸಿ ತಾಂತ್ರಿಕ ನೆರವನ್ನು ಪಡೆಯಬೇಕು. ಅಗತ್ಯವಿದ್ದರೆ ಸಾರ್ವಜನಿಕ ಶಿಕ್ಷಣ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ ಹಾಗೂ ಆಹಾರ ಮತ್ತು ನಾಗರಿಕ ಇಲಾಖೆಗಳ ಸಹಕಾರ ಪಡೆದುಕೊಂಡು ಸಾರ್ವಜನಿಕರನ್ನು ತಲುಪಬೇಕು. ಒಟ್ಟಾರೆಯಾಗಿ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕು ಎಂದರು. ಕುಂದುಕೊರತೆಗಳನ್ನು ಆಲಿಸಿ ಇನ್ನು ಮುಂದೆ ಪ್ರತಿ ಮಾಹೆ ಕುಂದುಕೊರತೆ ಸಭೆಗಳನ್ನು ಏರ್ಪಡಿಸುವಂತೆ ತಿಳಿಸಿದರು. ಖಾಸಗಿ ಆರೋಗ್ಯ ಸಂಸ್ಥೆಯೊಂದು ಅಯುಷ್ಮಾನ್ ಭಾರತ್ ಆರೋಗ್ಯ ಕರ್ನಾಟಕ ಯೋಜನೆಯಡಿಯಲ್ಲಿ ನಿಗಧಿತ ದರಕ್ಕಿಂತ ಹೆಚ್ಚಿಗೆ ವಸೂಲು ಮಾಡಿರುವುದನ್ನು ತೀವ್ರವಾಗಿ ಖಂಡಿಸಿದ ಅವರು ಹೆಚ್ಚುವರಿಯಾಗಿ ಪಡೆದಿರುವ ಮೊತ್ತವನ್ನು ಕೂಡಲೇ ಹಿಂತಿರುಗಿಸುವಂತೆ ಸೂಚಿಸಿದರು.

ಮತ್ತೊಂದು ಖಾಸಗಿ ಆರೋಗ್ಯ ಸಂಸ್ಥೆಯು ಎ.ಪಿ.ಎಲ್ ಕಾರ್ಡುದಾರರಿಗೆ ಚಿಕಿತ್ಸೆಗೆ ಅನುಮತಿಸುತ್ತಿಲ್ಲವೆಂದು ದೂರು ಬಂದಿದ್ದು, ಎಂ.ಓ.ಯು ನಲ್ಲಿ ಸರ್ಕಾರವು ಎಪಿಎಲ್ ಕಾರ್ಡುದಾರರಿಗೂ ಚಿಕಿತ್ಸೆಗೆ ಅನುಮತಿಸಿದ್ದು, ಅವರುಗಳಿಗೂ ನಿಯಮಾವಳಿಗಳನ್ವಯ ಸೂಕ್ತ ಚಿಕಿತ್ಸೆ ನೀಡುವಂತೆ ತಾಕಿತು ಮಾಡಿದರು. ಇಂತಹ ಪ್ರಕರಣಗಳು ಮರುಕಳಿಸದಂತೆ ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಅಯುಷ್ಮಾನ್ ಭಾರತ ಆರೋಗ್ಯ ಕರ್ನಾಟಕ ಜಿಲ್ಲಾ ನೋಡಲ್ ಅಧಿಕಾರಿ ಎನ್.ಸಿ. ನಾರಾಯಣ ಸ್ವಾಮಿ, ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ. ಚಾರಿಣಿ, ಕೆಜಿಎಫ್ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಸುರೇಶ್ ಕುಮಾರ್, ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿ ಡಾ. ರವಿಕುಮಾರ್, ಎಬಿಆರ್ ಕೆ ಜಿಲ್ಲಾ ಸಂಯೋಜಕಿ ಡಾ. ವಸುಂಧರಾ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಪ್ರೇಮ, ಎಲ್ಲಾ ತಾಲ್ಲೂಕು ಆರೋಗ್ಯಾಧಿಕಾರಿಗಳು, ಜಿಲ್ಲೆಯ ಪ್ರಮುಖ ಖಾಸಗಿ ಆರೋಗ್ಯ ಸಂಸ್ಥೆಗಳ ಪದಾಧಿಕಾರಿಗಳು, ಎಲ್ಲಾ ತಾಲ್ಲೂಕುಗಳ ಆರೋಗ್ಯ ಮಿತ್ರರು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಪತ್ರಕರ್ತರಿಗೆ ಉಚಿತ ಬಸ್ ಪಾಸ್ ಒದಗಿಸಲು ಮನವಿ

**ಬೆಂಗಳೂರು:** ಗ್ರಾಮಾಂತರ ಪ್ರದೇಶದ ಪತ್ರಕರ್ತರು ಸೇರಿದಂತೆ ಎಲ್ಲಾ ಕಾರ್ಯನಿರತ ಪತ್ರಕರ್ತರಿಗೂ ಉಚಿತ ಬಸ್ ಪಾಸ್ ಸೌಲಭ್ಯವನ್ನು ಕಲ್ಪಿಸಿ ಇದೇ ವರ್ಷದಿಂದಲೇ ಜಾರಿಗೆ ತರುವಂತೆ ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘ(ಕೆಯುಡಬ್ಲ್ಯೂಜೆ)ದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ಸರ್ಕಾರಕ್ಕೆ ಹಕ್ಕೋತ್ತಾಯ ಮಂಡಿಸಿದ್ದಾರೆ. ದಾವಣಗೆರೆಯಲ್ಲಿ ಜರುಗಿದ 38ನೇ ರಾಜ್ಯ ಪತ್ರಕರ್ತರ ಸಮ್ಮೇಳನದಲ್ಲಿ ಸರ್ವಾನುಮತದಿಂದ ಅಂಗೀಕರಿಸಿದ ಹಕ್ಕೋತ್ತಾಯಗಳ ನಿರ್ಣಯಗಳನ್ನು ಸರ್ಕಾರಕ್ಕೆ ಸಲ್ಲಿಸಿದ್ದು, ಅವುಗಳನ್ನು ಈಡೇರಿಸಬೇಕೆಂದು ವಿನಂತಿಸಿಕೊಂಡಿದ್ದಾರೆ. ಪತ್ರಕರ್ತರಿಗಾಗಿಯೇ ಪ್ರತ್ಯೇಕ ಆರೋಗ್ಯ ಭಾಗ್ಯ ಯೋಜನೆ ಜಾರಿಗೆ ತರಬೇಕು. ಪತ್ರಕರ್ತರ ಕ್ಷೇಮಾಭಿವೃದ್ಧಿಗೆ 100 ಕೋಟಿ ರೂ. ಮೀಸಲಿಡಬೇಕು. ಟೋಲ್‌ಗಳಲ್ಲಿ ಪತ್ರಕರ್ತರ ವಾಹನಗಳಿಗೆ ಉಚಿತ ಪ್ರವೇಶ ನೀಡಬೇಕು. ಪಿಯುಸಿ ಮತ್ತು ಪದವಿ ಓದುತ್ತಿರುವ ಪತ್ರಕರ್ತರ ಮಕ್ಕಳಿಗೆ ಲ್ಯಾಪ್ ಟ್ಯಾಪ್ ನೀಡಬೇಕು. ತಾಲ್ಲೂಕು, ಜಿಲ್ಲೆ ಹಾಗೂ ನಗರ ಮತ್ತು ಮಹಾನಗರಗಳಲ್ಲಿ ಪತ್ರಕರ್ತರಿಗಾಗಿ ರಿಯಾಯಿತಿ ದರದಲ್ಲಿ ನಿವೇಶನ/ಮನೆ ಕೊಡಬೇಕು. ಪತ್ರಕರ್ತರ ಸಮ್ಮೇಳನ ಆಯೋಜನೆಗೆ (ಸಾಹಿತ್ಯ ಸಮ್ಮೇಳನಕ್ಕೆ ನೆರವು ನೀಡುವಂತೆ) ಸರ್ಕಾರದಿಂದ ಕನಿಷ್ಠ 50 ಲಕ್ಷ ರೂ. ನೆರವು ನೀಡಬೇಕು. ಪತ್ರಕರ್ತರ ಭವನಗಳನ್ನು ಕಾರ್ಯ ನಿರತ ಪತ್ರಕರ್ತರ ಸಂಘಟನೆಯಾದ ಕೆಯುಡಬ್ಲ್ಯೂ?ಜೆ ಜಿಲ್ಲಾ ಮತ್ತು ತಾಲ್ಲೂಕು ಘಟಕಗಳೇ ನಿರ್ವಹಣೆ ಮಾಡುವಂತೆ ಸರ್ಕಾರಿ ಆದೇಶ ಹೊರಡಿಸಬೇಕು ಎಂಬ ಹಕ್ಕೋತ್ತಾಯಗಳನ್ನು ಸರ್ಕಾರಕ್ಕೆ ಸಲ್ಲಿಸಿದ್ದಾರೆ.

# 20ರಿಂದ ಉದ್ಯೋಗ ಮೇಳ

**ಮಂಡ್ಯ:** ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ವತಿಯಿಂದ ಬೆಂಗಳೂರಿನ ಅರಮನೆ ಆವರಣದಲ್ಲಿ ಫೆಬ್ರವರಿ 26 ಮತ್ತು 27 ರಂದು ಬೆಳಿಗ್ಗೆ 9.00 ಗಂಟೆಗೆ ಬೃಹತ್ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ. 18 ರಿಂದ 35 ವರ್ಷದ ಆಸಕ್ತ ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ, ಪಿ.ಯು.ಸಿ, ಐ.ಟಿ.ಐ, ಡಿಪ್ಲೋಮೊ ಯಾವುದೇ ಪದವಿಯ ಕನಿಷ್ಠ ವಿದ್ಯಾರ್ಹತೆಯನ್ನು ಹೊಂದಿದ್ದು, ತಮ್ಮ ಎಲ್ಲಾ ಮೂಲ ಸ್ವ–ವಿವರ ಪತ್ರಗಳ ಜೆರಾಕ್ಸ್ ಮತ್ತು ಆಧಾರ್ ಕಾರ್ಡ್ ನಕಲು ಪ್ರತಿಯನ್ನು ತೆಗೆದುಕೊಂಡು ಭಾಗವಹಿಸಬಹುದಾಗಿದೆ. ಹೆಸರಾಂತ ಕಂಪನಿಗಳು ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳಲಿದ್ದು, https://udyogamela.skillconnect.kaushalkar.com/candidaterRegistration ರಲ್ಲಿ ನೊಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ದೂ. ಸಂ. 08232–295010 ಮತ್ತು ಸಹಾಯವಾಣಿ: 1800 5999918 ಅನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಕೌಶಲ್ಯಾಭಿವೃದ್ಧಿ ಅಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗ್ರಾಮ ಒನ್ ಕೇಂದ್ರಗಳ ಸ್ಥಾಪನೆಗೆ ಫ್ರಾಂಚೈಸಿಗಳಿಂದ ಅರ್ಜಿ ಆಹ್ವಾನ

**ಕೋಲಾರ:** ಕೋಲಾರ ಜಿಲ್ಲೆಯ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಗ್ರಾಮ ಒನ್ ಯೋಜನೆಯನ್ನು ಸ್ಥಾಪಿಸುವ ಸಲುವಾಗಿ ಈ ಯೋಜನೆಯನ್ನು ಫ್ರಾಂಚೈಸಿಗಳ ಮೂಲಕ ಅನುಷ್ಠಾನಗೊಳಿಸುವ ಉದ್ದೇಶದಿಂದ ಗ್ರಾಮ ಒನ್ ಕೇಂದ್ರಗಳನ್ನು ಸ್ಥಾಪಿಸಲು ಫೆಬ್ರವರಿ 15 ರೊಳಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ಅರ್ಜಿಗಳನ್ನು https://www.karnatakaone.gov.in/public/GramOne Franchisee Terms ಲಿಂಕ್ ಮೂಲಕ ಗ್ರಾಮ್ ಒನ್ ಕೇಂದ್ರಗಳ ಸ್ಥಾಪನೆಗೆ ಸಲ್ಲಿಸಬಹುದೆಂದು ಜಿಲ್ಲಾಧಿಕಾರಿಗಳ ಕಛೇರಿ ಪ್ರಕಟಣೆ ತಿಳಿಸಿದೆ.

# ಅಧಿಕಾರಿಗಳ ತಾತ್ಸಾರದಿಂದ ನಲುಗಿದ ರೈತ ಸಮುದಾಯ

**ಚನ್ನಪಟ್ಟಣ:** ಸರ್ಕಾರಿ ಕಚೇರಿಗಳಲ್ಲಿ ರೈತರನ್ನು ನಿರ್ಲಕ್ಷಿಸಲಾಗುತ್ತಿದೆ. ತಮ್ಮ ಕೆಲಸಗಳಿಗೆ ಸರ್ಕಾರಿ ಕಚೇರಿಗೆ ಹೋಗುವ ರೈತರನ್ನು ಅಧಿಕಾರಿಗಳು ಅಸಡ್ಡೆಯಿಂದ ನೋಡುತ್ತಿದ್ದು, ತಪ್ಪು ಮಾಹಿತಿ ನೀಡಿ ಕಚೇರಿಯಿಂದ ಕಚೇರಿಗೆ ಅಲೆದಾಡಿಸುತ್ತಿದ್ದಾರೆ. ಅಧಿಕಾರಿಗಳ ತಾತ್ಸಾರದಿಂದ ರೈತ ಸಮುದಾಯ ನಲುಗಿದ್ದು, ಇದನ್ನು ಪರಿಹರಿಸುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘದಿಂದ ನಗರದ ತಾಲೂಕು ಕಚೇರಿ ಆವರಣದಲ್ಲಿ ಪ್ರತಿಭಟನೆ ನಡೆಸಲಾಯಿತು. ನಗರದ ತಾಲೂಕು ಕಚೇರಿ ಆವರಣದಲ್ಲಿ ಜಮಾಯಿಸಿದ ರೈತರ ಸಂಘದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಸರ್ಕಾರಿ ಅಧಿಕಾರಿಗಳ ಕಾರ್ಯವೈಖರಿಯನ್ನು ಖಂಡಿಸಿದರು. ತಾಲೂಕು ಆಡಳಿತ ಹಾಗೂ ಸರ್ಕಾರಿ ಇಲಾಖೆ ಅಧಿಕಾರಿಗಳ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ರೈತರ ಕುರಿತು ಕಾಳಜಿ ಇಲ್ಲ: ನಾವು ಆರಿಸಿ ಕಳುಹಿಸಿದ ಜನಪ್ರತಿನಿಧಿಗಳು ಹಾಗೂ ತಾಲೂಕು ಆಡಳಿತಕ್ಕೆ ರೈತರ ಕುರಿತ ಕಾಳಜಿಯೇ ಇಲ್ಲವಾಗಿದೆ. ಸರ್ಕಾರಿ ಅಧಿಕಾರಿಗಳು ಜನರ ಕೆಲಸ ಮಾಡುವುದನ್ನು ಬಿಟ್ಟು ತಮ್ಮ ಕುಟುಂಬದ ಹಿತಾಸಕ್ತಿಗಾಗಿ ದುಡಿಯುತ್ತಿದ್ದಾರೆ. ಬಹುತೇಕ ಎಲ್ಲ ಇಲಾಖೆಗಳಲ್ಲೂ ಲಂಚವಿಲ್ಲದೇ ಕೆಲಸವಾಗುವುದಿಲ್ಲ ಎಂಬ ಪರಿಸ್ಥಿತಿ ಇದೆ. ಅದರಲ್ಲೂ ಕಂದಾಯ ಇಲಾಖೆಯಲ್ಲಿ ಭ್ರಷ್ಟಾಚಾರ ಮೀತಿಮೀರಿದೆ. ಕೆಲಸ ಮಾಡುವ ಆಸಕ್ತಿ ಇಲ್ಲದ ಮೇಲೆ ನೌಕರಿಗೆ ಏಕೆ ಸೇರಬೇಕು ಎಂದು ಪ್ರಶ್ನಿಸಿದರು. ಕಂದಾಯ, ವಿದ್ಯುತ್, ಕೃಷಿ, ರೇಷ್ಮೆ, ತೋಟಗಾರಿಕೆ, ಕೃಷಿ ಮಾರುಕಟ್ಟು ಅರಣ್ಯ, ಸಹಕಾರ ಸೇರಿದಂತೆ ಮತ್ತು ಇತರೆ ಸರ್ಕಾರಿ ಇಲಾಖೆಗಳಲ್ಲಿ ರೈತರನ್ನು ಕಡೆಗಣಿಸಲಾಗುತ್ತಿದೆ. ತಮ್ಮ ಕೆಲಸ ಕಾರ್ಯಗಳಿಗೆ ರೈತರು ಹಾಗೂ ಸಾರ್ವಜನಿಕರು ಪ್ರತಿನಿತ್ಯ ಅಲೆಯುವಂತಾಗಿದೆ. ಅಧಿಕಾರಿಗಳು ಸರಿಯಾದ ಮಾಹಿತಿ ನೀಡಿದ ಪರಿಣಾಮ ರೈತರು ಬ್ಯಾಂಕ್‌ಗಳಿಗೆ, ಸೈಬರ್ ಸೆಂಟರ್‌ಗಳಿಗೆ ಅಲೆದಾಡುವಂತಾಗಿದೆ. ಈ ಹಿನ್ನೆಲೆಯಲ್ಲಿ ರೈತರಿಗೆ ಸರಿಯಾದ ಮಾಹಿತಿ ನೀಡಿ ರೈತರ ಕೆಲಸಗಳನ್ನು ಕಾಲಮಿತಿಯೊಳಗೆ ಮಾಡಿಕೊಡಬೇಕು ಎಂದು ಆಗ್ರಹಿಸಿದರು.

# ಚುನಾವಣಾ ಪೂರ್ವ ಸಿದ್ದತೆಗಳನ್ನು ಕೈಗೊಳ್ಳಿ

**ಚಿಕ್ಕಬಳ್ಳಾಪುರ:** ಮುಂಬರುವ ಲೋಕಸಭಾ ಚುನಾವಣೆಗೆ ಅಗತ್ಯ ಪೂರ್ವ ಸಿದ್ದತಾ ಕಾರ್ಯಗಳನ್ನು ಈಗಿನಿಂದಲೇ ಮಾಡಿಕೊಳ್ಳಲು ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಅವರು ಅಧಿಕಾರಿಗಳಿಗೆ ತಿಳಿಸಿದರು.



ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಲೋಕಸಭಾ ಸಾರ್ವತ್ರಿಕ ಚುನಾವಣಾ ಪೂರ್ವ ಸಿದ್ದತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಮುಂದಿನ ದಿನಗಳಲ್ಲಿ ಲೋಕಸಭಾ ಚುನಾವಣೆಯ ನೀತಿ ಸಂಹಿತೆ ಜಾರಿಯಾಗಲಿದೆ. ನೀತಿ ಸಂಹಿತೆ ಜಾರಿಯಾದಾಗ ಪೂರ್ವ ಸಿದ್ಧತೆಗಳನ್ನು ಕೈಗೊಳ್ಳಲು ಕಷ್ಟಕರವಾಗಲಿದೆ. ಆ ಹಿನ್ನೆಯಲ್ಲಿ ಈಗಿನಿಂದಲೇ ಅಗತ್ಯ ಪೂರ್ವ ಸಿದ್ದತೆಗಳನ್ನು ಕೈಗೊಳ್ಳಬೇಕು. ಮುಖ್ಯವಾಗಿ ಚುನಾವಣೆಗೆ ಅಗತ್ಯವಿರುವ ಅಧಿಕಾರಿಗಳು ಮತ್ತು ಸಿಬ್ಬಂದಿಯ ವಿವರವನ್ನು ವೇತನ ಸೆಳೆಯಲು ಬಳಸುವ ಊಖಒಖ ತಂತ್ರಾಂಶದಿಂದ ವಿವರವನ್ನು ತೆಗೆದುಕೊಳ್ಳಬೇಕು. ಎಷ್ಟು ಸಿಬ್ಬಂದಿ, ಅಧಿಕಾರಿಗಳ ಅಗತ್ಯತೆ ಇದೆ ಎಂಬುದನ್ನು ತಾಲ್ಲೂಕುವಾರು ಮಾಹಿತಿಯನ್ನು ಪಡೆಯಬೇಕು. ಅವರೆಲ್ಲರಿಗೆ ಅಗತ್ಯವಿರುವ ತರಬೇತಿಯನ್ನು ಕಾಲೋಚಿತವಾಗಿ ನೀಡಬೇಕು. ಆ ಸಂಬಂಧ ಸಕಲ ವ್ಯವಸ್ಥೆಗಳನ್ನು ಕೈಗೊಳ್ಳಲು ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮತದಾನಕ್ಕೆ, ಮತ ಎಣಿಕೆ, ಚುನಾವಣಾ ತರಬೇತಿಗೆ, ಚೆಕ್ ಪೋಸ್ಟ್ ಗಳ ತಪಾಸಣೆ ಕರ್ತವ್ಯಕ್ಕೆ ಬೇಕಾಗಿರುವ ಅಗತ್ಯವಿರುವ ಲಘಿಕ ಮತ್ತು ಇತರ ವಸ್ತುಗಳು, ಸೇವೆಗಳನ್ನು ಪಡೆಯಲು ಟೆಂಡರ್ ಪ್ರಕ್ರಿಯೆಗಳನ್ನು ಕೈಗೊಳ್ಳಬೇಕು. ಚುನಾವಣೆಗೆ ನಿಯೋಜನೆ ಆಗುವ ಅಧಿಕಾರಿಗಳಿಗೆ ವಾಹನ ವ್ಯವಸ್ಥೆ ಕೈಗೊಳ್ಳಲು ಲಭ್ಯವಿರುವ ವಾಹನಗಳ ಮಾಹಿತಿ ಪಡೆದು ಕೆಲವು ವಾಹನಗಳನ್ನು ಚುನಾವಣಾ ಕರ್ತವ್ಯದ ದಿನಾಂಕಗಳಿಗೆ ಮೀಸಲಿಡಬೇಕು. ಜೊತೆಗೆ ಯುವ ಮತದಾರರಿಗೆ ಮತದಾನದ ಕುರಿತು ಪ್ರಾತ್ಯೇಕ್ಷಿಕೆ ನೀಡಿ ಅರಿವು ಮೂಡಿಸಲು ಎಲ್ಲಾ ತಾಲ್ಲೂಕು ಕಚೇರಿಗಳಲ್ಲಿ, ನಗರ ಸ್ಥಳೀಯಾಡಳಿತ ಸಂಸ್ಥೆಗಳಲ್ಲಿ, ತಾಲ್ಲೂಕು ಪಂಚಾಯಿತಿ ಕಚೇರಿ ಹಾಗೂ ಜಿಲ್ಲಾಡಳಿತ ಭವನದಲ್ಲಿ ಇಗಿಜ, ಗಗಿಕಂಖಿ, ಯಂತ್ರಗಳನ್ನು ಅಳವಡಿಸಿದ್ದು, ಅವುಗಳ ಸಮರ್ಪಕವಾಗಿ ಉಪಯೋಗಿಸಿ ಸಾರ್ವಜನಿಕರಿಗೆ ಅರಿವು ಮೂಡಿಸಬೇಕು. ಸರ್ಕಾರಿ ಕಚೇರಿಗಳಿಗೆ ಆಗಮಿಸುವ ಸಾರ್ವಜನಿಕರು ಈ ಯಂತ್ರಗಳನ್ನು ಬಳಸಲು ಪ್ರೇರೆಪಿಸಬೇಕು. ಚುನಾವಣಾ ನೀತಿ ಸಂಹಿತೆ ಜಾರಿಯಾದ ಕೂಡಲೆ ಜನಪ್ರತಿನಿಧಿಗಳು ಇರುವ ಜಾಹೀರಾತು ಫಲಕಗಳು, ಫ್ಲೆಕ್ಸ್ ಗಳನ್ನು ತೆರವುಗೊಳಿಸಲು ನಿಗದಿತ ಕಾಲಮಿತಿಯ ಒಳಗೆ ಅಂದು ಕ್ರಮ ಕೈಗೊಳ್ಳಬೇಕು. ಚುನಾವಣಾ ಕರ್ತವ್ಯಗಳ ವಿಡಿಯೋ ಚಿತ್ರೀಕರಣ ಮತ್ತು ಇತರ ಡಿಜಿಟಲ್ ದಾಖಲೆಗಳ ಸಂಗ್ರಹಣೆಗೆ ಅಗತ್ಯ ಕ್ರಮ ತೆಗೆದುಕೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರಕಾಶ್ ಜಿ.ಟಿ ನಿಟ್ಟಾಲಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಿ.ಎಲ್.ನಾಗೇಶ್, ಅಪರ ಜಿಲ್ಲಾಧಿಕಾರಿ ಡಾ. ಎನ್.ತಿಪ್ಪೇಸ್ವಾಮಿ, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಡಾ. ಎನ್. ಭಾಸ್ಕರ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಜರಿದ್ದರು.

# ಹಾಲಪ್ಪಗೆ ಲೋಕಸಭೆ ಟಿಕೆಟ್ ನೀಡಿ

**ಹುಳಿಯಾರು:** ಲೋಕಸಭಾ ಚುನಾವಣೆಗೆ ಕಾಂಗ್ರೆಸ್ ಪಕ್ಷದ ಮುರುಳಿಧರ ಹಾಲಪ್ಪ ಅವರಿಗೆ ಟಿಕೆಟ್ ನೀಡಬೇಕು ಎಂದು ಹುಳಿಯಾರಿನಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಮಂಗಳವಾರ ಒತ್ತಾಯಿಸಿದರು.

ಹುಳಿಯಾರು ಪರಿವೀಕ್ಷಣಾ ಮಂದಿರದಲ್ಲಿ ನೂರಕ್ಕೂ ಹೆಚ್ಚು ಕಾಂಗ್ರೆಸ್ ಕಾರ್ಯಕರ್ತರು ಸುದ್ದಿಗೋಷ್ಠಿ ನಡೆಸಿ ಜಿಲ್ಲೆಯಲ್ಲಿ ಜಾತಿಧರ್ಮದ ತಾರತಮ್ಯ ಮಾಡದೆ ಬಡವಬಲಿದ ಎಂದು ಭೇದ ತೋರದೆ ಎಲ್ಲರ ಕಷ್ಟಕಾರ್ಪಣ್ಯಗಳಿಗೆ ಸ್ಪಂಧಿಸುವ ಮೂಲಕ ಕಾಂಗ್ರೆಸ್ ಪಕ್ಷವನ್ನು ಬಲಪಡಿಸಿರುವ ಮುರುಳಿಧರ ಹಾಲಪ್ಪಗೆ ಟಿಕೆಟ್ ನೀಡಿದರೆ ಗೆಲುವು ಸುಲಭಸಾಧ್ಯ ಎಂದು ಹೇಳಿದರು.



ರಾಜ್ಯ ಸೇವಾದಳ ಸಂಘಟನಾ ಕಾರ್ಯದರ್ಶಿ ಕೃಷ್ಣೇಗೌಡ ಮಾತನಾಡಿ ಹಾಲಪ್ಪನವರು ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲೂ ತಮ್ಮ ಟ್ರಸ್ಟ್ ಮೂಲಕ ರೈತ ಪರ ಕಾರ್ಯಕ್ರಮ ಸಂಘಟಿಸಿದ್ದಾರೆ. ಕಷ್ಟ ಎಂದು ಬಂದವರಿಗೆ ಕೈಲಾದ ಸಹಾಯ ಮಾಡಿದ್ದಾರೆ. ಪೊಲೀಸ್ ಅಧಿಕಾರಿಗಳು ಸೇರಿದಂತೆ ಎಲ್ಲಾ ಅಧಿಕಾರಿಗಳಿಗೆ ದೂರವಾಣಿ ಕರೆ ಮಾಡಿ ಕಾರ್ಯಕರ್ತರ ಕೆಲಸ ಮಾಡಿಸಿಕೊಟ್ಟಿದ್ದಾರೆ. ಇಂತಹ ಸ್ಪಂಧಿಸುವ ಗುಣಉಳ್ಳವರಿಗೆ ಮೊದಲ ಆದತ್ಯೆಯಲ್ಲಿ ಟಿಕೆಟ್ ನೀಡಬೇಕು ಎಂದು ಒತ್ತಾಯಿಸಿದರು. ತಾಲ್ಲೂಕು ಸೇವಾದಳದ ಅಧ್ಯಕ್ಷ ಗೋವಿಂದರಾಜು ಅವರು ಮಾತನಾಡಿ ಉತ್ತುಬಿತ್ತಿದವರನ್ನು ಬಿಟ್ಟು ಬೇರೆಯವರು ಫಲ ಕೀಳಲು ಬಿಡುವುದು ಒಳ್ಳೆಯದಲ್ಲ. ಜಿಲ್ಲೆಯ ಮತದಾರರು ಹಾಗೂ ಕಾರ್ಯಕರ್ತರ ಅಭಿಪ್ರಾಯ ಸಂಗ್ರಹ ಮಾಡಿ ಟಿಕೆಟ್ ಕೊಡಬೇಕು. ಯಾವುದೇ ಅಧಿಕಾರ ಇಲ್ಲದಿದ್ದರೂ ಸಹ ಸ್ಪಂಧಿಸುವ ಗುಣವುಳ್ಳ ಯುವಕ ಹಾಲಪ್ಪಗೆ ಟಿಕೆಟ್ ನೀಡಿ ಗೆಲ್ಲಿಸಿದರೆ ರಾಜ್ಯದಲ್ಲೇ ತುಮಕೂರನು ಮಾದರಿ ಕ್ಷೇತ್ರವನ್ನಾಗಿ ಮಾಡುತ್ತಾರೆ ಎಂದರು.

ಕುಂಚಿಟಿಗರ ಸಂಘದ ಉಪಾಧ್ಯಕ್ಷ ಪ್ರಕಾಶ್ ಮಾತನಾಡಿ ಕೌಶಲ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿದ್ದ ಸಂದರ್ಭದಲ್ಲಿ ಅನೇಕ ನಿರುದ್ಯೋಗಿಗಳಿಗೆ ನೆರವಾಗಿ ರಾಜ್ಯಾಧ್ಯಂತ ಮನೆಮಾತಾಗಿದ್ದಾರೆ. ನಂತರದ ದಿನಗಳಲ್ಲೂ ಜಿಲ್ಲೆಯಾಧ್ಯಂತ ಕಾಲಿಗೆ ಚಕ್ರ ಕಟ್ಟಿಕೊಂಡು ತಿರುಗಿ ಪಕ್ಷ ಸಂಘಟಿಸಿದ್ದಾರೆ. ಅಲ್ಲದೆ ಮಧುಗಿರಿ, ಕೊರಟಗೆರೆ, ಚಿಕ್ಕನಾಯಕನಹಳ್ಳಿ, ಗುಬ್ಬಿ, ತುಮಕೂರಿನಲ್ಲಿ ಕುಂಚಿಟಿಗರ ಮತಗಳು ಹೆಚ್ಚಾಗಿದ್ದು ಮುರುಳಿಧರ ಹಾಲಪ್ಪಗೆ ಟಿಕೆಟ್ ನೀಡಿದರೆ ಗೆಲುವು ನಿಶ್ಚಿತ ಎಂದರು.

ಪಿಎಲ್‌ಡಿ ಬ್ಯಾಂಕು ಮಾಜಿ ಅಧ್ಯಕ್ಷ ಲಿಂಗಣ್ಣ ಮಾತನಾಡಿ ಹಾಲಪ್ಪ ಅವರು ಪಕ್ಷದಿಂದ ಪಕ್ಷಕ್ಕೆ ಅಧಿಕಾರಕ್ಕಾಗಿ ಜಿಗಿಯುವವರಲ್ಲ, ಬೇರೆ ಪಕ್ಷದ ಅಭ್ಯರ್ಥಿಗಳ ಪರ ಮತ ಹಾಕಿಸಿದವರಲ್ಲ, ಪಕ್ಷದ ಶಿಸ್ತಿನ ಸಿಪಾಯಿಯ ತರ ಎಲ್ಲಾ ಚುನಾವಣೆಯಲ್ಲೂ ಎಲ್ಲಾ ಕ್ಷೇತ್ರದಲ್ಲೂ ಗೆಲುವಿಗೆ ಶ್ರಮಿಸಿದ್ದಾರೆ. ಸಾಮಾನ್ಯ ಜನರೂ ಸಹ ನೇರವಾಗಿ ಅವರನ್ನು ಮಾತನಾಡಿಸಿ ಸಹಾಯ ಪಡೆಯಬಹುದಾಗಿದೆ. ದೂರವಾಣಿಯಲ್ಲೇ ಸಮಸ್ಯೆ ಹೇಳಿಕೊಂಡು ಪರಿಹರಿಸಿಕೊಂಡವರು ಸಾಕಷ್ಟು ಮಂದಿ ಇದ್ದಾರೆ. ಇಂತಹ ಸೇವಾಗುಣವುಳ್ಳವರಿಗೆ ಟಿಕೆಟ್ ನೀಡಿದರೆ ಚುನಾವಣೆಯಲ್ಲಿ ಓಡಾಡಲು ಕಾರ್ಯಕರ್ತರಿಗೆ ಹುಮ್ಮಸ್ಸು ಇರುತ್ತದೆ ಎಂದರು.

ಜಿಲ್ಲಾ ಸೇವಾದಳ ಅಧ್ಯಕ್ಷ ಕಿರಣ್ ಕುಮಾರ್, ಸುಂದರ ಮೂರ್ತಿ, ಕಾರ್ಮಿಕ ಘಟಕ ತಾಲ್ಲೂಕು ಅಧ್ಯಕ್ಷ ಓಂಕಾರ್ ಮೂರ್ತಿ, ಕೃಷಿಕ ಸಮಾಜದ ತಿಮ್ಮಯ್ಯ, ಮಲ್ಲೇಶಯ್ಯ, ತಾ.ಪಂ ಮಾಜಿ ಅಧ್ಯಕ್ಷರು ಶಾರದಗೌಡರು, ಮುಖಂಡರುಗಳಾದ ರಾಜಣ್ಣ ಟಿ,ಪ್ರಮೀಳಮ್ಮ, ಪುಷ್ಪಲತಾ, ದಯಾನಂದ್, ರಂಗಸ್ವಾಮಯ್ಯ, ಪ್ರಸನ್ನಕುಮಾರ್, ಪುನೀತ್ ಹಾಗೂ ಹಲವರು ಉಪಸ್ಥಿತರಿದ್ದರು.



## ಏಷ್ಯನ್ ಪ್ಯಾರಾ ಗೇಮ್ಸ್‌ನಲ್ಲಿ ವಿಜೇತ ಭಾರತೀಯರನ್ನು ಸನ್ಮಾನಿಸಿದ ಬ್ಲ್ಯಾಕ್‌ಬೆರ್ರೀಸ್

ಜಾಗತಿಕ ಭಾರತೀಯರ ಫ್ಯಾಷನ್ ಅಗತ್ಯಗಳನ್ನು ಪೂರೈಸುವ ಬಹುನಿರೀಕ್ಷಿತ ಭಾರತೀಯ ಮೆನ್ಸ್‌ವೇರ್ ಬ್ರ್ಯಾಂಡ್ ಬ್ಲಾಕ್‌ಬೆರ್ರೀಸ್ ಇತ್ತೀಚೆಗೆ ಹಾಂಗ್‌ಝೌನಲ್ಲಿ 2023 ಅಕ್ಟೋಬರ್ 22 ರಿಂದ 28 ರವರೆಗೆ ನಡೆದ 4ನೇ ಏಷ್ಯನ್ ಪ್ಯಾರಾ ಗೇಮ್ಸ್ 2022 ರಲ್ಲಿ 111 ಪದಕಗಳನ್ನು ಗೆದ್ದು ತಂದ ಭಾರತೀಯ ತಂಡವನ್ನು ಸನ್ಮಾನಿಸಿತು. ಕೀಪ್ ರೈಸಿಂಗ್ ಎಂಬ ತತ್ವಕ್ಕೆ ಪೂರಕವಾಗಿ ಬ್ಲ್ಯಾಕ್‌ಬೆರೀಸ್ 4ನೇ ಏಷ್ಯನ್ ಪ್ಯಾರಾ ಗೇಮ್ಸ್‌ನ ಅಧಿಕೃತ ಸೆರೆಮೋನಿಯಲ್ ಪಾಲುದಾರನಾಗಿ ಭಾರತೀಯ ಪ್ಯಾರಾಲಿಂಪಿಕ್ ಕಮಿಟಿ (ಪಿಸಿಐ) ಜೊತೆಗೆ ಸಹಭಾಗಿತ್ವ ಸಾಧಿಸಿತ್ತು. ಬ್ಲ್ಯಾಕ್‌ಬೆರಿ ಪ್ಯಾರಾಲಿಂಪಿಕ್ ವಿಜೇತರಿಗೆ ಸನ್ಮಾನಿಸುವ ಈ ಸಮಯದಲ್ಲಿ ಭಾರತದ ಪ್ಯಾರಾ ಅಥ್ಲೆಟಿಕ್ಸ್ ಕೋಚ್ ಶ್ರೀ ಸತ್ಯನಾರಾಯಣ ಹಾಜರಿದ್ದರು. ದೇಶದ ಪ್ಯಾರಾ ಕ್ರೀಡೆಗಳ ಪ್ರಗತಿಯಲ್ಲಿ ಶ್ರೀ ಸತ್ಯನಾರಾಯಣ ಪ್ರಮುಖ ವ್ಯಕ್ತಿಯಾಗಿದ್ದಾರೆ. ಭಾರತೀಯ ಪ್ಯಾರಾಲಿಂಪಿಕ್ ಸಮಿತಿ (ಪಿಸಿಐ) ಸಹಭಾಗಿತ್ವದಲ್ಲಿ ಅಧಿಕೃತ ಸೆರೆಮೋನಿಯಲ್ ಪಾಲುದಾರನಾಗಿತ್ತು ಮತ್ತು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ ಭಾರತೀಯ ತಂಡಕ್ಕೆ ಉಡುಪನ್ನು ಸಿದ್ಧಪಡಿಸಿಕೊಟ್ಟಿತ್ತು. ಎಲ್ಲ ಗಡಿಗಳನ್ನು ಮೀರಿ, ಎಲ್ಲ ಅಡೆತಡೆಗಳನ್ನೂ ಮೀರಿ ನಿರಂತರವಾಗಿ ಸಾಧನೆ ಮಾಡುವ ಪ್ಯಾರಾ ಅಥ್ಲೀಟ್‌ಗಳ ಉತ್ಸಾಹವನ್ನು ಬ್ಲ್ಯಾಕ್‌ಬೆರಿ ಕೂಡಾ ಪ್ರತಿನಿಧಿಸುತ್ತದೆ. ಭಾರತೀಯ ತಂಡಕ್ಕೆ ಸೆರೆಮೋನಿಯಲ್ ಸೂಟ್ ಅನ್ನು ರೂಪಿಸುವುದು ಅತ್ಯಂತ ಹೆಮ್ಮೆಯ ಸಂಗತಿಯಾಗಿತ್ತು. ಈ ಸಹಭಾಗಿತ್ವವನ್ನು ಇನ್ನೂ ಮುಂದಕ್ಕೆ ಕೊಂಡೊಯ್ದ ಬ್ರ್ಯಾಂಡ್, 29 ಚಿನ್ನ, 31 ಬೆಳ್ಳಿ ಮತ್ತು 51 ಕಂಚು ಸೇರಿದಂತೆ ಒಟ್ಟಾರೆ 111 ಪದಕಗಳನ್ನು ಗೆದ್ದವರನ್ನು ಸನ್ಮಾನಿಸಿತು. ಈ ವಿಜೇತರ ಬಗ್ಗೆ ನಾವು ತುಂಬಾ ಹೆಮ್ಮೆ ಹೊಂದಿದ್ದೇವೆ. ಇವರು ಎಲ್ಲ ಅಡೆ ತಡೆಗಳನ್ನು ಮೀರಿ ಜಯ ಸಾಧಿಸಿದ್ದಾರೆ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ದೇಶಕ್ಕೆ ಖ್ಯಾತಿ ತಂದಿದ್ದಾರೆ. ಅವರ ಕಠಿಣ ಪರಿಶ್ರಮ, ಬದ್ಧತೆ ಮತ್ತು ಯಶಸ್ಸನ್ನು ಸಾಧಿಸಲು ಅವರ ಉತ್ಸಾಹವು ಇಡೀ ವಿಶ್ವದ ಜನರಿಗೆ ಸ್ಫೂರ್ತಿಯನ್ನು ನೀಡಿದೆ.

## ಅಕ್ಕಿ ರೊಟ್ಟಿ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಅಕ್ಕಿ ಹಿಟ್ಟು- ಒಂದು ಕಪ್, ಈರುಳ್ಳಿ- ಹಚ್ಚಿದ್ದು ಅರ್ಧ ಕಪ್, ಮೆಣಸಿನಕಾಯಿ- ಮೂರು, ತೆಂಗಿನಕಾಯಿ ತುರಿ- ಕಾಲು ಕಪ್, ಕೊತ್ತಂಬರಿ ಸೊಪ್ಪು- ಸ್ವಲ್ಪ, ಉಪ್ಪು- ರುಚಿಗೆ ತಕ್ಕಷ್ಟು

### ಮಾಡುವ ವಿಧಾನ

ಈರುಳ್ಳಿ ಮತ್ತು ಮೆಣಸಿನ ಕಾಯಿಯನ್ನು ಚಿಕ್ಕದಾಗಿ ಹಚ್ಚಿಟ್ಟುಕೊಂಡು ಬಳಿಕ ಕಾಯಿತುರಿಯನ್ನು ಸಿದ್ಧ ಮಾಡಿಕೊಳ್ಳಬೇಕು. ಇದಾದ ನಂತರ ಅಗಲವಾದ ಪಾತ್ರೆಯನ್ನು ತೆಗೆದುಕೊಂಡು ಅದರಲ್ಲಿ ಅಕ್ಕಿ ಹಿಟ್ಟು, ಉಪ್ಪು, ಈರುಳ್ಳಿ, ಮೆಣಸಿನಕಾಯಿ, ಕೊತ್ತಂಬರಿ ಸೊಪ್ಪು ಹಾಕಿ ಸ್ವಲ್ಪ ಸ್ವಲ್ಪವೇ ನೀರು ಹಾಕುತ್ತಾ ಕಲೆಸಬೇಕು. ಅದು ಚಪಾತಿ ಹಿಟ್ಟಿನಂತೆ ಕಲೆಸಿಕೊಂಡು ಬಳಿಕ ಸ್ವಲ್ಪ ಹೊತ್ತು ಹಾಗೆಯೇ ಬಿಡಬೇಕು. ಇನ್ನೊಂದೆಡೆ ಕಾವಲಿಯನ್ನು ಒಲೆಯ ಮೇಲಿಟ್ಟು ಅದು ಕಾದ ನಂತರ ಒಂದು ಚಮಚ ಎಣ್ಣೆಯನ್ನು ಕಾವಲಿಗೆ ಹಚ್ಚಬೇಕು. ಬಳಿಕ ಮುಷ್ಟಿಯಷ್ಟು ಹಿಟ್ಟನ್ನು ತೆಗೆದುಕೊಂಡು ಉಂಡೆ ಮಾಡಿ ಕಾವಲಿ ಮೇಲಿಟ್ಟು ಅಗಲವಾಗಿ ತಟ್ಟಿ ಎಣ್ಣೆ ಹಾಕಿ ಎರಡು ಬದಿಯೂ ಚೆನ್ನಾಗಿ ಬೇಯಿಸಿ ತೆಗೆಯಬೇಕು. ಹೀಗೆ ಮಾಡಿದರೆ ಖಾರ ರೊಟ್ಟಿ ತಯಾರಾದಂತೆಯೇ.. ಚಟ್ನಿಯೊಂದಿಗೆ ಸೇವಿಸಿದರೆ ಮಜಾ ಎನಿಸುತ್ತದೆ.

# ಬಸ್ತಾರ್: ದಿ ನಕ್ಸಲ್ ಸ್ಟೋರಿ ಟೀಸರ್ ಬಿಡುಗಡೆ



2023ರಲ್ಲಿ ತೆರೆಕಂಡ ?ದಿ ಕೇರಳ ಸ್ಟೋರಿ ಚಿತ್ರದ ಮೂಲಕ ದೇಶದ ಗಮನ ಸೆಳೆದ ನಿರ್ದೇಶಕ ಸುದೀಪ್ತೋ ಸೇನ್ ಇದೀಗ ಮತ್ತೊಂದು ನೈಜ ಕಥೆಯನ್ನು ತೆರೆ ಮೇಲೆ ತರಲು ಹೊರಟಿದ್ದಾರೆ. ದಿ ಕೇರಳ ಸ್ಟೋರಿ ಮೂಲಕ ಮತಾಂತರದ ಸಮಸ್ಯೆಯನ್ನು ಬಿಚ್ಚಿಟ್ಟಿದ್ದ ಅವರು ಈ ಬಾರಿ ನಕ್ಸಲ್ ಅಟ್ಟಹಾಸದೆಡೆಗೆ ಬೆಳಕು ಚೆಲ್ಲಲಿದ್ದಾರೆ. 'ಬಸ್ತಾರ್: ದಿ ನಕ್ಸಲ್ ಸ್ಟೋರಿ' ಚಿತ್ರದ ಮೂಲಕ ಅವರು ಮತ್ತೊಂದು ರಕ್ತಸಿಕ್ತ ಅಧ್ಯಾಯವನ್ನು ಪ್ರೇಕ್ಷಕರ ಮುಂದಿಡಲಿದ್ದಾರೆ. ಸದ್ಯ ಚಿತ್ರ ಟೀಸರ್ ಬಿಡುಗಡೆಯಾಗಿ ಗಮನ ಸೆಳೆಯುತ್ತಿದೆ. ದಿ ಕೇರಳ ಸ್ಟೋರಿ ಸಿನಿಮಾದಲ್ಲಿ ಕೆಲಸ ಮಾಡಿದ್ದ ಪ್ರಮುಖರು ಈ ಚಿತ್ರದಲ್ಲಿಯೂ ಮುಂದುವರಿದಿದ್ದಾರೆ. ನಿರ್ದೇಶಕ ಸುದೀಪ್ತೋ ಸೇನ್ ಜತೆಗೆ ನಿರ್ಮಾಪಕ ಅಮೃತ್‌ಲಾಲ್ ಶಾ ಮತ್ತು ನಾಯಕಿ ಅದಾ ಶರ್ಮಾ ಮತ್ತೆ ಒಂದಾಗಿದ್ದಾರೆ. ಅದಾ ಶರ್ಮಾ ಟೀಸರ್ ಅನ್ನು ತಮ್ಮ ಎಕ್ಸ್ ಖಾತೆಯ ಮೂಲಕ ಹಂಚಿಕೊಂಡಿದ್ದಾರೆ. ಟೀಸರ್‌ನಲ್ಲಿ ಅವರು ಖಾಕಿ ಪ್ಯಾಂಟ್, ಕಂದು ಟೀ ಶರ್ಟ್ ಮತ್ತು ತಲೆಗೆ ಸ್ಕಾರ್ಫ್ ಧರಿಸಿದ್ದು ಕಂಡು ಬಂದಿದ್ದು, ನಕ್ಸಲರ ವಿರುದ್ಧ ಯುದ್ಧ ಮಾಡುತ್ತಿರುವ ಐಪಿಎಸ್ ಅಧಿಕಾರಿ ಎಂದು ಪರಿಚಯಿಸಿಕೊಂಡಿದ್ದಾರೆ. ಛತ್ತೀಸ್‌ಗಢದ ಬಸ್ತಾರ್ ಜಿಲ್ಲೆಯಲ್ಲಿನ ನಕ್ಸಲ್ ಚಟುವಟಿಕೆಯ ಸುತ್ತ ಕಥೆ ಸಾಗಲಿದೆ ಎನ್ನುವ ಸೂಚನೆ ಟೀಸರ್ ಮೂಲಕ ಸಿಕ್ಕಿದೆ. ಜತೆಗೆ ಜೆಎನ್‌ಯು ಬಗ್ಗೆಯೂ ಪ್ರಸ್ತಾವಿಸಲಾಗಿದೆ. ಮುಗ್ಧ ಜನರ ರಕ್ತದ ಕೆಂಪು ಬಣ್ಣದ ಕಥೆ! ಯಾರೂ ಇದುವರೆಗೆ ಹೇಳದ ಕಥೆ ಇದು ಎಂದು ಅವರು ಬರೆದುಕೊಂಡಿದ್ದಾರೆ. ಅದಾ ಶರ್ಮಾ ಈ ಚಿತ್ರದಲ್ಲಿ ಐ.ಜಿ.ನೀರಜಾ ಮಾಧವನ್ ಪಾತ್ರವನ್ನು ನಿರ್ವಹಿಸುತ್ತಿದ್ದಾರೆ. ಈಗಾಗಲೇ ಪೋಸ್ಟರ್ ಮತ್ತು ಟೀಸರ್‌ನಿಂದ ಗಮನ ಸೆಳೆದಿರುವ ಈ ಚಿತ್ರ ಮಾರ್ಚ್ 15ರಂದು ಬಿಡುಗಡೆಯಾಗಲಿದೆ.




# ಬ್ಲಾಕ್ ಸಾಲ್ಟ್ ಬಗ್ಗೆ ಗೊತ್ತೇ?

### ಹೆಲ್ತ್ ಟಿಪ್ಸ್



ಅತಿಯಾಗಿ ಉಪ್ಪು ಸೇವನೆ ಮಾಡುವುದು ಸಾಕಷ್ಟು ಆರೋಗ್ಯ ಸಮಸ್ಯೆಗಳಿಗೆ ಕಾರಣವಾಗುತ್ತದೆ. ಬಿಳಿ ಉಪ್ಪನ್ನು ಬಳಸುವವರು ಬಹಳ ಮಂದಿ ಇದ್ದಾರೆ. ಆದರೆ ಬಿಳಿ ಉಪ್ಪಿಗಿಂತ ಬ್ಲಾಕ್ ಸಾಲ್ಟ್ ಒಳ್ಳೆಯದು ಅನ್ನೋದನ್ನು ನಾವೆಲ್ಲ ಕೇಳಿದ್ದೇವೆ. ಬ್ಲಾಕ್ ಸಾಲ್ಟ್ ಕೂಡ ಅತಿಯಾಗಿ ಸೇವನೆ ಮಾಡಿದರೆ ಹಾನಿಕಾರಕ.

ಕಪ್ಪು ಉಪ್ಪನ್ನು ಹೆಚ್ಚಿನ ಪ್ರಮಾಣದಲ್ಲಿ ಸೇವಿಸಿದರೆ ಅದು ದೇಹದಲ್ಲಿ ಸೋಡಿಯಂ ಪ್ರಮಾಣವನ್ನು ಹೆಚ್ಚಿಸುತ್ತದೆ. ದೇಹದಲ್ಲಿ ನೀರನ್ನು ಹಿಡಿದಿಟ್ಟುಕೊಳ್ಳುವ ಅಪಾಯ ಕೂಡ ಹೆಚ್ಚಾಗುತ್ತದೆ. ಇದು ಅಧಿಕ ಬಿಪಿಗೂ ಕಾರಣವಾಗಬಹುದು.

ಕಪ್ಪು ಉಪ್ಪು ಕೂಡ ಫ್ಲೋರೈಡ್ ಮತ್ತು ಇತರ ರಾಸಾಯನಿಕಗಳನ್ನು ಒಳಗೊಂಡಿರುತ್ತದೆ, ಇದು ದೇಹದ ಕಾರ್ಯಗಳ ಮೇಲೆ ಅನೇಕ ರೀತಿಯಲ್ಲಿ ಪರಿಣಾಮ ಬೀರುತ್ತದೆ. ಅಂತಹ ಪರಿಸ್ಥಿತಿಯಲ್ಲಿ, ಅಧಿಕ ಬಿಪಿ ರೋಗಿಯು ಕಪ್ಪು ಉಪ್ಪನ್ನು ತಿನ್ನುವುದನ್ನು ತಪ್ಪಿಸಬೇಕು.

ಕಪ್ಪು ಉಪ್ಪು ಅಯೋಡಿನ್ ಅನ್ನು ಹೊಂದಿರುವುದಿಲ್ಲ, ಇದರಿಂದಾಗಿ ಥೈರಾಯ್ಡ್ ಅಪಾಯವು ಹೆಚ್ಚಾಗುತ್ತದೆ. ಕಪ್ಪು ಉಪ್ಪಿನ ಬದಲಿಗೆ ಸ್ವಲ್ಪ ಅಯೋಡಿನ್ ಉಪ್ಪನ್ನು ತೆಗೆದುಕೊಳ್ಳಬೇಕು.

ಬ್ಲಾಕ್ ಸಾಲ್ಟ್‌ನಲ್ಲಿ ಫ್ಲೋರೈಡ್ ಮತ್ತು ಇತರ ರಾಸಾಯನಿಕಗಳು ಹೇರಳವಾಗಿರುತ್ತವೆ. ಇದು ದೇಹದ ಕಾರ್ಯನಿರ್ವಹಣೆಯ ಮೇಲೆ ಪರಿಣಾಮ ಬೀರುತ್ತದೆ. ಕಪ್ಪು ಉಪ್ಪಿನ ಅತಿಯಾದ ಬಳಕೆ ಮೂತ್ರಪಿಂಡಕ್ಕೂ ಹಾನಿ ಮಾಡಬಹುದು.

ಮೂತ್ರಪಿಂಡದಲ್ಲಿ ಕಲ್ಲುಗಳು ರೂಪುಗೊಳ್ಳುವ ಸಾಧ್ಯತೆ ಇರುತ್ತದೆ. ಇದು ಹೊಟ್ಟೆಯನ್ನು ಶುದ್ಧೀಕರಿಸುವ ವಿರೇಚಕಗಳನ್ನು ಹೊಂದಿರುತ್ತದೆ. ಹಾಗಾಗಿ ಬ್ಲಾಕ್ ಸಾಲ್ಟ್ ಅನ್ನು ಅತಿಯಾಗಿ ಸೇವಿಸುವುದರಿಂದ ಮೆಟಾಬಾಲಿಸಂ ಅತಿಯಾಗಿ ಕ್ರಿಯಾಶೀಲವಾಗುತ್ತದೆ.

# 24 ಗಂಟೆಗಳ ಟೊಯೊಟಾ ಹ್ಯಾಕಥಾನ್ - ರಸ್ತೆ ಸುರಕ್ಷತಾ ಕಾರ್ಯಕ್ರಮ




ರಸ್ತೆ ಸುರಕ್ಷತೆಯನ್ನು ಬಲಪಡಿಸಲು ರಸ್ತೆ ಸುರಕ್ಷತಾ ಮಾಸದ (ಜನವರಿ 18 ರಿಂದ ಫೆಬ್ರವರಿ 17, 2024) ಸಂದರ್ಭದಲ್ಲಿ ಟೊಯೊಟಾ ಕಿರ್ಲೋಸ್ಕರ್ ಮೋಟಾರ್ (ಟಿಕೆಎಂ) ಇಂದು ಬೆಂಗಳೂರಿನ ಆರ್ ವಿ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಅಂಡ್ ಮ್ಯಾನೇಜ್ ಮೆಂಟ್ ನಲ್ಲಿ ನಡೆದ 24 ಗಂಟೆಗಳ ಟೊಯೊಟಾ ಹ್ಯಾಕಥಾನ್ ನ ಯಶಸ್ವಿಯಾಗಿ ಆಯೋಜಿಸಿದೆ.

24 ಗಂಟೆಗಳ ಹ್ಯಾಕಥಾನ್ ನ ವೇದಿಕೆ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಮುಖ್ಯ ಅತಿಥಿಗಳಾದ - ಎಚ್.ಸಿ.ಬಾಲಕೃಷ್ಣ, ಮಾಗಡಿ ಶಾಸಕ ಮತ್ತು ಕರ್ನಾಟಕ ರಸ್ತೆ ಅಭಿವೃದ್ಧಿ ನಿಯಮಿತದ ಅಧ್ಯಕ್ಷರು ವಹಿಸಿದ್ದರು. ಶರತ್ ಬಚ್ಚೇಗೌಡ, ಅಧ್ಯಕ್ಷರು- ಕರ್ನಾಟಕ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತ (ಕಿಯೋನಿಕ್ಸ್), ಗೌರವಾನ್ವಿತ ಅತಿಥಿ ಕರ್ನಾಟಕ ಸರ್ಕಾರದ ಸಾರಿಗೆ ಇಲಾಖೆಯ ರಸ್ತೆ ಸುರಕ್ಷತಾ ಕೋಶದ ಹೆಚ್ಚುವರಿ ಆಯುಕ್ತ ಮತ್ತು ನಿರ್ದೇಶಕರಾದ ಜೆ.ಪುರುಷೋತ್ತಮ್, ವಿಶೇಷ ಆಹ್ವಾನಿತರಾಗಿ ಕಾನ್ಸೆರೊ ಗ್ಲೋಬಲ್ ನ ಕಾರ್ಯಾಚರಣೆಗಳ ಉಪಾಧ್ಯಕ್ಷ ಮತ್ತು ಸಹಾಯಕ ಮುಖ್ಯ ಸಂಚಾರ ವಾರ್ಡನ್ ಬ್ರಿಜೇಶ್ ಅಗರ್ವಾಲ್, ಟಿಕೆಎಂನ ಹಿರಿಯ ಕಾರ್ಯನಿರ್ವಾಹಕರಾದ ಸುದೀಪ್ ಎಸ್ ಹಾಗೂ ಹಲವು ಗಣ್ಯರು ಉಪಸ್ಥಿತರಿದ್ದರು. ಶಿಕ್ಷಣ ಮತ್ತು ರಸ್ತೆ ಸುರಕ್ಷತೆ ಟಿಕೆಎಂ ಸಿಎಸ್‌ಆರ್ ನ ಪ್ರಮುಖ ಸ್ತಂಭಗಳಲ್ಲಿ ಒಂದಾಗಿದೆ. ಈ ಕಾರ್ಯಕ್ರಮದ ಮೂಲಕ ಟಿಕೆಎಂ ಬೆಂಗಳೂರು ಮೂಲದ ವಿವಿಧ ಖಾಸಗಿ ಮತ್ತು ಸರ್ಕಾರಿ ಶಾಲೆಗಳು ಮತ್ತು ಕಾಲೇಜುಗಳ ವಿದ್ಯಾರ್ಥಿಗಳ (9 ರಿಂದ 12 ನೇ ತರಗತಿ) ಸೃಜನಶೀಲ ಮನಸ್ಸನ್ನು ಹುರಿದುಂಬಿಸಲು ಟೊಯೊಟಾ ಹ್ಯಾಕಥಾನ್ ಒಂದು ಕ್ರಿಯಾತ್ಮಕ ವೇದಿಕೆಯನ್ನು ಒದಗಿಸಿದೆ. ಟೊಯೊಟಾ ಹ್ಯಾಕಥಾನ್ ಬಗ್ಗೆ ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡ ಮಾಗಡಿ ಶಾಸಕ ಹಾಗೂ ಕರ್ನಾಟಕ ರಸ್ತೆ ಅಭಿವೃದ್ಧಿ ನಿಯಮಿತದ ಅಧ್ಯಕ್ಷ ಶ್ರೀ ಎಚ್.ಸಿ.ಬಾಲಕೃಷ್ಣ ಮಾತನಾಡಿ, ರಸ್ತೆ ಅಪಘಾತಗಳ ಮೂಲ ಕಾರಣಗಳನ್ನು ಸಮಗ್ರವಾಗಿ ಗುರುತಿಸುವುದು ಮತ್ತು ನಿಭಾಯಿಸುವುದು ಬಹಳ ಮುಖ್ಯ. ಯುವಕರು ಬದಲಾವಣೆ ಮಾಡುವವರಾಗಿ ನಿರ್ಣಾಯಕ ಪಾತ್ರ ವಹಿಸಿ ರಸ್ತೆ ಸುರಕ್ಷತಾ ಚಾಂಪಿಯನ್ ಆಗಬಹುದು. ಟೊಯೊಟಾ ಹ್ಯಾಕಥಾನ್ ನಲ್ಲಿ ಭಾಗವಹಿಸುವ ಶಾಲೆಗಳು ಮತ್ತು ಕಾಲೇಜುಗಳಲ್ಲಿ ವಿದ್ಯಾರ್ಥಿಗಳು ಅಭಿವೃದ್ಧಿಪಡಿಸಿದ ಕಲ್ಪನೆ ಮತ್ತು ಮೂಲಮಾದರಿಗಳ ಮೂಲಕ ಪ್ರದರ್ಶಿಸಲಾದ ನವೀನ ಮನೋಭಾವ ಮತ್ತು ಸಮರ್ಪಣೆಯಿಂದ ನಾನು ನಿಜವಾಗಿಯೂ ಪ್ರಭಾವಿತನಾಗಿದ್ದೇನೆ ಎಂದರು. ಟೊಯೊಟಾ ಹ್ಯಾಕಥಾನ್ ನಲ್ಲಿ ಉಪಸ್ಥಿತರಿದ್ದ ಕರ್ನಾಟಕ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತ (ಕಿಯೋನಿಕ್ಸ್) ಅಧ್ಯಕ್ಷರಾದ ಶರತ್ ಬಚ್ಚೇಗೌಡ ರವರು ಮಾತನಾಡಿ, ಟೊಯೊಟಾ ಹ್ಯಾಕಥಾನ್ ನಂತಹ ಉತ್ತಮವಾಗಿ ವಿನ್ಯಾಸಗೊಳಿಸಲಾದ ಕಾರ್ಯಕ್ರಮದ ಮೂಲಕ ರಸ್ತೆ ಸುರಕ್ಷತೆಯನ್ನು ಉತ್ತೇಜಿಸುವಲ್ಲಿ ಟೊಯೊಟಾ ಕಿರ್ಲೋಸ್ಕರ್ ಮೋಟಾರ್ ಅವರ ಪೂರ್ವಭಾವಿ ಪ್ರಯತ್ನಗಳನ್ನು ನಾವು ಶ್ಲಾಘಿಸುತ್ತೇವೆ ಎಂದರು.

**ಸ್ಪರ್ಧಿಸಿದ 10 ತಂಡಗಳಲ್ಲಿ ದೆಹಲಿ ಪಬ್ಲಿಕ್ ಸ್ಕೂಲ್ (ಮೊದಲ ಬಹುಮಾನ ವಿಜೇತರು:** ದೇವ್ ವತ್ಸ ಮತ್ತು ಇಶಾನ್ ಗೋಡ್ ಬೋಲ್) - ಬೆಂಗಳೂರು; ದೆಹಲಿ ಪಬ್ಲಿಕ್ ಸ್ಕೂಲ್ (ದ್ವಿತೀಯ ಬಹುಮಾನ ವಿಜೇತರು - ಅನಯ್ ಲೋಹಾನಿ ಮತ್ತು ಅಂಗದ್ ಎಸ್.ಕೆ) - ಬೆಂಗಳೂರು; ಮತ್ತು ಕರ್ನಾಟಕ ಪಬ್ಲಿಕ್ ಸ್ಕೂಲ್ (ತೃತೀಯ ಬಹುಮಾನ ವಿಜೇತರು - ಅಪೂರ್ವ ಎ.ಎಸ್ ಮತ್ತು ಆಶಾ ಎ.ಆರ್) - ಬೆಂಗಳೂರು. ಸಮಾಧಾನಕರ ಬಹುಮಾನವನ್ನು ಬೆಂಗಳೂರಿನ ಸೌಂದರ್ಯ ಸೆಂಟ್ರಲ್ ಶಾಲೆ (ಪ್ರಥಮ, ಅಭಿಷೇಕ್ ಗೌಡ ಬಿ.ಎಸ್ ಮತ್ತು ಅಮೋಘ್ ರಾವ್), ಬೆಂಗಳೂರಿನ ಪೋದಾರ್ ಇಂಟರ್ನ್ಯಾಷನಲ್ ಶಾಲೆ (ದ್ವಿತೀಯ), ನರೇಶ್ ಪಟೇಲ್ ಮತ್ತು ಕುಶಾಲ್ ವಿ ಅವರು ಪಡೆದುಕೊಂಡರು.

# ಲೋಳೆಸರದಲ್ಲಿದೆ ಸೌಂದರ್ಯ

### ಬ್ಯೂಟಿ ಟಿಪ್ಸ್

ಲೋಳೆಸರ ಇದು ಹಳ್ಳಿಗಳ ಮನೆಯಂಗಳದಲ್ಲಿ ನಳನಳಿಸುವ ಬಹು ಉಪಯೋಗಿ ಸಸ್ಯ ಪ್ರಬೇಧ. ಲೋಳೆ ಇರುವ ಹಸಿರು ಬಣ್ಣದ ಎಲೆ ಹೊಂದಿರುವ ಇದನ್ನು ಅಲೋವೆರಾ ಎಂದೂ ಕರೆಯಲ್ಪಡುತ್ತಿದ್ದು, ಆಯುರ್ವೇದದಲ್ಲಿ ಇದರ ಬಳಕೆ ವ್ಯಾಪಕವಾಗಿದೆ. ಗಾಯ, ಸುಟ್ಟ ಗಾಯ ಮತ್ತು ಚರ್ಮದ ಸೋಂಕಿಗೆ ಬಳಸಲಾಗುವ ಅಲೋವೆರಾವನ್ನು ಸೌಂದರ್ಯವರ್ಧಕವಾಗಿಯೂ ಬಳಸುತ್ತಾರೆ. ಆಲೋವೆರಾದಲ್ಲಿರುವ ಆಯಂಟಿ ಆಕ್ಸಿಡೆಂಟ್ ಗಳು ದೇಹದಲ್ಲಿರುವ ವಿಷವನ್ನು ಹೊರಹಾಕುವ ಜೊತೆಗೆ ದೇಹದಲ್ಲಿನ ಹಾನಿಗೊಳಗಾಗಿರುವ ಜೀವಕೋಶಗಳು ಮತ್ತು ಅಂಗಾಂಶಗಳನ್ನು ಸರಿಪಡಿಸುತ್ತದೆ. ಆಲೋವೆರಾದ ಕ್ರೀಮ್ ಅನ್ನು ಮುಖದ ಮೇಲೆ ಲೇಪಿಸುವುದರಿಂದ ಮುಖದ ಮೇಲಿನ ಕಪ್ಪು ಕಲೆಗಳು ಮಾಯವಾಗಿ ಮುಖದ ಕಾಂತಿ ವೃದ್ದಿಸುತ್ತದೆ. ಅಲ್ಲದೇ ಇದರ ಜ್ಯೂಸ್ ಸೇವಿಸುವುದರಿಂದ ದೇಹಕ್ಕೆ ಅಗತ್ಯವಿರುವ ಅಗಾಧ ಪ್ರಮಾಣದ ಪೌಷ್ಟಿಕಾಂಶ, ಮಿನರಲ್ ಮತ್ತು ವಿಟಮಿನ್ ಗಳನ್ನು ಒದಗಿಸುತ್ತದೆ. ಈ ಜ್ಯೂಸ್ ನಲ್ಲಿ ಅಧಿಕ ಪ್ರಮಾಣದ ಅಮಿನೋ ಆಯಸಿಡ್ ಮತ್ತು ಫ್ಯಾಟಿ ಆಯಸಿಡ್ ಇದ್ದು, ಇದು ಆರೋಗ್ಯಕ್ಕೆ ಒಳ್ಳೆಯದು ಎಂಬ ಅಭಿಪ್ರಾಯ ವೈದ್ಯರದ್ದು.





ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಸಮಾಧಾನದಿಂದ ವರ್ತಿಸಿ, ನಿಮ್ಮ ಶ್ರಮಕ್ಕೆ ತಕ್ಕ ಫಲ, ಆರೋಗ್ಯದಲ್ಲಿ ಸಮಸ್ಯೆ, ಕೆಲಸ ಕಾರ್ಯಗಳಲ್ಲಿ ಜಯ.

**ವೃಷಭ:** ಪರರಿಂದ ತೊಂದರೆ ಎಚ್ಚರ, ಕುಲದೇವರ ಆರಾಧನೆ ಮಾಡಿ,ಸಾಮಾಜಿಕ ಕಾರ್ಯಗಳಲ್ಲಿ ಭಾಗಿ

**ಮಿಥುನ:** ವಿದ್ಯಾಭ್ಯಾಸದಲ್ಲಿ ಪ್ರಗತಿ ಸಾಧಿಸುವಿರಿ, ಹಿರಿಯರಿಗೆ ಗೌರವ, ಕೊಟ್ಟ ಹಣ ಬರದೆ ಹೋಗುವ ಸಾಧ್ಯತೆ.

**ಕಟಕ:** ವಿವೇಚನೆ ಕಳೆದುಕೊಳ್ಳಬೇಡಿ, ಮನಕ್ಲೇಶ, ಅಪರಿಚಿತರ ವಿಷಯದಲ್ಲಿ ಜಾಗ್ರತಿ

**ಸಿಂಹ:** ಚಂಚಲ ಸ್ವಭಾವ, ವೈರಿಗಳಿಂದ ದೂರವಿರಿ, ಅಕಾಲ ಭೋಜನ, ಬಡ ರೋಗಿಗಳಿಗೆ ಕೈಲಾದ ಸೇವೆ ಮಾಡಿ.

**ಕನ್ಯಾ:** ಸ್ನೇಹಿತರಿಂದ ಸಹಾಯ, ದಾಂಪತ್ಯದಲ್ಲಿ ಪ್ರೀತಿ, ಮನಶಾಂತಿ, ಶತ್ರು ಭಾದೆ, ಮಕ್ಕಳ ಭಾವನೆಗೆ ಸ್ಪಂದಿಸುವಿರಿ.

**ತುಲಾ:** ಕುಟುಂಬ ಸೌಖ್ಯ, ಮಾತೃವಿನಿಂದ ಧನಪ್ರಾಪ್ತಿ, ಪರಸ್ಥಳವಾಸ, ತೀರ್ಥಕ್ಷೇತ್ರ ದರ್ಶನ, ಸುಖ ಭೋಜನ, ಸ್ತ್ರೀ ಲಾಭ.

**ವೃಶ್ಚಿಕ:** ಆರ್ಥಿಕ ವ್ಯವಹಾರಗಳಲ್ಲಿ ನಷ್ಟ, ಅನಿರೀಕ್ಷಿತ ಖರ್ಚು, ಮಿತ್ರರಲ್ಲಿ ದ್ವೇಷ, ಶರೀರದಲ್ಲಿ ಅಲಸ್ಯ, ಇಲ್ಲಸಲ್ಲದ ತಕರಾರು.

**ಧನಸ್ಸು:** ಸ್ತ್ರೀ ಲಾಭ, ಕೋಪ ಜಾಸ್ತಿ, ಅತಿಯಾದ ನಿದ್ರೆ, ಯತ್ನ ಕಾರ್ಯಾನುಕೂಲ, ಮಂಗಳ ಕಾರ್ಯಗಳಲ್ಲಿ ಭಾಗಿ, ದಾಂಪತ್ಯದಲ್ಲಿ ಅನ್ಯೂನ್ಯತೆ.

**ಮಕರ:** ಅಧಿಕಾರಿಗಳಿಂದ ಕಿರಿಕಿರಿ, ಮಾನಸಿಕ ವೇದನೆ, ವಿದೇಶ ಪ್ರಯಾಣ, ಸಾಲ ಮಾಡುವ ಸಾಧ್ಯತೆ

**ಕುಂಭ:** ನೂತನ ವ್ಯವಹಾರಗಳಲ್ಲಿ ಆಸಕ್ತಿ, ರಾಜ ವಿರೋಧ, ವಾಹನ ಯೋಗ, ಪ್ರಭಾವಿ ವ್ಯಕ್ತಿಗಳ ಪರಿಚಯದಿಂದ ಲಾಭ.

**ಮೀನ:** ಅಧಿಕ ಧನವ್ಯಯ, ವಸ್ತ್ರಾಭರಣ ಖರೀದಿ, ವಾದ ವಿವಾದಗಳಿಂದ ದೂರವಿರಿ.

# ಪ್ರೇಮಿಗಳ ವಾರ

ಫೆಬ್ರವರಿ ತಿಂಗಳು ಬಂದಿದೆ. ಇನ್ನೊಂದು ವಾರ ಪ್ರೇಮಿಗಳ ವಾರವೆಂದು ಆಚರಿಸಲಾಗುತ್ತದೆ. ಈ ಸಮಯದಲ್ಲಿ ಗಂಡು-ಹೆಣ್ಣು ತಮ್ಮ ಸಂಗಾತಿಗೆ ಪ್ರೇಮ ನಿವೇದನೆ ಮಾಡಿಕೊಳ್ಳುತ್ತಾರೆ, ತಾವು ಇಷ್ಟಪಡುವವರಿಗೆ ಸರ್ಪ್ರೈಸ್‌ಗಳನ್ನು ನೀಡುತ್ತಾರೆ. ರೋಸ್ ಡೇಯಿಂದ ಆರಂಭಿಸಿ ಪ್ರೇಮಿಗಳ ದಿನದವರೆಗೆ ಪ್ರತಿ ದಿನವೂ ವಿಭಿನ್ನ ದಿನವಾಗಿ ಆಚರಿಸಲಾಗುತ್ತದೆ. ಈ ಸಮಯದಲ್ಲಿ ನಿಮ್ಮ ಸಂಗಾತಿಗೆ ಇಷ್ಟವಾದ ಸಿಹಿತಿಂಡಿಗಳನ್ನು ನೀಡಿ ಇಂಪ್ರೆಸ್ ಮಾಡಬಹುದು.

ಪ್ರೇಮಿಗಳ ವಾರದ ಆಚರಣೆಯು ಫೆಬ್ರವರಿ 7ರಂದು ರೋಸ್ ಡೇ ಇಂದ ಪ್ರಾರಂಭವಾಗುತ್ತದೆ. ಈ ದಿನದಂದು ಜನರು ತಮ್ಮ ಪ್ರೀತಿಪಾತ್ರರಿಗೆ, ಕ್ರಷ್ಗಳಿಗೆ ಅಥವಾ ಅರ್ಧಾಂಗಿಗೆ ತಮ್ಮ ಪ್ರೀತಿಯನ್ನು ಗುಲಾಬಿ ಹೂವನ್ನು ಕೊಡುತ್ತಾರೆ. ಇಲ್ಲಿ ಗುಲಾಬಿ ಹೂವಿನ ಬಣ್ಣವೂ ಪ್ರಾಮುಖ್ಯತೆಯನ್ನು ಹೊಂದಿದೆ. ಕೆಂಪು ಗುಲಾಬಿಯು ಪ್ರೀತಿಯನ್ನು ಸೂಚಿಸಿದರೆ, ಹಳದಿ ಸ್ನೇಹವನ್ನು, ಗುಲಾಬಿ ಬಣ್ಣದ ಹೂವು ಮೆಚ್ಚುಗೆಯನ್ನು ಮತ್ತು ಕೆಂಪು ಸುಳಿಯೊಂದಿಗಿರುವ ಹಳದಿ ಬಣ್ಣದ ಗುಲಾಬಿಯು ಸ್ನೇಹದ ಭಾವನೆಗಳು ಪ್ರೀತಿಯಾಗಿ ರೂಪಾಂತರಗೊಂಡಿದೆ ಎಂದು ಸೂಚಿಸುತ್ತದೆ.

**ಫೆಬ್ರವರಿ 8, ಪ್ರಪೋಸ್ ಡೇ:** ರೋಸ್ ಡೇ ನಂತರ ಫೆಬ್ರುವರಿ 8ರಂದು ಪ್ರಪೋಸ್ ಡೇ ಆಚರಿಸಲಾಗುತ್ತದೆ. ಹೆಸರೇ ಸೂಚಿಸುವಂತೆ, ಪ್ರಪೋಸ್ ಡೇಯಂದು, ಜನರು ತಮ್ಮ ಪ್ರೀತಿಯ ಭಾವನೆಗಳನ್ನು ತಮ್ಮ ಸಂಗಾತಿ ಅಥವಾ ಕ್ರಶ್ ಎದುರು ಹಂಚಿಕೊಳ್ಳುತ್ತಾರೆ. **ಫೆಬ್ರವರಿ 9, ಚಾಕೊಲೇಟ್ ಡೇ:** ಪ್ರೇಮಿಗಳ ವಾರದ ಮೂರನೇ ದಿನ ಚಾಕೊಲೇಟ್ ಡೇ. ತಮ್ಮ ಸಂಬಂಧಗಳಲ್ಲಿನ ಎಲ್ಲಾ ಕಹಿ ಭಾವನೆಗಳನ್ನು ಮರೆತು ಜೀವನ ನಡೆಸೋಣ ಎನ್ನುವ ಕಾರಣಕ್ಕೆ ಜನರು ತಮ್ಮ ಕ್ರಷ್, ಪ್ರೇಮಿ ಅಥವಾ ಅರ್ಧಾಂಗಿಯೊಂದಿಗೆ ಚಾಕೊಲೇಟ್‌ಗಳನ್ನು ಹಂಚಿಕೊಳ್ಳುತ್ತಾರೆ. **ಫೆಬ್ರವರಿ 10, ಟೆಡ್ಡಿ ಡೇ:** ಪ್ರೇಮಿಗಳ ವಾರದ ನಾಲ್ಕನೇ ದಿನ ಟೆಡ್ಡಿ ಡೇ. ಟೆಡ್ಡಿಗಳನ್ನು ನೋಡಿದಾಕ್ಷಣ ಮನಸ್ಸಿನ ಒತ್ತಡ ಕಡಿಮೆಯಾಗಿ ಮುಖದಲ್ಲಿ ನಗು ಮೂಡುತ್ತದೆ. **ಫೆಬ್ರವರಿ 11, ಪ್ರಾಮಿಸ್ ಡೇ:** ಪ್ರೇಮಿಗಳ ದಿನದ ಐದನೇ ದಿನವು ಪ್ರಾಮಿಸ್ ಡೇ. ಪ್ರೇಮಿಗಳು ಜೀವನದ ಏರು ಇಳಿತಗಳಲ್ಲೂ ಒಟ್ಟಾಗಿ ಇರಲು, ತಮ್ಮ ಸಂಬಂಧವನ್ನು ಬಲಪಡಿಸಿಕೊಳ್ಳಲು ಮತ್ತು ಪರಸ್ಪರ ಬೆಂಬಲಿಸಲು ಪ್ರಮಾಣ ಮಾಡುವುದಕ್ಕೆಂದು ಈ ದಿನ ಆಚರಿಸಲಾಗುತ್ತದೆ. **ಫೆಬ್ರವರಿ 12, ಹಗ್ ಡೇ:** ಪ್ರೇಮಿಗಳ ವಾರದ ಆರನೇ ದಿನ ಹಗ್ ಡೇ. ಈ ದಿನದಂದು ಜನರು ತಮ್ಮ ಪ್ರೀತಿಪಾತ್ರರನ್ನು ಅಪ್ಪಿಕೊಳ್ಳುವ ಮೂಲಕ ಸಾಂತ್ವನ ನೀಡುತ್ತಾರೆ. ಯಾರಿಗಾದರೂ ನಮ್ಮ ಭಾವನೆಗಳನ್ನು ವ್ಯಕ್ತಪಡಿಸಲು ಪದಗಳು ವಿಫಲವಾದಾಗ, ದೈಹಿಕ ಸ್ಪರ್ಶದ ಭಾಷೆ ಅದ್ಭುತಗಳನ್ನು ಮಾಡುತ್ತದೆ. ಅದೇ ಕಾರಣಕ್ಕಾಗಿ ಈ ದಿನವನ್ನು ಆಚರಿಸಲಾಗುತ್ತದೆ.

**ಫೆಬ್ರವರಿ 13, ಕಿಸ್ ಡೇ:** ಪ್ರೇಮಿಗಳ ವಾರದ ಏಳನೇ ದಿನವನ್ನು, ಅಂದರೆ ಫೆ.13ರಂದು ಕಿಸ್ ದಿನವನ್ನು ಆಚರಿಸಲಾಗುತ್ತದೆ. ಪ್ರೀತಿಯಲ್ಲಿರುವ ಜನರು ಈ ದಿನದಂದು ತಮ್ಮ ಪ್ರೀತಿ ಪಾತ್ರರಿಗೆ ಚುಂಬಿಸಿ, ಪ್ರೀತಿ ಹಂಚಿಕೊಳ್ಳುತ್ತಾರೆ.

**ಫೆಬ್ರವರಿ 14, ಪ್ರೇಮಿಗಳ ದಿನ:** ಅಂತಿಮವಾಗಿ, ಫೆಬ್ರವರಿ 14ರಂದು ಜಗತ್ತಿನಾದ್ಯಂತ ಪ್ರೇಮಿಗಳು ಪ್ರೀತಿಯ ದಿನವನ್ನಾಗಿ ಪ್ರೇಮಿಗಳ ದಿನವನ್ನು ಆಚರಿಸುತ್ತಾರೆ. ಪ್ರವಾಸ, ಡೇಟ್, ಒಟ್ಟಿಗೆ ಊಟ ಮಾಡಿ ಅಥವಾ ಅವರ ಮೆಚ್ಚಿನ ಉಡುಗೊರೆಗಳನ್ನು ನೀಡಿ ಈ ದಿನವನ್ನು ಆಚರಿಸಿಕೊಳ್ಳುತ್ತಾರೆ.

# 30 ಕೋಟಿ ರೂ ಮಾರ್ಕೆಟ್ ಕ್ಯಾಪ್ ದಾಟಿದ ಟಾಟಾ ಗ್ರೂಪ್

**ನವದೆಹಲಿ:** ಇದೀಗ ಟಾಟಾ ಗ್ರೂಪ್ 30 ಲಕ್ಷ ಕೋಟಿ ರೂ ಮಾರ್ಕೆಟ್ ಕ್ಯಾಪ್ ಅಥವಾ ಷೇರುಸಂಪತ್ತು ಹೊಂದಿದ ಭಾರತದ ಮೊದಲ ಕಂಪನಿ ಎಂಬ ದಾಖಲೆ ತನ್ನ ಮುಡಿಗೇರಿಸಿಕೊಂಡಿದೆ.




ಟಾಟಾ ಗ್ರೂಪ್ಗೆ ಸೇರಿದ ಟಾಟಾ ಕನ್ಸಲ್ಟೆನ್ಸಿ ಸರ್ವಿಸಸ್ (ಟಿಸಿಎಸ್), ಟಾಟಾ ಪವರ್, ಟಾಟಾ ಮೋಟಾರ್ಸ್ ಮೊದಲಾದ ಕಂಪನಿಗಳ ಷೇರುಬೆಲೆ ಈ ವರ್ಷ ಗಣನೀಯವಾಗಿ ಹೆಚ್ಚಾಗಿದ್ದು ಇದರಿಂದ ಟಾಟಾ ಗ್ರೂಪ್ನ ಈ ಎಲ್ಲಾ ಕಂಪನಿಗಳ ಒಟ್ಟಾರೆ ಮಾರ್ಕೆಟ್ ಕ್ಯಾಪ್ 30 ಲಕ್ಷ ಕೋಟಿ ರೂ ಗಡಿ ದಾಟಿದೆ ಎನ್ನಲಾಗುತ್ತಿದೆ.

40ಕ್ಕೂ ಹೆಚ್ಚು ಕಂಪನಿಗಳು ಟಾಟಾ ಗ್ರೂಪ್ಗೆ ಸೇರಿದೆ. ಇದರಲ್ಲಿ 24 ಕಂಪನಿಗಳು ಷೇರು ಮಾರುಕಟ್ಟೆಗಳಲ್ಲಿ ಲಿಸ್ಟ್ ಆಗಿವೆ. ಇಷ್ಟೂ ಕಂಪನಿಗಳ ಷೇರುಮೊತ್ತ 30 ಲಕ್ಷ ಕೋಟಿ ರೂ ಗಡಿ ದಾಟಿರುವುದು ವಿಶೇಷ. ಟಾಟಾ ಕೆಮಿಕಲ್ಸ್, ತೇಜಸ್ ನೆಟ್ವರ್ಕ್, ಟಾಟಾ ಎಲ್ಕ್ಸಿ ಷೇರು ಬಿಟ್ಟರೆ ಉಳಿದ ಷೇರುಗಳು ಈ ವರ್ಷ ಸಕಾರಾತ್ಮಕವಾಗಿ ಬೇಡಿಕೆ ಪಡೆದಿವೆ. ಅದರಲ್ಲೂ ಟಾಟಾ ಮೋಟಾರ್ಸ್, ಟಾಟಾ ಪವರ್ ಮತ್ತು ಇಂಡಿಯನ್ ಹೋಟೆಲ್ಸ್ ಕಂಪನಿ ಷೇರುಗಳು ಶೇ. 16ರಿಂದ 20ರವರೆಗೆ ಬೆಳೆದಿದೆ. ಟಿಸಿಎಸ್ ಅಥವಾ ಟಾಟಾ ಕನ್ಸಲ್ಟೆನ್ಸಿ ಸರ್ವಿಸಸ್ ಸಂಸ್ಥೆಯದ್ದೊಂದೇ ಷೇರುಸಂಪತ್ತು 180.22 ಬಿಲಿಯನ್ ಡಾಲರ್ ಇದೆ. ಅಂದರೆ 15 ಲಕ್ಷ ಕೋಟಿ ರೂ ಆಗುತ್ತದೆ. ವೈಯಕ್ತಿಕ ಕಂಪನಿಯ ಷೇರುಮೊತ್ತ ಪರಿಗಣಿಸಿದರೆ ವಿಶ್ವದಲ್ಲಿ ಟಿಸಿಎಸ್ಗೆ 65ನೇ ಸ್ಥಾನ ಸಿಗುತ್ತದೆ. ಎಲ್ಲ ಟಾಟಾ ಕಂಪನಿಗಳದ್ದನ್ನು ಸೇರಿಸಿದರೆ 360 ಬಿಲಿಯನ್ ಡಾಲರ್ಗೂ ಹೆಚ್ಚಾಗುತ್ತದೆ. 2024ರಲ್ಲಿ ಈವರೆಗೂ ಟಾಟಾ ಕನ್ಸಲ್ಟೆನ್ಸಿ ಸರ್ವೀಸಸ್ನ ಬೆಲೆಗಳಲ್ಲಿ ಶೇ.9ರಷ್ಟು ಏರಿಕೆ ಕಂಡಿದ್ದರೆ, ಇನ್ನು ಟಾಟಾ ಮೋಟಾರ್ಸ್ನ ಷೇರುಗಳಲ್ಲಿ ಶೇ. 20ರಷ್ಟು ಏರಿಕೆಯಾಗಿದೆ.

# ಭದ್ರತೆ ಕೋರಿ ನಿಕ್ಕಿ ಹ್ಯಾಲೆ ಅರ್ಜಿ

**ವಾಷಿಂಗ್ಟನ್:** ಚುನಾವಣಾ ಪ್ರಚಾರದ ಸಂದರ್ಭ ಬೆದರಿಕೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಅಮೆರಿಕ ಅಧ್ಯಕ್ಷೀಯ ಚುನಾವಣೆಯಲ್ಲಿ ರಿಪಬ್ಲಿಕನ್ ಅಭ್ಯರ್ಥಿಯ ರೇಸ್ನಲ್ಲಿರುವ ನಿಕ್ಕಿ ಹ್ಯಾಲೆ ಭದ್ರತೆ ಒದಗಿಸುವಂತೆ ಕೋರಿ ರಹಸ್ಯ ಸೇವಾ ಇಲಾಖೆಗೆ ಅರ್ಜಿ ಸಲ್ಲಿಸಿರುವುದಾಗಿ ವರದಿಯಾಗಿದೆ.

ಈ ವರ್ಷ ನಡೆಯಲಿರುವ ಅಮೆರಿಕ ಅಧ್ಯಕ್ಷೀಯ ಚುನಾವಣೆಯಲ್ಲಿ ರಿಪಬ್ಲಿಕನ್ ಅಭ್ಯರ್ಥಿಗಳ ರೇಸ್ನಲ್ಲಿ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹಾಗೂ ನಿಕ್ಕಿ ಹ್ಯಾಲೆ ನಡುವೆ ಸ್ಪರ್ಧೆಯಿದೆ. ಸ್ಪರ್ಧೆಯಿಂದ ಹಿಂದೆ ಸರಿಯುವಂತೆ ಆಗ್ರಹಿಸಿ ತನಗೆ ನಿರಂತರ ಬೆದರಿಕೆ ಎದುರಾಗಿರುವುದರಿಂದ ಭದ್ರತೆ ಹೆಚ್ಚಿಸುವಂತೆ ಹ್ಯಾಲೆ ಕೋರಿದ್ದಾರೆ. ಹಿಲ್ಟನ್ಹೆಡ್ ನಗರದಲ್ಲಿ ನಡೆದ ಚುನಾವಣಾ ಪ್ರಚಾರ ಸಭೆಯಲ್ಲಿ ಪದೇ ಪದೇ ತೊಂದರೆ ನೀಡುತ್ತಿದ್ದ ವ್ಯಕ್ತಿಯನ್ನು ಭದ್ರತಾ ಸಿಬಂದಿ ಹೊರಗೆ ಕಳುಹಿಸಿದ್ದರು ಎಂದು 'ವಾಲ್ ಸ್ಟ್ರೀಟ್ ಜರ್ನಲ್' ವರದಿ ಮಾಡಿದೆ. ' ಯಾವುದಕ್ಕೂ ಹಿಂಜರಿಯದೆ ಸ್ಪರ್ಧೆಯಲ್ಲಿ ಉಳಿದಿರುವಾಗ ಇಂತಹ ಘಟನೆಗಳು ಸಾಮಾನ್ಯವಾಗಿವೆ. ಆದರೆ ಯಾವುದೇ ಕೃತ್ಯಗಳು ತನ್ನನ್ನು ಸ್ಪರ್ಧೆಯಿಂದ ಹಿಂದಕ್ಕೆ ಸರಿಸಲು ಸಾಧ್ಯವಿಲ್ಲ' ಎಂದು ನಿಕ್ಕಿ ಹ್ಯಾಲೆ ಹೇಳಿದ್ದಾರೆ.



# ಇರಾನ್ ವೀಸಾ ಕುರಿತು ಮಹತ್ವದ ಪ್ರಕಟಣೆ




**ದೆಹಲಿ:** ಫೆಬ್ರವರಿ 4 ರಿಂದ ಜಾರಿಗೆ ಬರುವಂತೆ ಇಸ್ಲಾಮಿಕ್ ರಿಪಬ್ಲಿಕ್ ಆಫ್ ಇರಾನ್ ಸರ್ಕಾರವು ಭಾರತದ ನಾಗರಿಕರಿಗೆ ವೀಸಾ ನಿಯಮಗಳ ಕುರಿತು ಮಹತ್ವದ ಪ್ರಕಟಣೆಯನ್ನು ಹೊರಡಿಸಿದೆ. ಮಾನ್ಯ ಪಾಸ್ಪೋರ್ಟ್ಗಳನ್ನು ಹೊಂದಿರುವ ಭಾರತೀಯ ಪ್ರಜೆಗಳಿಗೆ ಪ್ರವಾಸೋದ್ಯಮ ಉದ್ದೇಶಗಳಿಗಾಗಿ ಇರಾನ್ಗೆ ಪ್ರವೇಶಿಸಲು ಇನ್ನು ಮುಂದೆ ವೀಸಾ ಅಗತ್ಯವಿಲ್ಲ. ಆದ್ರೆ ರಾನಿನ ಅಧಿಕಾರಿಗಳು ವಿವರಿಸಿರುವ ನಿರ್ದಿಷ್ಟ ಷರತ್ತುಗಳು ಮತ್ತು ಮಿತಿಗಳು ಈ ಆದೇಶಕ್ಕೆಇದ್ದು, ಮೊದಲನೆಯದಾಗಿ, ಸಾಮಾನ್ಯ ಭಾರತೀಯ ಪಾಸ್ಪೋರ್ಟ್ಗಳನ್ನು ಹೊಂದಿರುವ ವ್ಯಕ್ತಿಗಳು ಪ್ರತಿ ಆರು ತಿಂಗಳಿಗೊಮ್ಮೆ ವೀಸಾ ಇಲ್ಲದೆ ಇರಾನ್ಗೆ ಪ್ರವೇಶಿಸಲು ಅನುಮತಿಸಲಗುತ್ತದೆ. ಹಾಗಿದ್ದರೂ ಅವರ ವಾಸ್ತವ್ಯವು ಪ್ರತಿ ಭೇಟಿಯಲ್ಲಿ ಗರಿಷ್ಠ 15 ದಿನಗಳವರೆಗೆ ಸೀಮಿತವಾಗಿರುತ್ತದೆ. ಈ ಅವಧಿಯನ್ನು ಯಾವುದೇ ಸಂದರ್ಭಗಳಲ್ಲಿ ವಿಸ್ತರಿಸಲಾಗುವುದಿಲ್ಲ ಎಂದು ತಿಳಿಸಿದೆ. ಅದೇ ರೀತಿ ವೀಸಾ ರದ್ದತಿಯು ಇರಾನ್ಗೆ ಪ್ರವೇಶಿಸುವ ಪ್ರವಾಸಿಗರಿಗೆ ಮಾತ್ರ ಅನ್ವಯಿಸುತ್ತದೆ. ಆದ್ದರಿಂದ, ಹೆಚ್ಚು ವಿಸ್ತೃತ ಅವಧಿಯವರೆಗೆ ಉಳಿಯಲು ಉದ್ದೇಶಿಸಿರುವ ವ್ಯಕ್ತಿಗಳು, ಆರು ತಿಂಗಳ ಅವಧಿಯೊಳಗೆ ಸಾಕಷ್ಟು ಬಾರಿ ಇರಾನ್ಗೆ ಭೇಟಿ ನೀಡಲು ಬಯಸುವವರು ಅಥವಾ ಪ್ರವಾಸೋದ್ಯಮವನ್ನು ಹೊರತುಪಡಿಸಿ ಬೇರೆ ಬೇರೆ ಉದ್ದೇಶಗಳಿಗಾಗಿ ವಿವಿಧ ರೀತಿಯ ವೀಸಾಗಳ ಅಗತ್ಯವಿರುವವರು ಭಾರತದಲ್ಲಿ ಇಸ್ಲಾಮಿಕ್ ರಿಪಬ್ಲಿಕ್ ಆಫ್ ಇರಾನ್ನ ಆಯಾ ಕಚೇರಿಗಳ ಮೂಲಕ ಅಗತ್ಯ ದಾಖಲೆಗಳನ್ನು ಪಡೆಯಬೇಕು ಎಂದು ತಿಳಿಸಲಾಗಿದೆ.

# ಕೇಜ್ರಿವಾಲ್ ವಿರುದ್ಧದ ಸಮನ್ಸ್ ವಜಾ



**ಪಣಜಿ:** ಗೋವಾ ವಿಧಾನಸಭಾ ಚುನಾವಣೆಯ ಸಮುದರ್ಭದಲ್ಲಿ ನೀತಿ ಸಂಹಿತೆ ಉಲ್ಲಂಘಿಸಿದ ಪ್ರಕರಣದಲ್ಲಿ ೦ಂಕಯ ಅರವಿಂದ್ ಕೇಜ್ರಿವಾಲ್ ವಿರುದ್ಧ ಸಮನ್ಸ್ ಹೊರಡಿಸಿದ್ದ ಮ್ಯಾಜಿಸ್ಟ್ರೇಟ್ ಆದೇಶವನ್ನು ಬಾಂಬೆ ಹೈಕೋರ್ಟ್ ಮಂಗಳವಾರ ವಜಾಗೊಳಿಸಿದೆ.2017ರಲ್ಲಿ ದಾಖಲಾದ ದೂರನ್ನು ಆಧರಿಸಿ ಸಮನ್ಸ್ ಜಾರಿಗೊಳಿಸಲಾಗಿತ್ತು ಹಾಗು ಇದರಲ್ಲಿ ಲಂಚದ ಆರೋಪವನ್ನೂ ಮಾಡಲಾಗಿತ್ತು. ಇದನ್ನು ಬಾಂಬೆ ಹೈಕೋರ್ಟ್ನ ಗೋವಾ ಪೀಠ ವಜಾಗೊಳಿಸಿರುವ ಬಗ್ಗೆ ಪಕ್ಷದ ಗೋವಾ ವಿಭಾಗದ ಮುಖ್ಯಸ್ಥ ಅಮಿತ್ ಪಾಲೇಕರ್ ಮಾಹಿತಿ ನೀಡಿದ್ದಾರೆ.ಕಳೆದ ಮಂಗಳವಾರ ಕೇಜ್ರಿವಾಲ್ ನ್ಯಾಯಾಲಯದ ಮುಂದೆ ಹಾಜರಾಗಿ ಸಮನ್ಸ್ ಕುರಿತು ಹೈಕೋರ್ಟ್ನಲ್ಲಿ ಮೇಲ್ಮನವಿ ಸಲ್ಲಿಸಲು ಕಾಲಾವಕಾಶ ಕೋರಿದ್ದರು. ಈ ಪ್ರಕರಣದ ವಿಚಾರಣೆ ಫೆ.12ರಂದು ಮ್ಯಾಜಿಸ್ಟ್ರೇಟ್ ಎದುರು ಬರಲಿದೆ? ಎಂದು ಪಾಲೇಕರ್ ಹೇಳಿದ್ದಾರೆ.



## 2 ಸಾವಿರ ವರ್ಷ ಹಿಂದಿನ ಕೃತಿಯನ್ನು ಎಐ ಬಳಸಿ ಓದಿದ ಸಂಶೋಧಕರು

**ವಾಷಿಂಗ್ಟನ್:** ಸುಮಾರು 2 ಸಾವಿರ ವರ್ಷಗಳ ಹಿಂದೆ ಇಟಲಿಯ ವೆಸುವಿಯಸ್ ಪರ್ವತದ ಜ್ವಾಲಾಮುಖಿಯಲ್ಲಿ ಸುಟ್ಟುಹೋಗಿದ್ದ ಗ್ರೀಕ್ ಗ್ರಂಥದ ಬೂದಿಯನ್ನು ಕೃತಕ ಬುದ್ಧಿಮತ್ತೆ(ಎಐ) ಬಳಸಿ ಓದಿದ ಮೂವರು ಸಂಶೋಧಕರು 7 ಲಕ್ಷ ಡಾಲರ್ ಬಹುಮಾನ ಪಡೆದಿದ್ದಾರೆ.

ಸುಮಾರು 2 ಸಾವಿರ ವರ್ಷಗಳ ಹಿಂದೆ ವೆಸುವಿಯಸ್ ಪರ್ವತದಲ್ಲಿ ಜ್ವಾಲಾಮುಖಿ ಸ್ಫೋಟಗೊಂಡು ಪುರಾತನ ರೋಮನ್ ನಗರ ಪಾಂಪೈ ಬಿಸಿ ಬೂದಿಯಡಿ ಹೂತುಹೋಗಿತ್ತು.

ಆಗ ಪುರಾತನ ಗ್ರಂಥದ 800 ಹಾಳೆಗಳು ಬೂದಿಯಡಿ ಸೇರಿತ್ತು. ಜ್ವಾಲಾಮುಖಿ ತಣಿದ ಬಳಿಕ ಗ್ರಂಥದ ಇದ್ದಲಿನ ಸಾರವನ್ನು ಸಂಗ್ರಹಿಸಿ ಇಟಲಿಯ ನೇಪಲ್ಸ್ನಲ್ಲಿನ ನ್ಯಾಷನಲ್ ಲೈಬ್ರೆರಿ ಮತ್ತು ಫ್ರಾನ್ಸ್ನ ಪ್ಯಾರಿಸ್ ಇನ್ಸ್ಟಿಟ್ಯೂಟ್ನಲ್ಲಿ ಸಂರಕ್ಷಿಸಿ ಇಡಲಾಗಿದೆ. ಇದ್ದಲಿನ ಸಾರವನ್ನು ಪರಿಶೀಲಿಸಿ ಗ್ರಂಥದ ಬಗ್ಗೆ ಮಾಹಿತಿ ಪಡೆಯಲು ಸಂಶೋಧಕರು ಪ್ರಯತ್ನಿಸುತ್ತಿದ್ದು ಗ್ರಂಥವನ್ನು ಓದಿದವರಿಗೆ 1 ದಶಲಕ್ಷ ಡಾಲರ್ ನಷ್ಟು ಬಹುಮಾನ ನೀಡುವುದಾಗಿ ಆಯೋಜಕರು ಘೋಷಿಸಿದ್ದರು. ಇದೀಗ ಜರ್ಮನಿಯ ಬರ್ಲಿನ್ನಲ್ಲಿ ಪಿಎಚ್ಡಿ ವಿದ್ಯಾರ್ಥಿಯಾಗಿರುವ ಯೂಸುಫ್ ನಾದೆರ್, ಅಮೆರಿಕದ ನೆಬ್ರಾಸ್ಕದಲ್ಲಿನ ವಿದ್ಯಾರ್ಥಿ ಲ್ಯೂಕ್ ಫ್ಯಾರಿಟರ್, ಸ್ವಿಝರ್ಲ್ಯಾಂಡ್ನ ವಿದ್ಯಾರ್ಥಿ ಜೂಲಿಯನ್ ಶ್ಲಿಂಗರ್ ಕೃತಕ ಬುದ್ಧಿಮತ್ತೆ ತಂತ್ರಜ್ಞಾನ ಬಳಸಿ ಈ ಕಾರ್ಯದಲ್ಲಿ ಯಶಸ್ವಿಯಾಗಿದ್ದಾರೆ.

# ನೈಸರ್ಗಿಕ ಅನಿಲ ಕ್ಷೇತ್ರದಲ್ಲಿ 5.56 ಲಕ್ಷ ಕೋಟಿ ರೂ. ಹೂಡಿಕೆ: ಮೋದಿ

**ಪಣಜಿ:** ನೈಸರ್ಗಿಕ ಅನಿಲ ಸರಬರಾಜು ವಲಯದಲ್ಲಿ ಮುಂದಿನ 5–6 ವರ್ಷಗಳಲ್ಲಿ ಭಾರತಕ್ಕೆ 5.56 ಲಕ್ಷ ಕೋಟಿ ರೂ. ಹೂಡಿಕೆ ಹರಿದುಬರಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು. ಪಣಜಿಯಲ್ಲಿ ನಡೆದ ಮಾತನಾಡಿದ ಅವರು, ''ವಿಶ್ವದ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಪ್ರಮುಖ ಆರ್ಥಿಕತೆಯ ಅಗತ್ಯಗಳನ್ನು ಪೂರೈಸಲು ಇಂಧನ ವಲಯಕ್ಕೆ ಹರಿದುಬರುವ ಹೂಡಿಕೆಯ ಭಾಗ ಇದಾಗಿದೆ ಎಂದರು. ''ವಿಶ್ವದಲ್ಲೇ ಭಾರತವು ಮೂರನೇ ಅತಿದೊಡ್ಡ ಇಂಧನ, ತೈಲ ಮತ್ತು ಎಲ್ಪಿಜಿ ಬಳಕೆದಾರ ರಾಷ್ಟ್ರವಾಗಿದೆ.ನಾಲ್ಕನೇ ಅತಿದೊಡ್ಡ ಎಲ್ಎನ್ಜಿ(ದ್ರವೀಕೃತ ನೈಸರ್ಗಿಕ ಅನಿಲ) ಆಮದುದಾರ ದೇಶವಾಗಿದೆ ಎಂದರು.



ಎಲ್ಎನ್ಜಿ ಖರೀದಿಗೆ ಕತಾರ್ ಜತೆಗೆ 6.47 ಲಕ್ಷ ಕೋಟಿ ರೂ.ಒಪ್ಪಂದ ಪ್ರಸ್ತುತ ಇರುವ ದರಕ್ಕಿಂತ ಕಡಿಮೆ ದರದಲ್ಲಿ 2048 ವರ್ಷದವರೆಗೆ ಕತಾರ್ನಿಂದ ಎಲ್ಎನ್ಜಿ ಆಮದನ್ನು ಮಾಡಿಕೊಳ್ಳಲು 6.47 ಲಕ್ಷ ಕೋಟಿ ರೂ.ಮೌಲ್ಯದ ಒಪ್ಪಂದವನ್ನು ಭಾರತ ಮಾಡಿಕೊಳ್ಳಲಿದೆ. ವಿದ್ಯುತ್ ಉತ್ಪಾದಿಸಲು, ರಸಗೊಬ್ಬರಗಳನ್ನು ತಯಾರಿಸಲು ಮತ್ತು ಸಿಎನ್ಜಿಗೆ ಪರಿವರ್ತಿಸಲು ವರ್ಷಕ್ಕೆ 7.5 ಮಿಲಿಯನ್ ಟನ್ ಅನಿಲವನ್ನು ಖರೀದಿಸುವ 2004ರ ಒಪ್ಪಂದವನ್ನು ವಿಸ್ತರಿಸಲು ಕತಾರ್ ಎನರ್ಜಿಯೊಂದಿಗೆ ಪೆಟ್ರೋನೆಟ್ ಎಲ್ಎನ್ಜಿ ಲಿ. ಒಪ್ಪಂದಕ್ಕೆ ಸಹಿ ಹಾಕಲಿದೆ.



# ಸಚಿವೆ ಸ್ಮೃತಿ ಇರಾನಿ ಫೋಟೋ ವೈರಲ್

**ಮುಂಬೈ:** ಮಾಜಿ ರೂಪದರ್ಶಿ, ನಟಿ, ನಿರ್ಮಾಪಕಿ ಹಾಗೂ ಕೇಂದ್ರ ಸಚಿವೆ ಸ್ಮೃತಿ ಇರಾನಿ ಅವರು ಸೋಷಿಯಲ್ ಮೀಡಿಯಾದಲ್ಲಿ ಸಖತ್ ಆಯಕ್ಟಿವ್ ಆಗಿರುತ್ತಾರೆ. ಜೊತೆಗೆ ತಮಗನ್ನಿಸಿದ್ದನ್ನು ಅನುಯಾಯಿಗಳೊಂದಿಗೆ ಆಗಾಗ್ಗೆ ಶೇರ್ ಮಾಡುತ್ತಿರುತ್ತಾರೆ. ಆದರೆ ಈ ಬಾರಿ ಮಾತ್ರ ಸ್ಮೃತಿ ಇರಾನಿ ಅವರು ತಮ್ಮ ಗ್ಲಾಮರಸ್ ಫೋಟೋವನ್ನು ಶೇರ್ ಮಾಡಿಕೊಂಡಿದ್ದಾರೆ. ಸದ್ಯ ಈ ಫೋಟೋ ನೋಡಿದ ಅಭಿಮಾನಿಗಳು ಶಾಕ್ ಆಗಿದ್ದಾರೆ.ಹೌದು, ವೈರಲ್ ಆಗಿರೋ ಫೋಸ್ಟ್ನಲ್ಲಿ ಸ್ಮೃತಿ ಇರಾನಿ ಕ್ಯಾಮೆರಾನೇ ನಾಚಿ ನೀರಾಗುವಂತಹ ಫೋಸ್ ನೀಡಿದ್ದಾರೆ. 1998ರಲ್ಲಿ ಸ್ಮೃತಿ ಇರಾನಿ ಮಿಸ್ ಇಂಡಿಯಾ ಸ್ಪರ್ಧಿಯಾಗಿ ತಮ್ಮ ವೃತ್ತಿಜೀವನವನ್ನು ಪ್ರಾರಂಭಿಸಿದರು. ಅದೇ ಸಮಯಲ್ಲಿ ಕ್ಲಿಕ್ಕಿಸಿರೋ ಫೋಟೋ ಇದಾಗಿದೆ. ಇನ್ನು ಇದಾದ ಬಳಿಕ ಸ್ಮೃತಿ ಇರಾನಿ ಅವರು 2000ರಲ್ಲಿ ದೂರದರ್ಶನಕ್ಕೆ ಪಾದಾರ್ಪಣೆ ಮಾಡಿದರು. ಕ್ಯುಂಕಿ ಸಾಸ್ ಭಿ ಕಭಿ ಬಹು ಥಿ' ನಲ್ಲಿ ತುಳಸಿ ವಿರಾನಿ ಪಾತ್ರದಲ್ಲಿ ಅವರ ಪಾತ್ರವು ರಾತ್ರೋರಾತ್ರಿ ಬಹಳಷ್ಟು ಅಭಿಮಾನಿಗನ್ನು ಗಳಿಸಿತು. ನಂತರ ಅವರು ಅನೇಕ ಇತರ ಟಿವಿ ಕಾರ್ಯಕ್ರಮಗಳನ್ನು ಮಾಡಿದರು. ಇದೀಗ ಸಾಮಾಜಿಕ ಜಾಲತಾಣದಲ್ಲಿ ಫೋಟೋ ವೈರಲ್ ಆಗಿದೆ. ಈ ಫೋಟೋ ನೋಡಿದ ನೆಟ್ಟಿಗರು ಶಾಕ್ ಜೊತೆಗೆ ಸರ್ಪ್ರೈಸ್ ಆಗಿದ್ದಾರೆ.



## ಕಂದಮ್ಮನನ್ನು ಸಿಗಿದು ತಿಂದ ಬೀದಿ ನಾಯಿಗಳು

**ಹೈದರಾಬಾದ್:** ತಂದೆ ಜೊತೆ ಗುಡಿಸಲಿನಲ್ಲಿ ಮಲಗಿದ್ದ ಒಂದು ವರ್ಷ ಮಗು ಮೇಲೆ ಬೀದಿ ನಾಯಿಗಳು ದಾಳಿ ಮಾಡಿ ತಿಂದಿರುವ ಘಟನೆ ತೆಲಂಗಾಣದ ಶಂಶಾಬಾದ್ನಲ್ಲಿ ನಡೆದಿದೆ. ಕೆ. ನಾಗರಾಜು (1) ಮೃತಪಟ್ಟ ಮಗು. ಮಗುವಿನ ತಂದೆ ಸೂರ್ಯಕುಮಾರ್ ಕೂಲಿ ಕಾರ್ಮಿಕ. ಶಂಶಾಬಾದ್ನ ರಾಜೀವ್ ಗೃಹಕಲ್ಪ ಸಂಕೀರ್ಣದ ಬಳಿ ಗುಡಿಸಲಿನಲ್ಲಿ ಸೂರ್ಯಕುಮಾರ್ ತನ್ನ ಮಗುವಿನ ಜೊತೆ ಮಲಗಿದ್ದ. ಈ ವೇಳೆ ಬೀದಿ ನಾಯಿಗಳ ಗುಂಪು ಗುಡಿಸಲಿಗೆ ನುಗ್ಗಿ ದಾಳಿ ನಡೆಸಿವೆ. ಪರಿಣಾಮ ಕಂದಮ್ಮನನ್ನು ಸಿಗಿದು ತಿಂದಿವೆ. ಏಕಾಏಕಿ ನಾಯಿಗಳ ಗುಂಪು ನಡೆಸಿದ ಪರಿಣಾಮ ಮಗುವಿನ ತಂದೆಗೂ ದಿಕ್ಕೇತೋಚದಂತಾಗಿದೆ.

ಈವರೆಗೂ ಮಕ್ಕಳ ಮೇಲೆ ನಡೆದ ದಾಳಿಯಲ್ಲಿ ಇದು ಒಂಬತ್ತನೇ ಗಂಭೀರ ಪ್ರಕರಣವಾಗಿದೆ. ಈ ಕುರಿತು ಪ್ರಕರಣ ದಾಖಲಿಸಿಕೊಂಡಿದ್ದು, ಪೊಲೀಸರು ತನಿಖೆ ನಡೆಸುತ್ತಿದ್ದಾರೆ.



# ಟ್ರಕ್‌ನಿಂದ ಬಿದ್ದವನಿಗೆ ವಿಮಾನ ಡಿಕ್ಕಿ



**ಹಾಂಗ್‌ಕಾಂಗ್:** ಕೆಲಸಗಾರನೊಬ್ಬನಿಗೆ ವಿಮಾನ ಡಿಕ್ಕಿ ಹೊಡೆದ ಘಟನೆ ಹಾಂಗ್ ಕಾಂಗ್ ವಿಮಾನ ನಿಲ್ದಾಣದಲ್ಲಿನಡೆದಿದೆ.34 ವರ್ಷದ ಜೋರ್ಡಾನ್ ಪ್ರಜೆ ಮೃತ ಕಾರ್ಮಿಕ.ಹಾಂಗ್ ಕಾಂಗ್ ವಿಮಾನ ನಿಲ್ದಾಣದಲ್ಲಿ ಕೆಲಸ ಮಾಡುತ್ತಿದ್ದ ಜೋರ್ಡಾನ್ ಪ್ರಜೆ ಟ್ರಕ್ನ ಪ್ರಯಾಣಿಕರ ಸೀಟಿನಲ್ಲಿ ಸಂಚರಿಸುತ್ತಿದ್ದಾಗ ವಾಹನದಿಂದ ಬಿದಿದ್ದು ಅದರ ಹಿಂದೆ ಬಂದಿದ್ದ ವಿಮಾನ ಆತನಿಗೆ ಡಿಕ್ಕಿಯಾಗಿ ಬಹು ದೂರದವರೆಗೆ ಎಳೆದುಕೊಂಡು ಹೋಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಮಂಗಳವಾರ ಮುಂಜಾನೆ ನಡೆದ ಈ ಘಟನೆಯಲ್ಲಿ ಗಂಭೀರ ಗಾಯಗೊಂಡ ಜೋರ್ಡಾನ್ ಪ್ರಜೆ ಸ್ಥಳದಲ್ಲೇ ಮೃತಪಟ್ಟಿದ್ದಾನೆ.ಹಾಂಗ್ ಕಾಂಗ್ನ ವಿಮಾನ ನಿಲ್ದಾಣ ಪ್ರಾಧಿಕಾರವು ಮೃತ ವ್ಯಕ್ತಿ ಗ್ರೌಂಡ್ ಸಪೋರ್ಟ್ ಮತ್ತು ನಿರ್ವಹಣಾ ಸಂಸ್ಥೆ ಚೀನಾ ಏರ್ಕ್ರಾಫ್ಟ್ ಸರ್ವಿಸಸ್ನ ಉದ್ಯೋಗಿ ಎಂದು ತಿಳಿಸಿದೆ.

ಟ್ರಕ್ನ ಚಾಲಕನನ್ನು ಬಂಧಿಸಲಾಗಿದ್ದು ವಿಚಾರಣೆಗೆ ಒಳಪಡಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

# ಭಗವದ್ಗೀತೆ ಮೇಲೆ ಪ್ರಮಾಣ ವಚನ ಸ್ವೀಕರಿಸಿದ ಆಸ್ಟ್ರೇಲಿಯಾದ ಸೆನೆಟರ್ ವರುಣ್ ಘೋಷ್!

**ಆಸ್ಟ್ರೇಲಿಯಾ:** ಆಸ್ಟ್ರೇಲಿಯನ್ ಸೆನೆಟರ್ ಆಗಿ ಮೊದಲ ಬಾರಿಗೆ ಭಾರತೀಯ ಮೂಲದ ವರುಣ್ ಘೋಷ್ ನೇಮಕಮಾಡಲಾಗಿದ್ದು, ಅವರು 'ಭಗವದ್ಗೀತೆ'ಯಲ್ಲಿ ಪ್ರಮಾಣವಚನ ಸ್ವೀಕರಿಸಿದ್ದಾರೆ.ಮಂಗಳವಾರ ಬ್ಯಾರಿಸ್ಟರ್ ವರುಣ್ ಘೋಷ್ ಅವರು ಭಗವದ್ಗೀತೆಯ ಮೇಲೆ ಪ್ರಮಾಣ ವಚನ ಸ್ವೀಕರಿಸಿದ ಆಸ್ಟ್ರೇಲಿಯಾದ ಸಂಸತ್ತಿನ ಮೊದಲ ಭಾರತ ಸಂಜಾತ ಸದಸ್ಯರಾಗಿ ಇತಿಹಾಸ ನಿರ್ಮಿಸಿದ್ದಾರೆ. ಪಶ್ಚಿಮ ಆಸ್ಟ್ರೇಲಿಯಾದಿಂದ ಬಂದ ವರುಣ್ ಘೋಷ್ ಫೆಡರಲ್ ಸಂಸತ್ತಿನ ಸೆನೆಟ್ನಲ್ಲಿ ರಾಜ್ಯವನ್ನು ಪ್ರತಿನಿಧಿಸಲು ಲೆಜಿಸ್ಲೇಟಿವ್ ಅಸೆಂಬ್ಲಿ ಮತ್ತು ಲೆಜಿಸ್ಲೇಟಿವ್ ಕೌನ್ಸಿಲ್ ಎರಡರಿಂದಲೂ ಬೆಂಬಲವನ್ನು ಪಡೆದ ನಂತರ ಸೆನೆಟರ್ ಆಗಿ ನೇಮಿಸಲಾಯಿತು.

ವರುಣ್ ಘೋಷ್ ಗೆ ಆಸ್ಟ್ರೇಲಿಯಾದ ಪ್ರಧಾನಿ ಆಂಥೋನಿ ಅಲ್ಬನೀಸ್ ಕೂಡ ಘೋಷ್ಗೆ ಶುಭ ಹಾರೈಸಿದ್ದಾರೆ. ಪಶ್ಚಿಮ ಆಸ್ಟ್ರೇಲಿಯಾದ ನಮ್ಮ ಹೊಸ ಸೆನೆಟರ್ ವರುಣ್ ಘೋಷ್ ಅವರಿಗೆ ಸ್ವಾಗತ. ತಂಡದಲ್ಲಿ ನಿಮ್ಮನ್ನು ಹೊಂದಲು ಸಂತೋಷವಾಗಿದೆ ಎಂದು ಅವರು ಪೋಸ್ಟ್ ಮಾಡಿದ್ದಾರೆ.



# UPI ಸ್ಥಗಿತ; ಬ್ಯಾಂಕುಗಳ ವ್ಯವಾಹಾರ ಅಸ್ತವ್ಯಸ್ತ




**ದೆಹಲಿ:** UPIಹಾಗೂ ಬ್ಯಾಂಕಿಂಗ್ ವಲಯ ಸ್ಥಗಿತಗೊಂಡ ಪರಿಣಾಮ ಬಳಕೆದಾರರು ಪರಡಾಡುವ ಪರಿಸ್ಥಿತಿ ಮಂಗಳವಾರ ಸಂಜೆ ಸೃಷ್ಟಿಯಾಗಿದೆ. UPIಚಾಲಿತ Google Pay, PhonePay, BHIM ಇತ್ಯಾದಿಗಳಲ್ಲಿ ಹಣಕಾಸು ವ್ಯವಹಾರ ಮಾಡುವಾಗ 3–4 ಗಂಟೆಗಳ ಕಾಲ ತೊಂದರೆ ಅನುಭವಿಸಿರುವ ಬಗ್ಗೆ ಹಲವರು ತಮ್ಮ ಎಕ್ಸ್ ಖಾತೆಯಲ್ಲಿ ಹೇಳಿಕೊಂಡಿದ್ದಾರೆ.ಸ್ಥಗಿತದ ಪರಿಣಾಮ ಗಕಖ ಬಳಕೆದಾರರಿಗೆ ಹಣ ಪಾವತಿಸಲು ಹಾಗು ವರ್ಗಾಯಿಸಲು ಸಾಧ್ಯವಾಗುತ್ತಿಲ್ಲ. ಈ ಬಗ್ಗೆ ಎಕ್ಸ್ ಬಳಕೆದಾರರು ಪ್ರತಿಕ್ರಿಯಿಸಿ, ಇಂತಹ ಪರಿಸ್ಥಿತಿಗಳ ಬಗ್ಗೆ ಮೊದಲೇ ಮಾಹಿತಿ ನೀಡಿದ್ದರೆ ಒಳ್ಳೆಯದಿತ್ತು ಎಂದಿದ್ದಾರೆ. ಕೆಲವರಂತೂ ಅಗತ್ಯವಿರುವ ಸಮಯದಲ್ಲಿ ಕೆಲಸಕ್ಕೆ ಬಾರದ ಇಂತಹ ವೇದಿಕೆಗಳು ಜನರ ನೆಮ್ಮದಿ ಕಸಿಯುತ್ತಿವೆ ಎಂದು ಅಭಿಪ್ರಾಯಪಟ್ಟಿದ್ದಾರೆ.ಕೆಲ ತಾಂತ್ರಿಕ ದೋಷಗಳಿಂದ ಕೆಲವೊಮ್ಮೆ ಇಂತಹ ಸಮಸ್ಯೆಗಳು ಉಂಟಾಗಿ, ಜನರು ಎಂದಿನಂತೆ ಈ ವೇದಿಕೆಗಳನ್ನು ಬಳಸಲಾಗದ ಪರಿಸ್ಥಿತಿ ನಿರ್ಮಾಣವಾಗುತ್ತದೆ.

# ಇಮ್ರಾನ್ ಖಾನ್ ಪತ್ನಿಯ ಮನೆ ಸಬ್‌ಜೈಲು ಎಂದು ಘೋಷಣೆ

**ಇಸ್ಲಮಾಬಾದ್:** ಇಸ್ಲಮಾಬಾದ್ನ ಬನಿಗಾಲದಲ್ಲಿ ಇರುವ ತನ್ನ ಮನೆಯನ್ನು ಸಬ್ಜೈಲೆಂದು ಘೋಷಿಸುವ ಅಧಿಕಾರಿಗಳ ಕ್ರಮವನ್ನು ತಡೆಯಬೇಕು ಮತ್ತು ತನ್ನನ್ನು ರಾವಲ್ಪಿಂಡಿಯ ಅಡಿಯಾಲಾ ಜೈಲಿಗೆ ಸ್ಥಳಾಂತರಿಸಬೇಕು ಎಂದು ಕೋರಿ ಪಾಕಿಸ್ತಾನದ ಮಾಜಿ ಪ್ರಧಾನಿ ಇಮ್ರಾನ್ ಖಾನ್ ಅವರ ಪತ್ನಿ ಬುಷ್ರಾ ಬೀಬಿ ಹೈಕೋರ್ಟ್ಗೆ ಅರ್ಜಿ ಸಲ್ಲಿಸಿದ್ದಾರೆ.



ತೋಷಖಾನ ಭ್ರಷ್ಟಾಚಾರ ಪ್ರಕರಣದಲ್ಲಿ ಇಮ್ರಾನ್ಖಾನ್ ದಂಪತಿಗೆ ವಿಶೇಷ ನ್ಯಾಯಾಲಯ 14 ವರ್ಷ ಜೈಲುಶಿಕ್ಷೆ ವಿಧಿಸಿತ್ತು. ಇಮ್ರಾನ್ರನ್ನು ಅಡಿಯಾಲಾ ಜೈಲಿನಲ್ಲಿ ಇರಿಸಲಾಗಿದ್ದರೆ ಬುಷ್ರಾ ಬೀಬಿಯನ್ನು ಅವರ ಮನೆಯಲ್ಲೇ ಗೃಹ ಬಂಧನದಲ್ಲಿ ಇರಿಸುವ ಜತೆಗೆ, ಮನೆಯನ್ನು ಸಬ್ಜೈಲು ಎಂದು ಘೋಷಿಸಲು ಅಧಿಕಾರಿಗಳು ನಿರ್ಧರಿಸಿದ್ದರು ಎಂದು 'ದಿ ನ್ಯೂಸ್ ಇಂಟರ್ ನ್ಯಾಷನಲ್' ದಿನಪತ್ರಿಕೆ ವರದಿ ಮಾಡಿದೆ. ಆದರೆ ಇದನ್ನು ವಿರೋಧಿಸಿರುವ ಬುಷ್ರಾ ಬೀಬಿ 'ತಾನು ಸಾಮಾನ್ಯ ಕೈದಿಯಂತೆ ಅಡಿಯಾಲಾ ಜೈಲಿನಲ್ಲಿ ಇರಲು ಬಯಸುತ್ತೇನೆ. ಸಬ್ಜೈಲು ಎಂದು ಸರಕಾರ ಘೋಷಿಸಿರುವ ತನ್ನ ಮನೆಯಲ್ಲಿ ಒಬ್ಬಂಟಿಯಾಗಿರುವುದರಿಂದ ಜೀವ ಭಯ ಎದುರಾಗಿದೆ. ಗುರುತಿಸಲಾಗದ ವ್ಯಕ್ತಿಗಳು ಮನೆಗೆ ಬಂದು ಹೋಗುತ್ತಿರುವುದು ಅಭದ್ರತೆಯ ಭಾವನೆಯನ್ನು ಮೂಡಿಸಿದೆ. ಆದ್ದರಿಂದ ಮನೆಯನ್ನು ಸಬ್ಜೈಲು ಎಂದು ಘೋಷಿಸಿರುವ ಕ್ರಮಕ್ಕೆ ತಡೆನೀಡಿ, ತನ್ನನ್ನು ಅಡಿಯಾಲಾ ಜೈಲಿಗೆ ಸ್ಥಳಾಂತರಿಸಬೇಕು ಎಂದು ಬುಷ್ರಾ ಬೀಬಿ ಹೈಕೋರ್ಟ್ಗೆ ಅರ್ಜಿ ಸಲ್ಲಿಸಿದ್ದಾರೆ ಎಂದು ವರದಿಯಾಗಿದೆ.

# ಯಾವುದೇ ಧರ್ಮದವರಿಗೂ 2ನೇ ಮದುವೆ ಅವಕಾಶವಿಲ್ಲ, ಲಿವ್ ಇನ್ ಸಂಬಂಧಕ್ಕೆ ನೋಂದಣಿ ಕಡ್ಡಾಯ

**ಡೆಹ್ರಾಡೂನ್:** ಉತ್ತರಾಖಂಡ ವಿಧಾನಸಭೆಯಲ್ಲಿ ಏಕರೂಪ ನಾಗರಿಕ ಸಂಹಿತೆ ಮಸೂದೆ ಮಂಡನೆ ಆಗಿದೆ. ಲಿವ್ ಇನ್ ಸಂಬಂಧಕ್ಕೆ ನೋಂದಣಿ ಕಡ್ಡಾಯ. ಲಿವ್ ಇನ್ ಸಂಬಂಧದಿಂದ ಜನಿಸಿದ ಮಕ್ಕಳಿಗೆ ಕಾನೂನು ಮಾನ್ಯತೆ. ಇದು ಉತ್ತರಾಖಂಡ ಸರ್ಕಾರ ಮಂಡಿಸಿದ ಐತಿಹಾಸಿಕ ಐತಿಹಾಸಿಕ ಏಕರೂಪ ನಾಗರಿಕ ಸಂಹಿತೆ ಮಸೂದೆಯಲ್ಲಿರುವ ಪ್ರಮುಖ ಅಂಶಗಳು.

**ಮಸೂದೆಯಲ್ಲಿ ಏನಿದೆ?:** ರಾಜ್ಯದ ಮುಸ್ಲಿಮರು ಸೇರಿದಂತೆ ಎಲ್ಲಾ ಧರ್ಮದವರು ಎರಡನೇ ವಿವಾಹವಾಗುವುದು ಅಪರಾಧ. ಒಂದು ಮದುವೆಗೆ ಮಾತ್ರ ಕಾನೂನಿನ ಮಾನ್ಯತೆ ಇರಲಿದೆ. ಹಾಲಿ ಷರಿಯಾ ಕಾನೂನಿನಡಿ ಮುಸ್ಲಿಮರು ಕಾನೂನು ಬದ್ಧವಾಗಿಯೇ 3 ವಿವಾಹವಾಗುವ ಅವಕಾಶವಿದೆ. ವಿವಾಹ, ವಿಚ್ಛೇದನ, ಆಸ್ತಿ, ಉತ್ತರದಾಯಿತ್ವ ಎಲ್ಲಾ ವಿಚಾರದಲ್ಲಿ ಎಲ್ಲಾ ಧರ್ಮದ ಜನರಿಗೆ ಒಂದೇ ನಿಯಮ ಅನ್ವಯವಾಗುತ್ತದೆ.



ಲಿವ್ ಇನ್ ಸಂಬಂಕ್ಕೆ ನೋಂದಣಿ ಕಡ್ಡಾಯ ಮಾಡಲಾಗಿದೆ. ನೋಂದಣಿ 1 ತಿಂಗಳು ತಡವಾದರೆ 3 ತಿಂಗಳು ಜೈಲು, 25ಸಾವಿರ ದಂಡ ವಿಧಿಸಲಾಗುತ್ತದೆ. ನೋಂದಣಿ ಸಂಶಯಾಸ್ಪದ ಆಗಿದ್ದರೆ ತನಿಖೆ ನಡೆಸಲಾಗುತ್ತದೆ. ಲಿವ್ ಇನ್ ಸಂಬಂಧದಿಂದ ಜನಿಸಿದ ಮಕ್ಕಳಿಗೆ ಕಾನೂನು ಮಾನ್ಯತೆ ಸೇರಿದಂತೆ ಆಸ್ತಿಯಲ್ಲೂ ಸಮಪಾಲು ಸಿಗಲಿದೆ. ಲಿವ್ ಇನ್ ಸಂಗಾತಿ ತೊರೆದಲ್ಲಿ ಜೀವನಾಂಶ ಪಡೆಯಬಹುದು. ಸಂಬಂಧ ಮುಂದುವರಿಸಲು ಇಷ್ಟವಿಲ್ಲದ ಜೋಡಿ, ದಾಖಲೆಗಳನ್ನು ಸಲ್ಲಿಸಿ ಲಿಖಿತ ಹೇಳಿಕೆ ನೀಡಿ ಲಿವ್ ಇನ್ ಸಂಬಂಧ ಕಡಿತಗೊಳಿಸಬಹುದು.

ಈ ಮಸೂದೆಯಿಂದ ಬುಡಕಟ್ಟು ಸಮುದಾಯವನ್ನು ಹೊರಗಿಡಲಾಗಿದೆ.

ಅತ್ಯಾಚಾರ ಅಥವಾ ಅನೈಸರ್ಗಿಕ ಲೈಂಗಿಕ ಕ್ರಿಯೆ ನಡೆಸಿದ ಪತಿಗೆ ವಿಚ್ಛೇದನ ನೀಡುವ ಹಕ್ಕನ್ನು ಮಸೂದೆ ಮಹಿಳೆಯರಿಗೆ ನೀಡುತ್ತದೆ. ಮದುವೆಯಾದ ಒಂದೇ ವರ್ಷದೊಳಗೆ ವಿವಾಹ ವಿಚ್ಛೇದನ ಪಡೆಯುವುದನ್ನು ಅಸಾಧಾರಣ ಸಂದರ್ಭ ಹೊರತುಪಡಿಸಿ ಉಳಿದ ಸನ್ನಿವೇಶಗಳಲ್ಲಿ ನಿರ್ಬಂಧಿಸುವ ಅಂಶವಿದೆ. ಅತ್ಯಾಚಾರ ಪ್ರಕರಣದಲ್ಲಿ ಪತಿ ಪತಿ ಸಿಲುಕಿದರೆ ಆತನಿಂದ ಪತ್ನಿ ವಿಚ್ಛೇದನ ಕೇಳಬಹುದು.

ವಿವಾಹವಾದ 60 ದಿನದ ಒಳಗಡೆ ನೋಂದಣಿ ಮಾಡಿಸಬೇಕು. 2010ರ ಮಾ.26ರ ನಂತರ ಮದುವೆಯಾದವರು 6 ತಿಂಗಳೊಳಗೆ ನೋಂದಣಿ ಮಾಡಿಸುವುದು ಕಡ್ಡಾಯ. ನಿರ್ಲಕ್ಷಿಸಿದರೆ 20 ಸಾವಿರ ರೂ. ದಂಡ ವಿಧಿಸಲಾಗುತ್ತದೆ. ಆದರೆ ನೋಂದಣಿಯಾಗದ ವಿವಾಹವನ್ನು ಅಸಿಂಧು ಎಂದು ಪರಿಗಣನೆ ಮಾಡುವುದಿಲ್ಲ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಸಾಯಿ ಪಲ್ಲವಿ ಔಟ್, ಸೀತೆಯ ಪಾತ್ರದಲ್ಲಿ ಶ್ರೀದೇವಿ ಪುತ್ರಿ





ಬಾಲಿವುಡ್ ನಿರ್ದೇಶಕ ನಿತೀಶ್ ತಿವಾರಿ ಇದೀಗ ರಾಮಾಯಣ ಆಧರಿಸಿ ಸಿನಿಮಾ ಮಾಡಲು ಸಕಲ ತಯಾರಿ ಮಾಡುತ್ತಿದ್ದಾರೆ. ರಾಮನಾಗಿ ರಣ್ ಬೀರ್ ಕಪೂರ್ ಸೆಲೆಕ್ಟ್ ಆಗಿದ್ರೆ, ಸೀತೆಯ ಪಾತ್ರದಲ್ಲಿ ಸಾಯಿ ಪಲ್ಲವಿ ನಟಿಸಲಿದ್ದಾರೆ ಎನ್ನಲಾಗಿತ್ತು. ಈಗ ಸಾಯಿ ಪಲ್ಲವಿ ಬದಲು ಶ್ರೀದೇವಿ ಪುತ್ರಿ ಜಾನ್ವಿ ಕಪೂರ್ ನಟಿಸಲಿದ್ದಾರೆ ಎನ್ನಲಾಗುತ್ತಿದೆ.

ದಂಗಲ್, ಬಾವಲ್ ಚಿತ್ರಗಳ ನಿರ್ದೇಶಕ ನಿತೀಶ್ ತಿವಾರಿ 'ರಾಮಾಯಣ' ಕುರಿತು ಸಿನಿಮಾ ಮಾಡಲು ಮುಂದಾಗಿದ್ದಾರೆ. ಈಗಾಗಲೇ ಪ್ರೀ- ಪ್ರೊಡಕ್ಷನ್ ಹಂತದ ಕೆಲಸಗಳು ಕೂಡ ಭರದಿಂದ ಸಾಗುತ್ತಿದೆ. ತೆರೆಮರೆಯಲ್ಲಿ ಪಾತ್ರಗಳ ಆಯ್ಕೆ ಕೂಡ ನಡೆಯುತ್ತಿದೆ. ಸೀತೆಯ ಪಾತ್ರದ ಆಯ್ಕೆಯ ಬಗ್ಗೆ ಸಿಕ್ಕಾಪಟ್ಟೆ ಚರ್ಚೆ ನಡೆಯುತ್ತಿದೆ.

'ರಾಮಾಯಣ' ಸಿನಿಮಾ ಬಗ್ಗೆ ಒಂದಲ್ಲ ಒಂದು ಸುದ್ದಿ ಸೋಶಿಯಲ್ ಮೀಡಿಯಾದಲ್ಲಿ ಹರಿದಾಡುತ್ತಲೇ ಇದೆ. ಇದೀಗ ಮತ್ತೊಂದು ಸುದ್ದಿ ಹೊರಬಿದ್ದಿದೆ. ರಣಬೀರ್ ರಾಮನ ಪಾತ್ರ ಮಾಡ್ತಾರೆ ಎನ್ನುವ ಸುದ್ದಿ ಹೊರಬಂದ ಬಳಿಕ ಸೀತೆಯಾಗಿ ಆಲಿಯಾ ಭಟ್ ಕಾಣಿಸಿಕೊಳ್ತಾರೆ ಎನ್ನಲಾಯ್ತು. ಆದರೆ ಡೇಟ್ ಸಮಸ್ಯೆಯಿಂದ ಆಲಿಯಾ ಈ ಸಿನಿಮಾವನ್ನು ಒಪ್ಪಿಕೊಳ್ಳಲಿಲ್ಲ. ಬಳಿಕ ಸೌತ್ ಬ್ಯೂಟಿ ಸಾಯಿ ಪಲ್ಲವಿ ಸೀತೆಯ ಪಾತ್ರ ಮಾಡಲಿದ್ದಾರೆ ಎನ್ನುವ ಸುದ್ದಿ ಹೊರಬಿದ್ದಿತ್ತು. ಇದಾದ ಬಳಿಕ ಇದೀಗ ಶ್ರೀದೇವಿ ಮಗಳಿಗೆ ಸೀತೆಯಾಗುವ ಚಾನ್ಸ್ ಸಿಕ್ಕಿದೆ ಎನ್ನಲಾಗ್ತಿದೆ.

ಸೌತ್ ಸಿನಿಮಾಗಳಲ್ಲಿ ಬ್ಯುಸಿಯಾಗಿರುವ ಜಾನ್ವಿ ಇದೀಗ 'ರಾಮಾಯಣ' ಸಿನಿಮಾಗೆ ಗ್ರೀನ್ ಸಿಗ್ನಲ್ ನೀಡಿದ್ರಾ, ಈ ಬಗ್ಗೆ ಸದ್ಯದಲ್ಲೇ ಅಧಿಕೃತ ಅಪ್‌ಡೇಟ್ ಹೊರಬೀಳಲಿದೆ.



# 'ಮಾರಿಗೋಲ್ಡ್' ಹಿಂದೆ ಬಿದ್ದ ಸಂಗೀತಾ ಶೃಂಗೇರಿ



ರಘುವರ್ಧನ್ ನಿರ್ಮಾಣ ಮಾಡಿ ರಾಘವೇಂದ್ರ ಎಂ. ನಾಯ್ಕ್ ಆಕ್ಷನ್ ಕಟ್ ಹೇಳಿರುವ 'ಮಾರಿ ಗೋಲ್ಡ್' ಚಿತ್ರದ ಟೀಸರ್ ಬಿಡುಗಡೆಯಾಗಿದೆ. ಬಳಿಕ ಮಾತಿಗಿಳಿದ ನಿರ್ಮಾಪಕ ರಘುವರ್ಧನ್, ಗುಣವಂತ ಸೇರಿ ಹಲವು ಚಿತ್ರ ನಿರ್ದೇಶನ ಮಾಡಿದ್ದೇನೆ. ರಾಘವೇಂದ್ರ ನಾಯ್ಕ್ ಹೇಳಿದ ಕಥೆ ಇಷ್ಟವಾಯಿತು. ನಾನು ನಿರ್ಮಾಣ ಮಾಡುತ್ತೇನೆ. ನೀವೇ ನಿರ್ದೇಶನ ಮಾಡಿ ಎಂದು ಅವರಿಗೆ ಅವಕಾಶ ಮಾಡಿಕೊಟ್ಟಿದ್ದೇನೆ. ಚಿತ್ರ ಅಂದುಕೊಂಡಿದ್ದಕ್ಕಿಂತ ಚೆನ್ನಾಗಿ ಮೂಡಿ ಬಂದಿದೆ. ನಾಯಕ ದಿಗಂತ್, ನಾಯಕಿ ಸಂಗೀತಾ ಸಹಕಾರ ಅದ್ಭುವಾಗಿತ್ತು. ಎಲ್ಲಾ ಅಂದುಕೊಂಡಂತೆ ಆದರೆ ಮುಂದಿನ ತಿಂಗಳು ಎರಡನೇ ಅಥವಾ ಮೂರನೇ ವಾರ ಚಿತ್ರ ತೆರೆಗೆ ತರುವ ಉದ್ದೇಶವಿದೆ ಸಹಕಾರವಿರಲಿ ಎಂದರು.

ನಿರ್ದೇಶಕ ರಾಘವೇಂದ್ರ ಎಂ, ನಾಯ್ಕ್ ಮಾತನಾಡಿ, ಮಾರಿ ಗೋಲ್ಡ್ ಗೋಲ್ಡ್ ಬಿಸ್ಕಟ್ ಮಾರಲು ಹೋದ 4 ಜನ ಹುಡುಗರ ಕಥೆ, ಚಿತ್ರದುರ್ಗ, ಬೆಂಗಳೂರು ಸಕಲೇಶಪುರ ಮತ್ತಿತರ ಕಡೆ ಚಿತ್ರೀಕರಣ ಮಾಡಲಾಗಿದೆ. ಕೋವಿಡ್ ಆದ ಮೇಲೆ ಆ ನಂತರದ ಬೆಳವಣಿಗೆಗಳು ಚಿತ್ರ ವಿಳಂಬಕ್ಕೆ ಕಾರಣವಾಯಿತು. ಈಗ ಬಿಡುಗಡೆಗೆ ಸಜ್ಜಾಗಿದೆ. ಟೀಸರ್ ಮೂಲಕ ಪ್ರಚಾರ ಆರಂಬಿಸಿದ್ದೇವೆ ಎಂದು ಹೇಳಿದರು. ಶುದ್ದ ಮನರಂಜನೆಗೆ ಒತ್ತು ನೀಡಿ ಚಿತ್ರ ಮಾಡಲಾಗಿದೆ. ಚಿತ್ರದ ಮೂಲಕ ದಿಗಂತ್ ಅವರನ್ನು ಬೇರೆ ರೀತಿ ತೋರಿಸುವ ಪ್ರಯತ್ನ ಮಾಡಲಾಗಿದೆ. ಚಿತ್ರೀಕರಣಕ್ಕೂ ಮುನ್ನ ದಿಗಂತ್ ಅವರಿಗೆ ರಿಹರ್ಸಲ್ ಮಾಡಲಾಗಿದೆ. ಮನರಂಜನೆ ಡ್ರಾಮ ಮತ್ತು ಥ್ರಿಲ್ಲರ್ ಕಥೆ ಹೊಂದಿದೆ ಎಂದು ಮಾಹಿತಿ ನೀಡಿದರು.

ನಟ ದಿಗಂತ್ ಮಾತನಾಡಿ, ಹೆಸರಾಂತ ನಿರ್ಮಾಪಕ ಹಣ ನೀಡಿದ್ದು, ಆದರೆ ಅದು ಅಲ್ಲಿಯೇ ನಿಂತಿದೆ. ಮಾರಿಗೋಲ್ಡ್ ಮೇಲೆ ನಿರ್ದೇಶಕರ ಜೊತೆ ಸಿನಿಮಾ ಮಾಡಬಹುದು. ಕಥೆ ಇಷ್ಟವಾಯಿತು, ಯಶ್ ಶೆಟ್ಟಿ, ಸಂಗೀತ ಶೆಟ್ಟಿ, ಸಂಪತ್, ಕಾಕ್ರೋಚ್ ಸುಧಿ, ಟ್ರೈಲರ್ ಇಷ್ಟವಾದರೆ ಎಲ್ಲರಿಗೂ ಹೇಳಿ, ಸಿನಿಮಾ ಗೆದ್ದರೆ ಮತ್ತಷ್ಟು ಮಾಡೋಣ ಎಂದಿದ್ದಾರೆ. ಚಿತ್ರದಲ್ಲಿ ಬುದ್ದಿವಂತ ಸ್ಕಾಮರ್ ಪಾತ್ರ ಎಂದಿದ್ದಾರೆ. ನಟಿ ಸಂಗೀತಾ ಶೃಂಗೇರಿ ಮಾತನಾಡಿ, ನಟ ದಿಗಂತ್ ನನ್ನ ಚೈಲ್ಡ್ ವುಡ್ ಕ್ರಷ್. ಅದನ್ನು ಅವರಿಗೂ ಹೇಳಿದ್ದೇನೆ. ಎಲ್ಲವೂ ಊಹೆ ಮಾಡಿಕೊಂಡು ಸಿನಿಮಾ ಮಾಡಿದ್ದಾರೆ. ಛಾಯಾಗ್ರಾಹಕ ಚಂದ್ರಶೇಖರ್ ಉತ್ತಮವಾಗಿ ತೋರಿಸಿದ್ದಾರೆ. ಚಿತ್ರದಿಂದ ಸುಮಾರು ವರ್ಷದ ಕನಸು ನನಸಾಗಿದೆ ಎಂದರು.

ಕಲಾವಿದ ಭಜರಂಗ ಶೆಟ್ಟಿ ಮಾತನಾಡಿ, ಮಾರಿಗೋಲ್ಡ್‌ನಲ್ಲಿ ನಟಿಸಲು ಗೆಳೆಯ ಯಶ್ ಶೆಟ್ಟಿ ಕಾರಣ ಕೋವಿಡ್ ಸಮಯದಲ್ಲಿ ಊರಲ್ಲಿ ಮೀನು ಹಿಡಿಯುತ್ತಿದ್ದೆ. ಬಳಿಕ ಕಾಕ್ರೋಚ್ ಸುಧಿ ಮಾತನಾಡಿದರು. ನಂತರ ನಿರ್ದೇಶಕರು ಮಾತನಾಡಿದ ಮಾಹಿತಿ ಹಂಚಿಕೊಂಡರು. ಸಂಭಾಷಣೆ ಬರೆದಿರುವ ರಘು ನಿಡವಳ್ಳಿ ವಿಭಿನ್ನ ಸಂಭಾಷಣೆ ಇದೆ ಎಂದರೆ ಸಂಗೀತ ನಿರ್ದೇಶಕ ವೀರ್ ಸಮರ್ಥ್ , ಚಿತ್ರದಲ್ಲಿ ಎರಡೆ ಹಾಡು ಇವೆ. ಇದೊಂದು ಥ್ರಿಲ್ಲರ್ ಸಿನಿಮಾ ಆಕ್ಷನ್ ಸಿನಿಮಾ, ಸಿನಿಮಾ ಹಿಟ್ ಆದರೆ ದಿಗಂತ್ ಆಕ್ಷನ್ ಹೀರೋ ಆಗಲಿದ್ದಾರೆ. ಯೋಗರಾಜ್ ಭಟ್, ವಿಜಯ್ ಭರಮಸಾಗರ, ಕವಿರಾಜ್ ಹಾಡು ಬರೆದಿದ್ದಾರೆ. ಗೆಲವಿನ ಆಶಾಕಿರಣ ಇದೆ ಎಂದರು.

ಛಾಯಾಗ್ರಾಹಕ ಚಂದ್ರಶೇಖರ್ ಹೊಸ ಜಾನರ್ ಸಿನಿಮಾ, ಥ್ರಿಲ್ಲರ್ ಸಿನಿಮಾ ಮಾಡಿರಲಿಲ್ಲ. ನಿರ್ಮಾಪಕ ರಘುವರ್ಧನ್ ಜೊತೆ ಗುಣವಂತದಲ್ಲಿ ಕೆಲಸ ಮಾಡಿದ್ದೆ. ಈಗ ಅವರ ನಿರ್ಮಾಣದಲ್ಲಿ ಕೆಲಸ ಮಾಡಿದ್ದೇವೆ ಎಂದರು. ಚಿತ್ರದಲ್ಲಿ ದಿಗಂತ್ ಮಂಚಾಲೆ, ಸಂಗೀತ ಶೃಂಗೇರಿ, ಸಂಪತ್ ಮೈತ್ರೇಯ, ಯಶ್ ಶೆಟ್ಟಿ, ಕಾಕ್ರೋಚ್ ಸುಧೀ, ವಜ್ರಾಂಗ್ ಶೆಟ್ಟಿ, ಬಾಲಾ ರಾಜವಾಡಿ, ಮಹಂತೇಶ್, ಸಂದೀಪ್ ಮಲಾನಿ ಮತ್ತಿತರರು ಚಿತ್ರದ ತಾರಾಬಳಗದಲ್ಲಿದ್ದಾರೆ.

# ವಿವಾಹ ವಾರ್ಷಿಕೋತ್ಸವದ ಖುಷಿಯಲ್ಲಿ ಕಿಯಾರಾ-ಸಿದ್ಧಾರ್ಥ್



ಸಿದ್ದಾರ್ಥ್ ಮಲ್ಹೋತ್ರಾ ಹಾಗೂ ಕಿಯಾರಾ ಅಡ್ವಾಣಿ ಅವರು ಮದುವೆ ಆಗಿ ಒಂದು ವರ್ಷ ಕಳೆದಿದೆ. 2023ರ ಫೆಬ್ರವರಿ 7ರಂದು ಈ ಜೋಡಿ ರಾಜಸ್ಥಾನದ ಜೈಸಲ್ಮೇರ್ ನಲ್ಲಿರುವ ಸೂರ್ಯಗಢ ಪ್ಯಾಲೇಸ್ ನಲ್ಲಿ ಅದ್ದೂರಿಯಾಗಿ ಮದುವೆ ಆತಿತು. ಈಗ ನೋಡ ನೋಡುತ್ತಿದ್ದಂತೆ ವರ್ಷ ಕಳೆದಿದೆ. ಇವರು ಮೊದಲ ವಾರ್ಷಿಕೋತ್ಸವವನ್ನು ಅದ್ದೂರಿಯಾಗಿ ಆಚರಿಸಿಕೊಳ್ಳಲು ಪ್ಲ್ಯಾನ್ ಮಾಡಿಕೊಂಡಿದ್ದಾರೆ. ಈ ದಂಪತಿಗೆ ಅಭಿಮಾನಿಗಳು ಹಾಗೂ ಫ್ಯಾನ್ಸ್ ಶುಭಕೋರುತ್ತಿದ್ದಾರೆ. ಇವರು ನೂರುಕಾಲ ಸುಖವಾಗಿ ಬಾಳಲಿ ಎಂದು ಫ್ಯಾನ್ಸ್ ಹಾರೈಸಿದ್ದಾರೆ.

ಸಿದ್ದಾರ್ಥ್ ಮಲ್ಹೋತ್ರ ಹಾಗೂ ಕಿಯಾರಾ ಅವರದ್ದು ಪ್ರೇಮ ವಿವಾಹ. ಇಬ್ಬರೂ ಪ್ರೀತಿಸಿ ಮದುವೆ ಆದರು. ಈ ಜೋಡಿ ಮೊದಲ ಬಾರಿಗೆ 'ಶೇರ್ಷಾ' ಸಿನಿಮಾದಲ್ಲಿ ಒಟ್ಟಾಗಿ ನಟಿಸಿತು. ಈ ಸಿನಿಮಾ ರಿಲೀಸ್ ಆಗಿದ್ದು ಒಟಿಟಿಯಲ್ಲಿ. ಈ ಚಿತ್ರದ ಸೆಟ್ ನಲ್ಲಿ ಇಬ್ಬರ ಮಧ್ಯೆ ಪರಿಚಯ ಬೆಳೆಯಿತು. ಈ ಪರಿಚಯ ಪ್ರೀತಿಗೆ ತಿರುಗಿತು. ಕಳೆದ ವರ್ಷ ಇವರು ಮದುವೆ ಆಗಿ ಪ್ರೀತಿಗೆ ಹೊಸ ಅರ್ಥ ನೀಡಿದರು.

ಸಿದ್ದಾರ್ಥ್ ಹಾಗೂ ಕಿಯಾರಾ ಕುಟುಂಬದವರ ಜೊತೆ ವಿದೇಶಕ್ಕೆ ತೆರಳಿದ್ದರು. ಆಗಲೇ ಇಬ್ಬರ ಮಧ್ಯೆ ಆಪ್ತತೆ ಬೆಳೆದಿತ್ತು. ಒಂದಲ್ಲಾ ಒಂದು ದಿನ ಸಿದ್ದಾರ್ಥ್ ಪ್ರಪೋಸ್ ಮಾಡುತ್ತಾರೆ ಎನ್ನುವ ವಿಚಾರ ಕಿಯಾರಾಗೆ ಖಚಿತವಾಗಿತ್ತು. ರೋಮ್ ನಲ್ಲಿ ಸಿದ್ದಾರ್ಥ್ ಅವರು ಮಂಡಿಯೂರಿ ಕಿಯಾರಾಗೆ ಪ್ರಪೋಸ್ ಮಾಡಿದರು. 'ಶೇರ್ಷಾ' ಸಿನಿಮಾದಲ್ಲಿ ಬರೋ ಒಂದು ರೊಮ್ಯಾಂಟಿಕ್ ಲೈನ್ ನ ಸಿದ್ದಾರ್ಥ್ ಹೇಳಿದರು. ಇದು ಕಿಯಾರಾ ಜೀವನದಲ್ಲಿ ವಿಶೇಷ ಕ್ಷಣ ಎನಿಸಿಕೊಂಡಿದೆ.

ಸಿದ್ದಾರ್ಥ್ ಪ್ರಪೋಸ್ ಮಾಡಿದಾಗ ಕಿಯಾರಾಗೆ ಏನು ಹೇಳಬೇಕು ಎಂಬುದೇ ಗೊತ್ತಾಗಿರಲಿಲ್ಲ. ಆ ಬಳಿಕ ಅವರು ಪ್ರೀತಿಯನ್ನು ಒಪ್ಪಿಕೊಂಡರು. 'ಕುಟುಂಬದವರನ್ನು ನೀನೇ ಒಪ್ಪಿಸಬೇಕು' ಎಂದು ಸಿದ್ದಾರ್ಥ್ ಗೆ ಕಿಯಾರಾ ಹೇಳಿದ್ದರು. ಅಂತೆಯೇ ನಡೆದುಕೊಂಡರು ಸಿದ್ದಾರ್ಥ್. ಕುಟುಂಬದವರನ್ನು ಒಪ್ಪಿಸಿ ಸಿದ್ದಾರ್ಥ್ ಹಾಗೂ ಕಿಯಾರಾ ಮದುವೆ ಆದರು. ಇವರು ಅನೇಕರಿಗೆ ಮಾದರಿ ಆಗಿದ್ದಾರೆ.

ಸಿದ್ದಾರ್ಥ್ ಹಾಗೂ ಕಿಯಾರಾ ಹಲವು ಸಿನಿಮಾ ಕೆಲಸಗಳಲ್ಲಿ ಬ್ಯುಸಿ ಇದ್ದಾರೆ. ಆಗಾಗ ಬಿಡುವು ಮಾಡಿಕೊಂಡು ಇವರು ಸುತ್ತಾಟ ನಡೆಸುತ್ತಿದ್ದಾರೆ. ಇವರು ಪ್ರೀತಿಸುತ್ತಿದ್ದ ಸಂದರ್ಭದಲ್ಲಿ ಬ್ರೇಕಪ್ ಆಗಿದೆ ಎನ್ನುವ ಸುದ್ದಿಯೂ ಹರಿದಾಡಿತ್ತು. ಆ ಬಳಿಕ ಇವರು ಪ್ಯಾಚಪ್ ಮಾಡಿಕೊಂಡಿದ್ದಾರೆ.

# ಖ್ಯಾತ ಹಾಕಿ ಆಟಗಾರನಿಂದ ಅಪ್ರಾಪ್ತೆಯ ಮೇಲೆ ರೇಪ್!



ಭಾರತ ಹಾಕಿ ತಂಡದ ಡಿಫೆಂಡರ್ ಆಟಗಾರ ವರುಣ್ ಕುಮಾರ್ ಮದುವೆಯಾಗೋದಾಗಿ ನಂಬಿಸಿ ಸ್ಟಾರ್ ಆಟಗಾರ್ತಿಗೆ ಮೋಸ ಮಾಡಿರುವ ಆರೋಪ ಕೇಳಿ ಬಂದಿದೆ.

ಪ್ರತಿಷ್ಠಿತ ಕ್ರೀಡೆಯಲ್ಲಿ ಭಾರತ ತಂಡವನ್ನು ಪ್ರತಿನಿಧಿಸಿದ್ದ ಯುವತಿಯ ಮೇಲೆ ಭಾರತೀಯ ಹಾಕಿ ತಂಡದ ಡಿಫೆಂಡರ್ ವರುಣ್ ಕುಮಾರ್ ಅತ್ಯಾಚಾರ ನಡೆಸಿದ್ದಾರೆ ಎಂದು ಜ್ಞಾನಭಾರತಿ ಪೊಲೀಸ್ ಠಾಣೆಯಲ್ಲಿ ದೂರು ನೀಡಿದ್ದು ಎಫ್ ಐಆರ್ ದಾಖಲಾಗಿದೆ.

ಜ್ಞಾನಭಾರತಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಟ್ರೈನಿಂಗ್ ಪಡೆಯುವಾಗ ವರುಣ್ ಕುಮಾರ್‌ಗೆ ಇನ್‌ಸ್ಟಾ ಮೂಲಕ ಯುವತಿಯ ಪರಿಚಯವಾಗಿತ್ತು. ಯುವತಿ 17 ವರ್ಷದವಳಾಗಿದ್ದಾಗಲೇ ಪ್ರೀತಿ ಮಾಡುವಂತೆ ಹಿಂದೆ ಬಿದ್ದಿದ್ದ ವರುಣ್ ಕುಮಾರ್ ಮದುವೆಯಾಗೋದಾಗಿ ನಂಬಿಸಿ ದೈಹಿಕ ಸಂಪರ್ಕ ಬೆಳೆಸಿದ್ದಾರೆ.

2019 ರಿಂದ ಯುವತಿ ಜೊತೆಗೆ ಸಂಪರ್ಕದಲ್ಲಿದ್ದ ವರುಣ್ ಕುಮಾರ್ ಐದು ವರ್ಷಗಳಿಂದ ಹಲವಾರು ಬಾರಿ ಅತ್ಯಾಚಾರ ನಡೆಸಿದ್ದು, ಈಗ ಮದುವೆಯಾಗದೇ ವಂಚಿಸಿದ್ದಾರೆ ಎಂದು ಸಂತ್ರಸ್ತೆ ಆರೋಪಿಸಿದ್ದಾರೆ.

ಮೂಲತಃ ಹಿಮಾಚಲ ಪ್ರದೇಶದವರಾಗಿರುವ ಕುಮಾರ್ ಹಾಕಿಗಾಗಿಯೇ ಪಂಜಾಬ್ ಗೆ ಶಿಫ್ಟ್ ಆಗಿದ್ದರು. 2017ರಲ್ಲಿ ಭಾರತ ತಂಡಕ್ಕೆ ಸೇರ್ಪಡೆಯಾದ ವರುಣ್ 2022ರ ಬರ್ಮಿಂಗ್ ಹ್ಯಾಂ ? ಕಾಮನ್ ವೆಲ್ತ್ ಗೇಮ್ಸ್‌ನಲ್ಲಿ ಬೆಳ್ಳಿ ಪದಕ, 2022 ರ ಏಷ್ಯನ್ ಗೇಮ್ಸ್ ನಲ್ಲಿ ಚಿನ್ನದ ಪದಕ, 2020ರ ಟೋಕಿಯೋ ಒಲಿಂಪಿಕ್ಸ್‌ನಲ್ಲಿ ಕಂಚಿನ ಪದಕ ಗೆದ್ದ ಭಾರತ ತಂಡದ ಸದಸ್ಯರಾಗಿದ್ದಾರೆ.

ಒಲಿಂಪಿಕ್ಸ್‌ನಲ್ಲಿ ಕಂಚಿನ ಪದಕದ ಸಾಧನೆಗೆ ಹಿಮಾಚಲ ಪ್ರದೇಶ ಸರ್ಕಾರ 1 ಕೋಟಿ ರೂ. ನಗದು ಬಹುಮಾನ ಸಹ ಘೋಷಿಸಿತ್ತು. 2021 ನೇ ಸಾಲಿನ ಅರ್ಜುನ ಪ್ರಶಸ್ತಿಗೂ ವರುಣ್ ಕುಮಾರ್ ಭಾಜನರಾಗಿದ್ದರು. ಈಗ ಪ್ರೀತಿ ಪ್ರೇಮದ ಹೆಸರಲ್ಲಿ ನಂಬಿಸಿ ಅತ್ಯಾಚಾರ ಆರೋಪ ಬಂದಿದ್ದು, ವರುಣ್ ಕುಮಾರ್ ವಿರುದ್ಧ ಪೋಕ್ಸೋ, ಅತ್ಯಾಚಾರ ಹಾಗೂ ವಂಚನೆ ಕೇಸ್ ಅಡಿ ಎಫ್‌ಐಆರ್ ದಾಖಲಾಗಿದೆ. ಜಲಂಧರ್‌ನಲ್ಲಿರುವ ವರುಣ್‌ಗಾಗಿ ಜ್ಞಾನಭಾರತಿ ಪೊಲೀಸರು ಬಲೆ ಬೀಸಿದ್ದಾರೆ.

# ಡೇವಿಸ್ ಕಪ್‌ನಲ್ಲಿ ಕೊಡಗಿನ ಯುವಕನ ಸಾಧನೆ





ಅಂತರಾಷ್ಟ್ರೀಯ ಟೆನ್ನಿಸ್ ಜಗತ್ತಿನ ವರ್ಲ್ಡ್ ಕಪ್ ಎಂದೇ ಹೆಸರು ಪಡೆದಿರುವ ಟೆನ್ನಿಸ್ ಟೀಮ್ ಇವೆಂಟ್ ಪ್ರತಿಷ್ಠಿತ ಡೇವಿಸ್ ಕಪ್‌ನಲ್ಲಿ ಭಾರತವು ಪಾಕಿಸ್ತಾನ ತಂಡವನ್ನು 4-0 ರಿಂದ ಸೋಲಿಸಿ, ವರ್ಲ್ಡ್ ಕಪ್ ಗ್ರೂಪ್ 1ರಲ್ಲಿ ಸ್ಥಾನ ಗಿಟ್ಟಿಸಿಕೊಂಡಿದೆ. ಭಾರತ ತಂಡದಲ್ಲಿ ಸ್ಥಾನ ಪಡೆದಿರುವ 28ರ ಹರೆಯದ ಕೊಡಗಿನ ಕಲಿಯಂಡ ನಿಕ್ಕಿ ಪೂಣಚ್ಚ ಅವರು ಕೂಡ ತಂಡದ ವಿಜಯಕ್ಕೆ ಕೈ ಜೋಡಿಸಿದ್ದಾರೆ.

60 ವರ್ಷಗಳ ಬಳಿಕ ಭಾರತ ಡೇವಿಸ್ ಕಪ್ ತಂಡವು ಪಾಕಿಸ್ತಾನಕ್ಕೆ ತೆರಳಿದ್ದು, ಆತಿಥೇಯ ತಂಡವನ್ನು ಭಾನುವಾರ 4 ಪಂದ್ಯಗಳಲ್ಲೂ ಸೋಲಿಸಿ ಡೇವಿಸ್ ಕಪ್‌ನ ವರ್ಲ್ಡ್ ಗ್ರೂಪ್ 1ರಲ್ಲಿ ಸ್ಥಾನ ಪಡೆದುಕೊಂಡಿದೆ. 4ನೇ ಪಂದ್ಯವು ಸಿಂಗಲ್ಸ್ ವಿಭಾಗದಲ್ಲಿ ನಡೆದಿದ್ದು, ಕೊಡಗಿನ ಕಲಿಯಂಡ ನಿಕ್ಕಿ ಪೂಣಚ್ಚ ಅವರು ಎದುರಾಳಿ ಮಹಮ್ಮದ್ ಶೋಯಬ್ ಅವರನ್ನು 6-3, 6-4ರ ನೇರ ಸೆಟ್ ಗಳಲ್ಲಿ ಮಣಿಸಿ ತಂಡದ ಗೆಲುವಿಗೆ ಸಹಕರಿಸಿದರು.

ಡಬಲ್ಸ್ ವಿಭಾಗದಲ್ಲಿ ಭಾರತದ ಯುಕಿ ಬಾಂಬ್ರಿ ? ಸಾಕೇತ್ ಮೈನೆನಿ ಜೋಡಿ ಗೆಲುವು ಸಾಧಿಸಿದ್ದು, ಸಿಂಗಲ್ಸ್‌ನಲ್ಲಿ ರಾಮ್ ಕುಮಾರ್ ರಾಮನಾಥಾನ್, ಎನ್.ಶ್ರೀರಾಮ್ ಬಾಲಾಜಿ ಹಾಗೂ ಮೊದಲ ಬಾರಿ ಡೇವಿಸ್ ಕಪ್ ಆಡುತ್ತಿರುವ ನಿಕ್ಕಿ ಪೂಣಚ್ಚ ಅವರು ಜಯ ಸಾಧಿಸಿದರು. ಬಿಬಿಎ ಪದವೀಧರರಾಗಿರುವ ನಿಕ್ಕಿ ಅವರು ಮೂಲತ ಮಡಿಕೇರಿ ತಾಲೂಕಿನ ಕಕ್ಕಬ್ಬೆಯವರು. ಅವರು ಆಂಧ್ರದ ಅನಂತಪುರದಲ್ಲಿ ನೆಲೆಸಿರುವ ಕಲಿಯಂಡ ಪೂಣಚ್ಚ ಹಾಗೂ ವೀಣಾ ದಂಪತಿಯ ಪುತ್ರರಾಗಿದ್ದಾರೆ.

# ಮಂಡ್ಯದಲ್ಲಿ ಬಿಜೆಪಿ-ಜೆಡಿಎಸ್ ನಡುವೆ ಮೈತ್ರಿ ಟಿಕೆಟ್ ಫೈಟ್!



**ಮಂಡ್ಯ:** ಸಕ್ಕರೆನಾಡು ಮಂಡ್ಯದಲ್ಲಿ ಲೋಕಸಭಾ ಚುನಾವಣೆಯ ಅಖಾಡ ಗರಿಗೆದರುತ್ತಾ ಇದೆ. ಎಂಎಲ್‌ಎ ಚುನಾವಣೆ ರೀತಿ ಲೋಕಸಭಾ ಚುನಾವಣೆಯಲ್ಲೂ ಪ್ರಚಂಡ ಗೆಲುವು ದಾಖಲಿಸಬೇಕೆಂದು ಕಾಂಗ್ರೆಸ್ ನಾಯಕರು ಸ್ಟಾಟಜಿ ಮಾಡಿದ್ದಾರೆ. ಆರಂಭಿಕ ಹಂತವಾಗಿ ಇದೀಗ ಮಂಡ್ಯ ಕೈ ನಾಯಕರು ಅಭ್ಯರ್ಥಿಯನ್ನು ಸಹ ಆಯ್ಕೆ ಮಾಡಿದ್ದಾರೆ.

ಹಾಗಿದ್ರೆ ಯಾರು ಮಂಡ್ಯ ಕ್ಷೇತ್ರದ ಆ ಅಭ್ಯರ್ಥಿ ಅಂತೀರಾ? ಈ ಸ್ಟೋರಿ ನೋಡಿ. ಹೌದು ಲೋಕಸಭಾ ಚುನಾವಣೆಗೆ ಇನ್ನೇನೂ ಕೆಲವು ತಿಂಗಳು ಬಾಕಿ ಇದೆ. ಈ ನಡುವೆ ಮಂಡ್ಯ ಲೋಕಸಭಾ ಚುನಾವಣೆ ಕಾವು ಈಗಲೇ ರಂಗೇರುತ್ತಿದೆ. ಇನ್ನು ಲೋಕಸಭಾ ಚುನಾವಣಾ ದೃಷ್ಟಿಯಿಂದ ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿಯಾಗಿದೆ. ಇದೀಗ ಮೈತ್ರಿ ಟಿಕೆಟ್ ಗಾಗಿ ಬಿಜೆಪಿ ಹಾಗೂ ಜೆಡಿಎಸ್ ನಡುವೆ ಫೈಟ್ ಏರ್ಪಟ್ಟಿದೆ. ಇನ್ನು ಕಳೆದ ವಿಧಾನ ಸಭಾ ಚುನಾವಣೆಯಲ್ಲಿ ಮಂಡ್ಯ ಜಿಲ್ಲೆಯಲ್ಲಿ ಕಾಂಗ್ರೆಸ್ ಅಭೂತಪೂರ್ವ ಗೆಲುವು ಸಾಧಿಸಿದೆ. ಇದೀಗ ಸಚಿವ ಚಲುವರಾಯಸ್ವಾಮಿ ನೇತೃತ್ವದ ಮಂಡ್ಯ ಕೈ ನಾಯಕರು ಶತಾಯಗತಾಯ ಲೋಕಸಭಾ ಚುನಾವಣೆಯನ್ನು ಗೆಲ್ಲಲೇಬೆಂಬ ಲೆಕ್ಕಾಚಾರ ಹಾಕಿಕೊಂಡಿದ್ದಾರೆ.

ಒಂದು ಕಡೆ ಮೈತ್ರಿ ಹಾಕಿಗಿರುವ ಬಿಜೆಪಿ-ಜೆಡಿಎಸ್‌ನಲ್ಲಿ ಕ್ಷೇತ್ರ ಹಂಚಿಕೆ ವಿಚಾರವಾಗಿ ಮಂಡ್ಯ ಜಿಲ್ಲಾ ನಾಯಕರ ನಡುವೆ ಫೈಟ್ ಏರ್ಪಟ್ಟಿದೆ. ಇತ್ತ ಇದನ್ನೇ ಅಸ್ತ್ರ ಮಾಡಿಕೊಂಡಿರುವ ಕಾಂಗ್ರೆಸ್ ನಾಯಕರು ತೆರೆಮರೆಯಲ್ಲಿ ಲೋಕಸಭಾ ಚುನಾವಣೆಗೆ ಭರ್ಜರಿ ಸಿದ್ಧತೆ ಮಾಡ್ತಾ ಇದ್ದಾರೆ. ಇದರ ಆರಂಭಿಕವಾಗಿ ಅಭ್ಯರ್ಥಿ ಆಯ್ಕೆಯನ್ನು ಕೈ ನಾಯಕರು ಹುಡುಕಿದ್ದಾರೆ. ಮಂಡ್ಯ ಲೋಕಸಭಾ ಕ್ಷೇತ್ರ ಚುನಾವಣೆಯ ಕಾಂಗ್ರೆಸ್ ಅಭ್ಯರ್ಥಿಯಾಗಿ ಸ್ಟಾರ್ ಚಂದ್ರು ಅಲಿಯಾಸ್ ವೆಂಕಟರಮಣೇಗೌಡ ಅವರನ್ನು ಆಯ್ಕೆ ಮಾಡಿದ್ದು, ಬಹುತೇಕ ಅವರೇ ಕ್ಯಾಂಡಿಡೇಟ್ ಆಗಲಿದ್ದು, ಘೋಷಣೆ ಒಂದೇ ಬಾಕಿ ಎಂದು ಕಾಂಗ್ರೆಸ್ ಮೂಲಗಳು ಹೇಳ್ತಾ ಇವೆ.

ಇದರ ಬೆನ್ನಲ್ಲೇ ಇದೀಗ ಕಾಂಗ್ರೆಸ್ ನಾಯಕರು ಈಗಿನಿಂದಲೇ ಸ್ಟಾರ್ ಚಂದ್ರು ಅವರನ್ನು ಮಂಡ್ಯದಲ್ಲಿ ಪರಿಚಯ ಮಾಡಲು ಮುಂದಾಗಿದ್ದಾರೆ. ಮಂಡ್ಯದಲ್ಲಿ ಕಾಂಗ್ರೆಸ್ ನಾಯಕರು ಇರುವ ಕಾರ್ಯಕ್ರಮಗಳಲ್ಲಿ ಸ್ಟಾರ್ ಚಂದ್ರು ಕಾಣಿಸಿಕೊಳ್ಳುತ್ತಿದ್ದು, ಅವರಿಗೂ ಹಾರ-ತುರಾಯಿಗಳ ಸುರಿ ಮಳೆಯೇ ಬೀಳ್ತಾ ಇದೆ.

ಮೂಲತಃ ನಾಗಮಂಗಲ ತಾಲೂಕಿನವರಾಗಿರುವ ಸ್ಟಾರ್ ಚಂದ್ರು, ಸ್ಟಾರ್ ಗ್ರೂಪ್‌ನ ಮಾಲೀಕರಾಗಿದ್ದಾರೆ. ಚಂದ್ರು ಅವರ ಅಣ್ಣ ಬೇರಾರು ಅಲ್ಲ ಗೌರಿಬಿದನೂರು ಕ್ಷೇತ್ರದ ಪಕ್ಷೇತರ ಶಾಸಕ ಪುಟ್ಟಸ್ವಾಮಿಗೌಡ ಅವರು. ಪುಟ್ಟಸ್ವಾಮಿಗೌಡ ಅವರ ಅಳಿಯ ಶರತ್ ಬಚ್ಚೇಗೌಡ ಆಗಿದ್ದಾರೆ. ಈ ಮೂಲಕ ಸ್ಟಾರ್ ಚಂದ್ರು ಅವರಿಗೆ ರಾಜಕೀಯ ಹಿನ್ನೆಲೆಯೂ ಸಹ ಇದೆ. ರಾಜಕೀಯ ಹಿನ್ನೆಲೆ ಹಾಗೂ ಯಶಸ್ವಿ ಉದ್ಯಮಿಯಾಗಿರುವ ಸ್ಟಾರ್ ಚಂದ್ರು ಚುನಾವಣೆಯ ಎಲ್ಲಾ ತಂತ್ರಗಳಿಗೂ ಸೂಕ್ತರು ಎಂದು ಸಚಿವ ಚಲುವರಾಯಸ್ವಾಮಿ ನೇತೃತ್ವದ ಕಾಂಗ್ರೆಸ್ ನಾಯಕರು ಅಭ್ಯರ್ಥಿಯಾಗಿ ಆಯ್ಕೆ ಮಾಡಿದ್ದಾರೆ ಎಂಬ ಮಾತುಗಳು ದಟ್ಟವಾಗಿ ಕೇಳಿ ಬರ್ತಾ ಇವೆ.

ಒಟ್ಟಾರೆ ಮಂಡ್ಯದಲ್ಲಿ ಬಿಜೆಪಿ-ಜೆಡಿಎಸ್ ನಾಯಕರು ಕ್ಷೇತ್ರ ಹಂಚಿಕೆ ವಿಚಾರದಲ್ಲಿ ಗುದ್ದಾಟ ಮಾಡ್ತಾ ಇದ್ರೆ, ಇನ್ನೊಂದೆಡೆ ಕಾಂಗ್ರೆಸ್ ತನ್ನ ಅಭ್ಯರ್ಥಿಯಾಗಿ ಸ್ಟಾರ್ ಚಂದ್ರು ಅವರನ್ನು ಆಯ್ಕೆ ಮಾಡಿದ್ದು, ಘೋಷಣೆ ಒಂದೇ ಬಾಕಿ. ಸ್ಟಾರ್ ಚಂದ್ರು ಅವರ ರಾಜಕೀಯ ಸ್ಟಾರ್ ಹೇಗೆ ಇರುತ್ತೆ ಎನ್ನೋದನ್ನು ಕಾದು ನೋಡಬೇಕಿದೆ.

# ಭಾರತ್ ಬ್ರ್ಯಾಂಡ್ ಅಕ್ಕಿ ವಿತರಣೆಗೆ ಚಾಲನೆ



**ಬೆಂಗಳೂರು:** ಮಾಜಿ ಸಿಎಂ ಯಡಿಯೂರಪ್ಪ ಅವರು ಕೇಂದ್ರ ಸರ್ಕಾರದ ಭಾರತ್ ಬ್ರ್ಯಾಂಡ ಅಕ್ಕಿ ವಿತರಣೆಗೆ ಇಂದು ಮಧ್ಯಾಹ್ನ 4 ಗಂಟೆಗೆ ಚಾಲನೆ ನೀಡಿದ್ದಾರೆ.

ಭಾರತ್ ಬ್ರ್ಯಾಂಡ್ ಅಕ್ಕಿ ವಿತರಣೆಗೆ ದೆಹಲಿಯಲ್ಲಿ ಆಹಾರ ಸಚಿವ ಪಿಯೂಷ್ ಗೋಯಲ್ ನಿನ್ನೆ ಚಾಲನೆ ನೀಡಿದ್ದು, ಈ ಉದ್ಘಾಟನೆಯ ನಂತರ ಕರ್ನಾಟಕದಲ್ಲಿ ಮಧ್ಯಾಹ್ನ 4 ಗಂಟೆಗೆ ಮಾಜಿ ಸಿಎಂ ಯಡಿಯೂರಪ್ಪ ಭಾರತ್ ಅಕ್ಕಿ ವಿತರಣೆಗೆ ಚಾಲನೆ ನೀಡಿದ್ದಾರೆ.

ಮೊದಲ ಹಂತದಲ್ಲಿ 5 ಲಕ್ಷ ಟನ್ ಅಕ್ಕಿಯನ್ನು ಕೇಂದ್ರ ಸರ್ಕಾರ ಬಿಡುಗಡೆ ಮಾಡಲು ನಿರ್ಧರಿಸಿದೆ. ನಗರದ ಯಶವಂತಪುರದ ಎನ್‌ಸಿಸಿಎಫ್ ಗೋಡೌನ್‌ನಿಂದ ಸುಮಾರು 100 ಮೊಬೈಲ್ ವ್ಯಾನ್‌ಗಳ ಮೂಲಕ ನಗರದ ವಿವಿಧ ಭಾಗಗಳಿಗೆ ಸಂಚರಿಸಿ ಅಕ್ಕಿ ವಿತರಣೆ ನಡೆಯಲಿದೆ. 5 ಹಾಗೂ 10 ಕೆ.ಜಿ ಬ್ಯಾಗ್ ಗಳಲ್ಲಿ ಅಕ್ಕಿ ಸಿಗಲಿದೆ.

ಇಂದಿನಿಂದ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಅಕ್ಕಿ ವಿತರಣೆಯಾಗಲಿದೆ. ಬಿಗ್ ಬಾಸ್ಕೆಟ್, ಫ್ಲಿಪ್‌ಕಾರ್ಟ್ ರಿಲಯನ್ಸ್ ಸ್ಟೋರ್ಸ್ ಮತ್ತು ಸ್ಟಾರ್ ಹೈಪರ್ ಬಜಾರ್‌ಗಳ ಜೊತೆಗೆ ಸಹ ಭಾರತ್ ಬ್ರಾಂಡ್ ಒಪ್ಪಂದ ನಡೆದಿದೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com